ಸಂಪುಟ: 04 ಸಂಚಿಕೆ: 188 ಪುಟಗಳು: 08 ಶುಕ್ರವಾರ 20 ಸೆಪ್ಟೆಂಬರ್ 2024
www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

# ಉದಯ ವಾಹಿನಿ

UV ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ನಮ್ಮ ಆಲೋಚನೆಗಳೇ ನಮ್ಮನ್ನು ರೂಪಿಸುತ್ತವೆ. ಆದ್ದರಿಂದ ಏನನ್ನು ಯೋಚಿಸುತ್ತಿರೋ ಅದರ ಬಗ್ಗೆ ಎಚ್ಚರದಿಂದಿರಿ.



# ಕನ್ನಡಮ್ಮನ ಸಂಭ್ರಮಕ್ಕೆ ದಿನಗಣನೆ

## ಅದ್ದೂರಿ ರಾಜ್ಯೋತ್ಸವಕ್ಕೆ ಭರ್ಜರಿ ತಯಾರಿ

**ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ್ ತಂಗಡಗಿ ಅವರ ಅಧ್ಯಕ್ಷತೆಯಲ್ಲಿ ರಾಜ್ಯೋತ್ಸವ ಪ್ರಶಸ್ತಿ ಸಮಿತಿ ರಚಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಕರ್ನಾಟಕ ಸುವರ್ಣ ಸಂಭ್ರಮ-೫೦ ಸಮಾರೋಪ ಸಮಾರಂಭವನ್ನು ಕನ್ನಡ ಜನೋತ್ಸವವಾಗಿ ಆಚರಿಸಲು ನಿರ್ಧರಿಸಲಾಗಿದೆ ಎಂದು ಹೇಳಿದರು. ಎಲ್ಲಾ ಜಿಲ್ಲೆ , ತಾಲ್ಲೂಕುಗಳಲ್ಲಿ ಕರ್ನಾಟಕ ಸುವರ್ಣ ಸಂಭ್ರಮ ನಡೆಯುತ್ತಿದ್ದು , ಹಂಪಿಯಿಂದ ಆರಂಭವಾದ ಕನ್ನಡ ರಥಯಾತ್ರೆ ಈಗಾಗಲೇ ೨೮ ಜಿಲ್ಲೆಗಳಲ್ಲಿ ಸಾಗಿದ್ದು , ರಥಯಾತ್ರೆಯ ಸಮಾರೋಪ ಸಮಾರಂಭ ಉ.ಕನ್ನಡ ಜಿಲ್ಲೆಯ ಸಿದ್ದಾಪುರದಲ್ಲಿ ನಡೆಯಲಿದೆ ಎಂದು ಹೇಳಿದರು.**

## ಭುವನೇಶ್ವರಿ ದೇವಿಯ ಕಂಚಿನ ಪ್ರತಿಮೆ ಸ್ಥಾಪನೆಗೆ ಸಿಎಂ ನೇತೃತ್ವದಲ್ಲಿ ಸಭೆ

• ಉದಯವಾಹಿನಿ, ಬೆಂಗಳೂರು

ರಾಜ್ಯೋತ್ಸವ ಪ್ರಶಸ್ತಿ-2024 ಪ್ರದಾನ, ಕರ್ನಾಟಕ ಸುವರ್ಣ ಸಂಭ್ರಮ-50 ಸಮಾರೋಪ ಸಮಾರಂಭ ಕುರಿತು ಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜ್ಯೋತ್ಸವ ಪ್ರಶಸ್ತಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಿದ್ದು, ಸೆ.30ರವರೆಗೆ ಅರ್ಜಿ ಸಲ್ಲಿಸಬಹುದು. ಈ ಬಾರಿ 69 ಮಂದಿಗೆ ರಾಜ್ಯೋತ್ಸವ ಪ್ರಶಸ್ತಿ ನೀಡಲಾಗುವುದು ಎಂದರು. ಕರ್ನಾಟಕ ಸುವರ್ಣ ಸಂಭ್ರಮ ಸಮಾರೋಪ ಸಮಾರಂಭ ವಿಧಾನಸೌಧದ ಮುಂಭಾಗದಲ್ಲಿ ನಡೆಯಲಿದೆ. ರಾಜ್ಯೋತ್ಸವ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದರು. ವಿಧಾನಸೌಧದ ಆವರಣದಲ್ಲಿ 25 ಅಡಿ ಎತ್ತರದ ಭುವನೇಶ್ವರಿ ದೇವಿಯ ಕಂಚಿನ ಪ್ರತಿಮೆ ಕಾಮಗಾರಿ ಪ್ರಗತಿಯಲ್ಲಿದ್ದು, ನ.1 ಕನ್ನಡ ರಾಜ್ಯೋತ್ಸವ ದಿನದಂದು ಅನಾವರಣ ಮಾಡಲಾಗುವುದು ಎಂದರು. ಕರ್ನಾಟಕ ಸುವರ್ಣ ಸಂಭ್ರಮ-50ನೇ ವರ್ಷಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಗುತ್ತಿದೆ. ಮನೆ ಮನೆಯಲ್ಲಿ ಕನ್ನಡ ಬಾವುಟವನ್ನು ಹಾರಿಸಲು ಮನವಿ ಮಾಡಲಾಗುವುದು. ಕರ್ನಾಟಕದ ಬಹುಸಂಸ್ಕೃತಿ, ಸೌಹಾರ್ದ ಸಂಸ್ಕೃತಿ ಕುರಿತು 100 ಪುಸ್ತಕಗಳನ್ನು ಸಿದ್ಧಪಡಿ ಸಲಾಗುತ್ತಿದ್ದು, ಡಿಸೆಂಬರ್ ವೇಳೆಗೆ ಬಿಡುಗಡೆ ಮಾಡಲಾಗುವುದು ಎಂದರು. ಎಲ್ಲಾ ಶಾಲಾ-ಕಾಲೇಜುಗಳಲ್ಲಿ ಕನ್ನಡ ರಾಜ್ಯೋತ್ಸವನ್ನು ಅದ್ದೂರಿಯಾಗಿ ಆಚರಿಸಲು ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದ ಅವರು ಕೊರಗ ಭಾಷೆಯಂತಹ ಸಣ್ಣ ಭಾಷೆಗಳ ಅಭಿವೃದ್ಧಿಗೆ ಕ್ರಮಕೈಗೊಳ್ಳಲು ತಜ್ಞರ ಸಮಿತಿ ರಚಿಸುವಂತೆ ಸಭೆಯಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪುರುಷೋತ್ತಮ ಬಿಳಿಮಲೆ ಇದೇ ಸಂದರ್ಭದಲ್ಲಿ ಮನವಿ ಮಾಡಿದರು. ನಾಡಿನ ಕಲೆ, ಸಾಹಿತ್ಯ, ಕೃಷಿ, ತೋಟಗಾರಿಕೆ ಕುರಿತಾದ 5 ಸಂಪುಟಗಳನ್ನು ಸಿದ್ಧಪಡಿಸಲಾಗುತ್ತಿದೆ. ಇದೇ ಸಂದರ್ಭದಲ್ಲಿ ಸ್ಮರಣ ಸಂಭ್ರಮ ಸಂಪುಟ ಹೊರತರಲಾಗುತ್ತಿದೆ ಎಂದು ಹೇಳಿದರು. ಕನ್ನಡ ಸಾಹಿತಿಗಳ ನುಡಿ ಮುತ್ತುಗಳನ್ನು ಎಲ್ಲಾ ಜಿಲ್ಲೆಗಳ ಪ್ರಮುಖ ಸ್ಥಳಗಳಲ್ಲಿ, ಕೆಎಸ್‌ಆರ್‌ಟಿಸಿ ಬಸ್ ಮತ್ತಿತರ ಕಡೆಗಳಲ್ಲಿ ಪ್ರಚುರಪಡಿಸಬೇಕು ಎಂದರು.

ರಾಜ್ಯದ 4 ವಲಯಗಳಲ್ಲಿ ವಿಶೇಷ ಕಾರ್ಯಕ್ರಮ ಆಯೋಜಿಸಲಾಗುತ್ತದೆ. ಮೈಸೂರಿನಲ್ಲಿ ಚಿಂತನಾ ಸಮಾವೇಶ, ರಾಯಚೂರು ಜಿಲ್ಲೆಯಲ್ಲಿ ಗೋಕಾಕ್ ಚಳವಳಿ ಸಂಸ್ಮರಣೆ, ಮಹಾರಾಷ್ಟ್ರದ ಜತ್ ತಾಲ್ಲೂಕಿನಲ್ಲಿ ಗಡಿನಾಡು ಸಂಸ್ಕೃತಿ ಉತ್ಸವ, ಮಂಗಳೂರಿನಲ್ಲಿ ಬಹುಸಂಸ್ಕೃತಿ ಉತ್ಸವ ಆಚರಿಸಲಾಗುವುದು ಎಂದರು. ಮೈಸೂರು ಜಿಲ್ಲೆಯ ನೂತನ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ದಿ. ದೇವರಾಜು ಅರಸು ಅವರ ಪ್ರತಿಮೆ ಸ್ಥಾಪನೆ ಕಾಮಗಾರಿ ಪ್ರಗತಿಯಲ್ಲಿದ್ದು, ಬಳ್ಳಾರಿಯಲ್ಲಿ ರಂಜಾನ್ ಸಾಬ್ ಸ್ಮಾರಕ ನಿರ್ಮಾಣ ಕಾರ್ಯ ನಡೆಯುತ್ತಿದೆ. ಧಾರವಾಡದಲ್ಲಿ ಅದರಗುಂಚಿ ಶಂಕರಗೌಡ ಸ್ಮಾರಕ ನಿರ್ಮಾಣಕ್ಕೆ ಅಂದಾಜು ವೆಚ್ಚ ಸಲ್ಲಿಸಲಾಗಿದೆ. ಗದಗ ಜಿಲ್ಲೆಯಲ್ಲಿ ಅಂದಾನಪ್ಪ ದೊಡ್ಡ ಮೇಟಿ ಸ್ಮಾರಕ ನಿರ್ಮಾಣ ಮಾಡಲಾಗುತ್ತಿದೆ ಎಂದು ಸಿದ್ದರಾಮಯ್ಯ ಹೇಳಿದರು. ಸಭೆಯಲ್ಲಿ ಸಚಿವರಾದ ಶಿವರಾಜ ತಂಗಡಗಿ, ಜಿ. ಪರಮೇಶ್ವರ್ ಸೇರಿದಂತೆ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.

### ರಾಜ್ಯೋತ್ಸವ ಪ್ರಶಸ್ತಿಗೆ ಆನ್ ಲೈನ್ ಅರ್ಜಿ

**ರಾಜ್ಯೋತ್ಸವ ಪ್ರಶಸ್ತಿಗೆ ಆನ್ ಲೈನ್‌ನ ಮೂಲಕವೂ ನೀವು ಅರ್ಜಿ ಸಲ್ಲಿಸಬಹುದಾಗಿದೆ. ಈ ಬಾರಿ ಆನ್‌ಲೈನ್‌ನ ಮೂಲಕವೂ ಅರ್ಜಿ ಸಲ್ಲಿಸುವುದಕ್ಕೆ ಅವಕಾಶ ನೀಡಲಾಗಿದ್ದು, ಸೆ.30ರ ಒಳಗೆ ನೀವು ಅರ್ಜಿ ಸಲ್ಲಿಸಬೇಕಾಗುತ್ತದೆ. ಇನ್ನು ಈ ಬಾರಿ 69ನೇ ಕನ್ನಡ ರಾಜ್ಯೋತ್ಸವದ ಭಾಗವಾಗಿ 69 ಜನ ಗಣ್ಯರನ್ನು ಸನ್ಮಾನಿಸಲು ನಿರ್ಧರಿಸಲಾಗಿದೆ. ಕನ್ನಡ ನಾಡಿಗೆ ಸೇವೆ ಸಲ್ಲಿಸಿದ 69 ಜನ ಗಣ್ಯರನ್ನು ಈ ಸಮಾರಂಭದಲ್ಲಿ ಸನ್ಮಾನಿಸಿ, ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪ್ರದಾನ ಮಾಡಲಾಗುತ್ತದೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ್ ತಂಗಡಗಿ ಅವರ ಅಧ್ಯಕ್ಷತೆಯಲ್ಲಿ ಪ್ರಶಸ್ತಿ ಆಯ್ಕೆಗೆ ಸಮಿತಿ ರಚಿಸಲಾಗಿದೆ.**



### ರಾಜ್ಯೋತ್ಸವಕ್ಕೆ ದಿನಗಣನೆ ಪ್ರಾರಂಭ

**ಕರ್ನಾಟಕ ರಾಜ್ಯೋತ್ಸವಕ್ಕೆ ದಿನಗಣನೆ ಪ್ರಾರಂಭವಾಗಿದೆ. ಈ ಬಾರಿ ಕರ್ನಾಟಕ ರಾಜ್ಯೋತ್ಸವನ್ನು ಅದ್ದೂರಿಯಾಗಿ ಆಚರಿಸಬೇಕು. ಕನ್ನಡ ಕಲೆ, ಸಂಸ್ಕೃತಿಯನ್ನು ರಾಜ್ಯದ ಜನರಿಗೆ ಪರಿಚಯಿಸಬೇಕು ಎನ್ನುವುದು ಸೇರಿದಂತೆ ಹಲವು ಕಾರ್ಯಸೂಚಿಗಳನ್ನು ರಾಜ್ಯ ಸರ್ಕಾರ ಹಾಕಿಕೊಂಡಿದೆ. ರಾಜ್ಯೋತ್ಸವ ಪ್ರಶಸ್ತಿ - 2024ರ ಪ್ರದಾನ, ಕರ್ನಾಟಕ ಸುವರ್ಣ ಸಂಭ್ರಮ-50ರ ಸಮಾರೋಪ ಸಮಾರಂಭದ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಭೆ ನಡೆಸಿದ್ದು, ಸಭೆಯಲ್ಲಿ ಹಲವು ಪ್ರಮುಖ ನಿರ್ಣಯಗಳನ್ನು ಕೈಗೊಳ್ಳಲಾಗಿದೆ. ಕರ್ನಾಟಕದ ಯುವ ಸಮೂಹಕ್ಕೆ ಕರ್ನಾಟಕದ ಜನರ ಚಳುವಳಿ, ಕನ್ನಡದ ಹಿರಿಮೆ ಸೇರಿದಂತೆ ಕರ್ನಾಟಕದ ಹೋರಾಟದ ಪಯಣವನ್ನು, ಕನ್ನಡದ ಇತಿಹಾಸವನ್ನು ತಿಳಿಸಬೇಕು. ರಾಜ್ಯೋತ್ಸವ ಆಚರಣೆಯ ಸಂದರ್ಭದಲ್ಲಿ ಕನ್ನಡ ಭಾಷೆ, ಸಂಸ್ಕೃತಿ, ಸಂಗೀತ, ಸಾಹಿತ್ಯ, ಜನಪದ, ಚರಿತ್ರೆ ಸೇರಿದಂತೆ ಎಲ್ಲಾ ಮಹತ್ವದ ಅಂಶಗಳನ್ನು ಸಹ ಒಳಗೊಂಡಿರಬೇಕು. ಈ ನಿಟ್ಟಿನಲ್ಲಿ ಅಧಿಕಾರಿಗಳು ಎಲ್ಲಾ ರೀತಿಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು ಎಂದು ಸೂಚನೆ ನೀಡಿದ್ದಾರೆ.**

1. **ಕರ್ನಾಟಕ ಸುವರ್ಣ ಸಂಭ್ರಮ -50 ಸಮಾರೋಪ ಸಮಾರಂಭವು ವಿಧಾನಸೌಧದ ಮುಂದೆ ನಡೆಯುತ್ತೆ.**
2. **ಕರ್ನಾಟಕ ಸಾಹಿತ್ಯ ಅಕಾಡೆಮಿಯು 50 ಸಾಧಕ ಮಹಿಳೆಯರ ಪರಿಚಯ ಮಾಡುವ ನಿಟ್ಟಿನಲ್ಲಿ 100 ಪುಟಗಳ 50 ಕೃತಿಗಳನ್ನು ಮುದ್ರಿಸಲಿದೆ.**
3. **ವಿಧಾನಸೌಧ ಆವರಣದಲ್ಲಿ 25ಅಡಿ ಎತ್ತರದ ಭುವನೇಶ್ವರಿದೇವಿ ಕಂಚಿನ ಪ್ರತಿಮೆ ನಿರ್ಮಾಣ ಆಗುತ್ತಿದೆ.**

## ಬಿಬಿಎಂಪಿಯಿಂದ ಹೊಸ ಡಿಜಿಟಲ್ ವ್ಯವಸ್ಥೆ ಆರಂಭ: ಮುಖ್ಯ ಆಯುಕ್ತ

• ಉದಯವಾಹಿನಿ, ಬೆಂಗಳೂರು

ಒಂದೆರಡು ಗ್ರಾಮ ಪಂಚಾಯಿತಿ ವ್ಯಾಪ್ತಿಯ 2500 ಆಸ್ತಿಗಳನ್ನು ಇ-ಖಾತಾ ಮಾಡಿದ್ದ ಬಿಬಿಎಂಪಿಯು ಲಕ್ಷಾಂತರ ಆಸ್ತಿ ಖಾತೆಗಳನ್ನು ಈಗಾಗಲೇ ಡಿಜಿಟಲೀಕರಣ ಮಾಡಿದೆ. ಇದೀಗ ಫೇಸ್‌ಲೆಸ್ ಸಂಪರ್ಕರಹಿತ ಆನ್‌ಲೈನ್ ಡಿಜಿಟಲ್ ವ್ಯವಸ್ಥೆ ಜಾರಿಗೊಳಿಸಲು ಮುಂದಾಗಿದೆ. ಇನ್ನೇನು ಕೆಲವೇ ದಿನಗಳಲ್ಲಿ ಜಿಪಿಎಸ್ ಆಧಾರಿತ ಮಾಹಿತಿಯನ್ನು ಪಡೆದು ಅದನ್ನು ಡಿಜಿಟಲೀಕರಣಗೊಳಿಸಲಿದೆ. ಹೌದು, ಉಪ ಮುಖ್ಯಮಂತ್ರಿ ಮತ್ತು ಬೆಂಗಳೂರು ನಗರಾಭಿವೃದ್ಧಿ ಸಚಿವರಾದ ಡಿ.ಕೆ ಶಿವಕುಮಾರ್ ಅವರ ನೇತೃತ್ವ ಮತ್ತು ನಿರ್ದೇಶನದಲ್ಲಿ ಬಿಬಿಎಂಪಿಯು ಫೇಸ್‌ಲೆಸ್ ಸಂಪರ್ಕರಹಿತ ಆನ್‌ಲೈನ್ ಡಿಜಿಟಲ್ ವ್ಯವಸ್ಥೆಯನ್ನು ಆರಂಭಿಸುವುದಾಗಿ ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ತಿಳಿಸಿದರು.

## ಪತ್ನಿ ಮುಸ್ಲಿಂ ಆದ ಮಾತ್ರಕ್ಕೆ ಅರ್ಧ ಪಾಕಿಸ್ತಾನಿ ಎಂದು ಹೇಳಬಾರದು

• ಉದಯವಾಹಿನಿ, ಬೆಂಗಳೂರು

ತಲೆಗೆ ಬರುವುದನ್ನೆಲ್ಲಾ ಏಕೆ ಮಾತನಾಡುತ್ತಾರೆ. ಪತ್ನಿ ಮುಸ್ಲಿಂ ಆದ ಮಾತ್ರಕ್ಕೆ ಅರ್ಧ ಪಾಕಿಸ್ತಾನಿ ಎಂದು ಹೇಳಬಾರದು ಎಂದು ಬಿಜೆಪಿ ಶಾಸಕ ಯತ್ನಾಳ್ ಹೇಳಿಕೆಗೆ ಹೈಕೋರ್ಟ್ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಪೀಠ ಅಸಮಾಧಾನ ವ್ಯಕ್ತಪಡಿಸಿತು. ಸಚಿವ ದಿನೇಶ್ ಗುಂಡೂರಾವ್ ದಾಖಲಿಸಿದ್ದ ಮಾನನಷ್ಟ ಪ್ರಕರಣ ರದ್ದು ಕೋರಿ ಯತ್ನಾಳ್ ಸಲ್ಲಿಸಿದ್ದ ಅರ್ಜಿಯನ್ನು ಹೈಕೋರ್ಟ್ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಪೀಠ ವಿಚಾರಣೆ ನಡೆಸಿತು. ಈ ವೇಳೆ ಯತ್ನಾಳ್ ಪರ ವಕೀಲರು ಅರ್ಧ ಪಾಕಿಸ್ತಾನಿ ಎಂದು ಹೇಳಿದ್ದು, ಆ ಅರ್ಥದ್ದಲ್ಲಲ್ಲ. ದಿನೇಶ್ ಗುಂಡೂರಾವ್ ಹೇಳಿಕೆಗೆ ಪ್ರತಿಕ್ರಿಯೆಯಾಗಿ ಹೇಳಿಕೆ ಎಂದು ವಾದ ಮಂಡಿಸಿದರು. ಚುನಾವಣೆ ವೇಳೆ ಪರಸ್ಪರ ಕೆಸರೆರಚಾಟ ಬಿಡಬೇಕು.ಪತ್ನಿ ಮುಸ್ಲಿಂ ಆದ ಮಾತ್ರಕ್ಕೆ ಅರ್ಧ ಪಾಕಿಸ್ತಾನಿ ಎಂದು ಹೇಳಬಾರದು ನ್ಯಾಯಮೂರ್ತಿ. ಎಂ. ನಾಗಪ್ರಸನ್ನ ಅವರಿದ್ದ ಪೀಠ ಅಸಮಾಧಾನ ವ್ಯಕ್ತಪಡಿಸಿತು. ಅಲ್ಲದೆ ಪ್ರಕ್ರಿಯೆಯಲ್ಲಿ ಲೋಪವಿರುವುದರಿಂದ ವಿಚಾರಣಾ ನ್ಯಾಯಾಲಯಕ್ಕೆ ಪ್ರಕರಣ ವಾಪಸ್ ಕಳಿಸುವ ಬಗ್ಗೆ ಸೆ.23ರಂದು ಸೂಕ್ತ ಆದೇಶ ಹೊರಡಿಸಲಾಗುವುದು ನ್ಯಾಯಪೀಠ ಹೇಳಿದೆ.

## ಬಾಯಿ ಮುಚ್ಚಿಸಲು ಸಾಧ್ಯವಿಲ್ಲ, ಗೊಡ್ಡು ಬೆದರಿಕೆಗೆ ಹೆದರಲ್ಲ

• ಉದಯವಾಹಿನಿ, ಬೆಂಗಳೂರು

ಕಾಂಗ್ರೆಸ್ ಸರ್ಕಾರ ನಮ್ಮ ಬಾಯಿ ಮುಚ್ಚಿಸಲು ಸಾಧ್ಯವಿಲ್ಲ. ಸರ್ಕಾರದ ಗೊಡ್ಡು ಬೆದರಿಕೆಗೆ ನಾವು ಹೆದರಲ್ಲ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ಹೇಳಿದರು. ನಾಗಮಂಗಲದ ಕೋಮುಗಲಭೆ ವಿಚಾರದಲ್ಲಿ ಸರಿಯಾಗಿ ತನಿಖೆ ಮಾಡಿ ಎಂದು ರಾಜ್ಯ ಸರ್ಕಾರಕ್ಕೆ ಆಗ್ರಹಿಸಿದ್ದೆ. ಜನರು ಹೇಳಿದ್ದನ್ನು ಕೇಳಿಯೇ ಹಾಗೆ ಟ್ವೀಟ್ ಮಾಡಿದ್ದೆ. ವಿಧಾನಸೌಧದಲ್ಲಿ ಪಾಕಿಸ್ತಾನ್ ಜಿಂದಾಬಾದ್ ಘೋಷಣೆ ಕೂಗಿದ್ದನ್ನು ಸುಳ್ಳು ಎಂದು ಸಚಿವರೇ ಹೇಳಿದ್ದರು. ಬಳಿಕ ಅದು ನಿಜ ಎಂದು ಸಾಬೀತಾಯಿತು. ಹಾಗಾದರೆ ಸಚಿವರ ವಿರುದ್ಧ ಎಫ್‌ಐಆರ್ ದಾಖಲಿಸಬೇಡವೇ ಎಂದು ಪ್ರಶ್ನೆ ಮಾಡಿದರು. ವಿರೋಧ ಪಕ್ಷದ ನಾಯಕನಾಗಿ ತನಿಖೆ ಮಾಡಿ ಎಂದು ಸರ್ಕಾರಕ್ಕೆ ಆಗ್ರಹಿಸಿದ್ದೇನೆ. ಸರ್ಕಾರದಿಂದ ನನ್ನ ಬಾಯಿ ಮುಚ್ಚಿಸುವ ಕೆಲಸ ಮಾಡಲಾಗುತ್ತಿದೆ. ಎಲ್ಲಾ ಬಿಜೆಪಿ ನಾಯಕರ ವಿರುದ್ಧ ಪ್ರಕರಣ ದಾಖಲಿಸಿ ವಿರೋಧ ಪಕ್ಷವನ್ನು ಬಗ್ಗುಬಡಿಯಬೇಕೆಂದು ಸರ್ಕಾರ ನಿರ್ಧಾರ ಮಾಡಿದೆ. ಪಾಕ್ ಜಿಂದಾಬಾದ್ ಕುರಿತು ಸುಳ್ಳು ಸುದ್ದಿ ಹಬ್ಬಿಸಿದ ಸಚಿವರು ರಾಜೀನಾಮೆ ನೀಡಬೇಕಿತ್ತು. ಹಾಗಾದರೆ ವಿರೋಧ ಪಕ್ಷವಾಗಿ ನಾವು ಏನು ಮಾಡಬೇಕು? ಎಂದು ಪ್ರಶ್ನಿಸಿದರು.

## ಯಡಿಯೂರಪ್ಪಗೆ ಮತ್ತೆ ರಿಲೀಫ್ ಸೆ.27ಕ್ಕೆ ಪೋಕ್ಸೋ ಕೇಸ್ ವಿಚಾರಣೆ

• ಉದಯವಾಹಿನಿ, ಬೆಂಗಳೂರು

ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ವಿರುದ್ಧ ದಾಖಲಾಗಿದ್ದಂತ ಪೋಕ್ಸೋ ಕೇಸಲ್ಲಿ ಮತ್ತೆ ತಾತ್ಕಾಲಿಕ ರಿಲೀಫ್ ಸಿಕ್ಕಿದೆ. ಅವರ ವಿರುದ್ಧದ ಪೋಕ್ಸೋ ಕೇಸ್ ವಿಚಾರಣೆಯನ್ನು ಹೈಕೋರ್ಟ್ ಸೆಪ್ಟೆಂಬರ್.27ಕ್ಕೆ ಮುಂದೂಡಿ, ರಿಲೀಫ್ ನೀಡಿದೆ. ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ವಿರುದ್ಧ ದಾಖಲಾಗಿದ್ದಂತ ಪೋಕ್ಸೋ ಕೇಸ್ ನಲ್ಲಿ ಜಾಮೀನು ಕೋರಿ ಸಲ್ಲಿಸಿದ್ದಂತ ಅರ್ಜಿಯ ವಿಚಾರಣೆಯನ್ನು ಕರ್ನಾಟಕ ಹೈಕೋರ್ಟ್ ನ್ಯಾಯಪೀಠವು ನಡೆಸಿತು. ಇಂದು ಕೂಡ ಅರ್ಜಿಯ ವಿಚಾರಣೆಯನ್ನು ಕೋರ್ಟ್ ಸೆ.27ಕ್ಕೆ ಮುಂದೂಡಿದೆ. ಈ ಮೂಲಕ ಮಾಜಿ ಸಿಎಂ ಬಿಎಸ್ ಯಡಿಯೂರಪ್ಪಗೆ ತಾತ್ಕಾಲಿಕ ರಿಲೀಫ್ ನೀಡಿದೆ. ಅಂದಹಾಗೇ ಸಹಾಯ ಕೋರಿ ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ನಿವಾಸಕ್ಕೆ ತಾಯಿ ಮಗಳು ಭೇಟಿ ನೀಡಿದ್ದಂತ ಸಂದರ್ಭದಲ್ಲಿ ಅಪ್ರಾಪ್ತ ಪುತ್ರಿಗೆ ಲೈಂಗಿಕ ಕಿರುಕುಳ ನೀಡಿದ್ದಾರೆ ಎಂಬುದಾಗಿ ಆರೋಪಿಸಿ ಅವರ ತಾಯಿ ಮಾರ್ಚ್.14, 2024ರಂದು ದೂರು ನೀಡಿದ್ದರು. ಈ ದೂರು ಆಧರಿಸಿ ಬಿಎಸ್‌ವೈ ವಿರುದ್ಧ ಪೋಕ್ಸೋ ಕೇಸ್ ದಾಖಲಾಗಿತ್ತು.


# ಮುಡಾ ಹಗರಣದ ಕುರಿತು ವಿವರ ಕೋರಿದ ಗವರ್ನರ್

## ಸಲ್ಲಿಕೆಯಾಗಿರುವ ಮತ್ತೊಂದು ದೂರಿನ ಆಧಾರದಲ್ಲಿ ಮುಖ್ಯ ಕಾರ್ಯದರ್ಶಿಗಳಿಗೆ ಪತ್ರ

• ಉದಯವಾಹಿನಿ, ಬೆಂಗಳೂರು



ಸದ್ಯ ರಾಜ್ಯದಲ್ಲಿ ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಭಾರಿ ಚರ್ಚೆ ಆಗುತ್ತಿದ್ದು ಇದೀಗ ಈ ಒಂದು ಹಗರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮತ್ತೊಂದು ಸಂಕಷ್ಟ ಎದುರಾಗಿದ್ದು, ಇದೀಗ ಮುಡಾ ಸಂಬಂಧ ಸಲ್ಲಿಕೆಯಾಗಿರುವ ಮತ್ತೊಂದು ದೂರಿನ ಆಧಾರದಲ್ಲಿ ಮುಖ್ಯ ಕಾರ್ಯದರ್ಶಿಗಳಿಗೆ ಪತ್ರ ಬರೆದಿರುವ ರಾಜ್ಯಪಾಲರು ವಿವರ ಕೋರಿದ್ದಾರೆ. ಹೌದು ಮುಡಾ ಹಗರಣ ಸಂಬಂಧ ಸಿಎಂ ಸಿದ್ದರಾಮಯ್ಯ ವಿರುದ್ಧ ಮೈಸೂರು ಮೂಲದ ಪಿಎಸ್ ನಟರಾಜ್ ಎಂಬವರು ಆಗಸ್ಟ್ 27ರಂದು ರಾಜ್ಯಪಾಲರಿಗೆ ದೂರು ನೀಡಿದ್ದರು. ಇದೀಗ ನಟರಾಜ್ ದೂರಿಗೆ ಸಂಬಂಧಿಸಿ ಸರ್ಕಾರದಿಂದ ವರದಿ ಕೇಳಿದ್ದಾರೆ. ಸಿದ್ದರಾಮಯ್ಯ ಮೇಲಿನ ದೂರಿನ ವಿವರಣೆ ಕೇಳಿ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್‌ಗೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಪತ್ರ ಬರೆದಿದ್ದಾರೆ.



ಮೈಸೂರಿನ ಪಿಎಸ್ ನಳರಾಜ್ ಎಂಬವರು ದಿನಾಂಕ 27-08-2024 ರಂದು ವಿವರವಾದ ಪ್ರಾತಿನಿಧ್ಯವನ್ನು ಸಲ್ಲಿಸಿದ್ದು ಮುಖ್ಯಮಂತ್ರಿಗಳ ವಿರುದ್ಧ ಆರೋಪ ಮಾಡಿರುತ್ತಾರೆ. ಇದರಲ್ಲಿ, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರವು ಮುಖ್ಯಮಂತ್ರಿಗಳ ಮೌಖಿಕ ಸೂಚನೆಯ ಮೇರೆಗೆ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರ ಕಾಯಿದೆ 1987ರ ಕಲಂ 15 ಮತ್ತು 25ರ ಅನ್ನು ಉಲ್ಲಂಘಿಸಿ ಸಿಎಂ ಕ್ಷೇತ್ರವಾದ ವರುಣಾ ಹಾಗೂ ಶ್ರೀರಂಗಪಟ್ಟಣದಲ್ಲಿ 387 ಕೋಟಿ ರೂ.ಗಳ ಕಾಮಗಾರಿ ಹಮ್ಮಿಕೊಂಡಿತ್ತು ಎಂದು ಉಲ್ಲೇಖಿಸಲಾಗಿದೆ.

ಪ್ರಾಧಿಕಾರದಲ್ಲಿ ಹಣ ಇಲ್ಲದಿದ್ದರೂ ಮುಖ್ಯಮಂತ್ರಿಗಳ ಮೌಖಿಕ ಸೂಚನೆ ಮೇರೆಗೆ ತೀರ್ಮಾನ ಕೈಗೊಳ್ಳಲಾಗಿದೆ ಎಂದು ಅರ್ಜಿದಾರರು ತಿಳಿಸಿದ್ದಾರೆ. ಅಲ್ಲದೆ, ಈ ಮೂಲಕ ಪ್ರಾಧಿಕಾರ ತನ್ನ ಅಧಿಕಾರ ದುರ್ಬಳಕೆ ಮಾಡಿಕೊಂಡಿದೆ ಎಂದು ಆರೋಪಿಸಿ ಸಿಬಿಐನಿಂದ ತನಿಖೆ ನಡೆಸುವಂತೆ ಮನವಿ ಮಾಡಿದ್ದಾರೆ ಎಂದು ರಾಜ್ಯಪಾಲರು ಮುಖ್ಯ ಕಾರ್ಯದರ್ಶಿಗೆ ಬರೆದ ಪತ್ರದಲ್ಲಿ ಉಲ್ಲೇಖಿಸಲಾಗಿದೆ.

### ರಾಜ್ಯ ಗುತ್ತಿಗೆದಾರರ ಸಂಘದ ಅಧ್ಯಕ್ಷ ಕೆಂಪಣ್ಣ ನಿಧನ

**ಹೃದಯಾಘಾತದಿಂದ ರಾಜ್ಯ ಗುತ್ತಿಗೆದಾರರ ಸಂಘದ ಅಧ್ಯಕ್ಷ ಕೆಂಪಣ್ಣ ಅವರು ನಿಧರಾಗಿದ್ದಾರೆ. ಅವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಂತಾಪ ಸೂಚಿಸಿದ್ದಾರೆ. ಈ ಕುರಿತು ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವಂತ ಅವರು, ರಾಜ್ಯ ಗುತ್ತಿಗೆದಾರರ ಸಂಘದ ಅಧ್ಯಕ್ಷರಾದ ಕೆಂಪಣ್ಣನವರ ನಿಧನವಾರ್ತೆ ನೋವುಂಟುಮಾಡಿದೆ. ಹಿಂದಿನ ಸರ್ಕಾರದ ಅವಧಿಯಲ್ಲಿ ದೇಶಾದ್ಯಂತ ಸುದ್ದಿ ಮಾಡಿದ್ದ 40% ಕಮಿಷನ್ ಹಗರಣವನ್ನು ಹೊರತಂದು, ಗುತ್ತಿಗೆ ಕಾಮಗಾರಿಗಳಲ್ಲಿ ನಡೆಯುತ್ತಿದ್ದ ಭ್ರಷ್ಟಾಚಾರದ ವಿರುದ್ಧ ಅವರು ಸೆಟೆದು ನಿಂತಿದ್ದರು ಎಂದಿದ್ದಾರೆ.**

## ಪ್ಯಾಲೆಸ್ಟೈನ್ ಧ್ವಜ ಹಿಡಿದರೆ ತಪ್ಪೇನು?

• ಉದಯವಾಹಿನಿ, ಬೆಂಗಳೂರು

ಚಿಕ್ಕಮಗಳೂರು, ಕೋಲಾರ ಸೇರಿದಂತೆ ವಿವಿಧೆಡೆ ಪ್ಯಾಲೆಸ್ಟೈನ್ ಧ್ವಜ ಹಿಡಿದು ಕಿಡಿಗೇಡಿಗಳ ಓಡಾಟ ಪ್ರಕರಣಕ್ಕೆ ಸಂಬಂಧಿಸಿದಂತೆ ಸಚಿವ ಜಮೀರ್ ಅಹ್ಮದ್ ಪ್ರತಿಕ್ರಿಯೆ ನೀಡಿದ್ದು, ಧ್ವಜ ಹಿಡಿದರೆ ತಪ್ಪಿಲ್ಲ ಎಂದು ಸಮರ್ಥಿಸಿಕೊಂಡಿದ್ದಾರೆ.



ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವ ಜಮೀರ್ ಅಹ್ಮದ್, ಪ್ಯಾಲೆಸ್ಟೈಲ್ ಧ್ವಜ ಹಿಡಿದುಕೊಂಡರೆ ತಪ್ಪೇನಿಲ್ಲ. ಯಾಕೆಂದರೆ ಕೇಂದ್ರ ಸರ್ಕಾರವೇ ಬೆಂಬಲ ಸೂಚಿಸಿದೆ. ಹಾಗಾಗಿ ಧ್ವಜ ಹಿಡಿದ ಮಾತ್ರಕ್ಕೆ ತಪ್ಪಿಲ್ಲ. ಅದರಲ್ಲಿ ತಪ್ಪೇನಿದೆ? ಎಂದು ಪ್ರಶ್ನಿಸಿದ್ದಾರೆ. ಕೇಂದ್ರ ಸರ್ಕಾರ ಪ್ಯಾಲೆಸ್ಟೈನ್ ಗೆ ಬೆಂಬಲ ಘೋಷಿಸಿದ್ದಕ್ಕೆ ಪ್ಯಾಲೆಸ್ಟೈನ್ ಧ್ವಜ ಹಿಡಿದಿದ್ದಾರೆ. ಇಲ್ಲದಿದ್ದರೆ ಹೀಗಾಗುತ್ತಿರಲಿಲ್ಲ. ಬೇರೆ ದೇಶದ ಪರ ಘೋಷಣೆ ಕೂಗಿದರೆ ಅದು ತಪ್ಪು. ಹಾಗೆ ಮಾಡುವವರು ದೇಶದ್ರೋಹಿಗಳು. ಅಂಥವರನ್ನು ಗಲ್ಲಿಗೇರಿಸಬೇಕು. ಹಾಗೆಂದು ಧ್ವಜ ಹಿಡಿದರೆ ತಪ್ಪಿಲ್ಲ ಎಂದು ಹೇಳಿದರು.

# ಬಿಜೆಪಿ ಸಂಸದರು, ಶಾಸಕರ ಮೇಲೆ ನಿರಂತರ ಎಫ್‌ಐಆರ್: ಶೋಭಾ

## ಪೂಂಜಾ, ಯತ್ನಾಳ್, ಬೆಲ್ಲದ್, ಭರತ್ ಶೆಟ್ಟಿ – ಹೀಗೆ ನಿರಂತರವಾಗಿ ಬಿಜೆಪಿ ನಾಯಕರು, ಕಾರ್ಯಕರ್ತರನ್ನು ಹತ್ತಿಕ್ಕುವ ಕೆಲಸ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ರಾಜ್ಯದಲ್ಲಿ ಅಘೋಷಿತ ತುರ್ತು ಪರಿಸ್ಥಿತಿ ಇದೆ ಎಂದು ಕೇಂದ್ರ ಸಚಿವೆ ಕು. ಶೋಭಾ ಕರಂದ್ಲಾಜೆ ಅವರು ಆಕ್ಷೇಪಿಸಿದರು.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯನವರು ಮುಖ್ಯಮಂತ್ರಿಯಾದ ಮೇಲೆ ಹಿಟ್ಲರ್ ಆಗಿದ್ದಾರೆ.

ಬಿಜೆಪಿ ಸಂಸದರು ಮತ್ತು ಶಾಸಕರ ಮೇಲೆ ನಿರಂತರವಾಗಿ ಎಫ್‌ಐಆರ್‌ಗಳು ದಾಖಲಾಗುತ್ತಿವೆ. ರಾಜ್ಯದ ಇತಿಹಾಸದಲ್ಲಿ ಮೊದಲ ಬಾರಿಗೆ ವಿರೋಧ ಪಕ್ಷದ ನಾಯಕನ ಮೇಲೆ ಎಫ್‌ಐಆರ್ ದಾಖಲಿಸಲಾಗಿದೆ; ಕೇಂದ್ರದ ಸಚಿವರ ಮೇಲೆ ಎಫ್‌ಐಆರ್ ದಾಖಲಿಸಿದ್ದಾರೆ ಎಂದು ಟೀಕಿಸಿದರು. ಬೆಂಗಳೂರಿನ ಸಂಸದ ತೇಜಸ್ವಿ ಸೂರ್ಯರ ಮೇಲೆ ಎಫ್‌ಐಆರ್ ದಾಖಲು ಮಾಡಿದ್ದಾರೆ. ಶಾಸಕರಾದ ಹರೀಶ್ ಪೂಂಜಾ, ಬಸನಗೌಡ ಪಾಟೀಲ್ ಯತ್ನಾಳ್, ಅರವಿಂದ ಬೆಲ್ಲದ್, ಭರತ್ ಶೆಟ್ಟಿ– ಹೀಗೆ ನಿರಂತರವಾಗಿ ಬಿಜೆಪಿ ನಾಯಕರು, ಕಾರ್ಯಕರ್ತರನ್ನು ಹತ್ತಿಕ್ಕುವ, ಅವರ ಧ್ವನಿ ಅಡಗಿಸುವ ಕೆಲಸವನ್ನು ಕಾಂಗ್ರೆಸ್ ಸರಕಾರದ ನೇತೃತ್ವದಲ್ಲಿ ಮಾಡಲಾಗುತ್ತಿದೆ ಎಂದು ಆಕ್ಷೇಪ ವ್ಯಕ್ತಪಡಿಸಿದರು.

ಬಾಂಗ್ಲಾ ಮಾದರಿಯಲ್ಲಿ ರಾಜ್ಯಪಾಲರನ್ನು ಓಡಿಸುತ್ತೇವೆ ಎಂದು ಐವನ್ ಡಿಸೋಜ ಅವರು ಹೇಳಿಕೆ ಕೊಟ್ಟಿದ್ದರು.

ನಮ್ಮ ಮಂಗಳೂರಿನ ಜನರು, ಕಾರ್ಯಕರ್ತರು ದಿನವೂ ಪೊಲೀಸ್ ಸ್ಟೇಶನ್‌ಗೆ ಹೋಗುತ್ತಿದ್ದಾರೆ. ದೂರನ್ನೂ ನೀಡುತ್ತಿದ್ದಾರೆ. ಆದರೆ, ಇವತ್ತಿನ ತನಕ ದೂರನ್ನು ತೆಗೆದುಕೊಂಡಿಲ್ಲ ಎಂದು ವಿವರಿಸಿದರು. ಅವರ ಮೇಲೆ ಎಫ್‌ಐಆರ್ ದಾಖಲಿಸುತ್ತಿಲ್ಲವೇಕೆ ಎಂದು ಸಿದ್ದರಾಮಯ್ಯರನ್ನು ಪ್ರಶ್ನಿಸಿದರು.

ಕರ್ನಾಟಕವನ್ನು ನೀವೇನು ಮಾಡಲು ಹೊರಟಿದ್ದೀರಿ ನಾಗಮಂಗಲದಲ್ಲಿ ಘಟನೆ ನಡೆಯಿತು. ದೇಶದ ಇತಿಹಾಸದಲ್ಲಿ ಮೊದಲ ಬಾರಿಗೆ ಕರ್ನಾಟಕದಲ್ಲಿ ಗಣೇಶ ಚತುರ್ಥಿಯ ಸಂದರ್ಭದಲ್ಲಿ ಗಣೇಶನನ್ನು ಪೊಲೀಸ್ ವ್ಯಾನಿನಲ್ಲಿ ಕರೆದುಕೊಂಡು ಹೋಗಿ ವಿಸರ್ಜನೆ ಮಾಡುವ ಘಟನೆ ನಡೆದಿದೆ. ಯಾಕಾಗಿ ಹೀಗಾಗಿದೆ ನಾಗಮಂಗಲದ ಗಣಪತಿಗೆ ನೀವು ಚಪ್ಪಲಿ ಎಸೆಯಲು ಅವಕಾಶ ಕೊಟ್ಟಿದ್ದೀರಿ. ಕಲ್ಲುಗಳನ್ನೂ ಎಸೆದರು. ಮೂರ್ತಿ ಭಗ್ನ ಆಯಿತು. ಮೂರ್ತಿಯನ್ನು ಅಲ್ಲೇ ಬಿಟ್ಟು ಓಡಿದರು. 25 ಅಂಗಡಿಗಳನ್ನು ಸುಟ್ಟು ಹಾಕಿದರು. ಆ ಜನರು ಯಾರು ಎಂದು ಕು. ಶೋಭಾ ಕರಂದ್ಲಾಜೆ ಅವರು ಪ್ರಶ್ನೆಯನ್ನು ಮುಂದಿಟ್ಟರು. ನಾಗಮಂಗಲದ ಜನರಿಗೆ ಆ ಧೈರ್ಯ ಹೇಗೆ ಬಂತು ಲಭಿಸಿದ ವರದಿ ಪ್ರಕಾರ ಕೇರಳದಿಂದ ಬಂದಿದ್ದಾರೆ ಎನ್ನುತ್ತಿದ್ದಾರೆ. ಅವರು ಯಾರು ಹೇಗೆ ಮತ್ತು ಯಾಕೆ ಬಂದರು ಇವತ್ತು ನಾಗಮಂಗಲದ ಕೇಸನ್ನೂ ನೀವು ಮುಚ್ಚಿಹಾಕಿದ್ದೀರಿ. ನಿಮ್ಮ ಪೊಲೀಸರು ಇದೊಂದು ಘಟನೆಯೇ ಅಲ್ಲ ಎಂಬಂತೆ ಆ ಕೇಸನ್ನು ಕ್ಲೋಸ್ ಮಾಡಿದ್ದಾರೆ ಎಂದು ದೂರಿದರು. ಪರಮೇಶ್ವರ್ ಅವರು ಇದೊಂದು ಚಿಕ್ಕ ಘಟನೆ ಎನ್ನುತ್ತಾರೆ. ಯಾವುದು ಚಿಕ್ಕ ಘಟನೆ ಪರಮೇಶ್ವರ್ ಅವರೇ ಎಂದು ಕೇಳಿದರು. 25 ಅಂಗಡಿ ಸುಟ್ಟದ್ದು ಚಿಕ್ಕ ಘಟನೆಯೇ ಪಕ್ಕದ ರಾಜ್ಯದಿಂದ ಬಂದು ಗಲಭೆ ಮಾಡಿದ್ದು ಚಿಕ್ಕ ಘಟನೆಯೇ ಎಂದರು.

ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ 187 ಕೋಟಿ ಹಗರಣ ಮಾಡಿ ಸಿಕ್ಕಿ ಹಾಕಿಕೊಂಡ ಬಳಿಕ ನೀವು ಎಸ್‌ಐಟಿ ರಚಿಸಿದ್ದೀರಿ. ಎಸ್‌ಐಟಿ ವರದಿಯನ್ನು ಓದಿದ್ದೀರಾ ಸಿದ್ದರಾಮಯ್ಯನವರೇ ಆ ವರದಿಯಲ್ಲಿ ನಾಗೇಂದ್ರ ಅವರ ಹೆಸರು ಯಾಕೆ ಇಲ್ಲ ಎಂದು ಪ್ರಶ್ನೆಯನ್ನು ಮುಂದಿಟ್ಟರು. ಅವರು ಅಪರಾಧಿ ಅಲ್ಲವೇ ಎಂದು ಕೇಳಿದರು.

### ರಾಜ್ಯದಲ್ಲಿ ಅಘೋಷಿತ ತುರ್ತು ಪರಿಸ್ಥಿತಿ



### ಯಾವ ಸಂವಿಧಾನದ ರಕ್ಷಣೆ ಮಾಡಲು ನೀವು ಹೊರಟಿದ್ದೀರಿ

**ರಾಜ್ಯಾದ್ಯಂತ ಸಂವಿಧಾನ ರಕ್ಷಣೆ ಮಾಡಬೇಕೆಂದು ಶಾಲೆ- ಕಾಲೇಜು ಮಕ್ಕಳ ಮಾನವ ಸರಪಳಿ ಮಾಡಿದ್ದೀರಿ ಯಾವ ಪುರುಷಾರ್ಥಕ್ಕೆ ಜನರು ಬರಲಿಲ್ಲ. ಮನೆಗೆ ಹೋಗಿದ್ದ ಮಕ್ಕಳನ್ನು ಕರೆದುಕೊಂಡು ಬಂದು ರಸ್ತೆ ತುಂಬ ಬಿಸಿಲಲ್ಲಿ ನಿಲ್ಲಿಸಿದ್ದೀರಿ. ಮಕ್ಕಳನ್ನು ಬಿಸಿಲಲ್ಲಿ ನಿಲ್ಲಿಸಿದ್ದಾರೆ ಎಂದು ನೂರಾರು ಫೋನ್ ಕರೆ ನಮಗೆ ಬಂದಿತ್ತು. ಯಾವ ಸಂವಿಧಾನದ ರಕ್ಷಣೆ ಮಾಡಲು ನೀವು ಹೊರಟಿದ್ದೀರಿ ಎಂದು ಆಕ್ರೋಶ ವ್ಯಕ್ತಪಡಿಸಿದರು. ಬೆಳಗಾವಿಯಲ್ಲಿ ಗಣಪತಿ ಮೂರ್ತಿ ವಿಸರ್ಜನೆ ವೇಳೆ 3 ಜನ ಹಿಂದೂ ಯುವಕರಿಗೆ ಚಾಕುವಿನಿಂದ ಇರಿದಿದ್ದಾರೆ. ಕೋಲಾರದಲ್ಲಿ ಮೊದಲ ಬಾರಿಗೆ ಕರ್ನಾಟಕ ರಾಜ್ಯ ಪ್ಯಾಲೆಸ್ತೀನ್ ಧ್ವಜ ನೋಡುವಂತಾಗಿದೆ. ಕೋಲಾರದ ಮೆರವಣಿಗೆಯಲ್ಲಿ ಪ್ಯಾಲೆಸ್ತೀನ್ ಧ್ವಜದ ಪ್ರದರ್ಶನ ಆಗಿದೆ. ನಿನ್ನೆ ಬೆಂಗಳೂರಿನ ನಂದಿನಿ ಲೇಔಟ್‌ನಲ್ಲಿ ರಾಷ್ಟ್ರಧ್ವಜ ವಿರೂಪಗೊಳಿಸಿ ರಾಷ್ಟ್ರಧ್ವಜದ ಅಶೋಕ ಚಕ್ರದ ಜಾಗದಲ್ಲಿ ಉರ್ದುವಿನಲ್ಲಿ ಬರೆದಿದ್ದಾರೆ. ಇಂಥ ಧ್ವಜವನ್ನು ಬೆಂಗಳೂರಿನಲ್ಲಿ ಏರಿಸುತ್ತಿದ್ದಾರೆ. ಇದು ಕರ್ನಾಟಕದ ರಾಜಧಾನಿಯ ಸ್ಥಿತಿ ಎಂದು ಕು. ಶೋಭಾ ಕರಂದ್ಲಾಜೆ ಅವರು ಕಳವಳ ವ್ಯಕ್ತಪಡಿಸಿದರು.**

**ಈ ದಿನದ ದರ** ಪೆಟ್ರೋಲ್: 103.44 ₹/L | ಡೀಸೆಲ್ : 89.97 ₹/L | ಬಂಗಾರ: ₹7,445/Gram24ct ₹6,825/Gram22ct | ಬೆಳ್ಳಿ: ₹91.00/Gram



## ಸಿದ್ದಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
**ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ**
**ರಾಮೋಹಳ್ಳಿ**

### ಶಿವಲಿಂಗದ ಮೇಲೆ ಪಾದವಿಟ್ಟು ಪೂಜೆ

ಇತ್ತೀಚೆಗೆ ವೀಡಿಯೋ ಹರಿದಾಡಿತು. ಸೇಡಂ ತಾಲ್ಲೂಕಿನ ಕಲಕಂಭ ಗ್ರಾಮದ ಈಶ ಬಸವೇಶ್ವರ ದೇವಾಲಯದಲ್ಲಿ ಸಿದ್ಧವೀರಶಿವಾಚಾರ್ಯರು ಶಿವಲಿಂಗದ ಮೇಲೆ ಪಾದವಿಟ್ಟು ಪೂಜೆ ಮಾಡಿಸಿಕೊಂಡಿದ್ದರು. ಇಂಥ ಪ್ರಕರಣ ಹಲವು. ಎರಡು ಸಾವಿರದ ಹದಿನೆಂಟರ ನವೆಂಬರ್ ಐದರಂದು ನೆಲಮಂಗಲ ಬಳಿ ಕೆರೆಕತ್ತಿಗನೂರಿನಲ್ಲಿ ಜಡೆ ಶಾಂತಲಿಂಗೇಶ್ವರ ಸ್ವಾಮೀಜಿ ಶಿವಲಿಂಗದ ಮೇಲೆ ಪಾದವಿಟ್ಟು ಪೂಜೆ ಮಾಡಿಸಿಕೊಂಡಿದ್ದರು. ಎರಡು ಸಾವಿರದ ಇಪ್ಪತ್ತೆರಡರ ಅಕ್ಟೋಬರ್ ನಲ್ಲಿ ಹೊನ್ನಾಳಿ ಬಳಿ ಕತ್ತಿಗೆ ಗ್ರಾಮದಲ್ಲಿ ಅರ್ಚಕ ಮಹೇಶ್ವರಯ್ಯ ದೇವರ ತಲೆ ಮೇಲೆ ಪಾದವಿಟ್ಟು ಅಭಿಷೇಕ ಮಾಡಿದ್ದ. ಎಲ್ಲವೂ ವಿವಾದಕ್ಕೊಳಗಾದವು. ಇದನ್ನು ಮಾಡಿದ ಯಾರೂ ಕ್ಷಮೆ ಕೇಳಲಿಲ್ಲ. ಸಮರ್ಥಿಸಿಕೊಂಡರು. ಶಿಲ್ಪಿ ಕೆತ್ತಿದಾಗ ಶಿಲೆ, ಗುರುಪಾದವಿಟ್ಟಾಗ ದೇವರು ಇದು ಪುಸ್ತಕ ಕಥಿತ. ಇಂಥ ವಿಪರ್ಯಾಸ ಇಸ್ಲಾಂ ಕ್ರೈಸ್ತರಲ್ಲೂ ಉಂಟು. ಅಲ್ಲಾಹ್ ಮಾತ್ರ ದೇವರು, ಉಳಿದ ದೇವರು ದೇವರಲ್ಲ, ಯೇಹೋ ಮಾತ್ರ ದೇವರು, ಉಳಿದ ದೇವರು ದೇವರಲ್ಲ ಇತ್ಯಾದಿ. ಯಾವುದೋ ಕಾಲದಲ್ಲಿ ಯಾರಿಗೋ ಯಾರೋ ಹೇಳಿದ ಧರ್ಮೋಪದೇಶಗಳನ್ನು ಎಂದೆಂದಿಗೂ ಬದಲಾವಣೆ ಇಲ್ಲದೇ ಪಾಲಿಸಬೇಕಿಲ್ಲ. ಸಂವಿಧಾನ ಕಾನೂನು ವೈಜ್ಞಾನಿಕ ಸಿದ್ಧಾಂತ ಎಲ್ಲವನ್ನೂ ಕಾಲಾನುಗುಣ ಪರಿಷ್ಕರಿಸುವಾಗ, ಅಪ್ರಸ್ತುತ ಅಸಮಂಜಸ ಎನಿಸುವ ಧಾರ್ಮಿಕ ಆಚರಣೆ ವಿಧಿ ವಿಧಾನಗಳನ್ನು ಪರಿಷ್ಕರಿಸಬಾರದೇಕೆ? ಕೆತ್ತುವಾಗ ಶಿಲೆ, ಕೆತ್ತನೆ ಪೂರ್ಣಗೊಂಡ ಮರುಕ್ಷಣ ಅದು ದೇವರು ಎಂಬ ಭಾವ ಸುಂದರ. ಗುರುವಿನ ಮಹತ್ತಿಗಾಗಿ ಗುರುಹಸ್ತ ಸ್ಪರ್ಶದಿಂದ ಪ್ರಾಣಪ್ರತಿಷ್ಠೆ ಮಾಡುವುದು ಸೊಗಸು ಒಪ್ಪಿತ!!!

# ಬಿಬಿಎಂಪಿಯಿಂದ ಹೊಸ ಡಿಜಿಟಲ್ ವ್ಯವಸ್ಥೆ ಆರಂಭ

## 2500 ಆಸ್ತಿಗಳನ್ನು ಇ-ಖಾತಾ ಮಾಡಿದ್ದ ಬಿಬಿಎಂಪಿಯು ಲಕ್ಷಾಂತರ ಆಸ್ತಿ ಖಾತೆ ಈಗಾಗಲೇ ಡಿಜಿಟಲೀಕರಣ ಮಾಡಿದೆ

• ಉದಯವಾಹಿನಿ ಬೆಂಗಳೂರು

ಒಂದೆರಡು ಗ್ರಾಮ ಪಂಚಾಯಿತಿ ವ್ಯಾಪ್ತಿಯ 2500 ಆಸ್ತಿಗಳನ್ನು ಇ-ಖಾತಾ ಮಾಡಿದ್ದ ಬಿಬಿಎಂಪಿಯು ಲಕ್ಷಾಂತರ ಆಸ್ತಿ ಖಾತೆಗಳನ್ನು ಈಗಾಗಲೇ ಡಿಜಿಟಲೀಕರಣ ಮಾಡಿದೆ. ಇದೀಗ ಫೇಸ್‌ಲೆಸ್ ಸಂಪರ್ಕರಹಿತ ಆನ್‌ಲೈನ್ ಡಿಜಿಟಲ್ ವ್ಯವಸ್ಥೆ ಜಾರಿಗೊಳಿಸಲು ಮುಂದಾಗಿದೆ. ಇನ್ನೇನು ಕೆಲವೇ ದಿನಗಳಲ್ಲಿ ಜಿಪಿಎಸ್ ಆಧಾರಿತ ಮಾಹಿತಿಯನ್ನು ಪಡೆದು ಅದನ್ನು ಡಿಜಿಟಲೀಕರಣಗೊಳಿಸಲಿದೆ.



ಉದಯವಾಹಿನಿ ಚಿತ್ರ

### ಸಹಕರಿಸಲು ಸಾರ್ವಜನಿಕರಿಗೆ ಮನವಿ

**ಪ್ರಾಪರ್ಟಿ ಜಿಪಿಎಸ್ ನಿಮ್ಮ ಆಸ್ತಿಯ ವಿಶಿಷ್ಟ ಗುರುತು ಆಗಿರುತ್ತದೆ. ಎಲ್ಲಾ ಬಿಬಿಎಂಪಿಯ ಇ - ಖಾತಾ ಸೇವೆಗಳ ಫೇಸ್‌ಲೆಸ್, ಸಂಪರ್ಕರಹಿತ ಮತ್ತು ಆನ್‌ಲೈನ್ ವಿತರಣೆಗೆ ಇದು ಬಹಳ ಮುಖ್ಯವಾಗಿರುತ್ತದೆ. ಆದ್ದರಿಂದ, ನಿಮಗೆ ಉತ್ತಮ ಸೇವೆ ನೀಡಲು ಬಿಬಿಎಂಪಿಯನ್ನು ಬಲಪಡಿಸಲು ನಿಮ್ಮ ಸಂಪೂರ್ಣ ಸಹಕಾರವನ್ನು ನೀಡುವಂತೆ ವಿನಂತಿಸುತ್ತೇನೆ. ಬಿಬಿಎಂಪಿಯು ಸದಾ ನಿಮ್ಮ ಸೇವೆಯಲ್ಲಿ ಹಾಗೂ ಉತ್ತಮ ಗುಣಮಟ್ಟದ ನಗರವನ್ನು ರಚಿಸಲು ಸಹಕರಿಸಿ ಎಂದು ಮುಖ್ಯ ಆಯುಕ್ತ ತುಷಾರ್ ಗಿರಿ ನಾಥ್ ತಿಳಿಸಿದ್ದಾರೆ.**

ಹೌದು, ಉಪ ಮುಖ್ಯಮಂತ್ರಿ ಮತ್ತು ಬೆಂಗಳೂರು ನಗರಾಭಿವೃದ್ಧಿ ಸಚಿವರಾದ ಡಿ.ಕೆ ಶಿವಕುಮಾರ್ ಅವರ ನೇತೃತ್ವ ಮತ್ತು ನಿರ್ದೇಶನದಲ್ಲಿ ಬಿಬಿಎಂಪಿಯು ಫೇಸ್‌ಲೆಸ್ ಸಂಪರ್ಕರಹಿತ ಆನ್‌ಲೈನ್ ಡಿಜಿಟಲ್ ವ್ಯವಸ್ಥೆಯನ್ನು ಆರಂಭಿಸುವುದಾಗಿ ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ತಿಳಿಸಿದರು. ಬಿಬಿಎಂಪಿಯು ರಿಜಿಸ್ಟರ್‌ಗಳಲ್ಲಿನ ಎಲ್ಲಾ 21 ಲಕ್ಷ ಖಾತಾಗಳನ್ನು ಡಿಜಿಟಲೀಕರಣಗೊಳಿಸಲಾಗಿದೆ, ರೋಲ್-ಔಟ್ ಶೀಘ್ರದಲ್ಲೇ ಪ್ರಾರಂಭಿಸಲಾಗುತ್ತದೆ.

ಡಿಜಿಟಲ್ ವ್ಯವಸ್ಥೆ ಮಾಡುವಾಗ ಆಯಾ ಸ್ಥಳದ (ಆಸ್ತಿ) ಜಿಪಿಎಸ್ ಅಗತ್ಯವಾಗಿರುತ್ತದೆ. ಹೀಗಾಗಿ ಮುಂದಿನ ದಿನಗಳಲ್ಲಿ ಬಿಬಿಎಂಪಿಯ ಸಿಬ್ಬಂದಿಯು ನಿಮ್ಮ ಮನೆಗಳಿಗೆ ಭೇಟಿ ನೀಡಿ ನಿಮ್ಮ ಆಸ್ತಿಯ ಜಿ.ಪಿ.ಎಸ್. ಮಾಹಿತಿ ಸೆರೆ ಹಿಡಿಯಲಿದೆ.

ಬಿಬಿಎಂಪಿಯಿಂದ ನಿಮ್ಮ ಆಸ್ತಿಯ ಡಿಜಿಟಲ್ ಖಾತಾ ಪಡೆಯಲು ಪ್ರತಿ ಆಸ್ತಿಯ ಜಿಪಿಎಸ್ ಕಡ್ಡಾಯಗೊಳಿಸಲಾಗಿದೆ. ಸದರಿ ಪ್ರಾಪರ್ಟಿ ಜಿಪಿಎಸ್ ನಿಮ್ಮ ಆಸ್ತಿಯ ವಿಶಿಷ್ಟ ಗುರುತು ಆಗಿದೆ. ಆದ್ದರಿಂದ ಬಿಬಿಎಂಪಿಯ ಎಲ್ಲಾ ಇ-ಖಾತಾ ಸೇವೆಗಳ ಫೇಸ್‌ಲೆಸ್, ಸಂಪರ್ಕರಹಿತ ಮತ್ತು ಆನ್‌ಲೈನ್ ವಿತರಣೆ ಮಾಡುವುದಕ್ಕೆ ಆದ್ಯತೆ ನೀಡಲಾಗಿದೆ ಎಂದು ಅವರು ತಿಳಿಸಿದರು.

ಬಿಬಿಎಂಪಿ ವ್ಯಾಪ್ತಿಯಲ್ಲಿನ ಎಂಟು ವಲಯಗಳ ಗ್ರಾಹಕರಿಗೆ ಉತ್ತಮ ಸೇವೆ ನೀಡುವ ಸದುದ್ದೇಶದಿಂದ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಸಹಕಾರಣದಲ್ಲಿ ನಿಮಗೆ ಉತ್ತಮ ಸೇವೆ ನೀಡಲು ನಿರ್ಧರಿಸಲಾಗಿದೆ.

ಇದರಿಂದ ಬಿಬಿಎಂಪಿ ಆಡಳಿತವು ಬಲಗೊಂಡಂತಾಗುತ್ತದೆ. ಆದ್ದರಿಂದ ಅಧಿಕಾರಿಗಳು ನಿಮ್ಮ ಮನೆಗೆ ಜಿಪಿಎಸ್ ಮಾಹಿತಿ ಸಂಗ್ರಹಿಸಲು ಬಂದಾಗ ಸಂಪೂರ್ಣ ಸಹಕಾರ ನೀಡಬೇಕು ಎಂದು ಅವರು ತಿಳಿಸಿದರು.

ಬೆಂಗಳೂರು ಪಾಲಿಕೆ ಜೊತೆಗೆ ವಿಲೀನಗೊಳಿಸುವ ಮೊದಲು ಗ್ರಾಮ ಪಂಚಾಯಿತಿಯಿಂದ ಇ-ಖಾತಾ ನೀಡಲಾಗುತ್ತಿತ್ತು. ಅಂತಹ ಹಳೆಯ ಇ-ಖಾತಾ ಹೊಂದಿದ್ದ ನಗರದ ಮಲ್ಲಸಂದ್ರ ಕಾವಲ್ ಗ್ರಾಮಗಳ ವ್ಯಾಪ್ತಿಯ 2500 ಸತ್ತುಗಳನ್ನು ಬಿಬಿಎಂಪಿ ಸ್ವಯಂಚಾಲಿತ ಇ-ಖಾತಾ ಆಗಿದೆ

### ಫ್ಲೈಓವರ್ ನಿರ್ವಹಣೆಗೆ ಸೂಚನೆ

**ಬಿಬಿಎಂಪಿ ವ್ಯಾಪ್ತಿಯಲ್ಲಿನ ಮೇಲ್ಸೇತುವೆ ಕೆಳಸೇತುವೆಗಳನ್ನು ಸಮರ್ಪಕವಾಗಿ ನಿರ್ವಹಣೆ ಮಾಡಬೇಕು ಎಂದು ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಅಧಿಕಾರಿಗಳಿಗೆ ಸೂಚನೆ ನೀಡಿದರು. ಪಾಲಿಕೆ ಕೇಂದ್ರ ಕಚೇರಿಯಲ್ಲಿ ವೀಡಿಯೋ ಕಾನ್ಫರೆನ್ಸ್ ಮೂಲಕ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಪಾಲಿಕೆ ಸುಪರ್ದಿಯಲ್ಲಿರುವ ಮೇಲ್ಸೇತುವೆ, ಕೆಳಸೇತುವೆಗಳನ್ನು ಪರಿಶೀಲಿಸಿ, ಸಮರ್ಪಕವಾಗಿ ನಿರ್ವಹಣೆ ಮಾಡಬೇಕು, ಎಂದು ಹೇಳಿದರು. ನಗರದಲ್ಲಿರುವ ಸ್ಕೈವಾಕ್ ಗಳಲ್ಲಿಅಳವಡಿಸಿರುವ ಲಿಫ್ಟ್‌ಗಳು ಸರಿಯಾಗಿರುವಂತೆ ನೋಡಿಕೊಳ್ಳಬೇಕು. ಜತೆಗೆ, ಎಲ್ಲಾ ಸ್ಕೈವಾಕ್‌ಗಳ ಬಳಿ ಸ್ವಚ್ಛತೆ ಕಾಯ್ದುಕೊಳ್ಳಬೇಕು. ಪಾದಚಾರಿಗಳ ಓಡಾಟಕ್ಕೆ ಯಾವುದೇ ತೊಂದರೆಯಾಗದಂತೆ ಗಮನ ಹರಿಸಬೇಕು. ಪಾಲಿಕೆ ವ್ಯಾಪ್ತಿಯ ಎಲ್ಲಾ 8 ವಲಯಗಳಲ್ಲಿಬಾಕಿ ಇರುವ ರಸ್ತೆ ಗುಂಡಿಗಳನ್ನು ತ್ವರಿತವಾಗಿ ಮುಚ್ಚಬೇಕು,'' ಎಂದು ಸೂಚಿಸಿದರು.**

## ಇಬ್ಬರು ಆರೋಪಿಗಳನ್ನ ವಶಕ್ಕೆ ಪಡೆದು ವಿಚಾರಣೆ ನಡೆಸಲು ಪೊಲೀಸರ ಸಿದ್ಧತೆ

• ಉದಯವಾಹಿನಿ ಬೆಂಗಳೂರು

ರೇಣುಕಾ ಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪರಪ್ಪನ ಅಗ್ರಹಾರ ಜೈಲಿನಲ್ಲಿ ಕೊಲೆ ಆರೋಪಿ ದರ್ಶನ್‌ಗೆ ರಾಜಾತಿಥ್ಯ ನೀಡಿದ ವಿಚಾರವಾಗಿ ಇದೀಗ ಪೊಲೀಸರು ಇಬ್ಬರು ಆರೋಪಿಗಳನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಲು ಸಿದ್ಧತೆ ಮಾಡಿಕೊಂಡಿದ್ದಾರೆ. ಹೌದು ಆರೋಪಿಗಳಾದ ವಿಲ್ಸನ್ ಗಾರ್ಡನ್ ನಾಗ, ವೇಲುನನ್ನು ವಶಕ್ಕೆ ಪೊಲೀಸರು ವಶಕ್ಕೆ ಪಡೆಯಲಿದ್ದಾರೆ. ರಾಜ್ಯಾತೀಥ್ಯ ಸಂಬಂಧ ಒಟ್ಟು ಮೂರು ಕೇಸ್ ದಾಖಲಿಸಲಾಗಿತ್ತು. 2 ಕೇಸ್‌ನಲ್ಲಿ ವಿಲ್ಸನ್ ಗಾರ್ಡನ್ ನಾಗ ಆರೋಪಿಯಾಗಿದ್ದಾನೆ. ಪೊಲೀಸರು ಇಬ್ಬರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಲು ಇದೀಗ ತೀರ್ಮಾನಿಸಿದ್ದಾರೆ. ಬಳಿಕ ಮಧ್ಯಾಹ್ನ 3:30ಕ್ಕೆ ಜಡ್ಜ್ ಮುಂದೆ ಇಬ್ಬರನ್ನು ಹಾಜರುಪಡಿಸಲಿದ್ದಾರೆ. ನ್ಯಾಯಾಲಯಕ್ಕೆ ಹಾಜರುಪಡಿಸಿ ವಶಕ್ಕೆ ಪಡೆಯಲು ತೀರ್ಮಾನಿಸಲಾಗಿದೆ. ಬೆಂಗಳೂರಿನ 8ನೇ ACMM ನ್ಯಾಯಾಲಯಕ್ಕೆ ಪೊಲೀಸರು ಇಬ್ಬರು ಆರೋಪಿಗಳನ್ನು ಹಾಜರುಪಡಿಸಲಿದ್ದಾರೆ. ವಿಚಾರಣೆ ನಡೆಸಿದ ಬಳಿಕ ಕೋರ್ಟ್ ಆದೇಶದ ಮೇರೆಗೆ ವಶಕ್ಕೆ ಪಡೆದುಕೊಳ್ಳಲಿದ್ದಾರೆ.

## ದಕ್ಷಿಣ ಕನ್ನಡ ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಡೇಟ್ ಫಿಕ್ಸ್

• ಉದಯವಾಹಿನಿ ಬೆಂಗಳೂರು

ವಿಧಾನ ಪರಿಷತ್ ಉಪಚುನಾವಣೆಗೆ ದಿನಾಂಕ ನಿಗದಿಯಾಗಿದೆ. ದಕ್ಷಿಣ ಕನ್ನಡ ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಮುಹೂರ್ತ ನಿಗದಿಯಾಗಿದೆ. ಕೋಟ ಶ್ರೀನಿವಾಸ್ ಪೂಜಾರಿ ರಾಜುನಾಮೆಯಿಂದ ತೆರವಾಗಿರುವ ದಕ್ಷಿಣ ಕನ್ನಡ ಸ್ಥಳೀಯ ಸಂಸ್ಥೆಗಳ ವಿಧಾನ ಪರಿಷತ್ ಉಪಚುನಾವಣೆ ಅಕ್ಟೋಬರ್ 21ರಂದು ನಡೆಯಲಿದೆ. ಸೆಪ್ಟೆಂಬರ್ 26ರಿಂದ ಅಧಿಸೂಚನೆ ಜಾರಿಯಾಗಲಿದೆ. ಅಕ್ಟೋಬರ್ 3ರಂದು ನಾಮಪತ್ರ ಸಲ್ಲಿಸಲು ಕೊನೆ ದಿನವಾಗಿದೆ. ಅಕ್ಟೋಬರ್ 4ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದ್ದು, ಅಕ್ಟೋಬರ್ 7 ನಾಮಪತ್ರ ಹಿಂಪಡೆಯಲು ಕೊನೆಯ ದಿನವಾಗಿದೆ. ಅಕ್ಟೋಬರ್ 21ರಂದು ಬೆಳಿಗ್ಗೆ 8ಗಂಟೆಯಿಂದ ಸಂಜೆ 4 ಗಂಟೆಯವರೆಗೆ ಮತದಾನ ನಡೆಯಲಿದ್ದು, ಅಕ್ಟೋಬರ್ 24ರಂದು ಮತ ಎಣಿಕೆ ನಡೆಯಲಿದೆ.

## ರಾಜ್ಯದಲ್ಲಿ ಉತ್ಕೃಷ್ಟತಾ ಕೇಂದ್ರ ಸ್ಥಾಪನೆ

• ಉದಯವಾಹಿನಿ ಬೆಂಗಳೂರು

ರಾಜ್ಯದಲ್ಲಿ ಉತ್ಕೃಷ್ಟತಾ ಕೇಂದ್ರ ಸ್ಥಾಪನೆ ಮಾಡಲಾಗುತ್ತದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು. ಬಾಹ್ಯಾಕಾಶ ತಂತ್ರಜ್ಞಾನ ಉದ್ದಿಮೆಗಳು ಮತ್ತು ನವೋದ್ಯಮಗಳಿಗೆ ಉತ್ತೇಜನ ನೀಡುವ ಉದ್ದೇಶದಿಂದ ರಾಜ್ಯದಲ್ಲಿ ಉತ್ಕೃಷ್ಟತಾ ಕೇಂದ್ರವನ್ನು ಸ್ಥಾಪಿಸಲಾಗುವುದು ಎಂದು ಮಾಹಿತಿ ತಂತ್ರಜ್ಞಾನ ಸಚಿವರಾದ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

## ಮುನಿರತ್ನ ವಿರುದ್ಧ ಸಿಡಿದೆದ್ದ ಕಾಂಗ್ರೇಸ್ ಕಠಿಣ ಕಾನೂನು ಕ್ರಮಕ್ಕೆ ಆಗ್ರಹಿಸಿ ಪ್ರತಿಭಟನೆ

• ಉದಯವಾಹಿನಿ ಬೆಂಗಳೂರು

ಗುತ್ತಿಗೆದಾರನಿಗೆ ಜೀವ ಬೆದರಿಕೆ, ನಿಂದನೆ ಪ್ರಕರಣದಲ್ಲಿ ಜೈಲು ಸೇರಿರುವ ಬಿಜೆಪಿ ಶಾಸಕ ಮುನಿರತ್ನ ವಿರುದ್ಧ ಸಾಲು ಸಾಲು ಆರೋಪಗಳು ಕೇಳಿಬಂದಿದ್ದು, ಅತ್ಯಾಚಾರ ಪ್ರಕರಣ ದಾಖಲಾಗಿದೆ. ಅಲ್ಲದೇ ಹನಿಟ್ರ್ಯಾಪ್ ಆರೋಪ ಕೂಡ ಕೇಳಿಬಂದಿದೆ. ಹಿನ್ನೆಲೆಯಲ್ಲಿ ಶಾಸಕ ಮುನಿರತ್ನ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ವಿಧಾನಸೌಧದ ಬಳಿ ಕಾಂಗ್ರೇಸ್ ನಾಯಕರು, ಕಾರ್ಯಕರ್ತರು ಪ್ರತಿಭಟನೆ ನಡೆಸಿದ್ದಾರೆ, ದಲಿತರು, ಮಹಿಳೆಯರು, ಒಕ್ಕಲಿಗರ ಬಗ್ಗೆ ಕೀಳು ಮಟ್ಟದ ಅವಹೇಳನಕಾರಿಯಾಗಿ ಮಾತನಾಡಿರುವ, ಲಂಚಕ್ಕಾಗಿ ಬೇಡಿಕೆ ಇಟ್ಟು ಬೆದರಿಕೆ ಹಾಕಿರುವ ರಾಜರಾಜೇಶ್ವರಿ ನಗರ ವಿಧಾನಸಭಾ ಕ್ಷೇತ್ರದ ಬಿಜೆಪಿ ಶಾಸಕ ಮುನಿರತ್ನ ನಾಯ್ಡು ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಪ್ರತಿಭಟನಾಕಾರರು ಆಗ್ರಹಿಸಿದ್ದಾರೆ.

## ರೈಲ್ವೆ ನಿಲ್ದಾಣದಲ್ಲಿ ಕಾಲೇಜು ವಿದ್ಯಾರ್ಥಿಗಳಿಗೆ ವಾಲ್ ಪೇಂಟಿಂಗ್ ಸ್ಪರ್ಧೆ ಆಯೋಜನೆ

• ಉದಯವಾಹಿನಿ ಬೆಂಗಳೂರು


ಬೆಂಗಳೂರು ರೈಲ್ವೆ ವಿಭಾಗದಿಂದ ಕಾಲೇಜು ವಿದ್ಯಾರ್ಥಿಗಳಿಗೆ ಎಸ್.ಎಂ.ವಿ.ಟಿ. ಬೆಂಗಳೂರು ನಿಲ್ದಾಣದಲ್ಲಿ ವಾಲ್ ಪೇಂಟಿಂಗ್ ಸ್ಪರ್ಧೆಯ ಆಯೋಜನೆಯನ್ನು ಸೆ.29ರಂದು ಮಾಡಲಾಗಿದೆ. ಈ ಕುರಿತಂತೆ ನೈರುತ್ಯ ರೈಲ್ವೆಯ ಬೆಂಗಳೂರು ವಿಭಾಗದಿಂದ ಪತ್ರಿಕಾ ಪ್ರಕಟಣೆಯಲ್ಲಿ ಮಾಹಿತಿ ನೀಡಿದ್ದು, ಸ್ವಚ್ಛತೆಯೇ ಸೇವೆ ಅಭಿಯಾನದ ಅಂಗವಾಗಿ ಸ್ವಚ್ಛತೆಯ ಕುರಿತು ಜನರಲ್ಲಿ ಜಾಗೃತಿಯನ್ನು ಮೂಡಿಸಲು ವಿಭಾಗವು ದಿನಾಂಕ 29.09.2024, ಭಾನುವಾರದಂದು ಎಸ್.ಎಂ.ವಿ.ಟಿ. ಬೆಂಗಳೂರು ರೈಲು ನಿಲ್ದಾಣದಲ್ಲಿ ಕಾಲೇಜು ವಿದ್ಯಾರ್ಥಿಗಳಿಗೆ ಸ್ವಚ್ಛತಾ ವಿಷಯದ ಕುರಿತು ವಾಲ್ ಪೇಂಟಿಂಗ್ ಸ್ಪರ್ಧೆಯನ್ನು ಆಯೋಜಿಸಲಿದೆ ಎಂದಿದೆ. ಕಾಲೇಜು ವಿದ್ಯಾರ್ಥಿಗಳಿಗೆ ತಮ್ಮ ಕಲಾ ಪ್ರತಿಭೆಯನ್ನು ತೋರಿಸಲು ಮತ್ತು ಸ್ವಚ್ಛತೆಯ ಕುರಿತು ಜಾಗೃತಿಯನ್ನು ಮೂಡಿಸುವಲ್ಲಿ ತಮ್ಮ ಕೊಡುಗೆಯನ್ನು ನೀಡಲು ಈ ಸ್ಪರ್ಧೆಯು ಒಂದು ಅತ್ಯುತ್ತಮ ಅವಕಾಶವಾಗಿದೆ ಎಂದು ತಿಳಿಸಿದೆ. ವಾಲ್ ಪೇಂಟಿಂಗ್ ಸ್ಪರ್ಧೆಯಲ್ಲಿ ಭಾಗವಹಿಸಲು ಆಸಕ್ತಿಯುಳ್ಳ ಕಾಲೇಜು ವಿದ್ಯಾರ್ಥಿಗಳು ತಮ್ಮ ಹೆಸರನ್ನು 24.09.2024ರೊಳಗೆ ನೋಂದಾಯಿಸಿಕೊಳ್ಳಬೇಕು. ವಿವರ ಮತ್ತು ನೋಂದಣಿಗಾಗಿ ಮೊಬೈಲ್ ಸಂಖ್ಯೆ 9164871716 ಅನ್ನು ಅಥವಾ denhmsbc2024@gmail.com ಇಮೇಲ್ ಐ.ಡಿ.ಯನ್ನು ಸಂಪರ್ಕಿಸಬಹುದು.

## ಯುವತಿಯಿಂದ ಹನಿಟ್ರ್ಯಾಪ್: 40 ಲಕ್ಷ ದೋಚಿದ ಗ್ಯಾಂಗ್

• ಉದಯವಾಹಿನಿ ಬೆಂಗಳೂರು

ಸಿನಿಮಾ ಆಸೆ ತೋರಿಸಿ, ಅವಕಾಶ ನೀಡುವುದಾಗಿ ಹೇಳಿ ಯುವತಿಯೊಬ್ಬಳು ಉದ್ಯಮಿಗೆ ಹನಿಟ್ರ್ಯಾಪ್ ಖೆಡ್ಡಾಗೆ ಕೆಡವಿ 40 ಲಕ್ಷ ರೂಪಾಯಿ ದೋಚಿರುವ ಘಟನೆ ಬೆಂಗಳೂರಿನಲ್ಲಿ ಬೆಳಕಿಗೆ ಬಂದಿದೆ.

ಸಿನಿಮಾ ಹೆಸರಲ್ಲಿ ಸುಂದರಿಯೊಬ್ಬಳು ಬ್ಯುಸಿನೆಸ್ ಮ್ಯಾನ್ ಓರ್ವರಿಗೆ ಹನಿಟ್ರ್ಯಾಪ್ ಮಾಡಿ 40 ಲಕ್ಷ ರೂಪಾಯಿ ದೋಚಿದ್ದಾಳೆ. ಆರಂಭದಲ್ಲಿ ಸಿನಿಮಾ ಮಾಡೋಣ. ನಾನೂ ಕೂಡ ಅದೇ ಫೀಲ್ಡ್ ನಲ್ಲಿದ್ದೇನೆ ಎಂದು ಉದ್ಯಮಿಯ ಪರಿಚಯ ಮಾಡಿಕೊಂಡಿದ್ದ ಕಾವ್ಯಾ ಎಂಬ ಯುವತಿ, ಕೆಲ ದಿನಗಳ ನಂತರ ನಾನು ಡೈರೆಕ್ಟರ್ ಎಂದು ಹೇಳಿ ಹಣದ ಬೇಡಿಕೆ ಇಟ್ಟಿದ್ದಾಳೆ. ಕಷ್ಟ ಇದೆ ಎಂದು ಹೇಳಿ ಉದ್ಯಮಿಯಿಂದ ಮೊದಲು 4 ಲಕ್ಷ ರೂಪಾಯಿ ಪಡೆದುಕೊಂಡಿದ್ದ ಯುವತಿ, ನಂತರ ಹಣ ವಾಪಾಸ್ ಕೇಳಿದಾಗ ತನ್ನ ರೂಮಿಗೆ ಕರೆದು ಬಲವಂತದಿಂದ ಲೈಂಗಿಕ ಕ್ರಿಯೆ



ಉದಯವಾಹಿನಿ ಚಿತ್ರ

ನಡೆಸಿ, ವಿಡಿಯೋ ರೆಕಾರ್ಡ್ ಮಾಡಿಕೊಂಡಿದ್ದಾಳೆ ಎನ್ನಲಾಗಿದೆ. ಬಳಿಕ ವಿಡಿಯೋ ಇಟ್ಟುಕೊಂಡು ಬ್ಲ್ಯಾಕ್ ಮೇಲ್ ಆರಂಭಿಸಿದ್ದು, ಬ್ರೆಸ್ ಲೈಟ್, ಚೈನ್ ಎಂದು 40 ಲಕ್ಷ ರೂಪಾಯಿ ಪಡೆದುಕೊಂಡಿದ್ದಾಳೆ. ಅಲ್ಲದೇ ರವಿ, ದಿಲೀಪ್ ಎಂಬುವವರಿಂದ ಕರೆ ಮಾಡಿಸಿ ಧಮ್ಕಿ ಹಾಕಿದ್ದಾಳೆ. ಹಣ ಕೊಡದಿದ್ದರೆ ವಿಡಿಯೋ ಟಿವಿಯವರಿಗೆ ಕೊಡುವುದಾಗಿ ಬೆದರಿಸಿದ್ದಾರೆ. ವಂಚನೆಗೊಳಗಾದ ಉದ್ಯಮಿ ಅಶೋಕ ನಗರ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದು, ಯುವತಿ ಕಾವ್ಯಾ, ರವಿ, ದಿಲೀಪ್ ವಿರುದ್ಧ ಎಫ್‌ಐಆರ್ ದಾಖಲಾಗಿದೆ.

## ಪ್ರಜ್ವಲ್ ರೇವಣ್ಣ ಜಾಮೀನು ಅರ್ಜಿಯ ತೀರ್ಪು ಕಾಯ್ದಿರಿಸಿದ ಹೈಕೋರ್ಟ್

• ಉದಯವಾಹಿನಿ ಬೆಂಗಳೂರು

ಮಹಿಳೆಯ ಮೇಲೆ ಅತ್ಯಾಚಾರ ನಡೆಸಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಹಾಸನದ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ನಿರೀಕ್ಷಣಾ ಜಾಮೀನು ಅರ್ಜಿ ಸಲ್ಲಿಸಿದ್ದರು. ಇಂದು ಪ್ರಜ್ವಲ್ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ಹೈ ಕೋರ್ಟ್ ತೀರ್ಪು ಕಾಯ್ದಿರಿಸಿ ಆದೇಶ ಹೊರಡಿಸಿದೆ.

ಹೈಕೋರ್ಟ್‌ನಲ್ಲಿ ಪ್ರಜ್ವಲ್ ರೇವಣ್ಣ ಸಲ್ಲಿಸಿದ್ದ ನಿರೀಕ್ಷಣಾ ಜಾಮೀನು ಅರ್ಜಿಯ ವಿಚಾರಣೆ ನಡೆಯಿತು.

ಈ ವೇಳೆ ಪ್ರಜ್ವಲ್ ಪರ ಪ್ರಭುಲಿಂಗ ನಾವದಗಿ ವಾದ ಮಂಡಿಸಿ, ತಮ್ಮ ವಿರುದ್ಧ ಮಹಿಳೆಯೊಬ್ಬರು ಮಾಡಿರುವ



ಉದಯವಾಹಿನಿ ಚಿತ್ರ

**ರೇವಣ್ಣ ವಿರುದ್ಧ ಅತ್ಯಾಚಾರ ಆರೋಪ**

ಅತ್ಯಾಚಾರ ಆರೋಪ ಸತ್ಯಕ್ಕೆ ದೂರವಾಗಿದೆ.

ಘಟನೆ ನಡೆದಿದ್ದರೂ ನಾಲ್ಕು ವರ್ಷಗಳ ಬಳಿಕ ದೂರು ನೀಡಿದ್ದು ಇದೊಂದು ಒಪ್ಪಿತ ಲೈಂಗಿಕ ಕ್ರಿಯೆ ಎಂದರು.

ಇಡೀ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದರೆ ಸಂತ್ರಸ್ತೆ ಮಹಿಳೆ ಮೊದಲು ಅರ್ಜಿದಾರರ ತಂದೆ ಊಆ ರೇವಣ್ಣ ವಿರುದ್ಧ ಅತ್ಯಾಚಾರ ಆರೋಪದಲ್ಲಿ ದೂರು ದಾಖಲಿಸಿದ್ದರು. ಬಳಿಕ ಅರ್ಜಿದಾರರ ವಿರುದ್ಧ ಅತ್ಯಾಚಾರ ಆರೋಪ ಮಾಡಿದ್ದಾರೆ. ಅಷ್ಟಕ್ಕೂ ನಾಲ್ಕು ವರ್ಷಗಳ ಹಿಂದೆ 2020ರಲ್ಲಿ ನಡೆದಿರುವ ಘಟನೆ ಸಂಬಂಧಿಸಿದಂತೆ 2024ರಲ್ಲಿ ದೂರು ನೀಡಲಾಗಿದೆ. ಇಷ್ಟು ವಿಳಂಬ ಏಕೆ ಮಾಡಲಾಗಿದೆ ಎಂದು ಪ್ರಶ್ನಿಸಿದರು.

ಇದಕ್ಕೆ ಪೀಠ, ಘಟನೆ ನಡೆದೇ ಇಲ್ಲವೇ ಎಂದು ಪ್ರಶ್ನಿಸಿತು. ಈ ವೇಳೆ ವಕೀಲರು, ತಮ್ಮ ವಿರುದ್ಧ ಮಹಿಳೆಯೊಬ್ಬರು ಮಾಡಿರುವ ಅತ್ಯಾಚಾರ ಆರೋಪ ಸತ್ಯಕ್ಕೆ ದೂರವಾಗಿದೆ. ಘಟನೆ ನಡೆದಿದ್ದರೂ ನಾಲ್ಕು ವರ್ಷಗಳ ಬಳಿಕ ದೂರು ನೀಡಿದ್ದು ಇದೊಂದು ಒಪ್ಪಿತ ಲೈಂಗಿಕ ಕ್ರಿಯೆ ಎಂದು ವಾದಿಸಿದರು.

## ದಶಮಾನೋತ್ಸವದ ಸಂಭ್ರಮ ಡಿಜಿ ಇಮೇಜ್

• ಉದಯವಾಹಿನಿ ಬೆಂಗಳೂರು

ಕರ್ನಾಟಕ ಫೋಟೋಗ್ರಾಫರ್ಸ ಅಸೋಸಿಯೇಷನ್ ಬೆಂಗಳೂರು. ಫೋಟೋಟೆಕ್ ಪರಿವಾರ, ಸ್ವಾನ್ ಲೈನ್ ಸ್ಟುಡಿಯೋ ಸಹಯೋಗದೊಂದಿಗೆ ಡಿಜಿ ಇಮೇಜ್ ವಸ್ತು ಪ್ರದರ್ಶನ ದಿನಾಂಕ 20, 21,22ನೇ ಸೆಪ್ಟೆಂಬರ್ 2024 ರಂದು ಬೆಂಗಳೂರಿನ ತ್ರಿಪುರ ವಾಸಿನಿ ಅರಮನೆ ಮೈದಾನದಲ್ಲಿ ಆಯೋಜಿಸಲಾಗಿದೆ.

ಪ್ರದರ್ಶನದಲ್ಲಿ ಹೊಸ ಎ ಐ ಕ್ಯಾಮರಾ ಲಾಂಚಿಗ್, ಹೊಸ ಕ್ಯಾಮರಗಳಿಗೆ 1000/- ರೂಗಳ ಕ್ಯಾಶ್ ಬ್ಯಾಕ್ ಆಫರ್. ಪ್ರತಿಷ್ಠಿತ ಕಂಪನಿಗಳಿಂದ 500 ರಿಂದ 5000 ರೂಪಾಯಿಗಳ ಗಿಫ್ಟ್ ವೋಚರ್ಗಳನ್ನು ಸ್ಟಾಲ್‌ಗಳಲ್ಲಿ ನೀಡಲಾಗುವುದು.

ಕೆ ಪಿ ಎ ಸಂಘದಲ್ಲಿ ಸಹಯೋಗ ಪಡೆದ ಜಿಲ್ಲಾ ಮತ್ತು





ಉದಯವಾಹಿನಿ ಚಿತ್ರ

ತಾಲ್ಲೂಕು ಸಂಘಗಳ ಸದಸ್ಯರಿಗೆ ವಿವಿಧ ಯೋಜನೆಗಳಲ್ಲಿ ನೋಂದಣಿ ಮಾಡಿಸಲಾಗುವುದು .

ಜಿಲ್ಲಾ ಮತ್ತು ತಾಲ್ಲೂಕುಗಳ ಸಂಘಗಳ ಹಿರಿಯ ಛಾಯಾವೃತ್ತಿ ಬಾಂಧವರಿಗೆ ರಾಜ್ಯ ಮಟ್ಟದ ಪ್ರತಿಷ್ಠಿತ ವಿಶಿಷ್ಟ ಸೇವಾ ಸಾಧಕ ಮತ್ತು ಛಾಯಾ ಸಾಧಕ ಹಾಗೂ ಛಾಯಾ ಶ್ರೀ ಪ್ರಶಸ್ತಿ ಪ್ರಧಾನ ಸಮಾರಂಭ. ರಾಷ್ಟ್ರ ಮಟ್ಟದ ಛಾಯಾಚಿತ್ರ ಸ್ಪರ್ಧೆಯ ಫೋಟೋ ಪ್ರದರ್ಶನ ಮತ್ತು ಪ್ರಶಸ್ತಿ ಪ್ರಧಾನ ಸಮಾರಂಭ.

ಉಚಿತ ವೈದ್ಯಕೀಯ ಶಿಬಿರ ಕ್ಯಾಮೆರಾ ಸರ್ವಿಸ್ ಕ್ಯಾಂಪ್ ವಸ್ತು ಪ್ರದರ್ಶನಕ್ಕೆ ಆಗಮಿಸುವ ಪ್ರತಿಯೊಬ್ಬ ಛಾಯಾಗ್ರಾಹಕರಿಗೆ ಕೆಪಿಎ ಫುಡ್ ಕೌಂಟರ್ ತೆರೆಯಲಾಗಿದೆ ಉಚಿತ ಪಾರ್ಕಿಂಗ್,ಲಗೇಜ್ ಕೌಂಟರ್ ವೃತ್ತಿ ಬಾಂದವರಿಗೆ AI ಡಿಜಿಟಲ್ ಮಾರ್ಕೆಟಿಂಗ್, ಫೋಟೋಗ್ರಫಿ, ವೀಡಿಯೋಗ್ರಫಿ ಬಗ್ಗೆ ಕಾರ್ಯಾಗಾರ, ಫ್ಯಾಶನ್ ಶೋ ಟಾಕ್ ಶೋ ಆಯೋಜಿಸಲಾಗಿದೆ.

ಛಾಯಾಗ್ರಾಹಕರ ಹಬ್ಬಕ್ಕೆ ತಮ್ಮೆಲ್ಲರಿಗೂ ಆತ್ಮೀಯ ಸ್ವಾಗತ ಸ್ವಾಗತವನ್ನು ಪರಮೇಶ ಸುಬ್ಬಯ್ಯ ನಿಕಟ ಪೂರ್ವ ಅಧ್ಯಕ್ಷರು ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು. ಸಂಘದ ಅಧ್ಯಕ್ಷರಾದ ಎಚ್ ಎಸ್ ನಾಗೇಶ್ ಕಾರ್ಯದರ್ಶಿಗಳಾದ ಮುರಳಿ ಖಜಾಂಚಿಗಳಾದ ಲವರಾಜು, ರವಿಶಂಕರ್, ಯೋಗೀಶ್ ಆಚಾರ್ಯ, ಚಂದ್ರಶೇಖರ ಬೆಳಗುಂಬ ಹಾಲಪ್ಪ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ಮಹಿಳೆಯ ಮೇಲೆ ಅತ್ಯಾಚಾರ ಪ್ರಕರಣ

• ಉದಯವಾಹಿನಿ ಬೆಂಗಳೂರು

ಗುತ್ತಿಗೆದಾರನಿಗೆ ಬೆದರಿಕೆ ಹಾಗೂ ಜಾತಿ ನಿಂದನೆ ಆರೋಪದ ಅಡಿಯಲ್ಲಿ ಈಗಾಗಲೇ ಬಿಜೆಪಿ ಶಾಸಕ ಮುನಿರತ್ನ ಬೆಂಗಳೂರಿನ ಪರಪ್ಪನ ಅಗ್ರಹಾರ ಜೈಲಿನಲ್ಲಿದ್ದಾರೆ. ಇದರ ಬೆನ್ನಲ್ಲೇ ನಿನ್ನೆ ಮಹಿಳೆಯೊಬ್ಬರು ಮುನಿರತ್ನ ನನ್ನ ಮೇಲೆ ಅತ್ಯಾಚಾರ ಎಸಿಗಿದ್ದಾನೆ ಎಂದು ಆರೋಪಿಸಿ ರಾಮನಗರ ಜಿಲ್ಲೆಯ ಕಗ್ಗಲೀಪುರ ಪೊಲೀಸ್ ಠಾಣೆಯಲ್ಲಿ ನಿನ್ನೆ ದೂರು ದಾಖಲಿಸಿದ್ದರು. ಈ ಹಿನ್ನಲೆಯಲ್ಲಿ ಇದೀಗ ರಾಮನಗರ ಪೊಲೀಸರು ಮುನಿರತ್ನ ಅವರನ್ನು ವಶಕ್ಕೆ ಪಡೆದುಕೊಳ್ಳಲು ಸಿದ್ಧತೆ ಮಾಡಿಕೊಂಡಿದ್ದಾರೆ.

ಹೌದು ಅತ್ಯಾಚಾರ ಪ್ರಕರಣದಲ್ಲಿ ಮುನಿರತ್ನ ಬಂಧಿಸಲು ರಾಮನಗರ ಪೊಲೀಸರಿಂದ ವಶಕ್ಕೆ ಪಡೆಯಲು ಸಿದ್ಧತೆ ಮಾಡಿಕೊಂಡಿದ್ದಾರೆ. ಪರಪ್ಪನ ಅಗ್ರಹಾರ ಜೈಲಿಗೆ ರಾಮನಗರ ಪೊಲೀಸರ ತಂಡ ಭೇಟಿ ನೀಡಲಿದೆ. ಕೋರ್ಟ್ ಗೆ ಅರ್ಜಿ ಸಲ್ಲಿಸಿ, ಅತ್ಯಾಚಾರ ಕೇಸಲ್ಲಿ ಹೆಚ್ಚಿನ ವಿಚಾರಣೆಗಾಗಿ ಶಾಸಕ

ಉದಯವಾಹಿನಿ ಚಿತ್ರ





ಮುನಿರತ್ನರನ್ನು ವಶಕ್ಕೆ ಪಡೆಯಲು ಸಿದ್ಧತೆ ಮಾಡಿಕೊಂಡಿದ್ದಾರೆ ಎಂದು ತಿಳಿದುಬಂದಿದೆ.

ಅಲ್ಲದೆ ಜೀವ ಬೆದರಿಕೆ, ಜಾತಿ ನಿಂದನೆ ಪ್ರಕರಣಕ್ಕೆ ಸಂಬಂಧಿಸಿದಂತೆ ನ್ಯಾಯಾಂಗ ಬಂಧನದ ಅವಧಿ ಮುಕ್ತಾಯವಾಗಲಿದ್ದು, ಈ ಒಂದು ಪ್ರಕರಣದಲ್ಲಿ ಅವರಿಗೆ ಜಾಮೀನು ಸಿಗಲಿ ಅಥವಾ ಸಿಗದೇ ಇದ್ದರೂ ಕೂಡ ರಾಮನಗರ ಪೊಲೀಸರು ಮಾತ್ರ ಅತ್ಯಾಚಾರ ಪ್ರಕರಣದಲ್ಲಿ ಇವರನ್ನು ವಶಕ್ಕೆ ಪಡೆಯುವ ಸಾಧ್ಯತೆ ಹೆಚ್ಚಾಗಿದೆ ಎಂದು ತಿಳಿದುಬಂದಿದೆ.

## ಕನ್ನಡ ರಾಜ್ಯೋತ್ಸವ ಆಚರಿಸಲು ಕ್ರಮ ಕೈಗೊಳ್ಳಿ : ಸಿಎಂ ಸಿದ್ದು ಸೂಚನೆ

• ಉದಯವಾಹಿನಿ ಬೆಂಗಳೂರು

ರಾಜ್ಯದ ಶಾಲಾ-ಕಾಲೇಜುಗಳಲ್ಲಿ ಅದ್ದೂರಿಯಾಗಿ ಕನ್ನಡ ರಾಜ್ಯೋತ್ಸವ ಆಚರಿಸಿ ಎಂದು ಸಿಎಂ ಸಿದ್ದರಾಮಯ್ಯ ಸೂಚನೆ ನೀಡಿದರು.

ರಾಜ್ಯೋತ್ಸವ ಪ್ರಶಸ್ತಿ - 2024ರ ಪ್ರದಾನ ಹಾಗೂ ಕರ್ನಾಟಕ ಸುವರ್ಣ ಸಂಭ್ರಮ-50ರ ಸಮಾರೋಪ ಸಮಾರಂಭದ ಪೂರ್ವಭಾವಿ ಸಭೆಯಲ್ಲಿ ಪಾಲ್ಗೊಂಡು, ಮಾತನಾಡಿದರು . ನಾಡಿನ ಕಲೆ, ಸಾಹಿತ್ಯ, ಕೃಷಿ, ತೋಟಗಾರಿಕೆ, ಕೈಗಾರಿಕೆ ಕುರಿತಾದ 5 ಸಂಪುಟಗಳನ್ನು ಸಿದ್ಧಪಡಿಸಲಾಗುತ್ತಿದೆ.

ಇದೇ ಸಂದರ್ಭದಲ್ಲಿ ಸ್ಮರಣ ಸಂಭ್ರಮ ಸಂಪುಟ ಹೊರತರಲಾಗುತ್ತಿದೆ.ಕನ್ನಡದ ಸಾಹಿತಿಗಳ ನುಡಿಮುತ್ತುಗಳನ್ನು ಎಲ್ಲಾ ಜಿಲ್ಲೆಗಳ ಪ್ರಮುಖ ಸ್ಥಳಗಳಲ್ಲಿ, ಕೆಎಸ್‌ಆರ್‌ಟಿಸಿ ಬಸ್ ಮತ್ತಿತರ ಕಡೆಗಳಲ್ಲಿ ಪ್ರಚುರಪಡಿಸಬೇಕು.ಎಲ್ಲಾ ಶಾಲಾ ಕಾಲೇಜುಗಳಲ್ಲಿ ಈ ಬಾರಿ ಕನ್ನಡ ರಾಜ್ಯೋತ್ಸವ ಸಂಭ್ರಮವನ್ನು ಅದ್ದೂರಿಯಾಗಿ ಆಚರಿಸಲು ಕ್ರಮಕೈಗೊಳ್ಳಬೇಕು ಎಂದರು. ರಾಜ್ಯೋತ್ಸವ ಪ್ರಶಸ್ತಿಗೆ ಆನ್ಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದ್ದು, ಸೆಪ್ಟಂಬರ್ 30ರ ವರೆಗೆ ಅರ್ಜಿ ಸಲ್ಲಿಸಬಹುದು. 69 ಮಂದಿಗೆ ಈ ಬಾರಿ ಪ್ರಶಸ್ತಿ ನೀಡ ಲಾಗುವುದು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರ ಅಧ್ಯಕ್ಷತೆಯಲ್ಲಿ ಪ್ರಶಸ್ತಿ ಆಯ್ಕೆಗೆ ಸಮಿತಿ ರಚಿಸಲಾಗಿದೆ. ಎಲ್ಲಾ ಜಿಲ್ಲೆ ಹಾಗೂ ತಾಲೂಕುಗಳಲ್ಲಿ ಕರ್ನಾಟಕ ಸುವರ್ಣ ಸಂಭ್ರಮ ನಡೆಯುತ್ತಿದ್ದು, ಹಂಪಿಯಿಂದ ಆರಂಭವಾದ ಕನ್ನಡ ರಥ ಯಾತ್ರೆ ಈಗಾಗಲೇ 28 ಜಿಲ್ಲೆಗಳಲ್ಲಿ ಸಾಗಿದ್ದು, ರಥಯಾತ್ರೆಯ ಸಮಾರೋಪ ಸಮಾರಂಭ ಉತ್ತರ ಕನ್ನಡ ಜಿಲ್ಲೆಯ ಸಿದ್ದಾಪುರದಲ್ಲಿ ನಡೆಯಲಿದೆ. ಕರ್ನಾಟಕ ಸುವರ್ಣ ಸಂಭ್ರಮ -50 ಸಮಾರೋಪ ಸಮಾರಂಭ ವಿಧಾನಸೌಧದ ಮುಂಭಾಗದಲ್ಲಿ ನಡೆಯಲಿದೆ. ರಾಜ್ಯೋತ್ಸವ ಪ್ರಶಸ್ತಿ ಪ್ರದಾನ ಸಹ ಮಾಡಲಾಗುವುದು ಎಂದರು.

**ಕರ್ನಾಟಕ ಸುವರ್ಣ ಸಂಭ್ರಮ-50 ಸಮಾರೋಪವನ್ನು ಕನ್ನಡ ಜನೋತ್ಸವವಾಗಿ ಆಚರಣೆ ಮಾಡಬೇಕು. ಕನ್ನಡ ಜನ ಚಳವಳಿ, ಕನ್ನಡತನದ ವಿಸ್ತಾರ, ಕನ್ನಡದ ಅರಿವು ವಿಸ್ತರಿಸಿದ ಮಾದರಿಗಳು, ಹೋರಾಟದ ಹಾದಿಯಲ್ಲಿ ರೂಪುಗೊಂಡ ಕನ್ನಡ ಚರಿತ್ರೆಯನ್ನು ಇವತ್ತಿನ ಕನ್ನಡ ಯುವಜನ ಸಮೂಹಕ್ಕೆ ತಲುಪಿಸಲು ಕ್ರಮ ವಹಿಸಬೇಕು. ಕನ್ನಡ ಭಾಷೆ ಸಂಸ್ಕೃತಿ ಸಂಗೀತ ಸಾಹಿತ್ಯ ಜನಪದ ಚರಿತ್ರೆ ಎಲ್ಲದರ ಮಹತ್ವ ಸಾರುವಂತೆ ಕಾರ್ಯಕ್ರಮದ ಆಯೋಜನೆಯಾಗಲಿ.**

ಸಿಎಂ ಸಿದ್ದರಾಮಯ್ಯ

# ನಾಗಮಂಗಲ ಗಲಭೆ; ಸರ್ಕಾರದ ವಿರುದ್ಧ ಅಶೋಕ್ ಕಿಡಿ

## ಸಾಮಾಜಿಕ ಜಾಲತಾಣದಲ್ಲಿ ಸುಳ್ಳು ಸುದ್ದಿ ಹರಡಿದ್ದಾರೆ ಎಂದು ಆರೋಪಿಸಿ ಈ ಇಬ್ಬರು ನಾಯಕರ ವಿರುದ್ಧ ಎಫ್‌ಐಆರ್ ದಾಖಲೆ

• ಉದಯವಾಹಿನಿ ಬೆಂಗಳೂರು

ಸೆಪ್ಟೆಂಬರ್ 12ರಂದು ಮಂಡ್ಯ ಜಿಲ್ಲೆಯ ನಾಗಮಂಗಲದಲ್ಲಿ ಗಣಪತಿ ವಿಸರ್ಜನೆ ವೇಳೆ ನಡೆದಿದ್ದ ಕೋಮು ಗಲಭೆಗೆ ಸಂಬಂಧಿಸಿದಂತೆ ವಿಪಕ್ಷ ನಾಯಕ ಆರ್. ಅಶೋಕ್, ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ. ಸಾಮಾಜಿಕ ಜಾಲತಾಣದಲ್ಲಿ ಸುಳ್ಳು ಸುದ್ದಿ ಹರಡಿದ್ದಾರೆ ಎಂದು ಆರೋಪಿಸಿ ಈ ಇಬ್ಬರು ನಾಯಕರ ವಿರುದ್ಧ ಈಖಖ ದಾಖಲಿಸಲಾಗಿದ್ದು, ಈ ಸಂಬಂಧ ವಿಪಕ್ಷ ನಾಯಕ ಆರ್.ಅಶೋಕ್ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡುವ ಮೂಲಕ ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಹರಿಹಾಯ್ದಿದ್ದಾರೆ.

ಕೈಲಾಗದವನು ಮೈಪರಚಿಕೊಂಡ' ಎಂಬಂತೆ ನಾಗಮಂಗಲದಲ್ಲಿ ಗಣೇಶ ವಿಸರ್ಜನೆ ವೇಳೆ ನಡೆದ ಕೋಮುದಳ್ಳುರಿಗೆ ಕಾರಣರಾದ ಮತಾಂಧರನ್ನು ಪತ್ತೆ ಹಚ್ಚಿ ಅವರ ಹೆಡೆಮುರಿ ಕಟ್ಟಬೇಕಾದ ಗೃಹ ಸಚಿವ ಡಾ.ಜಿ. ಪರಮೇಶ್ವರ್ ಅವರು ವಿಪಕ್ಷ ನಾಯಕರ ಮೇಲೆ ಈಖಖ ಹಾಕಿರುವುದು ಹೇಡಿತನದ ಪರಮಾವಧಿ. ಅಸಮರ್ಥ ಗೃಹ ಸಚಿವ ಡಾ.ಜಿ. ಪರಮೇಶ್ವರ್ ಅವರೇ, ಕಳೆದ ಬುಧವಾರ ರಾತ್ರಿ ಬೆಂಗಳೂರಿನಿಂದ ಕೇವಲ 130 ಕಿಮೀ ದೂರದಲ್ಲಿರುವ ನಾಗಮಂಗಲದಲ್ಲಿ ರಾಜ್ಯವೇ ಬೆಚ್ಚಿಬೀಳುವಂತಹ ಘಟನೆ ನಡೆದು ಒಂದು ವಾರ ಕಳೆದಿದ್ದರೂ ಈವರೆಗೂ ತಾವು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸುವ ಕೆಲಸ ಮಾಡಿಲ್ಲ.



ಉದಯವಾಹಿನಿ ಚಿತ್ರ

**ಕಾಂಗ್ರೆಸ್ ಸರ್ಕಾರದ ವಿರುದ್ಧ ವಾಗ್ದಾಳಿ**

ಘಟನಾ ಸ್ಥಳಕ್ಕೆ ಹೋಗಿ ಅಲ್ಲಿ ಆಸ್ತಿ-ಪಾಸ್ತಿ ಕಳೆದುಕೊಂಡು, ಭಯಭೀತರಾಗಿರುವ ಸ್ಥಳೀಯರ ಅಳಲು, ದುಮ್ಮಾನ, ಆತಂಕ, ಆಕ್ರೋಶ ಕೇಳಿದ್ದಿದ್ದರೆ ತಮಗೆ ಪರಿಸ್ಥಿತಿಯ ಗಂಭೀರತೆ ಅರ್ಥವಾಗುತ್ತಿತ್ತು. ಆದರೆ ತಮಗೆ ಕರ್ತವ್ಯ ಪ್ರಜ್ಞೆಯೇ ಇಲ್ಲ ಎಂದು ಕಿಡಿಕಾರಿದ್ದಾರೆ. ನನ್ನ ಮೇಲೆ ಎಫ್‌ಐಆರ್ ಹಾಕಿ ಏನು ಸಾಧಿಸಲು ಹೊರಟಿದ್ದೀರಿ ನಾನು ಘಟನಾ ಸ್ಥಳಕ್ಕೆ ಭೇಟಿ ನೀಡಿದಾಗ ಸ್ಥಳೀಯರು, ಪ್ರತ್ಯಕ್ಷದರ್ಶಿಗಳು, ಪತ್ರಕರ್ತರು ವ್ಯಕ್ತಪಡಿಸಿರುವ ಅನುಮಾನವನ್ನ ನನ್ನ ಖಾತೆ ಪೋಸ್ಟ್ ಮೂಲಕ ಸರ್ಕಾರದ ಗಮನಕ್ಕೆ ತರುವ ಪ್ರಯತ್ನ ಮಾಡಿದ್ದೇನೆಯೇ ಹೊರತು, ಯಾವುದೇ ಸುಳ್ಳು ಮಾಹಿತಿ ಹಂಚಿಕೊಂಡಿಲ್ಲ. ಇಷ್ಟಕ್ಕೂ ಎಫ್‌ಐಆರ್ ಹಾಕಿರುವ ಪೊಲೀಸರು ನನ್ನ ಪೋಸ್ಟ್ ನಲ್ಲಿರುವ ಮಾಹಿತಿಯನ್ನ ಪೂರ್ತಿಯಾಗಿ ಓದಿದ್ದಾರೋ ಇಲ್ಲವೋ ಅಥವಾ ಅವರಿಗೆ ಕನ್ನಡ ಸರಿಯಾಗಿ ಬರುತ್ತೋ ಇಲ್ಲವೋ ಅರ್ಥವಾಗುತ್ತಿಲ್ಲ. ನಾನು ಹಂಚಿಕೊಂಡಿರುವ ದೃಶ್ಯಾವಳಿಗಳು ಚಿಕ್ಕಮಗಳೂರಿನಲ್ಲಿ ಮತಾಂಧರು ಪ್ಯಾಲೆಸ್ಟೈನ್ ಧ್ವಜ ಹಿಡಿದು ಮಾಡಿದ ಪುಂಡಾಟಿಕೆ, ದಾವಣಗೆರೆಯಲ್ಲಿ ಕೇಸರಿ ಧ್ವಜ ಹಾರಿಸಿದ ಹಿಂದೂಗಳ ಮೇಲೆ ಮತಾಂಧರು ಹಲ್ಲೆ ಮಾಡಿರುವ ಘಟನೆಗಳದ್ದು.

ನನ್ನ ಪೋಸ್ಟ್‌ನಲ್ಲಿ ನಾನು ಉಲ್ಲೇಖ ಮಾಡಿರುವುದೂ ಅದನ್ನೇ. ರಾಜ್ಯದ ಅನೇಕ ಕಡೆಗಳಲ್ಲಿ ಗಣೇಶೋತ್ಸವವನ್ನೇ ಗುರಿಯಾಗಿಟ್ಟುಕೊಂಡು ನಡೆದಿರುವ ಇಂತಹ ಪ್ರಚೋದನಕಾರಿ ಘಟನೆಗಳ ಹಿಂದೆ ಮತೀಯ ಮೂಲಭೂತವಾದಿ ಸಂಘಟನೆಗಳ ಕೈವಾಡ ಇರಬಹುದು ಎಂದು ಜವಾಬ್ದಾರಿಯುತ ಪ್ರತಿಪಕ್ಷ ನಾಯಕನಾಗಿ ಸರ್ಕಾರಕ್ಕೆ ಎಚ್ಚರಿಕೆ ನೀಡಿದ್ದೇನೆಯೇ ಹೊರತು ನಾನು ಯಾವುದೇ ಸುಳ್ಳು ಮಾಹಿತಿ ಹಂಚಿಕೊಂಡಿಲ್ಲ.

**ನಮ್ಮ ದೇಶ, ಧರ್ಮದ ರಕ್ಷಣೆ ವಿಚಾರದಲ್ಲಿ, ಹಿಂದೂಗಳ ರಕ್ಷಣೆ ವಿಚಾರದಲ್ಲಿ, ಹಿಂದೂಗಳ ಹಬ್ಬ, ಉತ್ಸವಗಳ ವಿಚಾರದಲ್ಲಿ ರಾಜಿ ಆಗುವ ಪ್ರಶ್ನೆಯೇ ಇಲ್ಲ. ತುರ್ತು ಪರಿಸ್ಥಿತಿ ಸಂದರ್ಭದಲ್ಲಿ, ರಾಮಜನ್ಮಭೂಮಿ ಹೋರಾಟದ ಸಂದರ್ಭದಲ್ಲಿ ದೇಶಕ್ಕಾಗಿ ಧರ್ಮಕ್ಕಾಗಿ ಜೈಲುವಾಸ ಅನುಭವಿಸಿದವನು ನಾನು. ಇಂತಹ ಒಂದಲ್ಲ ನೂರು ಎಫ್‌ಐಆರ್ ಹಾಕಿದರೂ ನನ್ನ ದನಿ ಅಡಗಿಸಲು ಸಾಧ್ಯವಿಲ್ಲ. ನಿಮ್ಮ ಗೊಡ್ಡು ಬೆದರಿಕೆಗಳಿಗೆ ಹೆದರುವುದಿಲ್ಲ ಎಂದು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿ ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.**

**ನಾಗಮಂಗಲದಲ್ಲಿ ಪೆಟ್ರೋಲ್ ಬಾಂಬ್ ಹಾಕಿರುವ ದೃಶ್ಯಗಳು, ಕಲ್ಲು ಎಸೆದಿರುವ ದೃಶ್ಯಗಳು, ವಾಹನ, ಅಂಗಡಿಗಳನ್ನ ಧ್ವಂಸ ಮಾಡಿದ ದೃಶ್ಯಗಳು ಸಾಮಾಜಿಕ ಜಾಲತಾಣಗಳಲ್ಲಿ, ಮಾಧ್ಯಮಗಳಲ್ಲಿ ಹರಿದಾಡುತ್ತಿದ್ದರೂ ಇದೊಂದು 'ಸಣ್ಣ' ಘಟನೆ, 'ಆಕಸ್ಮಿಕ' ಘಟನೆ ಎಂದು ಜನರಿಗೆ ಸುಳ್ಳು ಮಾಹಿತಿ ನೀಡಿದ್ದಕ್ಕೆ ಅಸಲಿಗೆ ಗೃಹ ಸಚಿವ ಪರಮೇಶ್ವರ್ ಅವರ ಮೇಲೆ ಮೊದಲು ಎಫ್ ಐಆರ್ ದಾಖಲಿಸಬೇಕು. ಸಚಿವರಿಗೆ ತಪ್ಪು ಮಾಹಿತಿ ನೀಡಿದ ಪೊಲೀಸರ ಮೇಲೆ ಎಫ್‌ಐಆರ್ ಹಾಕಬೇಕು. ಕೋಮುಗಲಭೆಗಳನ್ನ ತಡೆಯಲಾಗದ ನಾಲಾಯಕ್ ಸರ್ಕಾರ, ಮತಾಂಧರ ಹೆಡೆಮುರಿ ಕಟ್ಟಲಾಗದ ನಿಸ್ತೇಜ ಸರ್ಕಾರ ನನ್ನ ಮೇಲೆ ಎಫ್ ಐಆರ್ ಹಾಕಿರುವುದು ಹೇಡಿತನದ ಲಕ್ಷಣ.**

ಅಂತರಾಳದಿಂದ... EDITORIAL


# ಕೇಜ್ರಿವಾಲ್ ಮುತ್ಸದ್ದಿ ನಡೆ

ದಿಲ್ಲಿ ರಾಜಕೀಯ ತಂತ್ರ-ಪ್ರತಿ ತಂತ್ರಗಳ ಚದುರಂಗದಾಟ ಕುತೂಹಲಕಾರಿ ತಿರುವು ಪಡೆದಿದೆ. ನ್ಯಾಯಾಲಯ ಮತ್ತು ಲೆ. ಗವರ್ನರ್ ಮರೆಯಲ್ಲಿ ನಿಂತು ಕೇಂದ್ರ ಸರಕಾರ ದಿಲ್ಲಿಯ ಪ್ರಜಾಸತ್ತಾತ್ಮಕವಾದ ಸರಕಾರದ ವಿರುದ್ಧ ಬಾಣಗಳನ್ನು ಬಿಡುತ್ತಿದೆ. ಈಗಾಗಲೇ ಹಲವು ಪ್ರಮುಖ ಕಾಯಿಗಳು ಉರುಳಿವೆಯಾದರೂ, ಕೇಜ್ರಿವಾಲ್ ನೇತೃತ್ವದ ಆಪ್ ಸರಕಾರ ಸೋಲೊಪ್ಪಿಕೊಂಡಿಲ್ಲ ಬದಲಿಗೆ ತನ್ನೆಲ್ಲ ಶಕ್ತಿಯನ್ನು ಸೇರಿಸಿಕೊಂಡು ಸರಕಾರದ ತಂತ್ರಕ್ಕೆ ಪ್ರತಿತಂತ್ರಗಳನ್ನು ಹೂಡುತ್ತಿದೆ. ಇದೀಗ ಬಂಧನದಲ್ಲಿದ್ದ ಕೇಪ್ರಿವಾಲ್ ಜಾಮೀನು ಪಡೆದು ಬಿಡುಗಡೆಗೊಂಡಿದ್ದಾರೆ. ಆದರೆ ಈ ಜಾಮೀನಿಗೆ ಅವರು ಬಹುದೊಡ್ಡದನ್ನೇ ತೆರಬೇಕಾಯಿತು. ಕೊನೆಗೂ ಮುಖ್ಯಮಂತ್ರಿ ಹುದ್ದೆಗೆ ರಾಜೀನಾಮೆ ನೀಡಿರುವ ಕೇಜ್ರಿವಾಲ್, ತನ್ನ ಸ್ಥಾನಕ್ಕೆ ಅತಿಶಿ ಅವರನ್ನು ತಂದಿದ್ದಾರೆ.

> **ದಿಲ್ಲಿಯಲ್ಲಿ 'ಇಂಡಿಯಾ' ಒಕ್ಕೂಟ ಅತ್ಯಂತ ಹೀನಾಯ ಸೋಲನ್ನು ಕಂಡಿತು. ಸದ್ಯಕ್ಕೆ ಕೇಜಿವಾಲ್ ಮುಖ್ಯಮಂತ್ರಿಯಾಗಿ ಮುಂದುವರಿಯುವುದಕ್ಕಿಂತ ಅವರು ಜಾಮೀನು ಮೇಲೆ ಹೊರಗಿರುವುದು ಪಕ್ಷಕ್ಕೆ ಅತ್ಯಗತ್ಯವಾಗಿತ್ತು. ಜಾಮೀನು ನೀಡುವ ಸಂದರ್ಭದಲ್ಲಿ ಕೇಕ್ರವಾಲ್‌ಗೆ ನ್ಯಾಯಾಲಯ ಹಲವು ಕಠಿಣ ಶರತ್ತುಗಳನ್ನು ವಿಧಿಸಿರುವುದರಿಂದ, ದಿಲ್ಲಿಯ ಆಡಳಿತದಿಂದ ದೂರವಿದ್ದು ಪರೋಕ್ಷ ಮುಖ್ಯಮಂತ್ರಿಯಾಗುವುದಲ್ಲದೇ ಬೇರೆ ಮಾರ್ಗ ಕೇಭ್ರವಾಲ್‌ಗೆ ಇರಲಿಲ್ಲ. ಅತಶಿ ಮೂಲಕ ದಿಲ್ಲಿಯನ್ನು ನಿಯಂತ್ರಿಸುತ್ತಾ ಮುಂದಿನ ಚುನಾವಣೆಗೆ ಪಕ್ಷವನ್ನು ಸಿದ್ಧಗೊಳಿಸುವುದು ಅವರ ಪಾಲಿಗೆ ಅತ್ಯಂತ ಯೋಗ್ಯ ತೀರ್ಮಾನವಾಗಿತ್ತು.**

ಮುಖ್ಯಮಂತ್ರಿ ಸ್ಥಾನವನ್ನೇರಿದರೂ, ತಾನು ಕೇಜ್ರಿವಾಲ್ ಅವರನ್ನು ಪ್ರತಿನಿಧಿಸುತ್ತಿದ್ದೇನೆ ಎನ್ನುವುದನ್ನು ಆತಿಶಿ ಸ್ಪಷ್ಟ ಪಡಿಸಿದ್ದಾರೆ. ಮುಖ್ಯಮಂತ್ರಿ ಹುದ್ದೆಯಲ್ಲಿ ಕೇಪ್ರವಾಲ್ ಮುಂದುವರಿಯಲು ಸಾಧ್ಯವೇ ಇಲ್ಲ ಎನ್ನುವಂತಹ ಸ್ಥಿತಿ ನಿರ್ಮಾಣವಾಗಿತ್ತು. ರಾಜೀನಾಮೆ ನೀಡದೇ ಇದ್ದಿದ್ದರೆ ಅದನ್ನು ಬಳಸಿಕೊಂಡು ಕೇಂದ್ರ ಸರಕಾರ ಇನ್ನಷ್ಟು ಕಿರುಕುಳಗಳನ್ನು ಕೊಡುವ ಸಾಧ್ಯತೆಗಳಿತ್ತು ಆದುದರಿಂದಲೇ, ಕೇಜ್ರಿವಾಲ್ ಮುಖ್ಯಮಂತ್ರಿ ಹುದ್ದೆಯಿಂದ ಇಳಿಯುವ ಜಾಣ ನಡೆಯನ್ನು ಆರಿಸಿಕೊಂಡಿದ್ದಾರೆ. ಮೇಲ್ನೋಟಕ್ಕೆ ಇದೊಂದು ಹಿನ್ನಡೆಯಂತೆ ಕಂಡರೂ, ರಾಜಕೀಯ ಭವಿಷ್ಯದ ದೃಷ್ಟಿಯಿಂದ ಕೇಜ್ರಿವಾಲ್ ಅವರದು ಮುತ್ಸದ್ದಿ ನಡೆಯಾಗಿದೆ ದಿಲ್ಲಿಯು ಶೀಘ್ರವೇ ಚುನಾವಣೆಯನ್ನು ಎದುರಿಸಲಿರುವುದರಿಂದ ಮುಂದಿನ ಚುನಾವಣೆಗೆ ಪಕ್ಷವನ್ನು ಸಿದ್ಧಗೊಳಿಸುವುದಕ್ಕಾಗಿ ಕೇಜಿವಾಲ್ ತನ್ನನ್ನು ಮೀಸಲಿಟ್ಟಂತಿದೆ. ಈಗಾಗಲೇ ಹಲವು ನಾಯಕರು ಜೈಲು ಪಾಲಾಗಿರುವುದರಿಂದ ಆ್ಯಪ್‌ನ್ನು ಮುನ್ನಡೆಸಲು ನಾಯಕರೇ ಇಲ್ಲ ಎನ್ನುವಂತಹ ಸ್ಥಿತಿ ದಿಲ್ಲಿಯಲ್ಲಿ ನಿರ್ಮಾಣವಾಗಿದೆ. ಅಷ್ಟೇ ಅಲ್ಲ ಈ ಸಂದರ್ಭವನ್ನು ಬಿಜೆಪಿಯು ಬಳಸಿಕೊಳ್ಳುತ್ತದೆ. ಪಕ್ಷದೊಳಗೇ ಪರಸ್ಪರರನ್ನು ಎತ್ತಿಕಟ್ಟುತ್ತಿದೆ. ಈಗಾಗಲೇ ರಾಜ್ಯಸಭಾ ಸದಸ್ಯೆ ಸ್ವಾತಿ ಮಲಿವಾಳ್ ಪಕ್ಷ ಮುಖಂಡರ ವಿರುದ್ಧ ತಿರುಗಿ ಬಿದ್ದರು. ಇದು ಆ್ಯಪ್‌ನ್ನು ಸಾಕಷ್ಟು ಮುಜುಗರಕ್ಕೆ ತಳ್ಳಿತು. ಮನೀಶ್ ಸಿಸೋಡಿಯಾರಂತಹ ನಾಯಕರು ಜೈಲು ಸೇರಿದರು. ಪಕ್ಷದೊಳಗೆ ಇದು ಇತರ ನಾಯಕರಲ್ಲೂ ಆತಂಕ ಅಭದ್ರತೆಯನ್ನು ಸೃಷ್ಟಿಸಿತು. ಕೇಜಿ ವಾಲ್ ಜೈಲು ಸೇರಿದ ಬಳಿಕವಂತೂ ಆಪ್ ಅನಾಥವಾಯಿತು. ಆ್ಯಪ್‌ನ್ನು ಅಸಹಾಯಕಗೊಳಿಸಿ ಕಳೆದ ಲೋಕಸಭೆಯಲ್ಲಿ ಎನ್‌ಡಿಎ ಎಳೂ ಸ್ಥಾನಗಳನ್ನು ತನ್ನದಾಗಿಸಿಕೊಂಡಿತು. ಅಬಕಾರಿ ನೀತಿ ಹಗರಣದಲ್ಲಿ ಕೇಷ್ರೆವಾಲ್ ನೇತೃತ್ವದ ಸರಕಾರ ನಿರಪರಾಧಿ ಖಂಡಿತ ಅಲ್ಲ ಈಗಾಗಲೇ ಹಲವು ಗಣ್ಯರು ಈ ಹಗರಣಕ್ಕೆ ಸಂಬಂಧಿಸಿ ಜೈಲು ಪಾಲಾಗಿದ್ದಾರೆ. ತನಿಖಾ ಸಂಸ್ಥೆಗಳು ಹಗರಣದ ಪ್ರತೀ ಸಂದುಗಳನ್ನೂ ಜಾಲಾಡಿಸಿವೆ. ಅದರೆ ದಿಲ್ಲಿಯ ಸರಕಾರದ ಹಗರಣಗಳ ಬಗ್ಗೆ ಅತ್ಯಂತ ಬಿರುಸಿನಿಂದ ತನಿಖೆ ನಡೆಸಿದ ತನಿಖಾ ಸಂಸ್ಥೆಗಳು ಕೇಂದ್ರ ಸರಕಾರದ ಸಚಿವರು ಭಾಗಿಯಾಗಿದ್ದಾರೆನ್ನಲಾಗಿರುವ ಹಗರಣಗಳ ಬಗ್ಗೆ ಯಾಕೆ ಮೃದು ನೀತಿ ತಳೆದಿವೆ ಎನ್ನುವುದು ವಿರೋಧ ಪಕ್ಷಗಳ ಪ್ರಶ್ನೆಯಾಗಿದೆ. ಆದಾನಿಯ ಹಗರಣ, ಚುನಾವಣಾ ಬಾಂಡ್, ರಫೇಲ್ ಹಗರಣ ಇವೆಲ್ಲದರ ಬಗ್ಗೆ ಮೌನವಾಗಿದ್ದು, ಕೇಜಿವಾಲ್ ಅವರು ಒಳಗೊಂಡಿದ್ದಾರೆ ಎನ್ನಲಾಗಿರುವ ಮದ ಹಗರಣದ ಬಗ್ಗೆ ಮಾತ್ರ ಆಸಕ್ತಿ ವಹಿಸಿ ತನಿಖೆ ನಡೆಸಲಾಗಿದೆ. ಹಲವು ಪ್ರಮುಖ ನಾಯಕರನ್ನು ಜೈಲಿಗೆ ತಳ್ಳಲಾಗಿದೆ. ಲೆ. ಗವರ್ನರ್ ಮೂಲಕ ಕೇಜಿವಾಲ್ ಸರಕಾರಕ್ಕೆ ಗರಿಷ್ಠ ಕಿರುಕುಳವನ್ನು ನೀಡಿರುವ ಕೇಂದ್ರ, ತನಿಖಾ ಸಂಸ್ಥೆಗಳ ಮೂಲಕವೂ ಆ್ಯಪ್ ಸರಕಾರವನ್ನು ಬಗ್ಗು ಬಡಿಯಲು ನೋಡಿತು. ಆದರೆ, ಬಡಿದಷ್ಟು ಸೆಟೆದು ನಿಲ್ಲುತ್ತಿರುವ ಕೇಪ್ರೆವಾಲ್, ಕೇಂದ್ರ ಸರಕಾರಕ್ಕೆ ಈಗಲೂ ಬಹುದೊಡ್ಡ ಸವಾಲೇ ಆಗಿದ್ದಾರೆ. ಅತಿಶಿಗೆ ದಿಲ್ಲಿಯ ಹೊಣೆಗಾರಿಕೆಯನ್ನು ವಹಿಸಿದ ಬೆನ್ನಿಗೇ, ನವೆಂಬರ್‌ನಲ್ಲಿ ಚುನಾವಣೆ ನಡೆಯಲಿ ಎಂದು ಕೇಜಿವಾಲ್ ಒತ್ತಾಯಿಸಿದ್ದಾರೆ.

ಕಳೆದ ಲೋಕಸಭಾ ಚುನಾವಣೆಯ ಸಂದರ್ಭದಲ್ಲಿ ಆಪ್ ನಾಯಕರ ಕೈಕಾಲುಗಳನ್ನು ಕಟ್ಟಿ ಹಾಕಿ ಚುನಾವಣಾ ಕಣದಲ್ಲಿ ಬಿಜೆಪಿ ಗೆಲುವನ್ನು ಘೋಷಿಸಿಕೊಂಡಿತ್ತು. ಈ ಬಾರಿ ಅಧಿಕಾರಕ್ಕಿಂತಲೂ, ಜಾಮೀನಿನ ಮೂಲಕ ಸಾರ್ವಜನಿಕವಾಗಿ ಕಾಣಿಸಿಕೊಳ್ಳುವುದು ಕೇಜಿವಾಲ್‌ಗೆ ಮುಖ್ಯವಾಗಿದೆ. ಜೈಲಿನಲ್ಲಿದ್ದುಕೊಂಡು ವಿಧಾನಸಭಾ ಚುನಾವಣೆಯನ್ನು ಗೆಲ್ಲುವುದು ಸುಲಭವಿಲ್ಲ ಎನ್ನುವುದು ಅವರಿಗೆ ಅರ್ಥವಾಗಿದೆ. ದಿಲ್ಲಿಯ ಪಾಲಿಗೆ ನೂತನ ಮುಖ್ಯಮಂತ್ರಿಯಾಗಿ ಆತಿಶಿ ಸರಿಯಾದ ಆಯ್ಕೆಯೇ ಆಗಿದ್ದಾರೆ. ಕೇಜಿವಾಲ್ ಜೈಲಿನಲ್ಲಿರುವ ಹೊತ್ತಿಗೆ ಪಕ್ಷದ ಕಾರ್ಯಕರ್ತರಿಗೆ ಮತ್ತು ದಿಲ್ಲಿಯ ಜನತೆಗೆ ಧೈರ್ಯ ತುಂಬಿದವರು ಅತಿಶಿ ದಿಲ್ಲಿಯು ನೀರಿನ ಸಮಸ್ಯೆಯನ್ನು ಎದುರಿಸಿದಾಗ, ಅದರ ವಿರುದ್ಧ ಸಾರ್ವಜನಿಕವಾಗಿ ಪ್ರತಿಭಟನೆ ನಡೆಸಿ ಮಾಧ್ಯಮಗಳಲ್ಲಿ ಸುದ್ದಿಯಾದವರು ಆತಿಶಿ ಉಪವಾಸ ಸತ್ಯಾಗ್ರಹದ ಮೂಲಕ ಬಿಜೆಪಿಗೆ ತೀವ್ರ ಮುಜುಗರವನ್ನು ಅವರು ಉಂಟು ಮಾಡಿದ್ದರು. ಅನಿವಾರ್ಯವಾಗಿ, ಬಿಜೆಪಿ ಈ ಪ್ರತಿಭಟನೆಯನ್ನು ವಿಫಲಗೊಳಿಸಲು ತನ್ನ ಗೂಂಡಾ ಪಡೆಯನ್ನು ಬಳಸಿತ್ತು. 2015ರಿಂದಲೇ ಜಲಸತ್ಯಾಗ್ರಹದ ಮೂಲಕ ಗುರುತಿಸಲ್ಪಟ್ಟಿದ್ದ ಆತಶಿ, ಬೇರೆ ಬೇರೆ ಚಳವಳಿಗಳಲ್ಲಿ ಕಾಣಿಸಿಕೊಂಡವರು ದಿಲ್ಲಿ ಸರಕಾರದಲ್ಲಿ ಸಿಸೋಡಿಯಾ ಮತ್ತು ಸತ್ಯೇಂದ್ರ ಜೈನ್ ಅವರ ರಾಜೀನಾಮೆಯ ಬಳಿಕ ಕೇಜಿವಾಲ್ ನಂಬಿಕಸ್ತರೆಂದು ಗುರುತಿಸಲ್ಪಡುತ್ತಾ ಬಂದದ್ದು ಅತಿಶಿ ಆಕ್ಸ್‌ಫರ್ಡ್ ವಿಶ್ವವಿದ್ಯಾಲಯದ ಹಳೆ ವಿದ್ಯಾರ್ಥಿನಿಯಾಗಿರುವ ಇವರು, ಹಣಕಾಸು, ಶಿಕ್ಷಣ, ಜಲಸಂರಕ್ಷಯಂಥ ಹಲವು ವಿಷಯಗಳಲ್ಲಿ ಪರಿಣಿತರಾಗಿ ಗುರುತಿಸಲ್ಪಟ್ಟವರು.



## ರಾಮಾಯಣ

### ಬಾಲಕಾಂಡ

• ಹಿಂದಿನ ಸಂಚಿಕೆಯಿಂದ 1ನೆಯ ಅಧ್ಯಾಯ

**ಅಯೋಧ್ಯಾ ಪಟ್ಟಣದ ವರ್ಣನೆ**

**ವೈವಸ್ವತಮನುವಿನಿಂದ ಮೊದಲುಗೊಂಡು ಜಯಶಾಲಿಗಳಾಗಿ ಸಮಸ್ತಭೂಮಿಯನ್ನು ಆಳುತ್ತಿದ್ದ ಅರಸರುಳ್ಳ, ಸಮುದ್ರವನ್ನು ಅಗೆದು ಅರವತ್ತು ಸಾವಿರ ಮಕ್ಕಳಿಂದೊಡಗೂಡಿದ ಸಗರ ಚಕ್ರವರ್ತಿ ಮೊದಲಾದ ಮಹಾತ್ಮರುಳ್ಳ ಇಕ್ಷ್ವಾಕುವಂಶದವರ ಚರಿತ್ರವು ಈ ರಾಮಾಯಣದಲ್ಲಿ**

**ಶ್ರೀಚಾಮರಾಜೋಕ್ತಿಲಾಸವೆಂಬ ಕನ್ನಡ ರಾಮಾಯಣ**

ಹೇಳಲ್ಪಡುವುದು, ಧರ್ಮಾರ್ಥ ಕಾಮ ಮೋಕ್ಷಗಳೆಂಬ ಚತುರ್ವಿಧ ಪುರುಷಾರ್ಥಗಳನ್ನುಂಟು ಮಾಡುವ ಸಕಲವೇದಾರ್ಥಗಳ ಸಾರವಾದ ಈ ಪುಣ್ಯಕಥೆಯನ್ನು ಜಗದ್ಧಿತಾರ್ಥವಾಗಿ ವಿಸ್ತರಿಸುವೆನು. ಎಲೈ ಜನಗಳಿರಾ, ನೀವು ಅಸೂಯೆಯಿಲ್ಲದೆ ಕೇಳಿ ಕೃತಾರ್ಥರಾಗಿರಿ. ಮಹಾಸಂಪತ್ತುಗಳಿಂದ ಸಂಪೂರ್ಣವಾಗಿ ಅತಿಮನೋಹರವಾದ ಕೋಸಲ ದೇಶದಲ್ಲಿ, ಸರಯು ನದೀತೀರದಲ್ಲಿ ಧನಧಾತ್ಮ ಸಮೃದ್ಧಿಯುಳ್ಳ ಅಯೋಧ್ಯಾ ಎಂಬ ಪ್ರಸಿದ್ಧವಾದ ಮಹಾ ಪಟ್ಟಣವೊಂದುಂಟು, ಆ ಪಟ್ಟಣವು ಪೂರ್ವದಲ್ಲಿ ವೈವಸ್ವತಮನುವಿನಿಂದ ನಿರ್ಮಿಸಲ್ಪಟ್ಟದ್ದು ' ಅದು ಹನ್ನೆರಡು ಗಾವುದ ನೀಳವಾಗಿ ಮೂರು ಗಾವುದ ಅಗಲವಾಗಿ ಇದ್ದಿತು. ಪ್ರಸಿದ್ಧವಾದ ಭತ್ತದ ಗದ್ದೆಗಳುಳ್ಳದ್ದಾಗಿ, ವಿಶಾಲವಾದ ರಾಜಬೀದಿಗಳಿಂದ ಮನೋಹರವಾಗಿ, ಕದಗಳೂ ಹೆಬ್ಬಾಗಿಲುಗಳೂ ನಡುವಣ ಅಂಗಣಗಳೂ ಉಳ್ಳ ಉಪ್ಪರಿಗೆಗಳಿಂದಲೂ ಅನೇಕ ಶಿಲ್ಪಿಗಳಿಂದ ನಿರ್ಮಿತವಾದ ಫಿರಂಗಿ ಮೊದಲಾದ ಸೂತ್ರಾಯುಧಗಳಿಂದಲೂ ವಂಶಾವಳಿ ಬಿರುದಾವಳಿಗಳನ್ನು ಕೊಂಡಾಡುವ ಪಾಠಕಜನರಿಂದಲೂ ತುಂಬಿದ್ದಿತು. ಅತ್ಯಂತೈಶ್ವರಯುಕ್ತವಾಗಿ ಕಾಂತಿಯುಳ್ಳದ್ದಾಗಿ ಉನ್ನತವಾದ ಮುಗಿಲಟ್ಟಣೆಗಳಿಂದಲೂ, ಟಕ್ಕೆಯಗಳಿಂದಲೂ, ಹಂದಿಗೊರಡುಗಳಿಂದಲೂ, ನಾಟ್ಯ ಸ್ತ್ರೀಯರಿಂದಲೂ, ನರ್ತನನಾಯಕರಿಂದಲೂ ಮನೋಹರವಾಗಿ, ಅತ್ಯುನ್ನತವಾದ ಕೋಟೆಯಿಂದ ರಮಣೀಯವಾಗಿ, ದಾಟಲು ಶಕ್ಯವಲ್ಲದ ಅತ್ಯಂತ ಗಂಭೀರವಾದ ಅಗಳುಗಳಿಂದಲೂ, ದುರ್ಗಗಳಿಂದಲೂ, ಆನೆ ಕುದುರೆ ಒಂಟೆಗಳಿಂದಲೂ, ಕಪ್ಪವನ್ನು ತಂದುಕೊಡುವ ನಾನಾ ದೇಶಗಳ ಅರಸರಿಂದಲೂ, ನಾನಾ ದೇಶದಿಂದ ಬಂದ ಬೇಹುಗಾರರಿಂದಲೂ, ರತ್ನ ಖಚಿತಗಳಾದ ಉಪ್ಪರಿಗೆಗಳಿಂದಲೂ, ಕ್ರೀಡಾಪರ್ವತಗಳಿಂದಲೂ ಶಯ್ಯಾಗೃಹಗಳಿಂದಲೂ ಪ್ರಕಾಶಿಸುತ್ತ ದೇವೇಂದ್ರನ ಅಮರಾವತಿಯ ಹಾಗೆ ತೋರುತ್ತಿತ್ತು ಆ ನಗರವು. ಭಯಂಕರಾಕಾರರಾದ ದ್ವಾರಪಾಲಕರುಳ್ಳದ್ದಾಗಿ, ಚತುರಂಗದ ಹಲಗೆಯ ಹಾಗೆ ಇರುವ ಚೌಬೀದಿಗಳಿಂದಲೂ ಅತ್ಯಂತ ರೂಪಲಾವಣ್ಯಗಳುಳ್ಳ ಸ್ತ್ರೀಯರಿಂದಲೂ ನವರತ್ನಗಳಿಂದ ಪೂರ್ಣವಾದ ಮೇಲುಮಾಳಿಗೆ ಮನೆಗಳುಳ್ಳ ಬೀದಿಗಳಿಂದಲೂ ತುಂಬಿದ್ದಿತು.

ಮುಂದುವರಿಯುವುದು...

# ಬಿಎಂಟಿಸಿ ಬಸ್ ಡಿಜಿಟಲ್ ಪಾಸ್ ದರಗಳ ತಿಳಿಯಿರಿ

## ಸಾರಿಗೆಯೂ ಪ್ರಯಾಣಿಕರಿಗೆ ಅನುಕೂಲ ಆಗುವಂತೆ ವಿಶೇಷ ಯೋಜನೆಗಳನ್ನು ಜಾರಿ

• ಉದಯವಾಹಿನಿ ಬೆಂಗಳೂರು



ಉದಯವಾಹಿನಿ ಚಿತ್ರ

**ಕ್ಯೂ ಆರ್ ಕೋಡ್ ಸ್ಕ್ಯಾನ್ ಮಾಡಿ ಟಿಕೆಟ್ ವ್ಯವಸ್ಥೆ ಜಾರಿ**

ರಾಜ್ಯ ರಾಜಧಾನಿ ಬೆಂಗಳೂರು ಜನರ ಜೀವನಾಡಿ ಸಾರಿಗೆಗಳಲ್ಲಿ ಬಿಎಂಟಿಸಿ ಕೂಡ ಒಂದಾಗಿದೆ. ಈ ಸಾರಿಗೆ ಪ್ರತಿನಿತ್ಯ ಸಾವಿರಾರು ಜನ ಪ್ರಯಾಣ ಮಾಡುತ್ತಾರೆ. ಅಲ್ಲದೆ, ಈ ಸಾರಿಗೆಯೂ ಪ್ರಯಾಣಿಕರಿಗೆ ಅನುಕೂಲ ಆಗುವಂತೆ ವಿಶೇಷ ಯೋಜನೆಗಳನ್ನು ಜಾರಿಗೊಳಿಸುತ್ತಲೇ ಬಂದಿದೆ.

ಇದೀಗ ಡಿಜಿಟಲ್ ಪಾಸ್ ಪರಿಚಯಿಸಿದೆ. ಹಾಗಾದರೆ ದರಗಳ ಮಾಹಿತಿಯನ್ನು ಇಲ್ಲಿ ತಿಳಿಯಿರಿ. ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ನಗರದ ಸಾರಿಗೆಯಲ್ಲಿ ಪ್ರತಿನಿತ್ಯ ಲಕ್ಷಾಂತರ ಜನರು ಪ್ರಯಾಣ ಮಾಡುತ್ತಾರೆ. ಬೆಳಗ್ಗೆಯಿಂದ ಸಂಜೆವರೆಗೂ ಸಂಚರಿಸುವ ಮೂಲಕ ಪ್ರಯಾಣಿಕರಿಗೆ ಸೇವೆಯನ್ನು ನೀಡುತ್ತಿರುತ್ತವೆ.

ಇನ್ನು ಬಿಎಂಟಿಸಿಯಲ್ಲಿ ಸಾಮಾನ್ಯ ಬಸ್‌ಗಳಿಂದ ಹಿಡಿದು, ವೋಲ್ವೋ, ವಜ್ರ ಬಸ್‌ಗಳು ಕೂಡ ಲಭ್ಯ ಇವೆ. ಮೊದಲೆಲ್ಲ ದಿನದ ಪಾಸ್ ವಾರದ ಪಾಸ್ ಹಾಗೂ ಮಾಸಿಕ ಪಾಸ್‌ಗಳನ್ನು ಪಡೆಯಲು ಪ್ರಯಾಣಿಕರು ಕ್ಯೂನಲ್ಲಿ ನಿಲ್ಲುವಂತಹ ಪರಿಸ್ಥಿತಿ ನಿರ್ಮಾಣ ಆಗಿತ್ತು. ಆದರೆ ದಿನಕಳೆದಂತೆ ಪ್ರಯಾಣಿಕರು ಕ್ಯೂ ಆರ್ ಕೋಡ್ ಸ್ಕ್ಯಾನ್ ಮಾಡಿ ಟಿಕೆಟ್ ಪಡೆಯುವಂತಹ ವ್ಯವಸ್ಥೆ ಜಾರಿಯಾಯಿತು. ಆದರೆ ಇದೀಗ ಬಿಎಂಟಿಸಿ ದಿನದ ಪಾಸ್, ವಾರದ ಪಾಸ್ ಹಾಗೂ ತಿಂಗಳಿನ ಪಾಸ್‌ಗಳು ಪ್ರಯಾಣಿಕರಿಗೆ ಸುಲಭವಾಗಿ ದೊರೆಯುವಂತೆ ಮಾಡಲು ಮತ್ತು ನಗದು ರಹಿತ, ಕಾಗದ ರಹಿತ ವಹಿವಾಟಿಗಾಗಿ ಸೆಪ್ಟೆಂಬರ್ 15ರಿಂದ ಡಿಜಿಟಲ್ ವ್ಯವಸ್ಥೆಯಲ್ಲಿ ಮೊಬೈಲ್ ಅಪ್ಲಿಕೇಶನ್ ಮೂಲಕ ಬಸ್ ಪಾಸ್ ವಿತರಣೆ ಮಾಡಲು ನಿರ್ಧರಿಸಿದೆ. ಮೊಬೈಲ್ ಪ್ಲೇ ಸ್ಟೋರ್‌ನಲ್ಲಿ ಟುಮಾಕ್ ಆಯಪ್ ಡೌನ್‌ಲೋಡ್ ಮಾಡಿಕೊಂಡು ನೋಂದಣಿ ಮಾಡಿಕೊಳ್ಳಬೇಕು. ದಿನದ ಪಾಸ್, ವಾರದ ಪಾಸ್, ಮಾಸಿಕ ಪಾಸ್ ಅನ್ನು ಆಯ್ಕೆ ಮಾಡಿಕೊಂಡು ವಿವರಗಳನ್ನು ಭರ್ತಿ ಮಾಡಿ, ಸೆಲ್ಫಿ ಭಾವಚಿತ್ರ ಆಯ್ಕೆಗೆ ಕ್ಲಿಕ್ಕಿಸಬೇಕು. ನಂತರ ನಿಗದಿತ ಶುಲ್ಕ ಪಾವತಿಸಿದರೆ, ಬಸ್ ಪಾಸ್ ಸಿಗಲಿದೆ.

ಇನ್ನು ಈ ಡಿಜಿಟಲ್ ಪಾಸ್‌ನೊಂದಿಗೆ ಪ್ರಯಾಣಿಕರು, ನಿಗದಿತ ಗುರುತಿನ ಚೀಟಿ ತೋರಿಸಿ ಬಿಎಂಟಿಸಿ ಬಸ್‌ನಲ್ಲಿ ಪ್ರಯಾಣ ಮಾಡಬಹುದಾಗಿದೆ. ಬಸ್‌ಗಳಲ್ಲಿ ಅಂಟಿಸಿರುವ ಕ್ಯೂ ಆರ್ ಕೋಡ್ ಸ್ಕ್ಯಾನ್ ಮಾಡಿ, ಪಾಸ್‌ನ ಮಾನ್ಯತೆಯನ್ನು ನಿರ್ವಾಹಕರಿಗೆ ತೋರಿಸಬೇಕೆಂದು ಬಿಎಂಟಿಸಿ ಪ್ರಕಟಣೆಯಲ್ಲಿ ಮಾಹಿತಿ ನೀಡಿದೆ.

ಬಿಎಂಟಿಸಿ ಡಿಜಿಟಲ್ ಪಾಸ್ ದರಗಳ ವಿವರ

**ದಿನದ ಪಾಸ್:** ಆರ್ಡಿನರಿ-70 ರೂಪಾಯಿ, ವಜ್ರ ಗೋಲ್ಡ್ ದಿನದ ಪಾಸ್-120 ರೂಪಾಯಿ,

**ವಾರದ ಪಾಸ್:** ಆರ್ಡಿನರಿ ವೀಕ್ಲಿ ಪಾಸ್-300 ರೂಪಾಯಿ,

**ನೈಸ್ ರೋಡ್ ಮಾರ್ಗದ ತಿಂಗಳ ಪಾಸ್:** ನೈಸ್ ರೋಡ್ ತಿಂಗಳ ಪಾಸ್ (ಆರ್ಡಿನರಿ)-2,200 ರೂಪಾಯಿ

**ಮಾಸಿಕ ಪಾಸ್**

- ಆರ್ಡಿನರಿ ಸರ್ವೀಸ್ ತಿಂಗಳ ಪಾಸ್-1,050 ರೂಪಾಯಿ
- ವಜ್ರ ಗೋಲ್ಡ್ ತಿಂಗಳ ಪಾಸ್-1,800 ರೂಪಾಯಿ
- ವಜ್ರ ಗೋಲ್ಡ್ ಪಾಸ್ (ಎಸಿ)-3,755 ರೂಪಾಯಿ

**ಡಿಜಿಟಲ್ ಪಾಸ್ ಪಡೆಯುವುದೇಗೆ?**

- ಪ್ಲೇ ಸ್ಟೋರ್‌ನಲ್ಲಿ ಟುಮಾಕ್ ಆಪ್ (Tummoc app) ಡೌನ್ಲೋಡ್ ಮಾಡಿಕೊಂಡು ನೋಂದಣಿ ಮಾಡಿಕೊಳ್ಳಬೇಕು.
- ದೈನಿಕ, ಸಾಪ್ತಾಹಿಕ, ಮಾಸಿಕ ಪಾಸ್ ಆಯ್ಕೆ ಮಾಡಿಕೊಂಡು ವಿವರಗಳನ್ನು ಭರ್ತಿ ಮಾಡಿ, ಸೇಲ್ಫಿ ಭಾವಚಿತ್ರವನ್ನು ಕ್ಲಿಕ್ಕಿಸಬೇಕು.
- ಪಾಸ್ ಪಡೆಯಲು ದೃಢೀಕರಿಸಿ, ಪಾಸಿನ ಮೊತ್ತವನ್ನು ಪಾವತಿಸಿದ ನಂತರ ಡಿಜಿಟಲ್ ಬಸ್ ಪಾಸ್ ಲಭ್ಯವಾಗುತ್ತದೆ.
- ಡಿಜಿಟಲ್ ಪಾಸ್‌ನೊಂದಿಗೆ ಆಯ್ಕೆ ಮಾಡಿದ ಗುರುತಿನ ಚೀಟಿಯನ್ನು ಇಟ್ಟುಕೊಂಡು ಪ್ರಯಾಣ ಮಾಡಬವುದು.
- ಬಸ್‌ಗಳಲ್ಲಿ ಅಂಟಿಸಿರುವ ಕ್ಯೂ ಆರ್ ಕೋಡ್ ಅನ್ನು ಮೊಬೈಲ್ ಮೂಲಕ ಸ್ಕ್ಯಾನ್ ಮಾಡಿ, ಪಾಸ್‌ನ ಮಾನ್ಯತೆಯನ್ನು ನಿರ್ವಾಹಕ ಸಿಬ್ಬಂದಿಗೆ ತೋರಿಸಬೇಕಾಗುತ್ತದೆ.
- ಹೆಚ್ಚಿನ ಮಾಹಿತಿಗಾhttps://mybmtc.karnataka.gov.in ಭೇಟಿ ನೀಡಬಹುದಾಗಿದೆ.

## ಜಸ್ಟಿಸ್ ವಿ. ಗೋಪಾಲಗೌಡರ ಅಭಿನಂದನಾ ಗ್ರಂಥಕ್ಕೆ ಸೂಕ್ತ ಹೆಸರು ಸೂಚಿಸಿ

• ಉದಯವಾಹಿನಿ ಬೆಂಗಳೂರು




ಉದಯವಾಹಿನಿ ಚಿತ್ರ

ರಾಜ್ಯದ ಅತ್ಯಂತ ಹಿಂದುಳಿದ ಗ್ರಾಮೀಣ ಪ್ರದೇಶದ ರೈತಾಪಿ ಕುಟುಂಬದಲ್ಲಿ ಹುಟ್ಟಿಬೆಳೆದು ನ್ಯಾಯಾಂಗ ಕ್ಷೇತ್ರದಲ್ಲಿ ಅಪ್ರತಿಮ ಸಾಧನೆ ಮಾಡಿರುವ ಜಸ್ಟಿಸ್ ವಿ. ಗೋಪಾಲಗೌಡರ ಅಭಿನಂದನಾ ಗ್ರಂಥಕ್ಕೆ ಸೂಕ್ತ ಹೆಸರು ಸೂಚಿಸುವಂತೆ ಅಭಿನಂದನಾ ಸಮಿತಿಯ ಸಂಚಾಲಕ ಎಂ.ಎನ್. ಪಿಳ್ಳಪ್ಪ ಮನವಿ ಮಾಡಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸುಪ್ರೀಂ ಕೋರ್ಟ್ ನ್ಯಾಯಮೂರ್ತಿಯಾಗಿ ಸೇವೆ ಸಲ್ಲಿಸಿರುವ ಜಸ್ಟೀಸ್ ವಿ. ಗೋಪಾಲಗೌಡರು 73 ವರ್ಷಗಳ ತುಂಬು ಜೀವನ ಹಾಗೂ ನ್ಯಾಯಾಂಗ ಕ್ಷೇತ್ರದಲ್ಲಿ 45 ವರ್ಷಗಳ ಸಾರ್ಥಕ ಸೇವೆಯನ್ನು ಪೂರ್ಣಗೊಳಿಸಿದ್ದಾರೆ.

ಅವರ ಅಭಿಮಾನಿಗಳು, ಹಿರಿಯ ನ್ಯಾಯ ವಾದಿಗಳು, ಸಮಾಜದ ಮುಖಂಡರು ಅಭಿನಂದನಾ ಸಮಿತಿ ರಚಿಸಿದ್ದು, ಗ್ರಂಥ ರಚನೆ ಈಗಾಗಲೇ ಪ್ರಾರಂಭವಾಗಿದೆ. ವಿಶಿಷ್ಟವಾದ ಅಭಿನಂದನಾ ಗ್ರಂಥಕ್ಕೆ ಸೂಕ್ತ ಹೆಸರು ಸೂಚಿಸುವಂತೆ, ಹಿರಿಯರು, ಸಾಹಿತ್ಯಾಸಾಕ್ತರಲ್ಲಿ ಮನವಿ ಮಾಡಿ ದ್ದಾರೆ. ಜಸ್ಟಿಸ್ ವಿ. ಗೋಪಾಲಗೌಡರ ಅಭಿನಂದನಾ ಗ್ರಂಥವನ್ನು ಬರಹಗಾರ ಡಾ. ನಂಜುಂಡಸ್ವಾಮಿ ಅವರ ಸಂಪಾದಕದಲ್ಲಿ ಬರಲಿದೆ. ಗ್ರಂಥ ಕನ್ನಡ, ಇಗ್ಲೀಷ್, ಹಿಂದಿ ಮೂರು ಭಾಷೆಗಳಲ್ಲಿ ಬರಲಿದೆ. ಕನ್ನಡ ಭಾಷೆಯಲ್ಲಿ ಬರೆದಿರುವ ಗ್ರಂಥ ಕರ್ನಾಟಕದಲ್ಲಿ ಬಿಡುಗಡೆಯಾಗಲಿದೆ. ಹಿಂದಿ ಭಾಷೆಯಲ್ಲಿ ಒರಿಸ್ಸಾ ರಾಜ್ಯ, ಇಂಗ್ಲೀಷ್ ಭಾಷೆಯಲ್ಲಿ ದೆಹಲಿಯಲ್ಲಿ ಬಿಡುಗಡೆಯಾಗಲಿದೆ. ಅಭಿನಂದನಾ ಗ್ರಂಥದ ಹೆಸರನ್ನು ಈ ಮೊಬೈಲ್ ವಾಟ್ಸ್ ಆಪ್ ನಂಬರ್‌ಗೆ 9945431926 ಅಥವಾ ಪತ್ರದ ಮೂಲಕ ಈ ವಿಳಾಸಕ್ಕೆ ಈ ತಿಂಗಳ 30ರ ಒಳಗಾಗಿ ಬರೆದು ತಿಳಿಸಬೇಕು. 520, 8ನೇ ಮುಖ್ಯ ರಸ್ತೆ, ಪೋಸ್ಟ್ ಆಫೀಸ್ ರಸ್ತೆ, ಸದಾಶಿವನಗರ, ಬೆಂಗಳೂರು 560080 ಗ್ರಂಥದ ಹೆಸರನ್ನು ಆಯ್ಕೆ ಮಾಡಿದವರಿಗೆ ಗೌರವ ಸಮರ್ಪಣೆ ಮಾಡಲಾಗುವುದು ಎಂದರು. ವೀರಶೈವ ಸಂಘದ ಸದಸ್ಯರಾದ ಮೃತ್ಯುಂಜಯಸ್ವಾಮಿ, ವಕೀಲರಾದ ಶಿವಶಂಕರಪ್ಪ ಪತ್ರಿಕಾ ಗೋಷ್ಠಿಯಲ್ಲಿ ಭಾಗವಹಿಸಿದ್ದರು

## ಏಡ್ಸ್ ರೋಗಿಯ ರಕ್ತ ಇಂಜೆಕ್ಷನ್ ಮಾಡಲು ಮುನಿರತ್ನ ಷಡ್ಯಂತ್ರ?

• ಉದಯವಾಹಿನಿ ಬೆಂಗಳೂರು



ಉದಯವಾಹಿನಿ ಚಿತ್ರ

2023ರ ವಿಧಾನಸಭಾ ಚುಣಾವಣೆಯಲ್ಲಿ ರಾಜರಾಜೇಶ್ವರಿ ನಗರದ ಕ್ಷೇತ್ರ ತೀವ್ರ ಜಿದ್ದಾಜಿದ್ದಿನ ಕಣವಾಗಿತ್ತು. ರಾಜರಾಜೇಶ್ವರಿ ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿ ಕುಸುಮಾ ವಿರುದ್ಧ ಬಿಜೆಪಿ ಪಕ್ಷದಿಂದ ಮುನಿರತ್ನ ಸ್ಪರ್ಧೆ ನಡೆಸಿದ್ದು, ಕಡಿಮೆ ಅಂತರದಲ್ಲಿ ಮುನಿರತ್ನ ಗೆಲುವು ಸಾಧಿಸಿದ್ದರು.

ಕಳೆದ ವಿಧಾನಸಭಾ ಚುಣಾವಣೆಯ ಸಂದರ್ಭದಲ್ಲಿ ರಾಜಕೀಯ ಎದುರಾಳಿಯಾಗಿದ್ದ ಡಿ ಕೆ ಸುರೇಶ್ ಹಾಗೂ ಕುಸುಮಾ ಹನುಮಂತರಾಯಪ್ಪ ಅವರ ವಿರುದ್ಧ ಹೊಸ ಷಡ್ಯಂತ್ರವನ್ನ ರೂಪಿಸಿದ್ದಾರೆ ಎನ್ನುವ ಆರೋಪ ಕೇಳಿ ಬಂದಿದೆ. ಮುನಿರತ್ನರಿಂದ ಹನಿಟ್ರ್ಯಾಪ್ ನಡೆದಿದೆ ಎಂಬ ಆರೋಪ ಕೇಳಿ ಬಂದಿದೆ. ರಾಜಕೀಯ ಎದುರಾಳಿಯಾಗಿದ್ದ ಮಾಜಿ ಸಂಸದ ಡಿ ಕೆ ಸುರೇಶ್ ಹಾಗೂ ಕುಸುಮಾ ಹನುಮಂತರಾಯಪ್ಪ ಅವರಿಗೆ ಏಡ್ಸ್ ರೋಗಿಯ ರಕ್ತ ಇಂಜೆಕ್ಟ್ ಮಾಡಲು ಮುನಿರತ್ನ ಅವರಿಂದ ತಂತ್ರಗಾರಿಕೆ ನಡೆದಿತ್ತು ಎನ್ನುವ ಕುರಿತು ಖಾಸಗಿ ಸುದ್ದಿ ವಾಹಿನಿ ವರದಿ ಮಾಡಿದೆ. ಏಡ್ಸ್ ರೋಗಿಯ ರಕ್ತ ಇಂಜೆಕ್ಟ್ ಮಾಡಲು ಮೂವರ ತಂಡವನ್ನ ಮುನಿರತ್ನ ನಿಯೋಜಿಸಿದ್ದರು ಎಂದು ಹೇಳಲಾಗಿದೆ. ಈ ಏಡ್ಸ್ ರೋಗಿಯ ರಕ್ತ ಇಂಜೆಕ್ಟ್ ಮಾಡುವ ದಿನವೇ ಕಾಂಗ್ರೆಸ್ ಕಾರ್ಯಕರ್ತರ ತಂಡವನ್ನ ನೋಡಿ ಭಯದಿಂದ ನಿಯೋಜಿಸಿದ್ದ ಮೂವರು ಹಿಂಜರಿದಿದ್ದಾರೆ ಎನ್ನಲಾಗಿದೆ.

> **ಏಡ್ಸ್ ರೋಗಿಯ ರಕ್ತ ನಿಮಗೆ ಇಂಜೆಕ್ಟ್ ಮಾಡುವ ಕುರಿತು ಮುನಿರತ್ನ ತಂತ್ರಗಾರಿಕೆ ನಡೆಸಿದ್ದರು ಎಂಬ ಮಾಧ್ಯಮಗಳ ಪ್ರಶ್ನೆಗೆ ಮಾಜಿ ಸಂಸದ ಡಿ ಕೆ ಸುರೇಶ್ ಮಾತನಾಡಿ, ಇದೊಂದು ಅಸಹ್ಯಕರ, ಯಾವ ರೀತಿ ಪದ ಬಳಕೆ ಮಾಡಬೇಕೆಂತಲೂ ಗೊತ್ತಿಲ್ಲ. ನಾನು ಯಾವತ್ತಿಗೂ ಒಳ್ಳೆಯದನ್ನು ಬಯಸೋದು ಕೆಟ್ಟದ್ದನ್ನು ಅಂತೂ ಬಯಸೋದಿಲ್ಲ. ಆದರೆ ನಾವಂತೂ ಯಾರಿಗೂ ಹೆದರುವುದಿಲ್ಲ. ಇದರ ಒಳ ಮರ್ಮಗಳ ಬಗ್ಗೆ ಆಳವಾಗಿ ಅರ್ಥ ಮಾಡಬೇಕಿದೆ. ನಾನು ಏನಾದರೂ ಆ ವ್ಯಕ್ತಿ ಬಗ್ಗೆ ಕೆಟ್ಟದ್ದ ಬಯಸಿಲ್ಲ. ಒಳ್ಳೆಯದನ್ನು ಬಯಸಿದ್ದೇನೆ, ಕೆಲಸಕ್ಕೆ ಪ್ರೋತ್ಸಾಹಿಸಿದ್ದೇನೆ ಎಂದು ಹೇಳಿದರು.**

# ಬಿಡಿಎ ಸೈಟ್‌ಗಳ ಮಾಲೀಕರೇ

## ಗಮನಿಸಿ, ಸುಧಾರಣೆ ಶುಲ್ಕ ಪ್ರಕಟ

• ಉದಯವಾಹಿನಿ ಬೆಂಗಳೂರು



ಉದಯವಾಹಿನಿ ಚಿತ್ರ

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಬಿಡಿಎ) ಉದ್ಯಾನ ನಗರಿ ಬೆಂಗಳೂರಿನಲ್ಲಿ ನಿವೇಶನಗಳಿಗೆ ಸುಧಾರಣೆ ಶುಲ್ಕವನ್ನು ಘೋಷಣೆ ಮಾಡಿದೆ. ಗ್ರಾಮದಿಂದ ಗ್ರಾಮಕ್ಕೆ ಈ ಶುಲ್ಕಗಳಲ್ಲಿ ಬದಲಾವಣೆಯಾಗಲಿದೆ. ಚದರ ಮೀಟರ್‌ಗೆ ಅನ್ವಯವಾಗುವಂತೆ ಶುಲ್ಕಗಳಲ್ಲಿ ಹೆಚ್ಚು-ಕಡಿಮೆಯಾಗಲಿದೆ. ಬಿಡಿಎ ನಿಯಮಾವಳಿಗಳ ಸೆಕ್ಷನ್ 20 ಮತ್ತು 21ರ ಅನ್ವಯ ಪ್ರಾಧಿಕಾರ ಲೇಔಟ್ ಅಭಿವೃದ್ಧಿ ಮಾಡುವಾಗ ಸುಧಾರಣೆ ಶುಲ್ಕವನ್ನು ನಿಗದಿಗೊಳಿಸಲು ಅಧಿಕಾರವಿದೆ.

> **ಬಿಡಿಎ ಎಲ್ಲಾ ಆಸ್ತಿಗಳಿಗೂ ಅನ್ವಯವಾಗುವಂತೆ ಒಂದೇ ಮಾದರಿ ಸುಧಾರಣಾ ಶುಲ್ಕವನ್ನು ಸಂಗ್ರಹ ಮಾಡಬೇಕು. ಆಸ್ತಿಗಳ ಸ್ವಾಧೀನದ ಸಂದರ್ಭದಲ್ಲಿ ಪರಿಹಾರ ನೀಡುವಂತೆ ಶುಲ್ಕವನ್ನು ಸಂಗ್ರಹಿಸಬೇಕು ಎಂದು ಆಸ್ತಿಗಳ ಮಾಲೀಕರು ಸಲಹೆ ನೀಡಿದ್ದಾರೆ.**

ಉತ್ತರ ಬೆಂಗಳೂರಿನಲ್ಲಿ ಬಿಡಿಎ 5,171 ಆಸ್ತಿ ಗಳಿಗೆ ಸುಧಾರಣೆ ಶುಲ್ಕವನ್ನು ಘೋಷಣೆ ಮಾಡಿದೆ. ಈ ಪ್ರದೇಶದಲ್ಲಿಯೇ ಪ್ರಾಧಿಕಾರ ಡಾ. ಶಿವರಾಮ ಕಾರಂತ ಬಡಾವಣೆಯನ್ನು ಅಭಿವೃದ್ಧಿಪಡಿಸುತ್ತಿದೆ. ಸೈಟುಗಳ ಚದರ ಮೀಟರ್‌ಗೆ ಅನ್ವಯವಾಗುವಂತೆ ರೂ. 43 ರಿಂದ 1,146ರ ತನಕ ಶುಲ್ಕಗಳು ಅನ್ವಯವಾಗುತ್ತದೆ. ಉಳಿದ 14 ಹಳ್ಳಿಗಳಿಗೆ ಹೋಲಿಕೆ ಮಾಡಿದರೆ ಕೆಂಪಾಪುರ ಮತ್ತು ರಾಮಗೊಂಡನಹಳ್ಳಿಯಲ್ಲಿ ಶುಲ್ಕಗಳು ಹೆಚ್ಚಿವೆ. ಮಾರ್ಚ್‌ನಲ್ಲಿ ನಡೆದ ಬಿಡಿಎ ಉನ್ನತ ಮಟ್ಟದ ಸಭೆಯಲ್ಲಿ ಶುಲ್ಕಗಳ ಸಂಗ್ರಹಕ್ಕೆ ಒಪ್ಪಿಗೆ ನೀಡಲಾಗಿತ್ತು. ಸುಧಾರಣಾ ಶುಲ್ಕವನ್ನು ಸಂಗ್ರಹ ಮಾಡುವ ಕುರಿತು ಬಿಡಿಎ ಸಲ್ಲಿಕೆ ಮಾಡಿದ್ದ ಪ್ರಸ್ತಾವನೆಗೆ ಸರ್ಕಾರ ಸಹ ಅಂತಿಮ ಒಪ್ಪಿಗೆ ನೀಡಿದೆ. ಬಿಡಿಎ ನಿಯಮಾವಳಿ 20 ಮತ್ತು 21ರ ಅನ್ವಯ ಆಸ್ತಿಗಳಿಗೆ ಪ್ರಾಧಿಕಾರ ಸುಧಾರಣಾ ಶುಲ್ಕವನ್ನು ಸಂಗ್ರಹ ಮಾಡಬಹುದು. ಯೋಜನೆ ಅಭಿವೃದ್ಧಿಗೊಳಿಸುವಾಗ ಇರುವ ಬೇಡಿಕೆ, ಬಳಿಕ ಹೆಚ್ಚಾಗುವ ಬೇಡಿಕೆ ಅನ್ವಯ ಬಿಡಿಎ ಸುಧಾರಣಾ ಶುಲ್ಕವನ್ನು ನಿಗದಿಗೊಳಿಸುತ್ತದೆ. ಡಾ. ಶಿವರಾಮ ಕಾರಂತ ಬಡಾವಣೆ ನಿರ್ಮಾಣದ ಉಸ್ತುವಾರಿ ನೋಡಿಕೊಳ್ಳುತ್ತಿರುವ ನ್ಯಾಯಮೂರ್ತಿ ಎವಿ ಚಂದ್ರಶೇಖರ್ ಸಮಿತಿಯಿಂದ ಮಾನ್ಯತೆ ಪಡೆದಿರುವ ಆಸ್ತಿಗಳು, ಮನೆಗಳಿಗೆ ಈ ಶುಲ್ಕಗಳು ಅನ್ವಯವಾಗುತ್ತದೆ. ಬಿಡಿಎ ಸುಧಾರಣಾ ಶುಲ್ಕ ಸಂಗ್ರಹ ಮಾಡಲು ಕೈಗೊಂಡಿರುವ ತೀರ್ಮಾನಕ್ಕೆ ನಿವಾಸಿಗಳು ವಿರೋಧವನ್ನು ಸಹ ವ್ಯಕ್ತಪಡಿಸಿದ್ದಾರೆ.

**ಶುಲ್ಕ ಸಂಗ್ರಕ್ಕೆ ವಿರೋಧವೂ ಇದೆ:** ಡಾ. ಶಿವರಾಮ ಕಾರಂತ ಬಡಾವಣೆಯಲ್ಲಿ ಸುಧಾರಣಾ ಶುಲ್ಕ ನಿಗದಿ ಮಾಡುವಾಗ ಬಿಡಿಎ 2018 ರಿಂದ 2024ರ ತನಕದ ಆಸ್ತಿ ಮಾರ್ಗದರ್ಶಿ ಮೌಲ್ಯಗಳನ್ನು ಲೆಕ್ಕಾಚಾರ ಹಾಕಿದೆ. ಇದರಿಂದಾಗಿ ಬಿಡಿಎಗೆ ಸುಮಾರು 800 ರಿಂದ 1,000 ಕೋಟಿ ರೂ. ಆದಾಯ ನಿರೀಕ್ಷೆ ಮಾಡಲಾಗಿದೆ. ಇದರ ಅನ್ವಯ ವಾಣಿಜ್ಯ ಆಸ್ತಿಗಳಿಗೆ ಇದು ಶೇ 50ಕ್ಕಿಂತ ಹೆಚ್ಚಾಗಿರುತ್ತದೆ. ರಾಮಗೊಂಡನಹಳ್ಳಿ, ಕೆಂಪಾಪುರ ಮತ್ತು ದೊಡ್ಡಬೆಟ್ಟದಹಳ್ಳಿ ನಿವಾಸಿಗಳು ಬಿಡಿಎ ಸುಧಾರಣಾ ಶುಲ್ಕ ಸಂಗ್ರಹ ಮಾಡುವ ಕುರಿತು ಆಕ್ಷೇಪವನ್ನು ಎತ್ತಿದ್ದಾರೆ. ಪ್ರಾಧಿಕಾರ ಸುಧಾರಣಾ ಶುಲ್ಕವನ್ನು ನಿಗದಿ ಮಾಡುವ ಮಾರ್ಗಸೂಚಿಯೇ ತಪ್ಪಾಗಿದೆ. ಆಸ್ತಿಯ ಮೌಲ್ಯದಷ್ಟೇ ಶುಲ್ಕವನ್ನು ನಿಗದಿ ಮಾಡಲಾಗಿದೆ ಎಂಬುದು ಜನರ ಆರೋಪವಾಗಿದೆ.

ನಮ್ಮ ಆಸ್ತಿಗಳಿಗೆ ಗ್ರಾಮ ಪಂಚಾಯಿತಿ ರಸ್ತೆಯನ್ನು ಮಾಡಿಕೊಟ್ಟಿದೆ. ಬೇರೆ ಒಂದು ಸಂಸ್ಥೆ ಒಳಚರಂಡಿ ಸಂಪರ್ಕವನ್ನು ಕಲ್ಪಿಸಿದೆ. ನಾವು ಏಕೆ ಈಗ ಬಿಡಿಎಗೆ ಸುಧಾರಣಾ ಶುಲ್ಕವನ್ನು ಪಾವತಿಸಬೇಕು? ಎಂಬುದು ಜನರ ಪ್ರಶ್ನೆಯಾಗಿದೆ. ಮುಖ್ಯ ರಸ್ತೆಗೆ ಹತ್ತಿರವಿರುವ ಹಾರೋಹಳ್ಳಿ, ಅವಲಹಳ್ಳಿಯಲ್ಲಿ ಸುಧಾರಣಾ ಶುಲ್ಕ ಕಡಿಮೆ ಇದೆ, ದೂರ ಇರುವ ಗ್ರಾಮಗಳಿಗೆ ಹೆಚ್ಚಿನ ಶುಲ್ಕ ನಿಗದಿ ಮಾಡಲಾಗಿದೆ ಎಂಬುದು ಜನರ ದೂರು.

# ಅತೃಪ್ತ ಪೂರ್ವಜರ ತೊಂದರೆಗಳಿಂದ ರಕ್ಷಿಸುವ ಸದ್ಗತಿ ಪ್ರದಾನಿಸುವ ದೇವತೆ -ದತ್ತ

• ಉದಯವಾಹಿನಿ ಬೆಂಗಳೂರು

**ಅತೃಪ್ತ ಪೂರ್ವಜರಿಂದ ತೊಂದರೆಯಾಗುವ ಕಾರಣಗಳು ಮತ್ತು ತೊಂದರೆಯ ಸ್ವರೂಪ:**

ಇತ್ತೀಚಿನ ಕಾಲದಲ್ಲಿ ಹಿಂದಿನಂತೆ ಯಾರೂ ಶ್ರಾದ್ಧ-ಪಕ್ಷ, ಹಾಗೆಯೇ ಸಾಧನೆ ಯನ್ನೂ ಮಾಡುವುದಿಲ್ಲ. ಕಲಿಯು ಗದಲ್ಲಿನ ಬಹುತೇಕ ಜನರು ಸಾಧನೆಯನ್ನು ಮಾಡದಿರುವುದರಿಂದ ಮಾಯೆಯಲ್ಲಿ ಸಿಲುಕಿಕೊಂಡಿರುತ್ತಾರೆ.

ಇದರಿಂದಾಗಿ ಇಂತಹವರ ಲಿಂಗದೇಹಗಳು ಮೃತ್ಯುವಿನ ನಂತರ ಅತೃಪ್ತವಾಗಿ ಉಳಿಯುತ್ತವೆ. ಆದುದರಿಂದ ಬಹುತೇಕ ಎಲ್ಲರಿಗೂ ಪೂರ್ವಜರ ಅತೃಪ್ತ ಲಿಂಗದೇಹಗಳಿಂದ ಆಧ್ಯಾತ್ಮಿಕ ತೊಂದರೆಯಾಗುತ್ತಿದೆ. ಇಂತಹ ಅತೃಪ್ತ ಲಿಂಗದೇಹಗಳು ಮರ್ತ್ಯಲೋಕದಲ್ಲಿ ಸಿಲುಕಿಕೊಳ್ಳುತ್ತವೆ. (ಮರ್ತ್ಯಲೋಕವು ಭೂಲೋಕ ಮತ್ತು ಭುವರ್ಲೋಕದ ಮಧ್ಯದಲ್ಲಿದೆ) ದತ್ತನ ನಾಮಜಪದಿಂದ ಮರ್ತ್ಯಲೋಕದಲ್ಲಿ ಸಿಲುಕಿಕೊಂಡಿರುವ ಪೂರ್ವಜರಿಗೆ ಗತಿಯು ಸಿಗುತ್ತದೆ. ಮುಂದೆ ಅವರು ಅವರ ಕರ್ಮಗಳಿಗನುಸಾರ ಮುಂದು ಮುಂದಿನ ಲೋಕಕ್ಕೆ ಹೋಗುವುದರಿಂದ ಸಹಜವಾಗಿಯೇ ಅವರಿಂದ ನಮಗಾಗುವ ತೊಂದರೆಗಳ ಪ್ರಮಾಣವು ಕಡಿಮೆಯಾಗುತ್ತದೆ.

ಅತೃಪ್ತ ಪೂರ್ವಜರಿಂದ ತೊಂದರೆಯಾಗುವ ಸಾಧ್ಯತೆ ಇದೆ ಅಥವಾ ತೊಂದರೆ ಆಗುತ್ತಿದೆ, ಎಂಬುದನ್ನು ಅಧ್ಯಾತ್ಮದಲ್ಲಿನ ಉನ್ನತರೇ ಹೇಳಬಲ್ಲರು. ಹಾಗೆ ಹೇಳುವ ಉನ್ನತರು ಸಿಗದೇ ಇದ್ದಾಗ ಮತ್ತು ಮುಂದೆ ನೀಡಿದ ತೊಂದರೆಗಳು ಆಗುತ್ತಿದ್ದಲ್ಲಿ ಅವು ಅತೃಪ್ತ ಪೂರ್ವಜರಿಂದ ಆಗುತ್ತಿವೆ ಎಂದು ತಿಳಿದು ಸಾಧನೆಯನ್ನು ಮಾಡಬೇಕು - ವಿವಾಹವಾಗದಿರುವುದು, ಪತಿ-ಪತ್ನಿಯರಲ್ಲಿ ಹೊಂದಾಣಿಕೆಯಾಗದಿರುವುದು, ಗರ್ಭಧಾರಣೆಯಾಗದಿರುವುದು, ಗರ್ಭಧಾರಣೆಯಾದರೂ ಗರ್ಭಪಾತವಾಗುವುದು, ಮಕ್ಕಳು ಸಮಯಕ್ಕೆ ಮೊದಲೇ ಹುಟ್ಟುವುದು, ಬುದ್ಧಿಮಾಂದ್ಯ ಅಥವಾ ಅಂಗವಿಕಲ ಮಕ್ಕಳು ಹುಟ್ಟುವುದು, ಮಕ್ಕಳು ಚಿಕ್ಕ ವಯಸ್ಸಿನಲ್ಲಿಯೇ ಸಾಯುವುದು ಇತ್ಯಾದಿ. ವ್ಯಸನ, ದಾರಿದ್ರ್ಯ, ಶಾರೀರಿಕ ರೋಗ ಮುಂತಾದ ಲಕ್ಷಣಗಳಿರುವ ಸಾಧ್ಯತೆಯೂ ಇರುತ್ತದೆ. ಕೆಲವು ಜನರು ಮೃತವ್ಯಕ್ತಿಯ ಸ್ಮರಣೆಗೆಂದು ಮನೆಯ ಎದುರು ಅಥವಾ ಬದಿಯಲ್ಲಿ ಅವರ ಹೆಸರಿನ ಸಮಾಧಿಯನ್ನು ಕಟ್ಟುತ್ತಾರೆ. ಈ ಸಮಾಧಿಗೆ ನಿಯಮಿತವಾಗಿ ಹೂವುಗಳನ್ನು ಅರ್ಪಿಸಿ ಪೂಜೆಯನ್ನೂ ಮಾಡುತ್ತಾರೆ.



ಉದಯವಾಹಿನಿ ಚಿತ್ರ

**ಸಂರಕ್ಷಣಾ ಕವಚ ನಿರ್ಮಾಣವಾಗುವುದು**

**ದತ್ತನ ನಾಮಜಪದಿಂದ ನಿರ್ಮಾಣವಾಗುವ ಶಕ್ತಿಯಿಂದ ನಾಮಜಪ ಮಾಡುವವರ ಸುತ್ತಲೂ ಸಂರಕ್ಷಣಾ ಕವಚ ನಿರ್ಮಾಣವಾಗುತ್ತದೆ. ಈ ನಾಮಜಪವನ್ನು ಹಾಕಿದ ನಂತರ ತಮ್ಮಲ್ಲಿ ಅಥವಾ ತಮ್ಮ ಮನೆಯಲ್ಲಿ ಏನು ಬದಲಾವಣೆಗಳಾದವು ಎಂದು ನಮಗೆ ತಿಳಿಸಲು ಮರೆಯಬೇಡಿ. ಪ್ರತಿಯೊಬ್ಬರೂ ಈ ನಾಮಜಪವನ್ನು ಮಾಡಿ ಇತರರೂ ಮಾಡಲು ಇದನ್ನು ಆದಷ್ಟು ಹೆಚ್ಚು ಜನರಿಗೆ ತಲುಪಿಸಿ.**

ಮೃತವ್ಯಕ್ತಿಯ ಮೇಲಿನ ಪ್ರೇಮ ಮತ್ತು ಅವರ ನೆನಪಿಗಾಗಿ ಮನೆಯಲ್ಲಿ ಅವರ ಛಾಯಾಚಿತ್ರಗಳನ್ನು ಇಡುವುದು, ದೇವರ ಕೋಣೆಯಲ್ಲಿ ನಾಣ್ಯವನ್ನಿರಿಸುವುದು ಅಥವಾ ಮನೆಯ ಮುಂದೆ ಸಮಾಧಿಯನ್ನು ಕಟ್ಟುವುದು ಮುಂತಾದ ಕೃತಿಗಳಿಂದ ಆ ವ್ಯಕ್ತಿಯ ಲಿಂಗದೇಹವು ಅಲ್ಲಿ ಸಿಲುಕಿಕೊಳ್ಳುತ್ತದೆ. ಇದರಿಂದ ಅವರಿಗೆ ಮುಂದಿನ ಗತಿ ಸಿಗುವುದಿಲ್ಲ, ಹಾಗೆಯೇ ಅವರಿಗೆ ಯಾತನೆಯನ್ನೂ ಸಹಿಸಬೇಕಾಗುತ್ತದೆ. ಭಗೀರಥನು ಪೂರ್ವಜರ ಮುಕ್ತಿಗಾಗಿ ತಪಸ್ಸನ್ನು ಮಾಡಿ ಗಂಗೆಯನ್ನು ಪೃಥ್ವಿಯಲ್ಲಿ ಅವತರಿಸುವಂತೆ ಮಾಡಿದ ಉದಾಹರಣೆಯು ಪಿತೃಋಣ ತೀರಿಸಿದುದರ ಉತ್ತಮ ಆದರ್ಶವಾಗಿದೆ. ನಾವು ಪೂರ್ವಜರನ್ನು ಮೇಲೆ ಹೇಳಿದ ಸ್ಥೂಲ ವಿಷಯಗಳಲ್ಲಿ ಸಿಲುಕಿಸಿದರೆ ಮತ್ತು ಅವರಿಗೆ ಗತಿ ಸಿಗಲು ನಾಮಜಪ ಮುಂತಾದ ಸಾಧನೆಯನ್ನು ಮಾಡದೇ ಇದ್ದಲ್ಲಿ ನಮ್ಮಿಂದ ಪಿತೃ ಋಣ ತೀರುವುದಿಲ್ಲ. ಹಾಗೆಯೇ ಪೂರ್ವಜರಿಗೆ ತೊಂದರೆಯಾಗಿ ಅವರು ನಮ್ಮ ಸಾಧನೆಯಲ್ಲಿ ಅಡಚಣೆಗಳನ್ನು ತರುತ್ತಾರೆ. ಪಿತೃ ಋಣವನ್ನು ತೀರಿಸಲು ಮತ್ತು ಪೂರ್ವಜರ ಮುಕ್ತಿಯನ್ನು ತಡೆಗಟ್ಟದೇ ಅವರಿಗೆ ಗತಿ ಸಿಗಬೇಕೆಂದು 'ಶ್ರೀ ಗುರುದೇವ ದತ್ತ।' ನಾಮಜಪ ಮತ್ತು ಶ್ರಾದ್ಧವಿಧಿಗಳನ್ನೂ ಮಾಡಬೇಕು.

ಅತೃಪ್ತ ಪೂರ್ವಜರ ತೊಂದರೆಗಳಿಂದ ರಕ್ಷಣೆಯಾಗಲು ತೊಂದರೆಗಳ ತೀವ್ರತೆಗನುಸಾರ ಮಾಡಬೇಕಾದ ಉಪಾಸನೆ

ಈಗ ಯಾವುದೇ ರೀತಿಯ ತೊಂದರೆ ಇಲ್ಲದಿದ್ದಲ್ಲಿ ಮುಂದೆ ತೊಂದರೆಗಳು ಆಗಬಾರದೆಂದು, ಹಾಗೆಯೇ ಸ್ವಲ್ಪ ತೊಂದರೆ ಇದ್ದರೆ ಪ್ರತಿದಿನ 1 ರಿಂದ 2 ಗಂಟೆ 'ಶ್ರೀ ಗುರುದೇವ ದತ್ತ।' ನಾಮಜಪವನ್ನು ಮಾಡಬೇಕು. ಉಳಿದ ಸಮಯದಲ್ಲಿ ಪ್ರಾರಬ್ಧದಿಂದ ತೊಂದರೆಯಾಗಬಾರದು ಮತ್ತು ಆಧ್ಯಾತ್ಮಿಕ ಉನ್ನತಿಯಾಗಬೇಕೆಂದು ಸಾಮಾನ್ಯ ಮನುಷ್ಯನು ಅಥವಾ ಪ್ರಾಥಮಿಕ ಅವಸ್ಥೆಯಲ್ಲಿನ ಸಾಧಕನು ತನ್ನ ಕುಲದೇವತೆಯ ನಾಮಜಪವನ್ನು ಆದಷ್ಟು ಹೆಚ್ಚು ಮಾಡಬೇಕು. (ಕುಲದೇವತೆಯ ನಾಮದ ಮಹತ್ವ ಸಾಧನೆಯ ಬಗೆಗಿನ ವಿವೇಚನೆಯನ್ನು ಸನಾತನದ ಗ್ರಂಥ 'ಅಧ್ಯಾತ್ಮದ ಪ್ರಾಸ್ತಾವಿಕ ವಿವೇಚನೆ'ಯಲ್ಲಿ ಮಾಡಲಾಗಿದೆ.) ಮಧ್ಯಮ ತೊಂದರೆಯಿದ್ದರೆ ಕುಲದೇವತೆಯ ನಾಮಜಪದ ಜೊತೆಗೆ 'ಶ್ರೀ ಗುರುದೇವ ದತ್ತ।' ಈ ನಾಮಜಪವನ್ನು ಪ್ರತಿದಿನ 2 ರಿಂದ 4 ಗಂಟೆಗಳಷ್ಟು ಮಾಡಬೇಕು. ಹಾಗೆಯೇ ಪ್ರತೀ ಗುರುವಾರ ದತ್ತನ ದೇವಸ್ಥಾನಕ್ಕೆ ಹೋಗಿ ಏಳು ಪ್ರದಕ್ಷಿಣೆಗಳನ್ನು ಹಾಕಬೇಕು ಮತ್ತು ಕುಳಿತುಕೊಂಡು 1-2 ಮಾಲೆ ನಾಮಜಪವನ್ನು ಒಂದು ವರ್ಷವಾದರೂ ಮಾಡಬೇಕು.

ಅನಂತರ ಮೂರು ಮಾಲೆಗಳಷ್ಟು ನಾಮಜಪವನ್ನು ಮಾಡುತ್ತಿರಬೇಕು. ತೀವ್ರ ತೊಂದರೆಯಿದ್ದರೆ ಕುಲದೇವತೆಯ ನಾಮಜಪದ ಜೊತೆಗೆ ಈ ನಾಮಜಪವನ್ನು ಪ್ರತಿದಿನ 4 ರಿಂದ 6 ಗಂಟೆ ಮಾಡಬೇಕು.

ಯಾವುದಾದರೂ ಜ್ಯೋತಿರ್ಲಿಂಗವಿರುವ ಸ್ಥಳಕ್ಕೆ ಹೋಗಿ ನಾರಾಯಣಬಲಿ, ನಾಗಬಲಿ, ತ್ರಿಪಿಂಡಿ ಶ್ರಾದ್ಧ, ಕಾಲಸರ್ಪಶಾಂತಿ ಇವುಗಳಂತಹ ವಿಧಿಗಳನ್ನು ಮಾಡಬೇಕು. ಅದರ ಜೊತೆಗೆ ಯಾವುದಾದರೂ ದತ್ತಕ್ಷೇತ್ರದಲ್ಲಿ ಉಳಿದುಕೊಂಡು ಸಾಧನೆ ಮಾಡಬೇಕು ಅಥವಾ ಸಂತರ ಸೇವೆಯನ್ನು ಮಾಡಿ ಅವರ ಆಶೀರ್ವಾದವನ್ನು ಪಡೆದುಕೊಳ್ಳಬೇಕು.

ಇಪಿತೃಪಕ್ಷದಲ್ಲಿ ದತ್ತನ ನಾಮಜಪ ಮಾಡುವುದರಿಂದ ಪಿತೃಗಳಿಗೆ ಬೇಗನೇ ಗತಿ ಸಿಗುತ್ತದೆ; ಆದುದರಿಂದ ಆ ಸಮಯದಲ್ಲಿ ಪ್ರತಿದಿನ ಕನಿಷ್ಟಪಕ್ಷ 6 ಗಂಟೆ (72 ಮಾಲೆ) ದತ್ತನ ನಾಮಜಪ ಮಾಡಬೇಕು. ಮನೆಯಲ್ಲಿನ ವ್ಯಕ್ತಿಗಳು ಮೇಲೆ ನೀಡಿದಂತೆ ತಮ್ಮ ತಮ್ಮ ತೊಂದರೆಯ ತೀವ್ರತೆಗನುಸಾರ ಪ್ರತಿದಿನ ದತ್ತನ ನಾಮಜಪವನ್ನು ಕನಿಷ್ಠಪಕ್ಷ ಅಷ್ಟನ್ನಾದರೂ ಮಾಡಬೇಕು ಮತ್ತು ಹೆಚ್ಚೆಂದರೆ ಸತತವಾಗಿ ಮಾಡಬೇಕು.

ದತ್ತನ ನಾಮಜಪದಿಂದ ಅತೃಪ್ತ ಪೂರ್ವಜರ ತೊಂದರೆಗಳಿಂದ ಹೇಗೆ ರಕ್ಷಣೆಯಾಗುತ್ತದೆ

**ಅತೃಪ್ತ ಪೂರ್ವಜರಿಗೆ ಗತಿ ಸಿಗುವುದು**

**ಬಹುತೇಕ ಜನರು ಸಾಧನೆಯನ್ನು ಮಾಡದಿರುವುದರಿಂದ ಮಾಯೆಯಲ್ಲಿಯೇ ಸಿಲುಕಿಕೊಂಡಿರುತ್ತಾರೆ. ಇದರಿಂದ ಮೃತ್ಯುವಿನ ನಂತರ ಇಂತಹವರ ಲಿಂಗದೇಹಗಳು ಅತೃಪ್ತವಾಗಿರುತ್ತವೆ. ಇಂತಹ ಅತೃಪ್ತ ಲಿಂಗದೇಹಗಳು ಮರ್ತ್ಯಲೋಕದಲ್ಲಿ ಸಿಕ್ಕಿಕೊಳ್ಳುತ್ತವೆ. (ಮರ್ತ್ಯಲೋಕವು ಭೂಲೋಕ ಮತ್ತು ಭುವರ್ಲೋಕಗಳ ಮಧ್ಯದಲ್ಲಿದೆ.) ದತ್ತನ ನಾಮಜಪದಿಂದ ಮರ್ತ್ಯಲೋಕದಲ್ಲಿ ಸಿಲುಕಿಕೊಂಡ ಅತೃಪ್ತ ಪೂರ್ವಜರಿಗೆ ಗತಿ ಸಿಗುತ್ತದೆ. ಇದರಿಂದ ಮುಂದೆ ಅವರು ತಮ್ಮ ಕರ್ಮಗಳಿನುಸಾರ ಮುಂದು ಮುಂದಿನ ಲೋಕಕ್ಕೆ ಹೋಗುವುದರಿಂದ ಸಹಜವಾಗಿಯೇ ಅವರಿಂದಾಗುವ ತೊಂದರೆಗಳ ಪ್ರಮಾಣವು ಕಡಿಮೆಯಾಗುತ್ತದೆ.**

# ಶಾಂತಿ, ಸೌಹಾರ್ದತೆಯಿಂದ ಮೆರವಣಿಗೆ ಆಯೋಜಿಸಲು ಡಿಸಿ ಸೂಚನೆ

## ಸೆ.28ರಂದು ಹಿಂದೂ ಮಹಾ ಗಣಪತಿ ವಿಸರ್ಜನೆ ಹಾಗೂ ಶೋಭಾಯಾತ್ರೆ, 3 ಲಕ್ಷ ಜನ ಭಾಗವಹಿಸುವ ನಿರೀಕ್ಷೆ

• ಉದಯವಾಹಿನಿ, ಚಿತ್ರದುರ್ಗ

ಸೆ.28 ರಂದು ನಗರದಲ್ಲಿ ನಡೆಯಲಿರುವ ಹಿಂದೂ ಮಹಾ ಗಣಪತಿ ವಿಸರ್ಜನಾ ಮೆರವಣಿಗೆ ಹಾಗೂ ಶೋಭಾ ಯಾತ್ರೆಯನ್ನು ಶಾಂತಿ ಹಾಗೂ ಸೌಹಾರ್ದತೆಯಿಂದ ನಡೆಸುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹಿಂದೂ ಮಹಾ ಗಣಪತಿ ಪ್ರತಿಷ್ಠಾಪನಾ ಸಮಿತಿ ಸದಸ್ಯರಗೆ ಸೂಚನೆ ನೀಡಿದರು. ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಈ ಕುರಿತು ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಹಿಂದೂ ಮಹಾ ಗಣಪತಿ ಪ್ರತಿಷ್ಠಾಪನಾ ಸಮಿತಿ ಸದಸ್ಯರೊಂದಿಗೆ ಸಭೆ ನಡೆಸಿ ಅವರು ಮಾತನಾಡಿದರು.

ಗಣಪತಿ ವಿಸರ್ಜನಾ ಮೆರವಣಿಗೆ ಹಾಗೂ ಶೋಭಾಯಾತ್ರೆಗೆ ಜಿಲ್ಲೆ ಸೇರಿದಂತೆ ಹೊರ ರಾಜ್ಯ ಹಾಗೂ ರಾಜ್ಯದ ವಿವಿಧ ಜಿಲ್ಲೆಗಳಿಂದ ಸುಮಾರು 3 ಲಕ್ಷ ಜನ ಭಾಗವಹಿಸುವ ನಿರೀಕ್ಷೆಯಿದೆ. ಶಾಂತಿ ಹಾಗೂ ಸುವ್ಯವಸ್ಥೆಯಿಂದ ಮೆರವಣಿಗೆ ನಡೆಯಲು ಅನುವಾಗುವಂತೆ ಪೊಲೀಸ್ ಇಲಾಖೆಯಿಂದ ಈಗಾಗಲೇ ಸೂಕ್ತ ಬಂದೋಬಸ್ತ್ ಕ್ರಮ ಕೈಗೊಳ್ಳಲಾಗಿದೆ.


ಉದಯವಾಹಿನಿ ಚಿತ್ರ

**81 ಕಡೆ ಸಿಸಿ ಟಿವಿ ಕ್ಯಾಮೆರಾ**

ಸಂಘಟಕರು ಬೆಳಗ್ಗೆ 11 ಗಂಟೆಗೆ ಸರಿಯಾಗಿ ಮೆರವಣಿಗೆಯನ್ನು ಪ್ರಾರಂಭಿಸಿ ರಾತ್ರಿ 9 ಗಂಟೆಯ ಒಳಗೆ ಮೆರವಣಿಗೆ ಮುಕ್ತಾಯಗೊಳ್ಳುವಂತೆ ನೋಡಿಕೊಳ್ಳಬೇಕು ಎಂದರು. ನಗರದ ಬಿ.ಡಿ ರಸ್ತೆ ಹಾಗೂ ಹೊಳಲ್ಕೆರೆ ರಸ್ತೆಯಲ್ಲಿ ಸುಗಮವಾಗಿ ಮೆರವಣಿಗೆ ಹಾದು ಹೋಗುವಂತೆ ನಗರಸಭೆಯಿಂದ ಬ್ಯಾರಿಕೇಡ್‌ಗಳನ್ನು ಅಳವಡಿಸಬೇಕು. ಪೊಲೀಸರು ವೀಕ್ಷಣೆಗೆ ಅನುಕೂಲವಾಗುವಂತೆ ವಾಚ್‌ಟವರ್ ನಿರ್ಮಿಸಬೇಕು. ಸ್ವಚ್ಛತೆ, ಕುಡಿಯುವ ನೀರು ಹಾಗೂ ಸಂಚಾರಿ ಶೌಚಾಲಯಗಳ ವ್ಯವಸ್ಥೆ ಮಾಡಬೇಕು.

ರಸ್ತೆಯಲ್ಲಿ ತಗ್ಗು ಗುಂಡಿಗಳು ಇದ್ದರೇ, ತಕ್ಷಣ ವೇ ಮುಚ್ಚುವ ಕೆಲಸ ಮಾಡಬೇಕು. ಮೆರವಣಿಗೆ ಸಾಗುವ ರಸ್ತೆ ಹಾಗೂ ಅಸು ಪಾಸಿನ ಸ್ಥಳದಲ್ಲಿ ನಿರ್ಮಾಣ ಹಂತದಲ್ಲಿರುವ ಕಟ್ಟಡಗಳ ಮೇಲೆ ಸಾರ್ವಜನಿಕರು ಹತ್ತಿ ನಿಲ್ಲದಂತೆ ನಿರ್ಬಂಧ ವಿಧಿಸಬೇಕು. ಮೆರವಣಿಗೆ ವೇಳೆ ಹಠಾತ್ ಅನಾರೋಗ್ಯಕ್ಕೆ ತುತ್ತಾದವರನ್ನು ಆರೈಕೆ ಮಾಡಲು ಮೆರವಣಿಗೆ ಸಾಗುವ ಹಾದಿಯಲ್ಲಿ ಸೇಫ್ ಹೌಸ್‌ಗಳನ್ನು ಗುರುತಿಸಬೇಕು. ಆರೋಗ್ಯ ಇಲಾಖೆಯಿಂದ ಜಿಲ್ಲಾ ಆಸ್ಪತ್ರೆಯಲ್ಲಿ ಪ್ರತ್ಯೇಕ ವಾರ್ಡ್‌ಗಳನ್ನು ಮೀಸಲಿರಿಸಿ, ಅಗತ್ಯ ವೈದ್ಯರನ್ನು ನೇಮಿಸಬೇಕು.

> 20 ವಿಡಿಯೋಗ್ರಾಫರ್‌ಗಳು ಮೆರವಣಿಗೆ ಚಿತ್ರೀಕರಣವನ್ನು ಮಾಡಲಿದ್ದಾರೆ. 9 ಚೆಕ್ ಪೋಸ್ಟ್‌ಗಳನ್ನು ನಿರ್ಮಿಸಲಾಗುವುದು. ಪಟಾಕಿ ಬಳಕೆಗೆ ಅವಕಾಶವಿಲ್ಲ. ಮೆರವಣಿಗೆಯಲ್ಲಿ ಡಿಜೆ ಬಳಸಲು ಪೊಲೀಸ್ ಇಲಾಖೆ ನೀಡುವ ಮಾರ್ಗಸೂಚಿಗಳನ್ನು ತಪ್ಪದೇ ಪಾಲಿಸಬೇಕು. ಹೊರ ಜಿಲ್ಲೆಗಳಿಂದ ಆಗಮಿಸುವ ಪೊಲೀಸ್ ಸಿಬ್ಬಂದಿಗೆ ತಂಗಲು ನಗರದ ಹಾಸ್ಟೆಲ್‌ಗಳಲ್ಲಿ ವ್ಯವಸ್ಥೆ ಕಲ್ಪಿಸಲಾಗುವುದು
>
> -ರಂಜೀತ್ ಕುಮಾರ ಬಂಡಾರು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ

**3000 ಪೊಲೀಸ್ ನೇಮಕ**

ಗಣಪತಿ ವಿಸರ್ಜನಾ ಮೆರವಣಿಗೆ ಹಾಗೂ ಶೋಭಾಯಾತ್ರೆ ಬಂದೋಬಸ್ತ್ ಕಾರ್ಯಕ್ಕೆ 14 ಡಿವೈಸ್‌ಪಿ, 33 ಸಿಪಿಐ, 112 ಪಿಎಸ್‌ಐ, 167 ಎಎಸ್‌ಐ, 1997 ಪೊಲೀಸ್ ಕಾನ್ಸ್‌ಟೇಬಲ್, 658 ಗೃಹ ರಕ್ಷಕರು ಸೇರಿ 3000 ಹೆಚ್ಚು ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗುವುದು. ಇದರೊಂದಿಗೆ 15 ಕೆಎಸ್‌ಆರ್‌ಪಿ, 11 ಡಿಎಆರ್, 4 ಕ್ಯೂಆರ್‌ಟಿ ತುಕಡಿಗಳನ್ನು ನಿಯೋಜಿಸಲಾಗುವುದು. 81 ಕಡೆ ಸಿಸಿ ಟಿವಿ ಕ್ಯಾಮೆರಾಗಳನ್ನು ಅಳವಡಿಸಲಾಗುವುದು.

ಮೆರವಣಿಗೆ ಸಾಗುವ ಹಾದಿಯಲ್ಲಿ 4 ಆಂಬ್ಯುಲೆನ್ಸ್‌ಗಳನ್ನು ನಿಯೋಜಿಸಬೇಕು. ಬೆಸ್ಕಾಂ ಅಧಿಕಾರಿಗಳು ಮೆರವಣಿಗೆ ವೇಳೆ ವಿದ್ಯುತ್ ಅಡಚಣೆಯಾಗದಂತೆ ಕ್ರಮ ಕೈಗೊಳ್ಳಬೇಕು. ಮೆರವಣಿಗೆ ಸಾಗುವ ಹಾದಿಯಲ್ಲಿ ವಿದ್ಯುತ್ ತಂತಿಗಳನ್ನು ಎತ್ತರಿಸುವಂತೆ ಜಿಲ್ಲಾಧಿಕಾರಿ ಟಿ.ವೆಂಕ ಟೇಶ್ ಸೂಚನೆ ನೀಡಿದರು.

ಸೆ.27 ಹಾಗೂ 28 ರಂದು ಜಿಲ್ಲಾದ್ಯಂತ ಮದ್ಯ ಮಾರಾಟ ನಿಷೇಧಕ್ಕೆ ಆದೇಶಿಸುವಂತೆ ಈಗಾಗಲೇ ಜಿಲ್ಲಾಧಿಕಾರಿಗಳ ಕಚೇರಿಗೆ ಕೋರಿಕೆ ಸಲ್ಲಿಸಲಾಗಿದೆ. ಶೋಭಾಯಾತ್ರೆಯ ದಿನ ಬಿ.ಡಿ.ರಸ್ತೆಯಲ್ಲಿ ವಾಹನಗಳ ಓಡಾಟ ನಿರ್ಬಂಧಿಸಿ, ಬದಲಿ ಮಾರ್ಗದಲ್ಲಿ ಬಸ್, ಸಾರ್ವಜನಿಕ ವಾಹನಗಳ ಮಾರ್ಗ ಬದಲಾವಣೆ ಆದೇಶ ಹೊರಡಿಸಲು ಕೋರಿಕೆ ಸಲ್ಲಿಸುವುದಾಗಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜೀತ್ ಕುಮಾರ ಬಂಡಾರು ಹೇಳಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಸ್.ಜೆ.ಕುಮಾರಸ್ವಾಮಿ, ಅಬಕಾರಿ ಉಪನಿರೀಕ್ಷಕ ಮಾದೇಶ್, ಉಪವಿಭಾಗಧಿಕಾರಿ ಎಂ.ಕಾರ್ತಿಕ್, ಹಿಂದೂ ಮಹಾ ಗಣಪತಿ ಪ್ರತಿಷ್ಠಾಪನಾ ಸಮಿತಿಯ ಬದ್ರಿನಾಥ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಸಮಿತಿ ಪದಾಧಿಕಾರಿಗಳು ಇದ್ದರು.

# ಏತ ನೀರಾವರಿ ಯೋಜನೆ ಉದ್ಘಾಟಿಸಿ ಚಾಲನೆ ನೀಡುವಂತೆ ಸಿಎಂಗೆ ಮನವಿ

• ಉದಯವಾಹಿನಿ,ಚಿಂಚೋಳಿ

ಕಲಬುರ್ಗಿಯಲ್ಲಿ ನಡೆದಿರುವ 19ನೇ ಸಚಿವ ಸಂ ಪುಟದ ಸಭೆಗೆ ಆಗಮಿಸಿದ ರಾಜ್ಯದ ಮುಖ್ಯ ಮಂತ್ರಿಗಳಾದ ಸಿದ್ದರಾಮಯ್ಯನವರಿಗೆ ಕೆಳದಂಡೆ ಮುಲ್ಲಾಮಾರಿ ಯೋಜನೆಯ ಐನಾಪೂರ ಏತ ನೀರಾವರಿ ಯೋಜನೆಗೆ ಈಗಾಗಲೇ ಕಾಂಗ್ರೆಸ್ ಸರ್ಕಾರದಲ್ಲಿ 10.06ಕೋಟಿ ರೂಪಾಯಿ ಅನುಮೋದನೆ ನೀಡಲಾಗಿದ್ದು ಶೀಘ್ರದಲ್ಲೇ ಐನಾಪೂರ ಏತ ನೀರಾವರಿ ಯೋಜನೆ ತಮ್ಮ ಅಮೃತ ಹಸ್ತದಿಂದ ಉದ್ಘಾಟಿಸಿ ಚಾಲನೆ ನೀಡಬೇಕು ಎಂದು ಐನಾಪೂರ ಮುಲ್ಲಾಮಾರಿ ಏತ ನೀರಾವರಿ ಅಭಿವೃದ್ಧಿ ಸಮಿತಿ ಅಧ್ಯಕ್ಷ ಶಿವಾನಂದ ಮಾಲಿ ಪಾಟೀಲ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಮನವಿಪತ್ರ ಸಲ್ಲಿಸಿದರು.

ಈ ಭಾಗದ ಎರಡು ದಶಕಗಳ ಕಾಲ ರೈತರು ಪ್ರತಿಭಟನೆ, ಪಾದಯಾತ್ರೆ, ಪತ್ರ ಚಳುವಳಿ, ಧರಣಿ ಸತ್ಯಾಗ್ರಹ, ಉಪವಾಸ ಸತ್ಯಾಗ್ರಹ ಹೋರಾಟ ನಡೆಸಿದ್ದೇವೆ ಈಗ ಒಂದು ಹಂತಕ್ಕೆ ಈ ಯೋಜನೆ ಬಂದುನಿಂತ್ತಿದೆ, ಯೋಜನೆ ಜಾರಿಗೆ


ಉದಯವಾಹಿನಿ ಚಿತ್ರ

ನಿರೀಕ್ಷೆಯಲ್ಲಿರುವ ರೈತರು ಐನಾಪೂರ ಏತ ನೀರಾವರಿ ಯೋಜನೆ ಜಾರಿಗೆ ಮಾಡಿ ರೈತರ ನೆರವಿಗೆ ಧಾವಿಸಬೇಕು.

ಈಗಿನ ಸರ್ಕಾರ ಐನಾಪೂರ ಭಾಗದ ರೈತರ ಬಂಜಾರು ಭೂಮಿಗಳಿಗೆ ನೀರಾವರಿ ಭೂಮಿಯಾಗಿ ಪರಿವರ್ತನೆಗೊಳಿಸಿ ರೈತರ ಬಾಳು ಹಸುನಗೊಳಿಸಲು ಏತ ನೀರಾವರಿ ಯೋಜನೆ ಜಾರಿಗೆಗೊಳಿಸಬೇಕು. ಕಾಂಗ್ರೆಸ್ ಸರ್ಕಾರದಲ್ಲಿ ಈ ಭಾಗದ ಐನಾಪೂರ ಏತ ನೀರಾವರಿ ಯೋಜನೆ ಜಾರಿಗೆ ಬರುತ್ತದೆ ಎಂಬುವುದು ರೈತರ ಆಸೆಯಾಗಿದೆ,ಕಾರಣ ಯೋಜನೆಗೆ ಬೇಕಾಗುವ ಸಂಪೂರ್ಣ ಅನುದಾನವನ್ನು ಘೋಷಿಸಿ ತಾವು ಸೇರಿದಂತೆ ಮುಖ್ಯಮಂತ್ರಿಗಳು ಉಪ ಮುಖ್ಯಮಂತ್ರಿಗಳು ಸೇರಿದಂತೆ ಸಚಿವ ಸಂಪುಟ ಸಚಿವರು ಆಗಮಿಸಿ ಯೋಜನೆಗೆ ಚಾಲನೆ ನೀಡಿ ಈ ಭಾಗದ ರೈತರ ಬಹುದಿನಗಳ ಕನಸು ನನಸು ಮಾಡಬೇಕು ಸದಾ ಈ ಭಾಗದ ರೈತರು ತಮಗೆ ಚಿರಋಣಿಯಾಗಿ ರುತ್ತೇವೆ ಎಂದು ಮನವಿ ಮಾಡಿದರು.

> ರೈತರ ನಿರಂತರವಾಗಿ ಹೋರಾಟದ ಫಲವಾಗಿ ಕೆಳದಂಡೆ ಮುಲ್ಲಾಮಾರಿ ಜಲಾಶಯದಿಂದ ಐನಾಪೂರ ವಲಯದ ಏತ ನೀರಾವರಿ ಯೋಜನೆ ಅನುಷ್ಠಾನಕ್ಕಾಗಿ ಈಗಾಗಲೇ ಬೇಕಾಗಿರುವ 225ಕೋಟಿ ರೂ. ಕ್ರಿಯಾಯೋಜನೆ ನೀಲಿ ನಕ್ಷೆ ಹಾಗೂ ಸರ್ಕಾರದ ಅನುಮೋದನೆ ದೊರಕಿದ್ದು ರೂಪರೇಷಗಳು ಸಿದ್ದಗೊಂಡಿದ್ದು ಯೋಜನೆ ಜಾರಿಗಾಗಿ ಈಗಾಗಲೇ ಕಾಂಗ್ರೆಸ್ ಆಡಳಿತದಲ್ಲಿ 10. 06 ಕೋಟಿ ರೂಪಾಯಿ ಮಂಜೂರುಗೊಳಿಸಲಾಗಿದೆ.

# ಬಿರ್ಮೆರೆಗುಂಡಿ ಸೇತುವೆಗೆ 1.31 ಕೋಟಿ ರೂ.

• ಉದಯವಾಹಿನಿ, ಕಡಬ

ಕೊಂಬಾರು ಗ್ರಾ.ಪಂ. ವ್ಯಾಪ್ತಿಯ ಮಣಿಭಾಂಡ (ಸಿರಿಬಾಗಿಲು ಸರಕಾರಿ ಶಾಲೆಯಿಂದ), ಪೆರುಂದೋಡಿ (ಮಲೆಮಾಕಿ), ಬಿರ್ಮೆರೆಗುಂಡಿ-ಕಟ್ಟೆ, ಕೋಟೆಗುಡ್ಡ ಸಂಪರ್ಕ ರಸ್ತೆ ಹಾಗೂ ಬಿರ್ಮೆರೆಗುಂಡಿ ಹೊಳೆಗೆ ಸೇತುವೆ ನಿರ್ಮಾಣಕ್ಕೆ ಹೈಕೋರ್ಟ್ ನಿರ್ದೇಶನದ ಮೇರೆಗೆ ಸರಕಾರದಿಂದ 1 ಕೋಟಿ 31 ಲಕ್ಷದ 50 ಸಾವಿರ ರೂ. ಹಣ ಬಿಡುಗಡೆಯಾಗಿದೆ. ಕೊಂಬಾರು ಗ್ರಾ.ಪಂ. ವ್ಯಾಪ್ತಿಯ ಸೇತುವೆಗಳ ನಿರ್ಮಾಣಕ್ಕೆ ನ್ಯಾಯಾಲಯದ ನಿರ್ದೇಶನದಲ್ಲಿ ಅನುದಾನ ಬಿಡುಗಡೆಯಾಗಿರುವ ಎರಡನೇ ಪ್ರಕರಣ ಇದಾಗಿದೆ.

ಮಣಿಭಾಂಡ-ಪೆರುಂದೋಡಿ, ಬಿರ್ಮೆರೆಗುಂಡಿ, ಕಟ್ಟೆ, ಕೋಟೆಗುಡ್ಡೆ ಸಂಪರ್ಕ ರಸ್ತೆಗೆ ರೂ. 81.50 ಲಕ್ಷ ರೂ.ಅನುದಾನ ಹಾಗೂ ಬಿರ್ಮೆರೆಗುಂಡಿ ಸೇತುವೆ ರಚನೆಗೆ ರೂ. 50 ಲಕ್ಷ ರೂ.ಅನುದಾನ ಮಂಜೂರುಗೊಂಡಿದೆ. ಈ ಬಗ್ಗೆ ಸ್ಥಳೀಯರಾದ ಗುಣವಂತ ಕಟ್ಟೆ ಹಾಗೂ ಮಂಜುನಾಥ ಕಟ್ಟೆ ಅವರು ಸ್ಥಳೀಯ ನಿವಾಸಿ ಹೈಕೋರ್ಟ್‌ನಲ್ಲಿ ನ್ಯಾಯವಾದಿಯಾಗಿರುವ ಪ್ರವೀಣ್ ಕುಮಾರ್ ಕಟ್ಟೆ ಅವರ ಮೂಲಕ ಹೈಕೋರ್ಟ್


ಉದಯವಾಹಿನಿ ಚಿತ್ರ

**ಅನುದಾನ ಮಂಜೂರು**

ಸುಮಾರು 1 ವರ್ಷಗಳ ಕಾನೂನು ಹೋರಾಟದ ಬಳಿಕ ಹೈಕೋರ್ಟ್ ಸರಕಾರಕ್ಕೆ ನೋಟಿಸ್ ನೀಡಿದ್ದು, ಆ ಹಿನ್ನಲೆಯಲ್ಲಿ ಸರಕಾರ ಕ್ರಿಯಾಯೋಜನೆ ತಯಾರಿಸಿ ಸಮಸ್ಯೆ ನ್ಯಾಯಾಲಯದಲ್ಲಿ ಮುಂದುವರಿಯದಂತೆ ನೋಡಿಕೊಂಡಿದೆ. ಜಿ.ಪಂ. ಎಂಜಿನಿಯರ್ ಅಂದಾಜುಪಟ್ಟಿ ತಯಾರಿಸಿ ಸರಕಾರಕ್ಕೆ ವರದಿ ಸಲ್ಲಿಸಿದ್ದರು. ಆ ಪ್ರಕಾರ ಸರಕಾರ ಇದೀಗ ಅನುದಾನ ಮಂಜೂರುಗೊಳಿಸಿದೆ.

# ವಿದ್ಯುತ್ ಸಂಪರ್ಕ ಕಡಿತಗೊಳಿಸುತ್ತಿರುವ ಮೆಸ್ಕಾಂ ನೀತಿ ಖಂಡನೆ

• ಉದಯವಾಹಿನಿ, ಸಾಗರ

ನಗರ ಹಾಗೂ ಗ್ರಾಮಾಂತರ ಪ್ರದೇಶಗಳಲ್ಲಿ ವಿದ್ಯುತ್ ಬಿಲ್ ಪಾವತಿ ಮಾಡಿಲ್ಲವೆಂದು ವಿದ್ಯುತ್ ಸಂಪರ್ಕ ಕಡಿತಗೊಳಿಸುತ್ತಿರುವ ಮೆಸ್ಕಾಂ ನೀತಿ ಖಂಡಿಸಿ ಸೆ.19ರ ಗುರುವಾರ ಡಾ. ಎಚ್.ಗಣಪತಿಯಪ್ಪ ಸ್ಥಾಪಿತ ರೈತ ಸಂಘದ ವತಿಯಿಂದ ಮೆಸ್ಕಾಂ ಕಚೇರಿ ಎದುರು ಪ್ರತಿಭಟನೆ ನಡೆಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ರೈತ ಸಂಘದ ಜಿಲ್ಲಾಧ್ಯಕ್ಷ ದಿನೇಶ್ ಶಿರವಾಳ, ನಗರ ಹಾಗೂ ಗ್ರಾಮಾಂತರ ಪ್ರದೇಶಗಳಲ್ಲಿ ಮೆಸ್ಕಾಂ ದಬ್ಬಾಳಿಕೆ ಹೆಚ್ಚಾಗುತ್ತಿದ್ದು ವಿದ್ಯುತ್ ಬಳಕೆ ಗ್ರಾಹಕರು ತೀವ್ರ ಸಂಕಷ್ಟಕ್ಕೆ ಸಿಲುಕುವ ಸ್ಥಿತಿ ನಿರ್ಮಾಣವಾಗಿದೆ. ಮೆಸ್ಕಾಂ ಅಧಿಕಾರಿಗಳು ತಮ್ಮ ಸಿಬ್ಬಂದಿಗಳನ್ನು ಬಳಸಿಕೊಂಡು ವಿದ್ಯುತ್ ಬಿಲ್ ವಸೂಲಿ ನೆಪವೊಡ್ಡಿ ರೈತರಿಗೆ, ಸಣ್ಣಪುಟ್ಟ ವ್ಯಾಪಾರಿಗಳಿಗೆ, ಜನರ ಮನೆ ಅಂಗಡಿಗಳ ವಿದ್ಯುತ್ ಸಂಪರ್ಕ ಕಡಿತಗೊಳಿಸಿ ತೊಂದರೆ ಕೊಡುತ್ತಿದ್ದಾರೆ. ಜನರು ಬಾಕಿ ಬಿಲ್ ಪಾವತಿ ಮಾಡಿದ್ದಾಗ್ಯೂ 5-6 ದಿನ ಕಳೆದರೂ ಪುನರ್ ಸಂಪರ್ಕ ಕೊಡದೆ ಸತಾಯಿಸುತ್ತಿದ್ದಾರೆ ಎಂದು ದೂರಿದರು.


ಉದಯವಾಹಿನಿ ಚಿತ್ರ

ಈ ಬಗ್ಗೆ ಅಧಿಕಾರಿಗಳನ್ನು ಕೇಳಿದರೆ ಉದ್ದಟತನದ ಉತ್ತರ ನೀಡುತ್ತಿದ್ದಾರೆ.

ನಾವು ವಿದ್ಯುತ್‌ಗಾಗಿ ಸರ್ವಸ್ವವನ್ನು ಕಳೆದುಕೊಂಡು ಬೀದಿಗೆ ಬಂದಿದ್ದೇವೆ. ಮೆಸ್ಕಾಂ ಅಧಿಕಾರಿಗಳು ನೂರು ರೂಪಾಯಿ ಬಾಕಿ ಇದ್ದರೂ ವಿದ್ಯುತ್ ಸಂಪರ್ಕ ಕಡಿತ ಮಾಡುತ್ತಿದ್ದಾರೆ. ಜಿಲ್ಲೆಯ ಜನಪ್ರತಿನಿಧಿಗಳಿಗೆ ಮೆಸ್ಕಾಂ ದೌರ್ಜನ್ಯ ಕಾಣಿಸುತ್ತಿಲ್ಲವೇ ಎಂದು ಪ್ರಶ್ನಿಸಿದ ಅವರು ನಮ್ಮ ತಾಲ್ಲೂಕಿಗೆ ದಿನದ 24 ಗಂಟೆ ವಿದ್ಯುತ್ ನೀಡಬೇಕು. ರೈತರು ಮತ್ತು ಗ್ರಾಮಾಂತರ ಪ್ರದೇಶಗಳ ರೈತರಿಗೆ, ಜನರಿಗೆ ಲೋಡ್‌ಶೆಡ್ಡಿಂಗ್ ಇಲ್ಲದಂತೆ ಗುಣಮಟ್ಟದ ವಿದ್ಯುತ್ ನೀಡಬೇಕು ಎಂದು ಒತ್ತಾಯಿಸಿ ಅಹೋರಾತ್ರಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

# ತೇವಾಂಶ ಕೊರತೆ: ಬಾಡುತ್ತಿದೆ ಶೇಂಗಾ ಬೆಳೆ

• ಉದಯವಾಹಿನಿ, ಧರ್ಮಪುರ

ಮಳೆ ಕೊರತೆಯಿಂದಾಗಿ ತೇವಾಂಶ ಮಾಯವಾಗಿದ್ದು ಶೇಂಗಾ ಬೆಳೆ ಬಾಡುತ್ತಿದೆ. ಶೇಂಗಾ ಬಿತ್ತನೆ ಮಾಡಿ ಉತ್ತಮ ಇಳುವರಿಯ ನಿರೀಕ್ಷೆಯಲ್ಲಿದ್ದ ರೈತರು ಆತಂಕಗೊಂಡಿದ್ದಾರೆ. ಹಿರಿಯೂರು ತಾಲ್ಲೂಕಿನಲ್ಲಿ 37,915 ಹೆಕ್ಟೇರ್ ಶೇಂಗಾ ಬಿತ್ತನೆಯ ಪ್ರದೇಶವಿದ್ದು, ಈ ಪೈಕಿ 36,906 ಹೆಕ್ಟೇರ್‌ನಲ್ಲಿ ಬಿತ್ತನೆಯಾಗಿದೆ.

ಶೇ 97ರಷ್ಟು ಭೂಮಿಯಲ್ಲಿ ಶೇಂಗಾ, ಸಾವೆ, ಅಕ್ಕಡಿ ಬೆಳೆ ಮತ್ತು ಸಿರಿ ಧಾನ್ಯಗಳನ್ನು ರೈತರು ಬಿತ್ತನೆ ಮಾಡಿದ್ದಾರೆ. ಜೂನ್ ತಿಂಗಳಿನಲ್ಲಿ ಉತ್ತಮ ಮಳೆಯಾದ ಕಾರಣ ಶೇ 65ರಷ್ಟು ಬಿತ್ತನೆ ಕಾರ್ಯವಾಗಿತ್ತು. ಜುಲೈ ತಿಂಗಳಿನಲ್ಲಿ ಶೇ 32ರಷ್ಟು ಶೇಂಗಾ ಬಿತ್ತನೆ ಮಾಡಿದ್ದರು. ಈಗ ಕಾಯಿಕಟ್ಟುವ ಹಂತದಲ್ಲಿ ಬೆಳೆಗೆ ತೇವಾಂಶದ ಕೊರತೆಯುಂಟಾಗಿದ್ದು ರೈತರು ಚಿಂತಾಕ್ರಾಂತರಾಗಿದ್ದಾರೆ.

ಅಂದಾಜು 11,000 ಹೆಕ್ಟೇರ್‌ನಲ್ಲಿ ಶೇಂಗಾಗೆ ಬೆಳೆ ಹಾನಿಯ ಭೀತಿ ಎದುರಾಗಿದೆ.


ಉದಯವಾಹಿನಿ ಚಿತ್ರ

ಆರಳೀಕೆರೆ, ಹರಿಯಬ್ಬೆ, ಸೂಗೂರು, ಹಲಗಲದ್ದಿ, ಮದ್ದಿಹಳ್ಳಿ, ಕಣಜನಹಳ್ಳಿ, ಚಿಲ್ಲಹಳ್ಳಿ, ಧರ್ಮಪುರ, ರಂಗೇನಹಳ್ಳಿ ಭಾಗಗಳಲ್ಲಿ ಶೇಂಗಾ ಗಿಡಕ್ಕೆ ಸುರುಳಿ ಪೂಚಿ (ಬೆಂಕಿ) ರೋಗ ಕಾಣಿಸಿಕೊಂಡಿದ್ದು, ಗಿಡಗಳಲ್ಲಿನ ಎಲೆಗಳು ಸಂಪೂರ್ಣವಾಗಿ ಒಣಗಿ ಉದುರುತ್ತಿವೆ. ಹೊಸಕೆರೆ, ಬೆಟ್ಟಗೊಂಡನಹಳ್ಳಿ, ಶ್ರವಣ ಗೆರೆ, ಸಕ್ಕರ, ಇಕ್ಕನೂರು, ಹೂವಿನಹೊಳೆ, ಈಶ್ವರಗೆರೆ, ದೇವರಕೊಟ್ಟ, ಕಂಬತ್ತನಹಳ್ಳಿ ಗ್ರಾಮಗಳಲ್ಲಿ ಬೂದಿ ರೋಗ ಕಾಣಿಸಿಕೊಂಡಿದ್ದು, ಕಾಯಿ ಕಪ್ಪಾಗಿ ಭೂಮಿಯಲ್ಲಿಯೇ ಕೊಳೆಯುತ್ತಿದೆ.

> ಜುಲೈ ತಿಂಗಳಿನಲ್ಲಿ ಬಿತ್ತನೆ ಮಾಡಿದ ಶೇಂಗಾ ಗಿಡದಲ್ಲಿ ಮಳೆಯ ಕೊರತೆಯಿಂದ ಗಿಡದಲ್ಲಿ ಹೂಡು ಇಳಿಯದೇ ಗಿಡಗಳು ಒಣಗುತ್ತಿವೆ. ಎಡೆಕುಂಟೆ ಕಾರ್ಯಮುಗಿಸಿ, ಕಳೆ ತೆಗೆಸುವವರೆಗೆ ಮಳೆಯ ಕೊರತೆ ಇರಲಿಲ್ಲ. ಇದರಿಂದ ಶೇಂಗಾ ಗಿಡಗಳು ಸಮೃದ್ಧವಾಗಿ ಬೆಳೆದಿದ್ದವು. ಆದರೆ, ನೀರುಗಾಯಿ ಆಗುವ ಹಂತದಲ್ಲಿ ಮಳೆ ಅತ್ಯವಶ್ಯಕವಾಗಿ ಬೇಕಾಗಿದೆ'
>
> -ಗಿರೀಶ್, ರೈತ

# ಆಕ್ರಮಣಕಾರಿ ಧೋರಣೆ: ಬೆಂಗಳೂರು ಗಣೇಶ, ಮಣಿಕಂಠನಿಗೆ ಗಡಿಪಾರು ಶಿಕ್ಷೆ

• ಉದಯವಾಹಿನಿ, ಶಿವಮೊಗ್ಗ



ಮಾವುತ, ಕಾವಾಡಿಯ ಮಾತು ಕೇಳದೇ ಸದಾ ಆಕ್ರಮಣಕಾರಿ ಧೋರಣೆ ತೋರುತ್ತಿದ್ದ ಇಲ್ಲಿನ ಸಕ್ರೆ ಬೈಲು ಕ್ಯಾಂಪಿನ ಆನೆಗಳಾದ ಬೆಂಗಳೂರು ಗಣೇಶ ಹಾಗೂ ಮಣಿಕಂಠ ಗಡಿ ಪಾರು ಶಿಕ್ಷೆಗೆ ಒಳಗಾಗಿವೆ. ಈ ಎರಡೂ ಆನೆಗಳನ್ನು ಕ್ಯಾಂಪಿನಿಂದ ದೂರದಲ್ಲಿ ಕಾಡಿನಲ್ಲಿ ಒಂಟಿಯಾಗಿ ಕಟ್ಟಿ ಹಾಕಲಾಗುತ್ತಿದೆ.

ನಿತ್ಯ ಅಲ್ಲಿಗೇ ಆಹಾರ ಒಯ್ದು ಕೊಡಲಾಗುತ್ತಿದೆ. ಬೆಂಗಳೂರು ಗಣೇಶ ಕಳೆದ 10 ವರ್ಷಗಳಿಗೂ ಹೆಚ್ಚು ಅವಧಿಯಿಂದ ಈ ರೀತಿ ಒಂಟಿ ಜೀವನದ ಶಿಕ್ಷೆಗೆ ಒಳಗಾಗಿದ್ದಾನೆ. ಮಣಿಕಂಠ ಎರಡು ತಿಂಗಳಿನಿಂದ ಕಾಡು ಪಾಲಾಗಿದ್ದಾನೆ. ಬೆಂಗಳೂರಿನ ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನದಲ್ಲಿದ್ದ ಗಣೇಶನನ್ನು (48) ಅಲ್ಲಿ ಪುಂಡಾಟದ ಕಾರಣಕ್ಕೆ 15 ವರ್ಷಗಳ ಹಿಂದೆ ಸಕ್ರೆ ಬೈಲಿಗೆ ತರಲಾಗಿದೆ. ಬೆಂಗಳೂರು ಗಣೇಶನನ್ನು ಐದನೇ ಮೈಲಿಕಲ್ ಬಳಿಯ ಕಾಡಿನಲ್ಲಿ ಉದ್ದನೆಯ ಸರಪಳಿಯಲ್ಲಿ ಬಿಗಿದು ಮರಕ್ಕೆ ಕಟ್ಟಿ ಹಾಕಲಾಗುತ್ತಿದೆ. ಮಾವುತ-ಕಾವಾಡಿ ದೂರದಿಂದಲೇ ಆಹಾರ ಕೊಡುತ್ತಾರೆ. 46 ವರ್ಷದ ಮಣಿಕಂಠನನ್ನು ಚಿಕ್ಕಮಗಳೂರು ಬಳಿಯ ಕಾಡಿನಲ್ಲಿ ಸೆರೆ ಹಿಡಿದು ತರಲಾಗಿದೆ. ಅವನನ್ನು ಅಲ್ಲಿಯೇ ಸಮೀಪದ ಕಾಡಿನಲ್ಲಿ ಕಟ್ಟಿಹಾಕಲಾಗಿದೆ ಎಂದು ಮೂಲಗಳು ತಿಳಿಸಿವೆ. ಈ ಎರಡೂ ಆನೆಗಳು ಮಾವುತ, ಕಾವಾಡಿಯ ಮಾತು ಕೇಳುವುದಿಲ್ಲ. ಮಣಿಕಂಠ ಈಚೆಗೆ ಸಕ್ರೆಬೈಲು ಕ್ಯಾಂಪ್ ಬಳಿ ಕಾವಾಡಿಯನ್ನೇ ಅಟ್ಟಿಸಿಕೊಂಡು ಹೋಗಿದ್ದ. ಸಕ್ರೆಬೈಲಿನ ತುಂಗಾ ಹಿನ್ನೀರಿನಲ್ಲಿ ಸ್ನಾನ ಮಾಡಿಸುವಾಗ ಮತ್ತೊಂದು ಆನೆಯ ಜೊತೆ ಹೊಡೆದಾಟಕ್ಕಿಳಿದು ಅದನ್ನು ಆಳ ನೀರಿಗೆ ತಳ್ಳಿಕೊಂಡು ಹೋಗಿದ್ದ. ಬೆಂಗಳೂರು ಗಣೇಶ ಕೂಡ ಆಕ್ರಮಣಕಾರಿ ಪ್ರವೃತ್ತಿಯವ. ಖೆಡ್ಡಾದಲ್ಲಿ (ಕ್ರಾಲ್) ಸರಿಯಾಗಿ ತರಬೇತಿ ಆಗದ ಕಾರಣ ಅವುಗಳಲ್ಲಿ ಇನ್ನೂ ಕಾಡಿನ ಆಕ್ರಮಣಕಾರಿ ಗುಣ ಹೋಗಿಲ್ಲ. ಕ್ಯಾಂಪಿಗೆ ಪ್ರವಾಸಿಗರು ಬರುವುದರಿಂದ ಅವರ ಮೇಲೆ ದಾಳಿ ಮಾಡಿದರೆ ಸಮಸ್ಯೆ ಆಗಲಿದೆ ಎಂದೂ, ಬೇರೆ ಆನೆಗಳು ಹಾಗೂ ಸಿಬ್ಬಂದಿಯ ಹಿತ ದೃಷ್ಟಿಯಿಂದ ಅವುಗಳನ್ನು ಕ್ಯಾಂಪ್‌ನಿಂದ ಹೊರಗೆ ಕಾಡಿನಲ್ಲಿ ಇಡಲಾಗಿದೆ ಎಂದು ಸಕ್ರೆಬೈಲು ಆನೆ ಕ್ಯಾಂಪಿನ ಅಧಿಕಾರಿಯೊಬ್ಬರು ಹೇಳುತ್ತಾರೆ.

> ಕಾಡಿನಲ್ಲಿ ಒಂಟಿ ಆಗಿ ಕಟ್ಟಿ ಹಾಕಿದ ಸ್ಥಿತಿಯಲ್ಲಿ ಇರುವಾಗ ಬೇರೆ ಕಾಡಾನೆಗಳು ದಾಳಿ ಮಾಡಿದರೆ ಜೀವಕ್ಕೆ ಅಪಾಯ ಆಗಲಿದೆ. ಗಾಯಗೊಂಡರೆ ಚಿಕಿತ್ಸೆ ನೀಡಲು ಕಷ್ಟವಾಗುತ್ತದೆ. ಆ ಎರಡೂ ಆನೆಗಳನ್ನು ಮತ್ತೆ ಸಕ್ರೆಬೈಲು ಕ್ಯಾಂಪಿಗೆ ಕರೆತರಲು ಅರಣ್ಯ ಇಲಾಖೆ ಮುಂದಾಗಲಿ' ಎಂದು ಶಿವಮೊಗ್ಗ ಪ್ರಾಣಿ ದಯಾ ಸಂಘದ ಪದಾಧಿಕಾರಿಯೊಬ್ಬರು ಒತ್ತಾಯಿಸುತ್ತಾರೆ.

# ಟಾರ್ಗೆಟ್ ರಾಜಕಾರಣ ಬಿಡಿ: ಚಲವಾದಿ ಎಚ್ಚರಿಕೆ

• ಉದಯವಾಹಿನಿ, ಹೊಸಪೇಟೆ

ರಾಜ್ಯ ಸರ್ಕಾರ ಟಾರ್ಗೆಟ್ ರಾಜಕಾರಣ ಮಾಡುತ್ತಿದೆ, ಮುನಿರತ್ನ ಬಂಧನ ಪ್ರಕರಣ ಅದಕ್ಕೆ ಸ್ಪಷ್ಟ ನಿದರ್ಶನ, ಜನ ಗಮನಿಸುತ್ತಿದ್ದು, ಸರ್ಕಾರ ತನ್ನ ವರ್ತನೆ ಬದಲಿಸಿಕೊಳ್ಳಬೇಕು ಎಂದು ವಿಧಾನ ಪರಿಷತ್ ವಿರೋ ಪಕ್ಷದ ನಾಯಕ ಚಲವಾದಿ ನಾರಾಯಣ ಸ್ವಾಮಿ ಹೇಳಿದರು.

ಬಿಜೆಪಿಯ ಸದಸ್ಯತ್ವ ಅಭಿಯಾನದ ಪ್ರಗತಿ ಪರಿಶೀಲನೆಗಾಗಿ ಜಿಲ್ಲೆಗೆ ಗುರುವಾರ ಬಂದಿದ್ದ ಅವರು ಇಲ್ಲಿ ಸುದ್ದಿಗೋಷ್ಠಿ ನಡೆಸಿ, ಭ್ರಷ್ಟಾಚಾರದಲ್ಲಿ ಸಂಪೂರ್ಣ ಮುಳುಗಿರುವ ಸರ್ಕಾರ ಜನರ ಗಮನ ಬೇರೆಡೆಗೆ ಸೆಳೆಯಲು ಯತ್ನಿಸುತ್ತಿದೆ, ಇದಕ್ಕೆ ಫಲ ಸಿಗುವುದಿಲ್ಲ ಎಂದರು. ಶಾಸಕ ಮುನಿರತ್ನ ವಿರುದ್ಧ ಆರೋಪ ಬಂದ ತಕ್ಷಣ ಬಂಧಿಸುತ್ತೀರಿ, ಪರಶುರಾಮ ಸಾವು ಸಂಭವಿಸಿ ಎರಡೂವರೆ ತಿಂಗಳು ಕಳೆದರೂ ಶಾಸಕ ಚೆನ್ನಾರೆಡ್ಡಿ ಮತ್ತು ಅವರ ಪುತ್ರನನ್ನು ಬಂಧಿಸುವುದಿಲ್ಲ, ಇದು ಟಾರ್ಗೆಟ್ ರಾಜಕಾರಣದ ಸ್ಪಷ್ಟ ನಿದರ್ಶನ, ಮುನಿರತ್ನ ಬಂಧಿಸಿ ರೀತಿಗಷ್ಟೇ ಪಕ್ಷದ ವಿರೋಧ ಎಂದರು. ಪರಿಶಿಷ್ಟರ ಹಣ ವರ್ಗಾಯಿಸಬೇಡಿ ಎಂದು ಬಿಜೆಪಿ ಹೇಳುತ್ತಲೇ ಬಂದಿತ್ತು, ಮುಖ್ಯಮಂತ್ರಿ ಅವರಿಗೆ ಕೊನೆಗೂ ಅದು ಮನವರಿಕೆಯಾಗಿ ಬುಧವಾರ ತಮ್ಮ ತಪ್ಪನ್ನು ಒಪ್ಪಿಕೊಂಡಿದ್ದಾರೆ. ಇಷ್ಟೇ ಸಾಲದು, ವರ್ಗಾಯಿಸಿದ 25 ಸಾವಿರ ಕೋಟಿಯನ್ನು ಮತ್ತೆ ನೀಡಬೇಕು ಎಂದು ನಾರಾಯಣಸ್ವಾಮಿ ಆಗ್ರಹಿಸಿದರು.

> ಕಾಂಗ್ರೆಸ್ ಸರ್ಕಾರದ ಹಲವು ಹಗರಣಗಳು ಮತ್ತೆ ಮತ್ತೆ ಬೆಳಕಿಗೆ ಬರುತ್ತಲೇ ಇವೆ, ವಾಲ್ಮೀಕಿ ಹಗರಣದಲ್ಲಿ ಎಸ್‌ಐಟಿ ಶಾಸಕರಾದ ನಾಗೇಂದ್ರ, ದದ್ದಲ್ ಅವರಿಗೆ ಕ್ಲೀನ್ ಚಿಟ್ ಕೊಟ್ಟಿತ್ತು. ಆದರೆ ಇ.ಡಿ ತನಿಖೆಯಲ್ಲಿ ನಾಗೇಂದ್ರ ಅವರೇ ಮೊದಲನೇ ಆರೋಪಿ ಎಂಬುದನ್ನು ಕಂಡುಕೊಂಡಿತು. ಹೀಗಾಗಿ ಸಿಬಿಐ ತನಿಖೆ ಆಗಬೇಕು ಎಂಬ ಒತ್ತಾಯವನ್ನು ಬಿಜೆಪಿ ಮಾಡುತ್ತಿದೆ ಎಂದರು.

# ಪಾರ್ಕಿಂಗ್ ಇದ್ದಿದ್ದರೆ ಒಂದಷ್ಟು ವ್ಯಾಪಾರ ನಡೆಸಲು ಸಾಧ್ಯ

## ಹಂಪನಕಟ್ಟೆಯ ಹಳೆ ಬಸ್ ಸ್ಟ್ಯಾಂಡ್ ಎಂದರೆ ಪ್ರಮುಖ ವ್ಯಾಪಾರ ಕೇಂದ್ರ, ಸರ್ವಿಸ್ ಬಸ್‌ಗಳು ಹೊರಡುತ್ತಿದ್ದುದೇ ಇಲ್ಲಿಂದ

• ಉದಯವಾಹಿನಿ, ಮಹಾನಗರ

ನಗರದ ಹಂಪನಕಟ್ಟೆಯ ಹಳೆ ಬಸ್ ಸ್ಟ್ಯಾಂಡ್ ಎಂದರೆ ಪ್ರಮುಖ ವ್ಯಾಪಾರ ಕೇಂದ್ರ. ಅವಳಿ ಜಿಲ್ಲೆಯ ಮೂಲೆ ಮೂಲೆಗೆ ಹೋಗುವ ಸರ್ವಿಸ್ ಬಸ್‌ಗಳು ಹೊರಡುತ್ತಿದ್ದುದೇ ಇಲ್ಲಿಂದ. ಹತ್ತಾರು ಚಿಲ್ಲರೆ ಅಂಗಡಿಗಳು, ಹೂವಿನ ಮಾರುಕಟ್ಟೆ, ಪುಸ್ತಕದ ಅಂಗಡಿಗಳು, ಟ್ರಾವೆಲ್ಸ್ ಕಚೇರಿಗಳು, ಸರ್ವಿಸ್ ಕಾರುಗಳ ಪಾರ್ಕಿಂಗ್‌ನಿಂದ ಪ್ರದೇಶ ಗಿಜಿಗುಡುತ್ತಿತ್ತು.

ಅದೆಷ್ಟೋ ಮಂದಿಗೆ ಅದು ಮೀಟಿಂಗ್ ಪಾಯಿಂಟ್, ಟ್ರೇಡ್ ಮಾರ್ಕ್ ಜಾಗ. ಅಂಥ ಪ್ರದೇಶವೀಗ ಹಾಳುಕೊಂಪೆ. ಇದರಿಂದ ಒಂದು ಕಡೆ ನಗರದ ಸೌಂದರ್ಯಕ್ಕೆ ಕಪ್ಪು ಚುಕ್ಕೆಯಾದರೆ, ಇನ್ನೊಂದು ಕಡೆಯಲ್ಲಿ ನೂರಾರು ಮಂದಿ ಉದ್ಯೋಗ ಕಳೆದುಕೊಳ್ಳುವಂತಾಗಿದೆ. ಸರ್ವಿಸ್ ಬಸ್ ನಿಲ್ದಾಣ ವನ್ನು ಸ್ಟೇಟ್ ಬ್ಯಾಂಕ್ ಕಡೆಗೆ ಸ್ಥಳಾಂತರ ಮಾಡಿದಾಗಲೇ ಈ ಪ್ರದೇಶ ಅರ್ಧ ಕಳೆ ಕಳೆದುಕೊಂಡಿತ್ತು. ಬಳಿಕ ಕಾರುಗಳ ಪಾರ್ಕಿಂಗ್, ವ್ಯಾಪಾರಗಳು ಬಂದು ಜನ ಸಂಚಾರ ಜೋರಾಗಿತ್ತು. ಆದರೆ ಇದೀಗ ಮಲ್ಟಿಲೆವೆಲ್ ಕಾರ್ ಪಾರ್ಕಿಂಗ್ ನಿರ್ಮಾಣಕ್ಕೆ ಶುರು ಮಾಡಿದ ಮೇಲೆ ವಸ್ತುಶಃ ಶ್ಮಶಾನ ಮೌನ. ಸಮಸ್ಯೆಗಳ ಸರಮಾಲೆಯೇ ಎದುರಾಗಿದೆ.


ಉದಯವಾಹಿನಿ ಚಿತ್ರ

**ಪ್ರಮುಖ ವ್ಯಾಪಾರ ಕೇಂದ್ರವೀಗ ಹಾಳು ಕೊಂಪೆ**

ಸುತ್ತಲಿನ ಅಂಗಡಿ- ಮಳಿಗೆಯವರು, ಸಾರ್ವಜನಿಕರು, ವಿದ್ಯಾರ್ಥಿಗಳು, ಚಾಲಕರು, ಬೀದಿಬದಿ ವ್ಯಾಪಾರಿಗಳು ಒಂದಲ್ಲೊಂದು ಸಮಸ್ಯೆಯಿಂದ ಬಳಲುವಂತಾಗಿದೆ. ವ್ಯಾಪಾರಿಗಳಿಗೆ ಗ್ರಾಹಕರಿಲ್ಲದೆ ವ್ಯಾಪಾರವೇ ಇಲ್ಲ. ಒಂದಷ್ಟು ವ್ಯಾಪಾರಿಗಳು ಅಂಗಡಿಗಳನ್ನು ಮುಚ್ಚಿ ಬೇರೆ ಕಡೆಗೆ ತೆರಳಿದ್ದಾರೆ.

ಸಣ್ಣಪುಟ್ಟ ವ್ಯಾಪಾರಿಗಳ ಪರಿಸ್ಥಿತಿ ಹೇಳಲು ಸಾಧ್ಯವಿಲ್ಲದಂತಾಗಿದೆ. ಬಾಡಿಗೆ ಕಾರಿನ ಚಾಲಕರು ಜಾಗವಿಲ್ಲದೆ ಮೂಲೆಯಲ್ಲಿದ್ದಾರೆ. ಎರಡು ವರ್ಷಗಳಿಂದ ವ್ಯಾಪಾರ ಸಂಪೂರ್ಣ ನೆಲಕಚ್ಚಿದೆ. ಹಿಂದಿನಂತೆ ಪಾರ್ಕಿಂಗ್ ಇದ್ದಿದ್ದರೆ ಒಂದಷ್ಟು ವ್ಯಾಪಾರ ನಡೆಸಲು ಸಾಧ್ಯವಾಗುತಿತ್ತು. ಹಿಂದೆ ದಿನಕ್ಕೆ 300 ಲೀ. ಬಿಸಿ ಹಾಲು ಮಾರಾಟ ಮಾಡುತ್ತಿದ್ದೆ, ಆದರೆ ಈಗ ಅಂತಹ ವ್ಯಾಪಾರವೇ ಇಲ್ಲ ಎನ್ನುತ್ತಾರೆ 36 ವರ್ಷದಿಂದ ಡೇರಿ ವ್ಯಾಪಾರ ನಡೆಸುತ್ತಿರುವ ಗಣೇಶ್.

ಸಾರ್ವಜನಿಕರಿಗೆ, ಹಿರಿಯ ನಾಗರಿಕರಿಗೆ ಹಂಪ ನಕಟ್ಟೆಯಿಂದ ಕೆಎಸ್ ರಾವ್ ರಸ್ತೆಯ ಕಡೆಗೆ ಸಾಗಲು ಹಿಂದೆ ಇಲ್ಲಿನ ಮೈದಾನವೇ ಹಾದಿಯಾಗಿತ್ತು. ಮಿಲಾಗ್ರಿಸ್ ಸ್ಟಾಪ್‌ನಲ್ಲಿ ಬಸ್ ಇಳಿದು ಕಾರ್‌ಸ್ಟ್ರೀಟ್ ಕಾಲೇಜಿಗೆ ತೆರಳುವ ವಿದ್ಯಾರ್ಥಿಗಳಿಗೂ ಇದೇ ಹತ್ತಿರದ ಹಾದಿಯಾಗಿತ್ತು. ಆದರೆ ಪ್ರಸ್ತುತ ಮಲ್ಟಿಲೆವೆಲ್ ಕಾರ್‌ಪಾರ್ಕಿಂಗ್ ನಿರ್ಮಾಣಕ್ಕಾಗಿ ಮಾಡಿ ರುವ ಗುಂಡಿಯ ಬದಿಯಲ್ಲೇ ಯಾವಾಗ ಜರಿದು ಬೀಳುವುದೋ ಎನ್ನುವ ಭಯದಿಂದ ಸಾಗಬೇಕಾಗಿದೆ. ಮಳೆ ಬಂದರೆ ಕೆಸರಿನ ರಾಡಿಯಾಗುತ್ತದೆ. ಒಂದೆಡೆ ದುರ್ನಾತ ಬೀರುವ ಕೊಳಚೆ ನೀರು ಹರಿಯುತ್ತಿದೆ.

> ಮಲ್ಟಿ ಲೆವೆಲ್ ಪಾರ್ಕಿಂಗ್‌ನಿಂದ ವ್ಯಾಪಾರಿಗಳಿಗೆ ಭಾರೀ ಸಮಸ್ಯೆ ಆಗಿದೆ. ಮೊದಲು ಖಾಲಿ ಸ್ಥಳವಾಗಿದ್ದಾಗ ಒಂದಷ್ಟು ಮಂದಿ ಆಚೀಚೆ ಅಡ್ಡಾಡುವಾಗ ವ್ಯಾಪಾರವಾದರೂ ಆಗುತಿತ್ತು. ಆದರೆ ಈಗ ಅದೂ ಇಲ್ಲದಾಗಿದೆ. ಕೆಲವು ಹೂವಿನ ವ್ಯಾಪಾರಿಗಳು ಅಂಗಡಿಯನ್ನೇ ಮುಚ್ಚಿದ್ದು, ಕೆಲವರು ಸಂಜೆ ಸ್ವಲ್ಪ ಹೊತ್ತು ಬಂದು ವ್ಯಾಪಾರ ಮಾಡಿ ಹೋಗುತ್ತಾರೆ.
>
> -ಪ್ರಭಾಕರ್, 40 ವರ್ಷದಿಂದ ಹೂವಿನ ವ್ಯಾಪಾರ ಮಾಡುತ್ತಿರುವವರು

> ಹಿಂದೆ ಇಲ್ಲಿ 50ಕ್ಕೂ ಅಧಿಕ ಟ್ಯಾಕ್ಸಿಯವರು ಪಾರ್ಕಿಂಗ್ ಮಾಡುತ್ತಿದ್ದರು. ಸಾಕಷ್ಟು ವಿಶಾಲವಾದ ಸ್ಥಳವೂ ಇತ್ತು. ಪಾರ್ಕಿಂಗ್ ಕಟ್ಟಡದ ನಿರ್ಮಾಣ ಕಾಮಗಾರಿ ಆರಂಭವಾದ ಬಳಿಕ ಕಾರುಗಳು ನಿಲ್ಲಿಸಲು ಸ್ಥಳವಿಲ್ಲದೆ, ಒಂದು ಮೂಲೆಯಲ್ಲಿ 5-6 ಕಾರುಗಳನ್ನು ಮಾತ್ರ ಪಾರ್ಕ್ ಮಾಡುತ್ತಿದ್ದೇವೆ. ಒಂದೆಡೆ ಬಾಡಿಗೆಯೂ ಇಲ್ಲ, ಇನ್ನೊಂದು ನಿಲ್ಲಲೂ ನೆಲೆಯಿಲ್ಲ.
>
> -ಪುರುಷೋತ್ತಮ್, ಹಳೆ ಬಸ್ ಸ್ಟ್ಯಾಂಡ್ ನಲ್ಲಿರುವ ಬಾಡಿಗೆ ಕಾರು ಚಾಲಕ

> ಎರಡು ವರ್ಷದಿಂದ ಸರಿಯಾಗಿ ಕೆಲಸವಿಲ್ಲದೆ, ಆದಾಯವೂ ಇಲ್ಲ! ಇಲ್ಲಿನ ಸ್ಥಳೀಯ ಬಟ್ಟೆ ಅಂಗಡಿಗಳಿಗೆ ಗ್ರಾಹಕರು ಬಂದರೆ ಮಾತ್ರ ನಮಗೆ ವ್ಯಾಪಾರವಾಗುತ್ತದೆ. ಅವರು ವ್ಯಾಪಾರ ಇಲ್ಲ ಎಂದು ಅವರು ಅಂಗಡಿಗಳನ್ನು ಮುಚ್ಚಿ ಹೋಗಿದ್ದಾರೆ. ದಿನದಲ್ಲಿ ಸ್ವಲ್ಪ ಹೊತ್ತು ಕೆಲಸ ಮಾಡಿ ಹೋಗುತ್ತೇನೆ ಎನ್ನುತ್ತಾರೆ ಸುಮಾರು 30 ವರ್ಷದಿಂದ ಸೀರೆಗಳಿಗೆ ಗೊಂಡೆ ಹಾಕುವ ಕೆಲಸ ಮಾಡುತ್ತಿರುವ ದೇವೇಂದ್ರ ಅವರು.

# ಮಿನಿ ನ್ಯೂಸ್

## ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಆಹ್ವಾನ

• ಉದಯವಾಹಿನಿ, ಚಿತ್ರದುರ್ಗ

2024-25ನೇ ಸಾಲಿಗೆ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಸಮಾಜ ಕಲ್ಯಾಣ ಇಲಾಖೆಯ ವೆಬ್‌ಸೈಟ್ ಸ್ಟೇಟ್ ಸ್ಕಾಲರ್‌ಶಿಫ್ ಪೋರ್ಟಲ್‌ನಲ್ಲಿ ಅರ್ಜಿ ಸಲ್ಲಿಸಲು ಸಂಬಂಧಪಟ್ಟ ಆಯಾ ಶಾಲೆಯ ಮುಖ್ಯೋಪಾಧ್ಯಾಯರನ್ನು ಸಂಪರ್ಕಿಸಲು ತಿಳಿಸಿದೆ.
**ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಲು ಬೇಕಾದ ದಾಖಲೆಗಳ ವಿವರ:** ವಿದ್ಯಾರ್ಥಿಯ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ವಿದ್ಯಾರ್ಥಿಯ ಎಸ್.ಎ.ಟಿ.ಎಸ್ ಸಂಖ್ಯೆ, ಆಧಾರ್ ಕಾರ್ಡ್, ತಂದೆ-ತಾಯಿ, ಪೋಷಕರ ಆಧಾರ್ ಕಾರ್ಡ್, ರೇಷನ್ ಕಾರ್ಡ್ ಹಾಗೂ ಮೊಬೈಲ್ ನಂಬರ್, 1 ರಿಂದ 8ನೇ ತರಗತಿಯವರೆಗೆ ವಿದ್ಯಾರ್ಥಿಗಳ ಕುಟುಂಬದ ಆದಾಯ ರೂ.6ಲಕ್ಷ ಹಾಗೂ 9 ಮತ್ತು 10ನೇ ತರಗತಿ ವಿದ್ಯಾರ್ಥಿಗಳ ಕುಟುಂಬದ ಆದಾಯ ರೂ.2.50 ಲಕ್ಷ ಮೀರಿರಬಾರದು. ಕಡ್ಡಾಯವಾಗಿ ವಿದ್ಯಾರ್ಥಿಯ ಬ್ಯಾಂಕ್ ಖಾತೆಗೆ ಆಧಾರ್ ಕಾರ್ಡ್‌ನ ಎನ್.ಪಿ.ಸಿ.ಐನಲ್ಲಿ ಸೀಡಿಂಗ್ ಮಾಡಿಸಬೇಕು ಎಂದು ಸಮಾಜ ಕಲ್ಯಾಣ ಇಲಾಖೆ ಚಿತ್ರದುರ್ಗ ಸಹಾಯಕ ನಿರ್ದೇಶಕರು(ಗ್ರೇಡ್-1) ತಿಳಿಸಿದ್ದಾರೆ.

## ರಾಜ್ಯ ಪ್ರಶಸ್ತಿಗೆ ಅರ್ಜಿ ಆಹ್ವಾನ

• ಉದಯವಾಹಿನಿ, ಚಿತ್ರದುರ್ಗ

ವಿಕಲಚೇತನರ ಕ್ಷೇತ್ರದಲ್ಲಿ ಸಾಧನೆಗೈದ ವ್ಯಕ್ತಿ, ಸಂಸ್ಥೆ ಮತ್ತು ವಿಶೇಷ ಶಾಲೆಯ ಶಿಕ್ಷಕರಿಗೆ ರಾಜ್ಯ ಪ್ರಶಸ್ತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಸಚಿವರ ಅಧ್ಯಕ್ಷತೆಯ ಸಮಿತಿಯ ರಾಜ್ಯ ಪ್ರಶಸ್ತಿಗೆ ಅರ್ಹರನ್ನು ಆಯ್ಕೆ ಮಾಡಲಿದೆ. ವಿಕಲಚೇತನರ ಕ್ಷೇತ್ರದಲ್ಲಿ 15 ವರ್ಷ ಮೇಲ್ಪಟ್ಟು ಸೇವೆ ಸಲ್ಲಿಸಿರುವ ಶಿಕ್ಷಕರು, ಸಂಸ್ಥೆಗಳು, ಸಾಧನೆಗೈದ ವಿಕಲಚೇತರು ಅರ್ಜಿ ಸಲ್ಲಿಸಬಹುದು.

ಅರ್ಜಿಗಳನ್ನು www.dwdsc.kar.nic.in ವೆಬ್‌ಸೈಟ್ ಮೂಲಕ ಡೌನ್‌ಲೋಡ್ ಮಾಡಿಕೊಳ್ಳಬಹುದು. ಭರ್ತಿ ಮಾಡಿದ ಅರ್ಜಿಗಳನ್ನು ಅ.15 ರೊಳಗೆ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಕಚೇರಿಗೆ ದ್ವಿಪ್ರತಿಯಲ್ಲಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಬಾಲಭವನದ ಆವರಣದಲ್ಲಿನ ಕಚೇರಿ ಹಾಗೂ ದೂರವಾಣಿ ಸಂಖ್ಯೆ 08194-235284 ಸಂಪರ್ಕಿಸುವಂತೆ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 74.87 ಕೋಟಿ ಅವ್ಯವಹಾರ ಆರೋಪ 14 ಸಿಬ್ಬಂದಿ ವಿರುದ್ಧ ದೂರು

• ಉದಯವಾಹಿನಿ, ಗೋಕಾಕ

ಇಲ್ಲಿನ ಮಹಾಲಕ್ಷ್ಮಿ ಅರ್ಬನ್ ಕೋ ಆಪ್ ಕ್ರೆಡಿಟ್ ಬ್ಯಾಂಕಿನಲ್ಲಿ 74.87 ಕೋಟಿ ಅವ್ಯವಹಾರ ನಡೆದಿದೆ ಎಂದು ಆರೋಪಿಸಿ, ಬ್ಯಾಂಕಿನ 14 ಸಿಬ್ಬಂದಿ ವಿರುದ್ಧ ಅಧ್ಯಕ್ಷ ಜಿತೇಂದ್ರ ಬಾಳಾಸಾಹೇಬ ಮಾಂಗಳೇಕರ ಶಹರ ಪೊಲೀಸರಿಗೆ ದೂರು ನೀಡಿದ್ದಾರೆ. ಸಾಗರ ಹನಮಂತ ಸಬಕಾಳೆ, ವಿಶ್ವನಾಥ ಅಶೋಕ ಬಾಗಡೆ, ಸಂಬಾಜಿ ಮಲ್ಲಪ್ಪ ಘೋರ್ಪಡೆ, ಸಿದ್ದಪ್ಪ ಸದಾಶಿವ ಪವಾರ (ವ್ಯವಸ್ಥಾಪಕ), ದಯಾನಂದ ಶಿವಾಜಿ ಉಪ್ಪಿನ, ಸಂಜನಾ ಸಾಗರ ಸಬಕಾಳೆ, ಮಾಲವ್ವ ಹಣಮಂತ ಸಬಕಾಲೆ, ಗೌರವ್ವ ಬಾಳಪ್ಪ ಹವಾಲ್ದಾರ, ಚಂದ್ರವ್ವ ಹವಾಲ್ದಾರ, ಮಾಯವ್ವ ಮಾಯಪ್ಪ ಜಾಧವ, ಪರಸಪ್ಪ ಯಲ್ಲಪ್ಪ ಮಾಲೋಜಿ, ರಾಧಾ ಪರಸಪ್ಪ ಮಾಲೋಜಿ, ಸಂದೀಪ ಬಸವರಾಜ ಮರಾಠೆ ಮತ್ತು ಕಿರಣ ಸಕಾರಾಮ ಸುಪಲಿ ಮತ್ತಿತರರ ವಿರುದ್ಧ ದೂರು ದಾಖಲಾಗಿದೆ.

ಈ ಗೊಂದಲದ ಕಾರಣ ತಮ್ಮ ಠೇವಣಿ ಮೊತ್ತ ವಾಪಸ್ ನೀಡುವಂತೆ ಜನ ಅಪಾರ ಸಂಖ್ಯೆಯಲ್ಲಿ ಬ್ಯಾಂಕ್ ಎದುರು ಜಮಾಯಿಸಿದರು. ಕೆಲಕಾಲ ತ್ವೇಷಮಯ ವಾತಾವರಣ ಉಂಟಾಯಿತು. ಪೊಲೀಸರು ಬಿಗಿ ಬಂದೋಬಸ್ತ್ ಏರ್ಪಡಿಸಿದರು.

## ಸುಳ್ಯ ರಸ್ತೆಯಲ್ಲಿ ಹೊಂಡ-ಗುಂಡಿಗಳದ್ದೇ ಸಾಮ್ರಾಜ್ಯ

• ಉದಯವಾಹಿನಿ, ಸುಳ್ಯ

ಈ ರಸ್ತೆಯಲ್ಲಿ ಸಂಚರಿಸುವುದೇ ವಾಹನ ಸವಾರರಿಗೆ ಸವಾಲು. ರಸ್ತೆಯ ಒಂದು ಗುಂಡಿ ತಪ್ಪಿಸಲು ಇನ್ನೊಂದು ಗುಂಡಿಗೆ ವಾಹನ ಇಳಿಸಬೇಕಾದ ಪರಿಸ್ಥಿತಿ ಇದ್ದು ಸವಾರರು ನಿತ್ಯ ಸಂಕಟ ಪಡುತ್ತಲೇ ಸಂಚರಿಸಬೇಕಾದ ಸ್ಥಿತಿಯಿದೆ. ಇದು ತಾಲ್ಲೂಕು ಕೇಂದ್ರ ಸುಳ್ಯವನ್ನು ಸಂಪರ್ಕಿಸುವ ನಿಂತಿಕಲ್ಲು- ಬೆಳ್ಳಾರೆ- ಸುಳ್ಯ ಹೆದ್ದಾರಿಯ (ಮೇಲ್ದರ್ಜೆಗೇರಿಸಲಾದ ರಾಜ್ಯ ಹೆದ್ದಾರಿ) ಕತೆ. ರಸ್ತೆಯಲ್ಲಿರುವ ಹೊಂಡ-ಗುಂಡಿಗಳು ಅಪಘಾತಗಳಿಗೂ ಕಾರಣವಾಗುತ್ತಿದೆ. ನಿಂತಿಕಲ್ಲು ಪೇಟೆಯಿಂದ ಬೆಳ್ಳಾರೆವರೆಗೆ ಹಾಗೂ ಬೆಳ್ಳಾರೆಯಿಂದ ಬೇಂಗಮಲೆವರೆಗೆ ಅಲ್ಲಲ್ಲಿ ಹೊಂಡ-ಗುಂಡಿ ನಿರ್ಮಾಣ ಗೊಂಡಿದೆ. ನಿಂತಿಕಲ್ಲು-ಬೆಳ್ಳಾರೆ ನಡುವಿನ ಸ್ಥಿತಿ ಶೋಚನೀಯವಾಗಿದೆ.

ಸಮರ್ಪಕ ಚರಂಡಿ ವ್ಯವಸ್ಥೆ ಮಾಡದೆ ಇರುವುದೇ ರಸ್ತೆ ಹಾಳಾಗಲು ಮುಖ್ಯ ಕಾರಣ. ಪ್ರತೀ ವರ್ಷ ಮಳೆಗಾಲದಲ್ಲಿ ಗುಂಡಿ ನಿರ್ಮಾಣವಾಗುವ ಸ್ಥಳಗಳಲ್ಲಿ ಶಾಶ್ವತ ರೀತಿಯ ಪರಿಹಾರ ಕಾರ್ಯ ನಡೆಸದೆ ಕೇವಲ ತೇಪೆ ಕಾರ್ಯನಡೆಸುತ್ತಾರೆ ಎಂದೂ ಸಾರ್ವಜನಿಕರು ದೂರಿದ್ದಾರೆ. ರಸ್ತೆಯಲ್ಲಿರುವ ಗುಂಡಿಗಳು ನಿತ್ಯ ಅಪಾಯಕ್ಕೆ ಆಹ್ವಾನ ನೀಡುತ್ತಿರುವುದಲ್ಲದೆ ವಾಹನ ಸವಾರರಿಗೆ ವಾಹನ ದುರಸ್ತಿಗೂ ಹೆಚ್ಚುವರಿ ಹಣ ವ್ಯಯಿಸಬೇಕಾದ ಸಂದಿಗ್ಧತೆಯನ್ನು ತಂದಿಟ್ಟಿದೆ.

## ಶಾಲಾ ವಾಹನ ಹೈಮಾಸ್ಟ್ ಕಂಬಕ್ಕೆ ಡಿಕ್ಕಿ; ಚಾಲಕನಿಗೆ ಗಂಭೀರ ಗಾಯ

• ಉದಯವಾಹಿನಿ, ತೆಕ್ಕಟ್ಟೆ

ಇಲ್ಲಿನ ತೆಕ್ಕಟ್ಟೆ ರಾ.ಹೆ.66ರ ಪ್ರಮುಖ ಸರ್ಕಲ್ ನಲ್ಲಿ ಹೆಮ್ಮಾಡಿ ಖಾಸಗಿ ಪಿಯು ಕಾಲೇಜಿನ ಶಾಲಾ ವಾಹನವೊಂದು ಚಾಲಕನ ನಿಯಂತ್ರಣ ತಪ್ಪಿ ಹೈಮಾಸ್ಟ್ ಕಂಬಕ್ಕೆ ಢಿಕ್ಕಿಯಾಗಿ ಚಾಲಕ ಗಂಭೀರವಾಗಿ ಗಾಯಗೊಂಡ ಘಟನೆ ಸೆ. 19ರ ಗುರುವಾರ ಮಧ್ಯಾಹ್ನ ಸಂಭವಿಸಿದೆ.

ಬ್ರಹ್ಮಾವರದಿಂದ ಹೆಮ್ಮಾಡಿ ಕಡೆಗೆ ಚಾಲಕ ಸಹಿತ ಕಾಲೇಜಿನ ಇಬ್ಬರು ವಿದ್ಯಾರ್ಥಿನಿಯರು ಪ್ರಯಾಣಿಸುತ್ತಿದ್ದ ಶಾಲಾ ವಾಹನಕ್ಕೆ ದ್ವಿಚಕ್ರ ವಾಹನವೊಂದು ಏಕಾಏಕಿ ಅಡ್ಡಬಂದ ಪರಿಣಾಮ ವಾಹನ ಚಾಲಕನ ನಿಯಂತ್ರಣ ತಪ್ಪಿ ಹೈಮಾಸ್ಟ್ ಕಂಬಕ್ಕೆ ಢಿಕ್ಕಿ ಹೊಡೆದಿದೆ ಎಂದು ಹೇಳಲಾಗಿದೆ. ಘಟನೆಯ ತೀವ್ರತೆಗೆ ವಾಹನ ಚಾಲಕನ ತಲೆ, ಕಣ್ಣು ಹಾಗೂ ಕೈಗಳಿಗೆ ತೀವ್ರ ಸ್ವರೂಪದ ಗಾಯಗಳಾಗಿದ್ದು, ಇಬ್ಬರು ಕಾಲೇಜು ವಿದ್ಯಾರ್ಥಿನಿಯರಿಗೂ ಕೂಡಾ ಸಣ್ಣಪುಟ್ಟ ಗಾಯಗಳಾಗಿದೆ. ಗಾಯಾಳುಗಳನ್ನು ಸ್ಥಳೀಯರು ತತ್‌ಕ್ಷಣವೇ ಕೋಟೇಶ್ವರ ಖಾಸಗಿ ಆಸ್ಪತ್ರೆಗೆ ದಾಖಲಿಸಿದ್ದಾರೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 10:30 ರಿಂದ 12:00 |
| ಗುಳಿಕ ಕಾಲ | ಬೆಳಿಗ್ಗೆ | 07:30 ರಿಂದ 09:00 |
| ಯಮಗಂಡ ಕಾಲ | ಮಧ್ಯಾಹ್ನ | 03:00 ರಿಂದ 04:30 |

**ಮೇಷ** ಸಂತೃಪ್ತಿಯ ಜೀವನಕ್ಕಾಗಿ ನಿಮ್ಮ ಮಾನಸಿಕ ದೃಢತೆಯನ್ನು ಸುಧಾರಿಸಿ. ನಿಮ್ಮ ಮನೆಗೆ ಸಂಬಂಧಿಸಿದ ಹೂಡಿಕೆ ಲಾಭದಾಯಕವಾಗಿರುತ್ತದೆ. ಅಗತ್ಯವಿದ್ದರೆ ಸ್ನೇಹಿತರು ನಿಮ್ಮ ನೆರವಿಗೆ ಬರುತ್ತಾರೆ.

**ವೃಷಭ** ನಿಮ್ಮ ಕೆಲಸಕ್ಕೆ ಅಂಟಿಕೊಳ್ಳಿ ಮತ್ತು ಇಂದು ನಿಮಗೆ ಸಹಾಯ ಮಾಡಲು ಇತರರನ್ನು ಅವಲಂಬಿಸಬೇಡಿ. ನಿಮ್ಮ ಜೀವನದಲ್ಲಿ ನಂತರ ವಿಷಾದಿಸಬಹುದಾದ ಆತುರದ ನಿರ್ಧಾರಗಳನ್ನು ಕೈಗೊಳ್ಳಬೇಡಿ.

**ಮಿಥುನ** ಒತ್ತಡವನ್ನು ಉಪೇಕ್ಷಿಸಬಾರದು. ಇದು ವೇಗವಾಗಿ ತಂಬಾಕು ಮತ್ತು ಮದ್ಯದಷ್ಟೇ ಗಂಭೀರವಾದ ಒಂದು ಸಾಂಕ್ರಾಮಿಕ ರೋಗವಾಗುತ್ತಿದೆ. ನೀವು ನಿಮ್ಮ ಹಣವನ್ನು ಧಾರ್ಮಿಕ ಚಟುವಟಿಕೆಗಳಲ್ಲಿ ಹೂಡಿಕೆ ಮಾಡಬಹುದು.

**ಕರ್ಕಾಟಕ** ಇದು ನಿಮಗೆ ಆರ್ಥಿಕ ಲಾಭವನ್ನು ನೀಡುತ್ತದೆ. ಸಂಪರ್ಕಗಳು ಮತ್ತು ಚರ್ಚೆಗಳು ಚೆನ್ನಾಗಿ ನಡೆಯದಿದ್ದಲ್ಲಿ ನೀವು ನಿಮ್ಮ ಶಾಂತತೆ ಕಳೆದುಕೊಳ್ಳಬಹುದು ಮತ್ತು ಏನಾದರೂ ಹೇಳಬಹುದು.

**ಸಿಂಹ** ಆರೋಗ್ಯ ಪರಿಪೂರ್ಣವಾಗಿರುತ್ತದೆ. ನೀವು ತ್ವರಿತ ಹಣ ಪಡೆಯುವ ಬಯಕೆ ಹೊಂದಿರುತ್ತೀರಿ. ನೀವು ಪ್ರೀತಿಪಾತ್ರರ ಜೊತೆ ವಾದಗಳಿಗೆ ಕಾರಣವಾಗಬಹುದಾದ ವಿವಾದಾತ್ಮಕ ವಿಷಯಗಳನ್ನು ತಪ್ಪಿಸಬೇಕು.

**ಕನ್ಯಾ** ಇಂದು ಷೇರು ಮಾರುಕಟ್ಟೆಯಲ್ಲಿ ಹಣವನ್ನು ಹೂಡಿಕೆ ಮಾಡುವವರು ತಮ್ಮ ಹಣವನ್ನು ಕಳೆದುಕೊಳ್ಳಬಹುದು. ಸಮಯಕ್ಕೆ ನೀವು ಜಾಗರೂಕರಾಗಿದ್ದರೆ ಅದು ನಿಮಗೆ ಉತ್ತಮವಾಗಿರುತ್ತದೆ.

**ತುಲಾ** ನೀವು ಪ್ರೀತಿಯ ನೋವನ್ನು ಅನುಭವಿಸಬಹುದು. ನೀವು ಹೆಚ್ಚುವರಿ ಜ್ಞಾನ ಮತ್ತು ಕೌಶಲ್ಯಗಳನ್ನು ಪಡೆಯುವಲ್ಲಿ ಸ್ವಲ್ಪ ಹೆಚ್ಚುವರಿ ಸಮಯ ಮತ್ತು ಶಕ್ತಿ ವ್ಯಯಿಸಿದರೆ ಅಗಾಧ ಪ್ರಯೋಜನ ಪಡೆಯುತ್ತೀರಿ.

**ವೃಶ್ಚಿಕ** ನೀವು ಅತಿಯಾದ ಒತ್ತಡವನ್ನು ಅನುಭವಿಸುತ್ತಿದ್ದರೆಂದೆನಿಸಿದರೆ ಮಕ್ಕಳೊಂದಿಗೆ ಹೆಚ್ಚು ಸಮಯ ಕಳೆಯಿರಿ. ಅವರ ಬೆಚ್ಚಗಿನ ಅಪ್ಪುಗೆ / ಮುಗ್ಧ ಮುಗುಳ್ನಗೆಯೂ ನಿಮ್ಮ ಸಮಸ್ಯೆಗಳನ್ನು ಮಾಯವಾಗಿಸಬಲ್ಲದು.

**ಧನಸ್ಸು** ಸಂಜೆ ಸ್ನೇಹಿತರೊಡನೆ ಹೊರಗೆ ಹೋಗಿ ಇದು ತುಂಬ ಒಳ್ಳೆಯದನ್ನು ಮಾಡುತ್ತದೆ. ಇಂದು ನೀವು ಎಂತಹ ಒಳ್ಳೆಯ ಕೆಲಸ ಮಾಡಿದ್ದೀರೆಂದು ತೋರಿಸಲು ನಿಮ್ಮ ಪ್ರೀತಿ ಅರಳುತ್ತದೆ. ಎಚ್ಚರಿಕೆಯಿಂದ ನಡೆಗಳ ಒಂದು ದಿನ.

**ಮಕರ** ಇಂದು ನೀವು ಪ್ರಮುಖ ನಿರ್ಧಾರ ಕೈಗೊಳ್ಳಬೇಕು. ಇದು ನಿಮ್ಮನ್ನು ಒತ್ತಡ ಹಾಗೂ ಉದ್ವೇಗಕ್ಕೆ ಒಳಪಡಿಸುತ್ತದೆ. ಯಾರಾದರೂ ನಿಮ್ಮನ್ನು ಹೊರೆಯುವರು ಇಂದು ನಿಮ್ಮ ಹತ್ತಿರ ಹಣ ಸಾಲ ಕೇಳಲು ಬರಬಹುದು.

**ಕುಂಭ** ನಿಮ್ಮ ಮನಸ್ಸು ಒಳ್ಳೆಯ ವಿಷಯಗಳನ್ನು ಗ್ರಹಿಸುತ್ತದೆ. ವಿಳಂಬಿತ ಪಾವತಿಗಳನ್ನು ಮಾಡುತ್ತಿದ್ದ ಹಾಗೆ ಹಣದ ಪರಿಸ್ಥಿತಿ ಸುಧಾರಿಸುತ್ತದೆ. ಅನಿರೀಕ್ಷಿತ ಅತಿಥಿಗಳು ಸಂಜೆ ನಿಮ್ಮ ಮನೆಯಲ್ಲಿ ತುಂಬಿರುತ್ತಾರೆ.

**ಮೀನ** ಇಂದು ನಿಮ್ಮ ಪ್ರೇಮಿ ನಿಮ್ಮ ಮಾತುಗಳನ್ನು ಕೇಳುವುದಕ್ಕಿಂತ ತನ್ನ ಮಾತುಗಳನ್ನು ಹೇಳಲು ಇಷ್ಟಪಡುತ್ತಾನೆ. ಈ ಕಾರಣದಿಂದಾಗಿ ನೀವು ಸ್ವಲ್ಪ ಅಸಮಾಧಾನಗೊಳ್ಳಬಹುದು.

# ಸ್ಟ್ಯಾನ್‌ಫೋರ್ಟ್ ವಿಶ್ವ ವಿಜ್ಞಾನಿಗಳ ಪಟ್ಟಿ ಪ್ರಕಟ

## ಪಟ್ಟಿಯಲ್ಲಿ ಸ್ಥಾನ ಪಡೆದ ದಾವಣಗೆರೆ ವಿವಿಯ ಸಂಶೋಧನಾರ್ಥಿ ಡಾ. ಆರ್.ಎಸ್.ವರುಣ್ ಕುಮಾರ್

• ಉದಯವಾಹಿನಿ, ದಾವಣಗೆರೆ

ಸ್ಟ್ಯಾನ್ ಫೋರ್ಟ್ ವಿಶ್ವ ವಿಜ್ಞಾನಿಗಳ ಪಟ್ಟಿಯನ್ನು ಪ್ರಕಟಿಸಲಾಗಿದೆ. ಈ ಪಟ್ಟಿಯಲ್ಲಿ ದಾವಣಗೆರೆ ವಿಶ್ವವಿದ್ಯಾಲಯದಲ್ಲಿ ಗಣಿತ ಶಾಸ್ತ್ರ ವಿಭಾಗದ ಪ್ರಾಧ್ಯಾಪಕ ಪ್ರೊ. ಬಿ.ಸಿ.ಪ್ರಸನ್ನಕುಮಾರ್ ಅವರ ಮಾರ್ಗದರ್ಶನದಲ್ಲಿ ಸಂಶೋಧನಾರ್ಥಿಯಾಗಿರುವ ಡಾ.ಆರ್.ಎಸ್ ವರುಣ್ ಕುಮಾರ್ ಅವರು ಸತತ 2ನೇ ಬಾರಿಗೆ ಸ್ಥಾನ ಪಡೆದಿದ್ದಾರೆ.

ವಿಶ್ವದ ಉನ್ನತ ವಿಜ್ಞಾನಿಗಳ ಕುರಿತು ಅಮೇರಿಕಾದ ಪ್ರತಿಷ್ಠಿತ ಸ್ಟ್ಯಾನ್ ಫೋರ್ಡ್ ವಿಶ್ವವಿದ್ಯಾನಿಲಯವು ಹೊರತಂದಿರುವ ವಿಶ್ವದ ಟಾಪ್ ಶೇ.2ರಷ್ಟು ವಿಜ್ಞಾನಿಗಳ ಪಟ್ಟಿಯಲ್ಲಿ ದಾವಣಗೆರೆ ವಿಶ್ವವಿದ್ಯಾನಿಲಯ ಗಣಿತಶಾಸ್ತ್ರ ವಿಭಾಗದ ಪ್ರಾಧ್ಯಾಪಕ ಪ್ರೊ. ಬಿ.ಸಿ.ಪ್ರಸನ್ನಕುಮಾರ್ (ಕ್ಯಾಲೆಂಡರ್ ವರ್ಷ 2023 - 10866) ಸ್ಥಾನ ಪಡೆದಿದ್ದು, ಇದರ ಜತೆಗೆ ಅವರ ಮಾರ್ಗದರ್ಶನದಲ್ಲಿನ ನಾಲ್ಕು ಸಂಶೋಧನಾರ್ಥಿಗಳಾದ ಡಾ. ಆರ್.ಜೆ.ಪುನೀತ್ ಗೌಡ (36192), ಡಾ.ಆರ್.ನವೀನ್ ಕುಮಾರ್ (52478), ಡಾ. ಜೆ.ಕೆ.ಮಧುಕೇಶ್ (151615) ಮತ್ತು ಡಾ. ಆರ್.ಎಸ್.ವರುಣ್ ಕುಮಾರ್ (197048) ಇವರುಗಳು ಕೂಡ ಸೇರ್ಪಡೆಯಾಗಿದ್ದಾರೆ.

**ವೃತ್ತಿ ಜೀವನದ ಸಾಧನೆ**

ಸ್ಟ್ಯಾನ್ ಫೋರ್ಡ್ ವಿವಿಯು ಅಂತರಾಷ್ಟ್ರೀಯ ಮಟ್ಟದಲ್ಲಿ ಗುಣಮಟ್ಟದ ಸಂಶೋಧನೆ, ಸಂಶೋಧನಾ ವರದಿ, ಸಂಶೋಧನಾ ಉಲ್ಲೇಖಗಳು, ಲೇಖನಗಳನ್ನು ಒಳಗೊಂಡ ಹೆಚ್ - ಇಂಡೆಕ್ಸ್, ಐಚ್ ಇಂಡೆಕ್ಸ್ ನಿರಿಂದತೆ ವಿವಿಧ ಮಾನದಂಡಗಳನ್ನು ಪರಿಗಣಿಸಿ ಈ ಪಟ್ಟಿಯನ್ನು ಸಿದ್ಧಪಡಿಸಲಾಗಿದ್ದು, ಈ ಮಾನದಂಡಗಳ ಪ್ರಕಾರ ವಿಜ್ಞಾನಿಗಳನ್ನು 22 ವೈಜ್ಞಾನಿಕ ಕ್ಷೇತ್ರಗಳು ಮತ್ತು 174 ಉಪ-ಕ್ಷೇತ್ರಗಳಾಗಿ ವರ್ಗೀಕರಿಸಲಾಗಿದೆ. ಇದರಲ್ಲಿ ದಾವಣಗೆರೆ ವಿವಿಯ ಗಣಿತಶಾಸ್ತ್ರ ವಿಭಾಗದ ಪ್ರೊ. ಬಿ.ಸಿ.ಪ್ರಸನ್ನಕುಮಾರ್ ರವರು ಸತತ ನಾಲ್ಕನೇ ಬಾರಿಗೆ ಸ್ಥಾನ ಪಡೆದಿದ್ದು, ಇದರ ಜತೆಗೆ ವೃತ್ತಿ ಜೀವನದ ಸಾಧನೆಯಲ್ಲಿ ಶ್ರೇಯಾಂಕವನ್ನು ಪಡೆದಿರುವುದು ಗಮನರ್ಹವಾಗಿದೆ. ಪ್ರೊ. ಬಿ.ಸಿ.ಪ್ರಸನ್ನ ಕುಮಾರ್ ಮಾತ್ರವಲ್ಲದೆ ಅವರ ಮಾರ್ಗದರ್ಶನದಲ್ಲಿ ಸಂಶೋಧನೆಯನ್ನು ನಡೆಸುತ್ತಿರುವ ಡಾ. ಆರ್.ಜೆ. ಪುನೀತ್ ಗೌಡ, ಡಾ. ಆರ್. ನವೀನ್ ಕುಮಾರ್, ಡಾ. ಜೆ.ಕೆ. ಮಧುಕೇಶ್ ಮತ್ತು ಡಾ. ಆರ್.ಎಸ್. ವರುಣ್ ಕುಮಾರ್ ಇವರುಗಳು ಗಣಿತಶಾಸ್ತ್ರದ ಶಾಖೆ ಮತ್ತು ಸಮೀಕರಣ ವರ್ಗಾವಣೆ, ದ್ರವಚಲನ ಶಾಸ್ತ್ರ ವಿಷಯಗಳ ಸಂಶೋಧನೆಯಲ್ಲಿ ತೊಡಗಿದ್ದು, ಮಾರ್ಗದರ್ಶಕರೊಡನೆಯೇ ವಿಜ್ಞಾನಿಗಳ ಪಟ್ಟಿಗೆ ಸೇರಿರುವುದು ಸ್ಫೂರ್ತಿದಾಯಕವಾಗಿದೆ.



ಉದಯವಾಹಿನಿ ಚಿತ್ರ

**ಈ ಹಿಂದೆಯೂ ಕೂಡ 2020, 2021 ಮತ್ತು 2022ನೇ ಸಾಲಿನಲ್ಲಿ ಬಿಡುಗಡೆಯಾದ ಪಟ್ಟಿಯಲ್ಲಿ ಡಾ.ಆರ್.ಜೆ. ಪುನೀತ್ ಗೌಡ ಹಾಗೂ ಡಾ. ಆರ್.ನವೀನ್ ಕುಮಾರ್ ರವರುಗಳು ಸ್ಥಾನ ಪಡೆದಿದ್ದರು ಹಾಗೂ 2021 ಮತ್ತು 2022ನೇ ಸಾಲಿನಲ್ಲಿ ಬಿಡುಗಡೆಯಾದ ಪಟ್ಟಿಯಲ್ಲಿ ಡಾ. ಜೆ.ಕೆ. ಮಧುಕೇಶ್ ಮತ್ತು ಡಾ. ಆರ್.ಎಸ್. ವರುಣ್ ಕುಮಾರ್ ಸ್ಥಾನ ಪಡೆದಿದ್ದರು.**

ಅಮೇರಿಕಾದ ಪ್ರತಿಷ್ಠಿತ ಸ್ಟ್ಯಾನ್ ಫೋರ್ಡ್ ವಿಶ್ವವಿಜ್ಞಾನಿಗಳ ಪಟ್ಟಿಯಲ್ಲಿರುವ 04 ವಿಜ್ಞಾನಿಗಳು ಪ್ರಸುತ್ತ ರಾಜ್ಯದ ಹಾಗೂ ಅಂತರಾಷ್ಟ್ರೀಯ ಮಟ್ಟದ ಪ್ರತಿಷ್ಠಿತ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ. ದಾವಣಗೆರೆಯ ಬಾಪೂಜಿ ಇನ್ಸ್ಟಿಟ್ಯೂಟ್ ಆಫ್ ಇಂಜಿನಿಯರಿಂಗ್ ಅಂಡ್ ಟೆಕ್ನಾಲಜಿಯಲ್ಲಿ ಡಾ. ಆರ್.ಜೆ.ಪುನೀತ್ ಗೌಡ, ಬೆಂಗಳೂರಿನ ಅಮೃತ ವಿಶ್ವವಿದ್ಯಾಪೀಠಂ ಗಣಿತಶಾಸ್ತ್ರ ವಿಭಾಗದಲ್ಲಿ ಡಾ. ಆರ್. ನವೀನ್ ಕುಮಾರ್, ಜೆ.ಎಂ. ವಿಶ್ವವಿದ್ಯಾಲಯದಲ್ಲಿ ಡಾ. ಜೆ.ಕೆ.ಮಧುಕೇಶ್ ಹಾಗೂ ಮಲೇಷಿಯಾದ ಸನ್‌ವೇ ವಿಶ್ವವಿದ್ಯಾಲಯದ ಗಣಿತಶಾಸ್ತ್ರ ವಿಭಾಗದಲ್ಲಿ ಡಾ. ಆರ್.ಎಸ್. ವರುಣ್ ಕುಮಾರ್ ಇವರುಗಳು ಸಹಾಯಕ ಪ್ರಾಧ್ಯಾಪಕರುಗಳಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ.

**ಆಡಳಿತ ವರ್ಗ ಅಭಿನಂದನೆ**

ವಿಜ್ಞಾನಿಗಳ ಪಟ್ಟಿಯಲ್ಲಿ ಸೇರ್ಪಡೆಯಾಗಿರುವ ಡಾ.ಬಿ.ಸಿ.ಪ್ರಸನ್ನಕುಮಾರ್, ಡಾ.ಆರ್.ಜೆ.ಪುನೀತ್ ಗೌಡ, ಡಾ. ಆರ್. ನವೀನ್ ಕುಮಾರ್, ಡಾ.ಜೆ.ಕೆ.ಮಧುಕೇಶ್ ಮತ್ತು ಡಾ.ಆರ್.ಎಸ್. ವರುಣ್ ಕುಮಾರ್ ಇವರುಗಳಿಗೆ ದಾವಣಗೆರೆ ವಿಶ್ವವಿದ್ಯಾನಿಲಯದ ಕುಲಪತಿಗಳಾದ ಪ್ರೊ. ಬಿ.ಡಿ. ಕುಂಬಾರ, ದಾವಣಗೆರೆ ಬಿಐಇಟಿ ನಿರ್ದೇಶಕರಾದ ಪ್ರೊ.ವೈ. ವೃಷಭೇಂದ್ರಪ್ಪ ಮತ್ತು ಪ್ರಾಂಶುಪಾಲರಾದ ಡಾ.ಎಚ್.ಬಿ. ಅರವಿಂದ ಹಾಗೂ ಅಮೃತ ವಿಶ್ವವಿದ್ಯಾಪೀಠಂನ ಕುಲಪತಿಗಳಾದ ಮಾತಾ ಅಮೃತಾನಂದಮಯಿ ದೇವಿ ಮತ್ತು ಆಡಳಿತ ವರ್ಗ ಅಭಿನಂದಿಸಿದ್ದಾರೆ.

## ಅಲ್ಪಸಂಖ್ಯಾತರ ನವೋದಯ ಮಾದರಿ ವಸತಿ ಶಾಲೆ ಮಂಜೂರು ಮಾಡಲು ಜಮೀರ್ ಅಹಮ್ಮದ್‌ಗೆ ಮನವಿ

• ಉದಯವಾಹಿನಿ ಕೆಂಭಾವಿ

ಪಟ್ಟಣದಲ್ಲಿ ಅಲ್ಪಸಂಖ್ಯಾತರ ನವೋದಯ ಮಾದರಿ ವಸತಿ ಶಾಲೆ ಮಂಜೂರು ಮಾಡಲು ಕಲ್ಯಾಣ ಕರ್ನಾಟಕ ನ್ಯಾಯ ಕ್ರಾಂತಿ ಸಂಘ (ರಿ) ಅವರು ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಸಚಿವರಾದ ಬಿ.ಜಡ್. ಜಮೀರ್ ಅಹಮ್ಮದ್ ಖಾನ್ ಅವರಗೆ ಮನವಿ ಸಲ್ಲಿಸಿದ್ದಾರೆ. ನಂತರ ಮಾತನಾಡಿದ ಕಲ್ಯಾಣ ಕರ್ನಾಟಕ ನ್ಯಾಯಕ್ರಾಂತಿ ಸಂಘದ ಅಧ್ಯಕ್ಷರಾದ ಬಂದೇನವಾಜ್ ನಾಸಿ ಯಾದಗಿರ ಜಿಲ್ಲೆಯ ಸುರಪೂರ ತಾಲ್ಲೂಕಿನಲ್ಲೆ ಕೆಂಭಾವಿ ದೊಡ್ಡ ಪಟ್ಟಣವಾಗಿದ್ದು ಸುಮಾರು 25 ಸಾವಿರ ಜನ ಸಂಖ್ಯೆ ಇದ್ದು, ಇಲ್ಲಿ ಅರ್ಧಕಿಂತ ಹೆಚ್ಚು ಅಲ್ಪ ಸಂಖ್ಯಾತರ ಬಡ ಕುಟುಂಬಗಳಿದ್ದು, ಈ ಪಟ್ಟಣಕ್ಕೆ ಅಂದಾಜು 30 ಹಳ್ಳಿಗಳು ಹೊಂದಿದ್ದು, ಇಲ್ಲಿ ಅಲ್ಪಸಂಖ್ಯಾತರ ಕುಟುಂಬಗಳ ಸಂಖ್ಯೆ ಹೆಚ್ಚಿಗೆ ಇದ್ದ ಕಾರಣ ಕೆಂಭಾವಿ



ಉದಯವಾಹಿನಿ ಚಿತ್ರ

ಪಟ್ಟಣದಲ್ಲಿ ಅಲ್ಪಸಂಖ್ಯಾತ ನವೋದಯ ಮಾದರಿ ವಸತಿ ಶಾಲೆ ಇಲ್ಲದಿರುವುದರಿಂದ ಸಾರ್ವಜನಿಕರಿಗೆ ಹಾಗು ಬಡ ಕುಟುಂಬಗಳಿಗೆ ವಿದ್ಯಾಭ್ಯಾಸದ ದೃಷ್ಟಿಯಿಂದ ಬಹಳ ಅನಾನುಕೂಲತೆ ಆಗಿದ್ದು ಕೂಡಲೇ ಕೆಂಭಾವಿ ಪಟ್ಟಣಕ್ಕೆ ನವೋದಯ ಮಾದರಿ ಅಲ್ಪಸಂಖ್ಯಾತ ಶಾಲೆ ಮಂಜೂರು ಮಾಡಬೇಕೆಂದು ಹೇಳಿದರು. ಈ ಸಂದರ್ಭದಲ್ಲಿ ಕಲ್ಯಾಣ ಕರ್ನಾಟಕ ನ್ಯಾಯ ಕ್ರಾಂತಿ ಸಂಘ (ರಿ) ಅಧ್ಯಕ್ಷರು ಪದಾಧಿಕಾರಿಗಳು ಮಹಿಳೆಯರು ಇತರರು ಇದ್ದರು.

## ಭವರೋಗ ಕಳೆಯಲು ಭಗವಂತನ ನಾಮಸ್ಮರಣೆ ಸಾಕು: ರೊಡಲಬಂಡಿ

• ಉದಯವಾಹಿನಿ ಕೆಂಭಾವಿ

ಸದ್ಭಕ್ತರು ಸದ್ಗುರುವಿನ ಸನ್ನಿಧಿಯಲ್ಲಿ ಸೇರಿ, ದೇವರ ದರ್ಶನ ಪಡೆದು, ಸಂಸಾರ ಜಂಜಾಟಗಳಿಂದ ಮುಕ್ತಿ ಹೊಂದಲು ಸಾಧ್ಯ ಎಂದು ಅಕ್ಷರ ದಾಸೋಹ ನಿವೃತ್ತ ಸಹಾಯಕ ನಿರ್ದೇಶಕ ಜಿ ಎನ್, ರೊಡಲಬಂಡಿ ಹೇಳಿದರು.

ಪಟ್ಟಣದ ಹಿರೇಮಠ ಸಂಸ್ಥಾನದಲ್ಲಿ ಹಮ್ಮಿಕೊಂಡಿದ್ದ ಮಾಸಿಕ ಹುಣ್ಣಿಮೆಯ ಶಿವಾನುಭವ ಗೋಷ್ಠಿಯಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿದ ಅವರು ಭವರೋಗ ಕಳೆಯಲು ಭಗವಂತನ ನಾಮ ಸ್ಮರಣೆ ಸಾಕು, ಪುರಾಣ, ಪ್ರವಚನ, ಭಜನೆ, ಕೀರ್ತನೆ, ಸತ್ಸಂಗ, ಶಿವಾನುಭವ, ಸಾಹಿತ್ಯ, ಸಂಗೀತ, ಸತ್ಕಾರ್ಯಗಳಲ್ಲಿ ಭಾಗವಹಿಸುವ ಸದ್ಭಕ್ತರು ಸದಾ ಪುಣ್ಯವಂತರು ಎಂದರು.

ಮುರಾರ್ಜಿ ದೇಸಾಯಿ ವಸತಿ ಶಾಲೆಯ ಸಂಗೀತ ಶಿಕ್ಷಕ, ಪುರಾಣ ಪ್ರವಚನಕಾರ ರಮೇಶ ಶಾಸ್ತ್ರೀ ಯಾಳಗಿ ಮಾಸಿಕ ಹುಣ್ಣಿಮೆಯ ಶಿವಾನುಭವ ಗೋಷ್ಠಿಯನ್ನು ಉದ್ಘಾಟಿಸಿ ಮಾತನಾಡಿದ ಅವರು ಗುರುವಿನ ಸ್ಪರ್ಶ, ಗುರುವಿನ ವಾಣಿ, ಗುರುವಿನ ದರ್ಶನದಿಂದ ಮಾನವ ಜನ್ಮ ಮುಕ್ತಿ ಹೊಂದಲು ಸಾಧ್ಯ ಎಂದವರು, ಮಲ ಮೂತ್ರದ ಈ ಕಾಯ ಮಣ್ಣಾಗುವ ಮುನ್ನ ಮಹಾದೇವನ ನೆನೆಯಲು ಸದ್ಭಕ್ತರು ಸತ್ಸಂಗದಲ್ಲಿ ಸೇರಬೇಕು, ಕಾಯ ಶುದ್ಧಿಗೆ ಕಾಂತೇಶ್ವರನ ನಿತ್ಯವೂ ಭಜಿಸಿ ಮುಕ್ತಿ ಪಡೆಯೋಣ ಎನ್ನುತ್ತಾ, ಮುಂಬರುವ ದಿನಗಳಲ್ಲಿ ಮಾಸಿಕ ಶಿವಾನುಭವ ಗೋಷ್ಠಿಯು ದಶಮಾನೋತ್ಸವ ಸಂಭ್ರಮಕ್ಕೆ ಸಾಕ್ಷಿಯಾಗುತ್ತಿರುವವುದು, ಪೀಠಾಧಿಪತಿ ಚನ್ನಬಸವ ಶಿವಾಚಾರ್ಯರ ಕಾರ್ಯ ಅಭಿನಂದನೀಯ ಎಂದು ಬಣ್ಣಿಸಿದರು.

ಷ ಬ್ರ ಶ್ರೀ ಚನ್ನಬಸವ ಶಿವಾಚಾರ್ಯರು ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದವರು ಸದ್ಭಕ್ತರು ಮಾಸಿಕ ಶಿವಾನುಭವ ಗೋಷ್ಠಿಯ ಸದುಪಯೋಗ ಪಡೆದುಕೊಂಡು ಸನ್ಮಾರ್ಗದಲ್ಲಿ ಸಾಗಲು ಆಶಿಸಿದರು. ಮನೋಜ್ ಶ್ರೀನಿವಾಸ ಪತ್ತಾರ ಯಾಳಗಿ ಯಮನೇಶ ಯಾಳಗಿ ಸೋಮನಾಥ ಯಾಳಗಿ ಇವರಿಂದ ಸಂಗೀತ ಕಾರ್ಯಕ್ರಮ ಅದ್ಭುತವಾಗಿ ಮೂಡಿಬಂದು ಕೇಳುಗರ ಕರ್ಣಗಳಿಗೆ ಆನಂದ ತಂದಿತ್ತು. ಪ್ರಮುಖರಾದ ಸಾಹಿತಿ ನಿಂಗನಗೌಡ ದೇಸಾಯಿ, ವಚನ ಸಾಹಿತಿ, ವೀರಣ್ಣ ಕಲಿಕೇರಿ, ಶರಣಪ್ಪ ನಡಕೂರ, ಸಿದ್ದು ತಳ್ಳೊಳ್ಳಿ, ಅಭಿಷೇಕ್ ಪಾಟೀಲ, ನಿಜಗುಣ ವಿಶ್ವಕರ್ಮ, ಅವ್ವಣ್ಣ ಮಡಿವಾಳಕರ್, ಸೇರಿದಂತೆ ಮಹಿಳೆಯರು ಮಕ್ಕಳು ಸುತ್ತಮುತ್ತಲಿನ ಗ್ರಾಮದ ಸದ್ಭಕ್ತರು ಉಪಸ್ಥಿತರಿದ್ದರು. ಡಾ ಯಂಕನಗೌಡ ಪಾಟೀಲ ನಿರೂಪಿಸಿ ವಂದಿಸಿದರು.

## ಸುಳ್ಳು ಪ್ರಕರಣ ದಾಖಲಿಸಿದ ಮಹಿಳೆಯ ಮೇಲೆ ಸೂಕ್ತ ಕ್ರಮಕ್ಕೆ ಒತ್ತಾಯ

• ಉದಯವಾಹಿನಿ ಚಿತ್ತಾಪುರ

ದಲಿತ ಸೇನೆ ರಾಜ್ಯಾಧ್ಯಕ್ಷ ಹಾಗೂ ನ್ಯಾಯವಾದಿ ಹಣಮಂತ ಯಳಸಂಗಿ ಅವರ ಮೇಲೆ ಸುಳ್ಳು ಪ್ರಕರಣ ದಾಖಲಿಸಿದ ಮಹಿಳೆಯ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕೆಂದು ದಲಿತ ಸೇನೆ ಜಿಲ್ಲಾ ವಿದ್ಯಾರ್ಥಿ ಒಕ್ಕೂಟ ಘಟಕದ ಅಧ್ಯಕ್ಷ ಮೋಹನ್ ಎಸ್ ಚಿನ್ನ ಒತ್ತಾಯಿಸಿದ್ದಾರೆ. ಗೃಹ ಮಂತ್ರಿಯವರಿಗೆ ಬರೆದ ಮನವಿ ಪತ್ರವನ್ನು ಶಿರಸ್ತೆದಾರ ಅಶ್ವಥನಾರಾಯಣ ಕುಲಕರ್ಣಿ ಅವರಿಗೆ ಮಂಗಳವಾರ ಸಲ್ಲಿಸಿದರು.

ಸುಳ್ಳು ದಾಖಲೆ ಮಾಡಿದ ಮಹಿಳೆಯರು ರೌಡಿಶೀಟರ್‌ಗಳ ಕುಮ್ಮಕ್ಕಿನಿಂದ ಕಲಬುರಗಿ ಸ್ಟೇಷನ್ ಬಜಾರ್ ಪೊಲೀಸ್ ಠಾಣೆಯಲ್ಲಿ ಸುಳ್ಳು ಪ್ರಕರಣ ದಾಖಲಿಸಿದ್ದಾರೆ. ಕಲಬುರಗಿಯಲ್ಲಿ ಕೆಲವು ಗುಂಡಾ ಪಡೆಗಳು ರೌಡಿಶೀಟರ್‌ಗಳು ದಲಿತ ಸೇನೆ ಸಂಘಟನೆಯ ರಾಜ್ಯಾಧ್ಯಕ್ಷ ಹಣಮಂತ್ ಯಳಸಂಗಿ ಅವರ ಮೇಲೆ ಇಲ್ಲ ಸಲ್ಲದ ಆರೋಪಗಳನ್ನು ಮಾಡಿ ಕಲಬುರಗಿ



ಉದಯವಾಹಿನಿ ಚಿತ್ರ

**ಗೃಹ ಮಂತ್ರಿಗೆ ಮನವಿ ಪತ್ರ**

ನಗರದಲ್ಲಿ ಕಾನೂನು ಮತ್ತು ಸುವ್ಯವಸ್ಥೆಗೆ ಧಕ್ಕೆ ತರುತ್ತಿದ್ದಾರೆ. ಹೀಗಾಗಿ ಈ ಪ್ರಕರಣವನ್ನು ಗೃಹ ಮಂತ್ರಿಗಳು ಸೂಕ್ತ ತನಿಖೆಗೆ ಆದೇಶ ಮಾಡಬೇಕೆಂದು ಒತ್ತಾಯಿಸಿದರು.

ಹಣಮಂತ್ ಯಳಸಂಗಿಯವರು ಶೋಷಿತ ವರ್ಗದವರ ಹಿತಾಶಕ್ತಿ ಕಾಪಾಡುವ ದೃಷ್ಟಿಯಿಂದ ಹೆಸರುವಾಸಿ ಹೋರಾಟಗಾರರಾಗಿದ್ದಾರೆ. ಅವರ ವಿರುದ್ಧ ಅತ್ಯಂತ ಕೀಳು ಮಟ್ಟದ ಮಾಡಲಾಗಿರುವ ಆರೋಪಗಳು ಸಂಪೂರ್ಣ ಸುಳ್ಳು ಮತ್ತು ಅವಿಶ್ವಾಸನೆಯವಾಗಿದ್ದು, ಹಣಮಂತ ಯಳಸಂಗಿಯವರ ಮಾನಹಾನಿ ಮಾಡಲು ಹಾಗೂ ದಲಿತ ಸೇನೆಯ ಚಟವಟಿಕೆಗಳಿಗೆ ಕೆಟ್ಟ ಹೆಸರು ತರಲು ದೊಡ್ಡ ಷಡ್ಯಾಂತ ರವಾಗಿದೆ. ಸುಳ್ಳು ಆರೋಪಗಳನ್ನು ಸರಿಯಾದ ರೀತಿಯಲ್ಲಿ ಪರಿಶೀಲನೆ ಮಾಡದಿದ್ದರೆ. ರಾಜ್ಯಾದ್ಯಂತ ಹೋರಾಟ ಮಾಡಲಾಗುವುದು ಎಂದು ಮನವಿ ಪತ್ರದಲ್ಲಿ ತಿಳಿಸಿದರು. ಹಣ ಮಂತ ಯಳಸಂಗಿ ಮಾನಹಾನಿ ಉಂಟು ಮಾಡಿದ ಸುಳ್ಳು ದೂರು ನೀಡಿದ ಮಹಿಳೆಯರ ವಿರುದ್ಧ ಕಲಬುರಗಿ ಪೊಲೀಸ್ ವರಿಷ್ಠಾಧಿಕಾರಿಗಳು ತಕ್ಷಣ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು. ಸುಳ್ಳು ದೂರು ನೀಡಿದ ಕಾರಣಕ್ಕೆ ಸ್ವಯಂ ಪ್ರೇರಿತವಾಗಿ ಪ್ರಕರಣವನ್ನು ದಾಖಲಿಸಿ ಹನಿ ಟ್ರ್ಯಾಕ್ ತಂದೆಯ ಬಗ್ಗೆ ತನಿಖೆ ಮಾಡಬೇಕೆಂದು ಮನವಿ ಪತ್ರದಲ್ಲಿ ಒತ್ತಾಯಿಸಿದ್ದಾರೆ.

ದಲಿತ ಸೇನೆ ತಾಲ್ಲೂಕು ಉಪಾಧ್ಯಕ್ಷ ಅಂಬರೀಶ್ ರಂಗನೂರ್, ದಲಿತ ಸೇನೆ ತಾಲ್ಲೂಕು ಕಾರ್ಯದರ್ಶಿ ಸಜ್ಜನ್ ಕುಮಾರ್ ಗಾಯಕ್ವಾಡ್ ಸೇರಿದಂತೆ ಇತರರಿದ್ದರು.

## ಪತ್ರಕರ್ತ ಮಲ್ಲು ಕೆಂಭಾವಿಗೆ ಬಸವ ಶ್ರೀರಕ್ಷೆ ಗೌರವ

• ಉದಯವಾಹಿನಿ ಸಿಂದಗಿ

ತಾಲ್ಲೂಕಿನ ಹಿಕ್ಕನಗುತ್ತಿ ಗ್ರಾಮದ ಲಿಂಗಾಯತ ಮಹಾಮಠದಲ್ಲಿ ಅನಂತನ ಹುಣ್ಣಿಮೆಯ ಪ್ರಯುಕ್ತ ಹಮ್ಮಿಕೊಂಡ 7ನೇಯ ಮಾಸಿಕ ಶಿವಾನುಭವ ಕಾರ್ಯಕ್ರಮ, ಶಿವಶರಣ ಹೂಗಾರ ಮಾದಯ್ಯ ಜಯಂತಿ, ಪ್ರವಚನ ಪಿತಾಮಹ ಜಗದ್ಗುರು ಲಿಂಗಾನಂದ ಮಹಾಸ್ವಾಮಿಗಳ ಜಯಂತಿ, ರಾಷ್ಟ್ರೀಯ ಬಸವದಳ ಸಂಸ್ಥಾಪನಾ ದಿನ, ಶರಣ ದಿ.ಡಾ. ಎಂ.ಎಂ.ಕಲಬುರಗಿ ಅವರ ಸ್ಮರಣೋತ್ಸವ ಕಾರ್ಯಕ್ರಮದಲ್ಲಿ ಬ್ರಹ್ಮದೇವನಮಡುವಿನ ವಿಜಯವಾಣಿ ಪತ್ರಕರ್ತ ಮಲ್ಲಿಕಾರ್ಜುನ ಕೆಂಭಾವಿ, ಸಮಾಜ ಸೇವಕ ಚಂದ್ರಶೇಖರ ಕೆಂಭಾವಿ ಅವರಿಗೆ ಬಸವ ಶ್ರೀರಕ್ಷೆ ನೀಡಿ ಗೌರವಿಸಲಾಯಿತು. ಈ ವೇಳೆ ಶ್ರೀಮಠದ ಪ್ರಭುಲಿಂಗ ಶರಣರು,ಕಾನಿಪ ಅಧ್ಯಕ್ಷ ಆನಂದ ಶಾಬಾದಿ, ಪತ್ರಕರ್ತ ಮಹಾಂತೇಶ ನೂಲನ್ನವರ,ಶರಣಬಸಪ್ಪ ಗಂಗಶೆಟ್ಟಿ,ಜಗದೀಶ ಕಲಬುರ್ಗಿ, ಕಾಶೀನಾಥ ಸುಳ್ಳೊಳ್ಳಿ, ಚಿಂಚೋಳ್ಳಿಯ ಕಲ್ಲಾಲಿಂಗೇಶ್ವರ ಮಠದ ಶರಣಬಸವ ಶರಣರು,ಮಲ್ಲನಗೌಡ ಪಾಟೀಲ, ಡಾ.ಬಸವರಾಜ ಹೂಗಾರ,ಡಾ.ಚಂದ್ರಶೇಖರ ಹೂಗಾರ, ಸಂತೋಷ



ಉದಯವಾಹಿನಿ ಚಿತ್ರ

ಹೊಟಗಾರ,ಸಾಹೇಬಗೌಡ ಮುಳಸಾವಳಗಿ, ಮಲಕಣ್ಣ ತಳವಾರ ಸೇರಿದಂತೆ ಶ್ರೀಮಠದ ಭಕ್ತರು, ಗ್ರಾಮಸ್ಥರು, ವಿವಿಧ ಸಮಾಜದ ಮುಖಂಡರು ಉಪಸ್ಥಿತರಿದ್ದರು.

ಪೋಟು ಬಿ-ಮಡು 19-01 ಸಿಂದಗಿ ತಾಲೂಕಿನ ಹಿಕ್ಕನಗುತ್ತಿ ಗ್ರಾಮದ ಲಿಂಗಾಯತ ಮಹಾಮಠದಲ್ಲಿ ಹುಣ್ಣಿಮೆಯ ಪ್ರಯುಕ್ತ ನಡೆದ ಮಾಸಿಕ ಶಿವಾನುಭವ ಕಾರ್ಯಕ್ರಮದಲ್ಲಿ ಪತ್ರಕರ್ತ ಮಲ್ಲಿಕಾರ್ಜುನ ಎನ್. ಕೆಂಭಾವಿ ಹಾಗೂ ಸಮಾಜ ಸೇವಕ ಚಂದ್ರಶೇಖರ ಕೆಂಭಾವಿ ಅವರಿಗೆ ಬಸವ ಶ್ರೀರಕ್ಷೆ ಪ್ರಶಸ್ತಿ ನೀಡಿ ಶ್ರೀಮಠ ಪ್ರಭುಲಿಂಗ ಶರಣರು ಸನ್ಮಾನಿಸಿ ಗೌರವಿಸಿದರು. ಈ ವೇಳೆ ಜಗದೀಶ ಕಲಬುರ್ಗಿ,ಕಾನಿಪ ಅಧ್ಯಕ್ಷ ಆನಂದ ಶಾಬಾದಿ,ಪತ್ರಕತ9 ಮಹಾಂತೇಶ ನೂಲನ್ನವರ ಇದ್ದರು.

## ಆಗುಂಬೆ ಘಾಟಿಯಲ್ಲಿ ವಾಹನ ಬ್ರೇಕ್ ಫೇಲ್ ಟ್ರಾಫಿಕ್‌ನಲ್ಲಿ ಸಿಲುಕಿದ ಆಂಬ್ಯುಲೆನ್ಸ್

• ಉದಯವಾಹಿನಿ, ತೀರ್ಥಹಳ್ಳಿ

ವಾಹನವೊಂದರ ಬ್ರೇಕ್ ಫೇಲ್ ಆದ ಕಾರಣ ಉಳಿದ ಎಲ್ಲಾ ವಾಹನಗಳ ಓಡಾಟಕ್ಕೆ ತೊಂದರೆಯಾಗಿ ಸಂಪೂರ್ಣ ಟ್ರಾಫಿಕ್ ಆಗಿರುವ ಘಟನೆ ಆಗುಂಬೆ ಘಾಟಿಯಲ್ಲಿ ಗುರುವಾರ ನಡೆದಿದೆ. ತೀರ್ಥಹಳ್ಳಿ ಭಾಗದಿಂದ ಉಡುಪಿ ಕಡೆ ಹಾಗೂ ಉಡುಪಿ ಕಡೆಯಿಂದ ತೀರ್ಥಹಳ್ಳಿ ಕಡೆಗೆ ಬರುವ ವಾಹನಗಳು ಕಳೆದ ಅರ್ಧಗಂಟೆಗೂ ಹೆಚ್ಚು ಕಾಲದಿಂದ ನಿಂತಲ್ಲಿಯೇ ನಿಂತಿದ್ದು ವಾಹನ ಸವಾರರು ಪರದಾಟ ನಡೆಸುತ್ತಿದ್ದಾರೆ. ಇತ್ತ ಅದರ ನಡುವೆಯೇ ಆಂಬ್ಯುಲೆನ್ಸ್ ಗಳು ಸಹ ಓಡಾಟ ನಡೆಸಲು ಪರದಾಟ ನಡೆಸುತ್ತಿವೆ. ಸ್ಥಳದಲ್ಲಿ ಪೊಲೀಸರು ಇದ್ದು ವಾಹನ ಓಡಾಟಕ್ಕೆ ಅನುವು ಮಾಡಿ ಕೊಡಲು ಹರ ಸಾಹಸ ಪಡುತ್ತಿದ್ದಾರೆ.

## ವಿವಾದಿತ ಫ್ಲೆಕ್ಸ್ ಹಾಗೂ ಖಡ್ಗ ತೆರವು

• ಉದಯವಾಹಿನಿ, ಶಿವಮೊಗ್ಗ

ಭದ್ರಾವತಿಯಲ್ಲಿ ವಿವಾದಿತ ಫ್ಲೆಕ್ಸ್, ಟಿಪ್ಪು ಖಡ್ಗ ಪ್ರದರ್ಶನ ವಿಚಾರಕ್ಕೆ ಸಂಬಂಧಿಸಿದಂತೆ ಪೊಲೀಸರು ಫ್ಲೆಕ್ಸ್-ಖಡ್ಗಗಳನ್ನು ತೆರವು ಮಾಡಿದ್ದಾರೆ. ಈದ್ ಮಿಲಾದ್ ಹಬ್ಬದ ಹಿನ್ನೆಲೆಯಲ್ಲಿ ಫ್ಲೆಕ್ಸ್, ಖಡ್ಗ ಅಳವಡಿಸಿದ್ದಾರೆ. ಭದ್ರಾವತಿ ನಗರದ ಹಲವೆಡೆ ಫ್ಲೆಕ್ಸ್ ಹಾಕಿದ್ದರು. ವಿವಾದಿತ ಫ್ಲೆಕ್ಸ್ ಹಾಗು ಖಡ್ಗ ಪೊಲೀಸರು ತೆರವು ಮಾಡಿದ್ದಾರೆ.

## ಮಂಗಳೂರು ಮಹಾನಗರ ಪಾಲಿಕೆಯ ನೂತನ ಮೇಯರ್ ಆಗಿ ಮನೋಜ್ ಕುಮಾರ್ ಆಯ್ಕೆ

• ಉದಯವಾಹಿನಿ, ಮಂಗಳೂರು

ಮಂಗಳೂರು ಮಹಾನಗರ ಪಾಲಿಕೆಯ ನೂತನ ಮೇಯರ್ ಆಗಿ ಬಿಜೆಪಿ ಅಭ್ಯರ್ಥಿ ಮನೋಜ್ ಕುಮಾರ್ ಕೋಡಿಕಲ್ , ಉಪಮೇಯರ್ ಆಗಿ ಬಿಜೆಪಿ ಬೆಂಬಲಿತ ಸದಸ್ಯೆ ಭಾನುಮತಿ ಆಯ್ಕೆ ಆಗಿದ್ದಾರೆ. ಮಹಾನಗರ ಪಾಲಿಕೆಯ ಸಭಾಂಗಣದಲ್ಲಿ ನಡೆದ ಚುನಾವಣೆ ನಡೆದಿದ್ದು, ಮೇಯರ್ ಹುದ್ದೆಗೆ ಎಸ್ ಸಿ ಮೀಸಲಾತಿಯಡಿ ಕಾಂಗ್ರೆಸ್ ಅಭ್ಯರ್ಥಿಗಳು ಇಲ್ಲದ ಕಾರಣ ಮೇಯರ್ ಆಯ್ಕೆ ಅವಿರೋಧವಾಗಿ ನಡೆಯಿತು. ಒಟ್ಟು 60 ವಾರ್ಡ್ ಗಳನ್ನು ಹೊಂದಿರುವ ಮಂಗಳೂರು ಮಹಾನಗರ ಪಾಲಿಕೆಯಲ್ಲಿ ಬಿಜೆಪಿ 44, ಕಾಂಗ್ರೆಸ್ 14 ಮತ್ತು ಎಸ್‌ಡಿಪಿಐ ಎರಡು ಸದಸ್ಯ ಬಲವನ್ನು ಹೊಂದಿದೆ.

## ನಗರಸಭೆಯ ಸಾಮಾನ್ಯ ಸಭೆಯಲ್ಲಿ ನಿಯಮ ಮೀರಿ ಮಹಿಳಾ ಸದಸ್ಯರ ಪತಿರಾಯರು ಭಾಗಿ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಗಂಗಾವತಿ

ಶಾಸಕ ಗಾಲಿ ಜನಾರ್ದನರೆಡ್ಡಿ ಪಾಲ್ಗೊಂಡಿದ್ದ ನಗರಸಭೆಯ ಪ್ರಥಮ ಸಾಮಾನ್ಯ ಸಭೆಯಲ್ಲಿ ನಗರಸಭೆಯ ಸದಸ್ಯರಲ್ಲದವರು ಪಾಲ್ಗೊಂಡು ಸಾಮಾನ್ಯ ಸಭೆಯ ನಿಯಮ ಉಲ್ಲಂಘನೆ ಮಾಡಿದ್ದು ಕಂಡು ಬಂತು. ಸಾಮಾನ್ಯ ಸಭೆಯಲ್ಲಿ ಸದಸ್ಯರು, ಅಪೇಕ್ಷಿತ ಅಧಿಕಾರಿಗಳು ಮತ್ತು ಪತ್ರಕರ್ತರು ಪಾಲ್ಗೊಳ್ಳುವುದು ನಿಯಮ ಬದ್ಧವಾಗಿದ್ದು, ಸೆ.19ರ ಗುರುವಾರ ನಡೆದ ಸಭೆಯಲ್ಲಿ ಮಹಿಳಾ ಸದಸ್ಯರ ಪತಿರಾಯರು ಮತ್ತು ಅವರ ಸಂಬಂಧಿಕರು ಪಾಲ್ಗೊಂಡಿದ್ದರು. ಸದಸ್ಯರಲ್ಲದವರನ್ನು ಸಭೆಯಿಂದ ಹೊರಗೆ ಕಳುಹಿಸಲಾಗದೇ ಪತ್ರಕರ್ತರಿಗೆ ಮಾಹಿತಿ ನೀಡಲಾಗದೇ ಮುಜುಗರಕ್ಕೊಳಗಾಗಿದ್ದು ಕಂಡು ಬಂತು. ಸಭೆಯಲ್ಲಿ ಅಭಿಷೇಕ ಸಿರಿಗೇರಿ, ಕಾಶಿಂ ಅಲಿ ಮುದ್ದಾಬಳ್ಳಿ, ದೇವಪ್ಪ ನಾಯಕ, ರಾಚಪ್ಪ ಸಿದ್ದಾಪೂರ, ಪರಶುರಾಮ ಕಿರಿಕಿರಿ, ದುರುಗೇಶ,ಸೋಮನಾಥ ಕಂಪ್ಲಿ, ಅಮರೇಗೌಡ ಸೇರಿ ಕೆಲ ಮುಖಂಡರು ಪಾಲ್ಗೊಂಡಿದ್ದರು.

## ಸರ್ಕಾರದ ಯೋಜನೆಗಳನ್ನು ಸದುಪಯೋಗಪಡಿಸಿಕೊಳ್ಳಿ

• ಉದಯವಾಹಿನಿ, ಚಿತ್ತಾಪುರ

ಸರ್ಕಾರದ ಪ್ರತಿಯೊಂದು ಯೋಜನೆ ಹಾಗೂ ಸೌಲಭ್ಯಗಳು ವಿದ್ಯಾರ್ಥಿಳು ಪಡೆದುಕೊಂಡು ಉತ್ತಮ ಶಿಕ್ಷಣವಂತರಾಗಿ ಶಿಕ್ಷಕರಿಗೆ ಹಾಗೂ ಪಾಲಕರಿಗೆ ಕೀರ್ತಿ ತರಬೇಕು ಎಂದು ಪುರಸಭೆ ಮಾಜಿ ಅಧ್ಯಕ್ಷ, ಹಾಲಿ ಸದಸ್ಯ ಮಲ್ಲಿಕಾರ್ಜುನ ಕಾಳಗಿ ಹೇಳಿದರು.

ಪಟ್ಟಣದ ಬಸವನಗರ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ 2024-25 ನೇ ಶೈಕ್ಷಣಿಕ ಸಾಲಿನ ಮಕ್ಕಳಿಗೆ ಶೂ, ಸಾಕ್ಸ್ ವಿತರಿಸಿ ಮಾತನಾಡಿದ ಅವರು, ಬಡ ಮಕ್ಕಳ ಪಾಲಿಗೆ ಶೂ, ಸಾಕ್ಸ್ ಯೋಜನೆ ಒಂದು ಸೌಭಾಗ್ಯವಾಗಿದೆ ಎಂದರು. ಮಕ್ಕಳು ಗುಣಮಟ್ಟದ ಶಿಕ್ಷಣ ಪಡೆ ಯುವಂತಾಗಬೇಕು. ಶಿಕ್ಷಕರು ಮಕ್ಕಳಿಗೆ ಉತ್ತಮ ಸಂಸ್ಕಾರಯುತ ಶಿಕ್ಷಣ



ಉದಯವಾಹಿನಿ ಚಿತ್ರ

**ಶೂ, ಸಾಕ್ಸ್ ವಿತರಣೆ**

ನೀಡಬೇಕೆಂದು ಹೇಳಿದರು.

ಮುಖ್ಯಗುರು ದೇವಪ್ಪ ನಂದೂರಕರ್ ಅಧ್ಯಕ್ಷತೆ ವಹಿಸಿದ್ದರು. ಪುರಸಭೆ ನೈರ್ಮಲ್ಯಾಧಿಕಾರಿ ಶರಣಕುಮಾರ, ಎಸ್‌ಡಿಎಂಸಿ ಅಧ್ಯಕ್ಷೆ ಮಂಜುಳಾ ಆಚಿಕೇರಿ, ಸದಸ್ಯರಾದ ಬಿಬೀ ಬೆನಕನಳ್ಳಿ ಶಿಕ್ಷಕರಾದ ಲಲಿತಾದೇವಿ ಸಜ್ಜನಶೆಟ್ಟಿ, ದೇವಿ ಕೋಬಾಳ್ಕರ್, ಮಲ್ಲಮ್ಮ ಸೇರಿದಂತೆ ಇತರರಿದ್ದರು. ವೀರಸಂಗಪ್ಪ ಸುಲೆಗಾಂವ ನಿರೂಪಣೆ ಮಾಡಿದರು.

## ನಗರದಲ್ಲಿ ಸರಣಿ ಕಳ್ಳತನ: ಲಕ್ಷಾಂತರ ರೂ. ನಗದು ಕಳವು

• ಉದಯವಾಹಿನಿ ದಾಂಡೇಲಿ

ನಗರದ ಲಿಂಕ್ ರಸ್ತೆಯಲ್ಲಿ ಸರಣಿ ಕಳ್ಳತನ ನಡೆದಿದ್ದು, ಗುರುವಾರ ಬೆಳಿಗ್ಗೆ 10:00 ಸುಮಾರಿಗೆ ದಾಂಡೇಲಿ ನಗರ ಠಾಣೆಯ ಪೊಲೀಸರು ಭೇಟಿ ನೀಡಿ ಪರಿಶೀಲನೆಯನ್ನು ನಡೆಸಿದ್ದಾರೆ. ನಗರದ ಲಿಂಕ್ ರಸ್ತೆಯಲ್ಲಿರುವ ಅಭಿಷೇಕ್ ಕಾಳೆ ಮಾಲಕತ್ವದ ಮೆಡಿಕಲ್ ಅಂಗಡಿಗೆ ಅಂಗಡಿಯ ಮೇಲ್ಛಾವಣಿಯ ಸೀಟು ಒಡೆದು ಒಳ ನುಗ್ಗಿರುವ ಕಳ್ಳರು, ಅಂಗಡಿ ಒಳಗಿದ್ದ ನಗದು 4 ಲಕ್ಷ ರೂಪಾಯಿ ಮತ್ತು ಚಿನ್ನದ ಆಭರಣಗಳನ್ನು ಕೆಲವು ಮಾಡಿದ್ದಾರೆ. ಇದೇ ಕಟ್ಟಡದಲ್ಲಿರುವ ಪಕ್ಕದ ಶರಣ್.ಸಿ. ಅರಳಿಯವರ ಕಿರಾಣಿ ಅಂಗಡಿಗೂ ನುಗ್ಗಿರುವ ಕಳ್ಳರು ಅಲ್ಲಿ 45ರಿಂದ 50 ಸಾವಿರ ರೂಪಾಯಿ ನಗದನ್ನು ದೋಚಿದ್ದಾರೆ. ಇನ್ನೂ ಇಲ್ಲೇ ಹತ್ತಿರದಲ್ಲಿರುವ ವಿಷ್ಣು ಕಲಾಲ್ ಅವರು ನಡೆಸುತ್ತಿರುವ ಮೈಲಾರ ವೈನ್ ಸೆಂಟರಿಗೆ ಬೀಗ ಮುರಿದು ಒಳ ನುಗ್ಗಿರುವ ಕಳ್ಳರು, ಅಲ್ಲಿಯೂ ಸರಿ ಸುಮಾರು 35 ಸಾವಿರ ನಗದನ್ನು ಹಾಗೂ ವಿವಿಧ ಮದ್ಯದ ಬಾಟಲಿಗಳನ್ನು ಕಳವುಗೈದ್ದಿದ್ದಾರೆ.

ಮೈಲಾರ ವೈನ್ ಸೆಂಟರಿನ ಮುಂಭಾಗದಲ್ಲಿರುವ ಕಿರಣ್ ಕರಡಿ ಅವರ ಎಲ್ ಜಿ ಕಿರಾಣಿ ಅಂಗಡಿಗೂ, ಅಂಗಡಿಯ ಮೇಲ್ಛಾವಣಿ ಶೀಟು ಒಡೆದು ರೂ : 2,000/- ನಗದನ್ನು ಕಳವು ಮಾಡಿದ್ದಾರೆ. ಮೈಲಾರ ವೈನ್ ಸೆಂಟರಿಗೆ ನುಗ್ಗಿ ಕಳವು ಮಾಡುತ್ತಿರುವ ದೃಶ್ಯ ಸಿಸಿ ಕ್ಯಾಮೆರಾದಲ್ಲಿ ಸೆರೆಯಾಗಿದೆ. ಗುರುವಾರ ನಸುಕಿನ ವೇಳೆ ಸುಮಾರು ಎರಡುವರೆ ಗಂಟೆಯಿಂದ ನಾಲ್ಕು ಗಂಟೆಯ ಒಳಗಡೆ ಈ ಕಳ್ಳತನ ಕೃತ್ಯ ನಡೆದಿದೆ ಎನ್ನಲಾಗಿದೆ.

**ಹಣ ಡೆಬಿಟ್ ಫ್ರಿಜ್**

**ಗುರುವಾರ ಬೆಳಿಗ್ಗೆ ಎಂದಿನಂತೆ ತಮ್ಮ ತಮ್ಮ ಅಂಗಡಿಗಳಿಗೆ ಬಂದ ಮಾಲಕರಿಗೆ ಕಳ್ಳತನವಾಗಿರುವುದು ಗೊತ್ತಾಗಿದೆ. ತಕ್ಷಣವೇ ಕಳ್ಳತನದ ಬಗ್ಗೆ ದಾಂಡೇಲಿ ನಗರ ಠಾಣೆಯ ಪೊಲೀಸರಿಗೆ ಮಾಹಿತಿಯನ್ನು ನೀಡಲಾಗಿದೆ. ನಗರ ಠಾಣೆಯ ಪೊಲೀಸರು ಕಳ್ಳತನವಾಗಿರುವ ಅಂಗಡಿಗಳಿಗೆ ತೆರಳಿ ಪರಿಶೀಲನೆಯನ್ನು ನಡೆಸಿ ಮುಂದಿನ ಕ್ರಮವನ್ನು ಕೈಗೊಂಡಿದ್ದಾರೆ.**

# ಬಳ್ಳಾರಿ ಕಂಪನಿಯಿಂದ 2 ಕೋಟಿ ದೋಚಿದ 23ರ ಯುವಕ

## ಮಧ್ಯಪ್ರದೇಶದಲ್ಲಿ ಆರೋಪಿಯನ್ನು ಬಂಧಿಸಿ ರೂ. 1,21,04,500 ಹಣ ಮತ್ತು ಕೃತ್ಯಕ್ಕೆ ಬಳಕೆ ಮಾಡಿದ್ದ ಮೊಬೈಲ್ ವಶಕ್ಕೆ

• ಉದಯವಾಹಿನಿ ಬಳ್ಳಾರಿ

ವಿವೋ ಕಂಪನಿಯ ಮೊಬೈಲ್ ಮೂಲಕ 23 ವರ್ಷದ ಯುವಕನೊಬ್ಬ ಬಳ್ಳಾರಿಯ ಕಂಪನಿಗೆ ಪಂಗನಾಮ ಹಾಕಿದ್ದ. ಈ ಸೈಬರ್ ಕ್ರೈಂನ ತನಿಖೆ ಕೈಗೊಂಡ ಪೊಲೀಸರು ಹಣವನ್ನು ಜಪ್ತಿ ಮಾಡಿದ್ದಾರೆ. ದೊಡ್ಡ ಕಂಪನಿಯಿಂದ ಯುವಕ ತನ್ನ ಖಾತೆಗೆ ಹಾಕಿಸಿಕೊಂಡಿದ್ದ ಹಣವನ್ನು ವಶಕ್ಕೆ ಪಡೆದುಕೊಂಡಿದ್ದಾರೆ. ದೂರದಲ್ಲಿ ಕುಳಿತು ಕಂಪನಿ ಯಾಮಾರಿಸಿದ ಯುವಕನ ತಂತ್ರವನ್ನು ನೋಡಿ ಪೊಲೀಸರು ಅಚ್ಚರಿಗೊಂಡಿದ್ದಾರೆ.

ಬಳ್ಳಾರಿಯ ಎಸ್‌ಪಿ ಶೋಭಾರಾಣಿ ಈ ಪ್ರಕರಣದ ಕುರಿತು ಮಾಹಿತಿ ನೀಡಿದ್ದಾರೆ. ಸೈಬರ್, ಆರ್ಥಿಕ, ಮಾದಕ ದ್ರವ್ಯ ಅಪರಾಧ ಪೊಲೀಸ್ ಠಾಣೆ, ಬಳ್ಳಾರಿ ಈ ಕಾರ್ಯಾಚರಣೆಯನ್ನು ನಡೆಸಿದ್ದಾರೆ. ಮಧ್ಯಪ್ರದೇಶದಲ್ಲಿ ಆರೋಪಿಯನ್ನು ಬಂಧಿಸಿ ರೂ. 1,21,04,500 ಹಣ ಮತ್ತು ಕೃತ್ಯಕ್ಕೆ



ಉದಯವಾಹಿನಿ ಚಿತ್ರ

**ನಕಲಿ ಇ-ಮೇಲ್ ಮೂಲಕ ವಂಚನೆ**

ಬಳಕೆ ಮಾಡಿದ್ದ ಮೊಬೈಲ್ ವಶಕ್ಕೆ ಪಡೆದುಕೊಂಡಿದ್ದಾರೆ.

ಬಳ್ಳಾರಿ ಮೂಲದ ಕಂಪನಿಯಿಂದ ವರ್ಗಾವಣೆಯಾದ ಹಣ ಮಾತ್ರವಲ್ಲ. ಆರೋಪಿಯ ಬೇರೆ-ಬೇರೆ ಖಾತೆಗಳಲ್ಲಿದ್ದ ರೂ. 27,97,582 ಹಣವನ್ನು ಸಹ ವಶಕ್ಕೆ ಪಡೆಯಲಾಗಿದೆ. ಪೊಲೀಸರು ಪ್ರಕರಣದ ತನಿಖೆಯನ್ನು ನಡೆಸುತ್ತಿದ್ದು, ಎಸ್‌ಪಿ ಪೊಲೀಸ್ ಸಿಬ್ಬಂದಿಯನ್ನು ಅಭಿನಂದಿಸಿದ್ದಾರೆ.

**ನಕಲಿ ಇ-ಮೇಲ್ ಮೂಲಕ ವಂಚನೆ:** ಈ ಸೈಬರ್ ಕ್ರೈಂ ನಡೆದಿರುವುದು ನಕಲಿ ಇ-ಮೇಲ್ ಮೂಲಕ.

**ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಬಳ್ಳಾರಿ ಸಿಇಎನ್ ಅಪರಾಧ ಪೊಲೀಸ್ ಠಾಣೆಯ ಡಿಎಸ್‌ಪಿ ಡಾ. ಸಂತೋಷ ಚವ್ಹಾಣ್ ನೇತೃತ್ವದ ತಂಡ ತನಿಖಾಧಿಕಾರಿಯಾದ ಪೊಲೀಸ್ ಇನ್ಸ್‌ಪೆಕ್ಟರ್ ರಮಾಕಾಂತ್. ವೈ. ಹೆಚ್. ಮತ್ತು ಸಿಬ್ಬಂದಿಗಳಾದ ಎಎಸ್‌ಐ ಎಂ. ಜಿ. ತಿಪ್ಪೇರುದ್ರಪ್ಪ, ಹನುಮಂತ ರೆಡ್ಡಿ, ಯಲ್ಲೇಶಿ, ವೆಂಕಟೇಶ್ ಮಧ್ಯಪ್ರದೇಶ ರಾಜ್ಯಕ್ಕೆ ತೆರಳಿ ತನಿಖೆ ಕೈಗೊಂಡರು, ತಾಂತ್ರಿಕ ಮಾಹಿತಿ ಸಹಾಯದೊಂದಿಗೆ ಸಾಕ್ಷ್ಯಾಧಾರ ಸಂಗ್ರಹಿಸಿ ಆರೋಪಿ ಅಜಯ್ ಕುಮಾರ್ ಜೈಸ್ವಾಲ್ ಬಂಧಿಸಿದರು.**

ದಿನಾಂಕ 3/9/2024ರಂದು ಬಳ್ಳಾರಿ ಸಿಇಎನ್ ಪೊಲೀಸ್ ಠಾಣೆಯಲ್ಲಿ ಈ ಕುರಿತು ದೂರು ದಾಖಲಾಗಿತ್ತು. ಬಳ್ಳಾರಿ ನಗರದ ಹಿಂದೂಸ್ತಾನ್ ಮೆಟಲ್ ಪ್ರೈವೇಟ್ ಲಿಮಿಟೆಡ್ ಕಂಪನಿಯವರು ಅಗರ್‌ವಾಲ್ ಕೋಲ್ ಕಾರ್ಪೊರೇಷನ್ ಪ್ರೈ. ಲಿಮಿಟೆಡ್ ಕಂಪನಿಯಿಂದ ಕಲ್ಲಿದ್ದಲು ಖರೀದಿ ಮಾಡುತ್ತಿದ್ದರು. ಕಂಪನಿ ಅವರು ಕೊಟ್ಟ ಬ್ಯಾಂಕ್ ಖಾತೆಗಳಿಗೆ ಹಣವನ್ನು ಆನ್‌ಲೈನ್ ಮೂಲಕ ವರ್ಗಾವಣೆ ಮಾಡುತ್ತಿದ್ದರು. ಈ ಮಾಹಿತಿಯನ್ನು ಮಧ್ಯಪ್ರದೇಶದ 23 ವರ್ಷದ ಯುವಕ ಅಜಯ್ ಕುಮಾರ್ ಜೈಸ್ವಾಲ್ ತಿಳಿದಿದ್ದ. ಆರೋಪಿ ಅಗರ್‌ವಾಲ್ ಕೋಲ್ ಕಾರ್ಪೊರೇಷನ್ ಪ್ರೈ. ಲಿಮಿಟೆಡ್ ಕಂಪನಿ ಹೆಸರಿನಲ್ಲಿ ನಕಲಿ ಇ-ಮೇಲ್ ಐಡಿ ಸಿದ್ಧಪಡಿಸಿದ.

ಕಂಪನಿಯ ಬ್ಯಾಂಕ್ ಖಾತೆ ಸಂಖ್ಯೆ ಬದಲಾವಣೆ ಆಗಿದೆ ಎಂದು ನಕಲಿ ಇ- ಮೇಲ್ ಐಡಿ ಮೂಲಕ ತನ್ನ ಮಧ್ಯಪ್ರದೇಶ ರಾಜ್ಯದ ಇಂಡಸ್ ಲ್ಯಾಂಡ್ ಖಾತೆ ಸಂಖ್ಯೆಯನ್ನು ಕಳುಹಿಸಿ ಹಣ ಹಾಕಲು ತಿಳಿಸಿದ್ದ. ಈ ಮೂಲಕ ಆನ್‌ಲೈನ್ ಮೂಲಕವೇ ವಂಚನೆ ಮಾಡಿ, ತನ್ನ ಬ್ಯಾಂಕ್ ಖಾತೆಗೆ 2,11,50,224 ರೂ. ಹಾಕಿಸಿಕೊಂಡು ಕಂಪನಿಗೆ ಮೋಸ ಮತ್ತು ವಂಚನೆ ಮಾಡಿದ್ದ.

**ಹಣ ಡೆಬಿಟ್ ಫ್ರಿಜ್**

**ಆರೋಪಿಯಿಂದ ಹಿಂದೂಸ್ತಾನ್ ಮೆಟಲ್ ಪ್ರೈ. ಲಿಮಿಟೆಡ್‌ಗೆ ವಂಚಿಸಿದ. ನಗದು ಹಣ ರೂ. 1,21,04,500 ವಶಪಡಿಸಿಕೊಂಡಿದ್ದಾರೆ ಮತ್ತು ಆರೋಪಿತನ ಬೇರೆ-ಬೇರೆ ಖಾತೆಗಳಲ್ಲಿದ್ದ ರೂ. 27,97,582 ಹಣವನ್ನು ಡೆಬಿಟ್ ಫ್ರಿಜ್ ಮಾಡಿಸಿ, ಒಟ್ಟು 1,49,02,082 ರೂ. ಹಣವನ್ನು ಹಾಗೂ ಆರೋಪಿ ವಂಚನೆಗೆ ಉಪಯೋಗಿಸಿದ ಒಂದು ಮೊಬೈಲ್ ವಶಕ್ಕೆ ಪಡೆದುಕೊಂಡಿದ್ದಾರೆ.**

# ಪೇಜರ್, ವಾಕಿಟಾಕಿ ಸ್ಫೋಟಕ್ಕೆ ಇಸ್ರೇಲ್‌ನ ಯುನಿಟ್ 8200 ಸಂಚು?

## ಯುನಿಟ್ 8200 ಅತ್ಯಂತ ಕೌಶಲ್ಯ ಹೊಂದಿರುವ ಸೈನಿಕ ತಂಡ, ಲೆಬನಾನ್‌ನಲ್ಲಿ ಹೊಸ ರೀತಿಯಲ್ಲಿ ದಾಳಿ ನಡೆಸಲು ಇಸ್ರೇಲ್ ನಿಯೋಜನೆ



**ಸ್ಫೋಟಕ ಇಡಲು ಸಂಚು**

**ಲೆಬನಾನ್:** ಪೇಜರ್ ಹಾಗೂ ವಾಕಿ ಟಾಕಿ ಸ್ಫೋಟ ಪ್ರಕರಣಗಳ ಬಳಿಕ ಹೆಜ್ಬೊಲ್ಲಾ ಉಗ್ರ ಸಂಘಟನೆಯ ನೆಲೆಯಾದ ಲೆಬನಾನ್‌ನಲ್ಲಿ ಇದೀಗ ಇಂಥಾದ್ದೊಂದು ಕೃತ್ಯ ನಡೆದದ್ದು ಹೇಗೆ ಅನ್ನೋದ್ರ ಚರ್ಚೆ ಶುರುವಾಗಿದೆ. ಅತ್ಯಂತ ರಹಸ್ಯವಾಗಿ ವಾಕಿ ಟಾಕಿ ಹಾಗೂ ಪೇಜರ್‌ಗಳಲ್ಲಿ ಸ್ಫೋಟಕಗಳನ್ನು ಇರಿಸಲು ದೊಡ್ಡ ಮಟ್ಟದ ರಹಸ್ಯ ಕಾರ್ಯಾಚರಣೆ ನಡೆದಿರೋದಂತೂ ಖಚಿತ. ಈ ಕೃತ್ಯದ ಆರೋಪವನ್ನ ಹೆಜ್ಬೊಲ್ಲಾ ಉಗ್ರ ಸಂಘಟನೆ ಇಸ್ರೇಲ್ ಮೇಲೆ ಹೊರಿಸುತ್ತಿದೆಯಾದರೂ, ಈವರೆಗೂ ಈ ವಿಚಾರ ಸಂಬಂಧ ಇಸ್ರೇಲ್ ತುಟಿಕ್ ಪಿಟಿಕ್ ಎಂದಿಲ್ಲ. ಆದರೆ, ಈ ಕೃತ್ಯ ಇಸ್ರೇಲ್‌ನ ಬೇಹುಗಾರಿಕಾ ಸಂಘಟನೆ ಮೊಸಾದ್‌ನ ಕೃತ್ಯ ಎನ್ನಲಾಗುತ್ತಿದ್ದು, ಮೊಸಲಾದ್‌ನ ಘಟಕವಾದ 'ಯುನಿಟ್ 8200' ಈ ಕೃತ್ಯದ ಹಿಂದಿದೆ ಎಂಬ ಮಾತುಗಳು ಕೇಳಿ ಬರುತ್ತಿವೆ.

'ಯುನಿಟ್ 8200' ಘಟಕವು ಅಮೆರಿಕದ ರಾಷ್ಟ್ರೀಯ ಭದ್ರತಾ ಏಜೆನ್ಸಿ ಹಾಗೂ ಬ್ರಿಟನ್‌ನ ಸರ್ಕಾರಿ ಸಂವಹನ ಪ್ರಧಾನ ಕಚೇರಿ ಜೊತೆ ನೇರವಾಗಿ ನಂಟು ಹೊಂದಿದೆ. ಇಸ್ರೇಲ್ ಭದ್ರತಾ ಪಡೆಯಲ್ಲಿ ಅತ್ಯಂತ ದೊಡ್ಡ ಘಟಕವಾಗಿರುವ ಯುನಿಟ್ 8200, 1930ರಲ್ಲೇ ಸ್ಥಾಪನೆಗೊಂಡಿತ್ತು ಅನ್ನೋ ಮಾಹಿತಿ ಇದೆ. ಇಸ್ರೇಲ್‌ಗೆ ಬ್ರಿಟನ್ ಭೂಮಿಯ ಹಕ್ಕು ನೀಡುವ ಮುನ್ನವೇ ಸ್ಥಾಪನೆಗೊಂಡಿದ್ದ ಈ ಘಟಕ, ಇಸ್ರೇಲ್ ಸರ್ಕಾರದಲ್ಲಿ ಬೇಹುಗಾರಿಕಾ ದಳವಾಗಿ ಕಾರ್ಯ ನಿರ್ವಹಿಸುತ್ತಿದೆ. ಆರಂಭದಲ್ಲಿ 'ಶಿಮ್ ಮಿನ್ 2' ಎಂಬ ಹೆಸರಿನಲ್ಲಿ ಇದ್ದ ಈ ಘಟಕ 1948ರಲ್ಲಿ ಇಸ್ರೇಲ್ ಉಗಮಕ್ಕೆ ಕಾರಣವಾಗಿತ್ತು. ಜೊತೆಯಲ್ಲೇ ಈ ತಂಡವನ್ನು 515 ಹಾಗೂ 848 ಎಂದೂ ಕರೆಯಲಾಗುತ್ತಿತ್ತು. ಈ ತಂಡವು ವಿದ್ಯುನ್ಮಾನ ಯುದ್ಧ ತಂತ್ರದಲ್ಲಿ ಎತ್ತಿದ ಕೈ.

1973ರಲ್ಲಿ ಈ ತಂಡದ ಹೆಸರನ್ನು 'ಯುನಿಟ್ 8200' ಎಂದು ಮರು ನಾಮಕರಣ ಮಾಡಲಾಯ್ತು. ಇದಕ್ಕೆ ಕಾರಣ ಯೋಮ್ ಕಿಪ್ಪೂರ್ ಯುದ್ಧ. ಈ ಯುದ್ಧದಲ್ಲಿ ಬೇಹುಗಾರಿಕಾ ವೈಫಲ್ಯ ಉಂಟಾಗಿದೆ ಎಂಬ ಕಾರಣಕ್ಕೆ ಈ ತಂಡದ ಹೆಸರನ್ನೇ ಬದಲಿಸಿ ಇದರ ಕಾರ್ಯವೈಖರಿಯನ್ನೂ ಬದಲಿಸಲಾಗಿತ್ತು.

ಇಂದಿನ ದಿನಗಳಲ್ಲಿ ಇಸ್ರೇಲ್ ಭದ್ರತಾ ಪಡೆಗಳ ಅತ್ಯಂತ ರಹಸ್ಯಮಯ ಹಾಗೂ ಅತ್ಯಾಧುನಿಕ ತಂಡವಾಗಿರುವ 'ಯುನಿಟ್ 8200', ಹೈಪ್ರೊಫೈಲ್ ಆಪರೇಷನ್‌ಗಳು ಹಾಗೂ ಸೈಬರ್ ಯುದ್ಧ ತಂತ್ರಗಳಲ್ಲಿ ಪರಿಣಿತವಾಗಿದೆ. ಡಾಟಾ ಮೈನಿಂಗ್, ಸೈಬರ್ ವಾರ್ ಫೇರ್ ಹಾಗೂ ಬೇಹುಗಾರಿಕಾ ಮಾಹಿತಿ ಸಂಗ್ರಹದಲ್ಲಿ ಪರಿಣಿತಿ ಸಾಧಿಸಿರುವ ಈ ತಂಡ, ವಿಶೇಷ ಕಾರ್ಯಾಚರಣೆಗಳು, ಭಯೋತ್ಪಾದಕರ ವಿರುದ್ಧದ ಕಾರ್ಯಾಚರಣೆಗಳಲ್ಲಿ ಹೆಸರು ಮಾಡಿದೆ. ಈ ತಂಡದಲ್ಲಿ ಸುಮಾರು 5 ಸಾವಿರ ಯೋಧರು ಇದ್ದಾರೆ ಅನ್ನೋ ಮಾಹಿತಿ ಇದೆ.

### ಏನಿದು 'ಯುನಿಟ್ 8200'?

**'ಯುನಿಟ್ 8200'.. ಇದೊಂದು ಅತ್ಯಂತ ಕೌಶಲ್ಯ ಹೊಂದಿರುವ ಸೈನಿಕ ತಂಡ. ಈ ತಂಡವನ್ನು ಲೆಬನಾನ್‌ನಲ್ಲಿ ಹೊಸ ರೀತಿಯಲ್ಲಿ ದಾಳಿ ನಡೆಸಲು ಇಸ್ರೇಲ್ ನಿಯೋಜನೆ ಮಾಡಿತ್ತು ಎನ್ನಲಾಗ್ತಿದೆ. ಈ ತಂಡವು ಹೆಜ್ಬೊಲ್ಲಾ ಉಗ್ರ ಸಂಘಟನೆ ಸದಸ್ಯರು ಬಳಸುವ ಪೇಜರ್ ಹಾಗೂ ವಾಕಿ ಟಾಕಿಗಳನ್ನೇ ಗುರಿಯಾಗಿಸಿ ಅವುಗಳ ಒಳಗೆ ಸ್ಫೋಟಕಗಳನ್ನ ಇಡಲು ಸಂಚು ರೂಪಿಸಿತ್ತು ಅನ್ನೋ ಮಾಹಿತಿ ಇದೆ.**

**ಇಸ್ರೇಲ್ ಭದ್ರತಾ ಪಡೆಗಳು ಹಲವು ಘಟಕಗಳನ್ನು ಹೊಂದಿವೆ. ಸುತ್ತಲೂ ಶತ್ರು ರಾಷ್ಟ್ರಗಳನ್ನೇ ಹೊಂದಿರುವ ಇಸ್ರೇಲ್, ವಿದ್ಯುನ್ಮಾನ ಯುದ್ಧ ತಂತ್ರ, ಸೈಬರ್ ದಾಳಿ ಸೇರಿದಂತೆ ಹಲವು ರೀತಿಯ ಅತ್ಯಾಧುನಿಕ ತಂತ್ರಜ್ಞಾನ ಆಧರಿತ ದಾಳಿಗಳನ್ನ ಸಂಘಟಿಸಲು ಯುನಿಟ್ 8200 ಎಂಬ ತಂಡ ಹೊಂದಿದೆ. ಈ ತಂಡದ ಸದಸ್ಯರು ನಡೆಸುವ ಕಾರ್ಯಾಚರಣೆ ಅತ್ಯಂತ ರಹಸ್ಯ, ತಂತ್ರಜ್ಞಾನ ಆಧರಿತ. ಈ ಘಟಕದ ಕುರಿತಾದ ಒಂದಿಷ್ಟು ಮಾಹಿತಿ ಇಲ್ಲಿದೆ.**

---

## ರಾಹುಲ್ ನಿಂದನೆ ಕುರಿತು ಪ್ರಧಾನಿಗೆ ಪತ್ರ ಬರೆದಿದ್ದ ಖರ್ಗೆಗೆ ನಡ್ಡಾ ತಿರುಗೇಟು



**ನವದೆಹಲಿ:** ರಾಹುಲ್ ಗಾಂಧಿ ವಿರುದ್ಧ ಬಿಜೆಪಿ ನಾಯಕರ ಆಕ್ಷೇಪಾರ್ಹ ಹೇಳಿಕೆಯನ್ನು ಖಂಡಿಸಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆದ ಎರಡು ದಿನಗಳ ನಂತರ ಬಿಜೆಪಿ ಅಧ್ಯಕ್ಷ ಜೆಪಿ ನಡ್ಡಾ ಅವರು ಪ್ರಧಾನಿ ವಿರುದ್ಧ ಕಾಂಗ್ರೆಸ್ ನಾಯಕರು ಬಳಸಿರುವ ಅವಹೇಳನಕಾರಿ ಪದಗಳನ್ನು ಪಟ್ಟಿ ಮಾಡಿ ಖರ್ಗೆ ಅವರಿಗೆ ಪತ್ರ ಬರೆದಿದ್ದಾರೆ.

ಗಾಂಧಿಯವರ ವಿರುದ್ಧ ವಾಗ್ದಾಳಿ ನಡೆಸಿರುವ ನಡ್ಡಾ, ಜನರು ಹಲವಾರು ಬಾರಿ ತಿರಸ್ಕರಿಸಿದ ವಿಫಲ ಉತ್ಪನ್ನವನ್ನು ಕಾಂಗ್ರೆಸ್ ಮತ್ತೆ ಹೊಳಪು ಮಾಡಲು, ಮರುಪ್ರಾರಂಭಿಸಲು ಪ್ರಯತ್ನಿಸಿದೆ ಎಂದು ಬರೆ ದಿದ್ದಾರೆ. ಮೋದಿಜಿಗೆ ಮೌತ್ ಕಾಸೌದಾಗರ್ ಎಂಬ ಅವಹೇಳನಕಾರಿ ಪದವನ್ನು ಬಳಸಿದ್ದು ರಾಹುಲ್ ಗಾಂಧಿ ಅವರ ತಾಯಿ ಸೋನಿಯಾ ಗಾಂಧಿ ಅಲ್ಲವೇ? ನೀವು ಮತ್ತು ನಿಮ ಪಕ್ಷವು ಇಂತಹ ನಾಚಿ ಕೆಯಿಲ್ಲದ ಹೇಳಿಕೆಗಳನ್ನು ವೈಭವೀ ಕರಿಸಿದ್ದೀರಿ. ಆಗ ಕಾಂಗ್ರೆಸ್ ರಾಜಕೀಯ ಸೌಹಾ ರ್ದತೆಯನ್ನು ಮರೆತು ಬಿಟ್ಟಿದೆಯೇ? ಎಂದು ಕೇಂದ್ರ ಆರೋಗ್ಯ ಸಚಿವರೂ ಆದ ನಡ್ಡಾ ಪ್ರಶ್ನಿಸಿದ್ದಾರೆ. ನಡ್ಡಾ ಅವರು ಗಾಂಧಿಯವರ ಒತ್ತಡದಿಂದಾಗಿ ದೇಶದ ಅತ್ಯಂತ ಹಳೆಯ ಪಕ್ಷವು ಕಾಪಿ ಪೇಸ್ಟ್ ಪಕ್ಷವಾಗಿ ಮಾರ್ಪಟ್ಟಿದೆ ಮತ್ತು ಅವರ ಅನಾರೋಗ್ಯವನ್ನು ಹೀರಿಕೊಳ್ಳುತ್ತದೆ ಎಂದು ಆರೋಪಿಸಿದ್ದಾರೆ.

ಕಾಂಗ್ರೆಸ್ ನಾಯಕರು, ಪ್ರಧಾನಿಯನ್ನು ಹಾವು, ಚೇಳು, ರಾಕ್ಷಸ, ಪಿಕ್ ಪಾಕೆಟ್ ಮತ್ತು ಹೇಡಿ ಎಂದು ಕರೆದಿದ್ದಾರೆ ಎಂದು ಬರೆದಿದ್ದಾರೆ. ಅವರ ಪೋಷಕರನ್ನು ಸಹ ಅವಮಾನಿಸಲಾಗಿದೆ ಎಂದು ನಡ್ಡಾ ಹೇಳಿದ್ದಾರೆ. ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್‌ಗಾಂಧಿ ಅವರು ಮೀಸಲಾತಿ ಮತ್ತು ಜಾತಿಯ ರಾಜಕೀಯವನ್ನು ಆಶ್ರಯಿಸಿದ್ದಾರೆ, ಜನರನ್ನು ಪರಸ್ಪರ ವಿರುದ್ಧವಾಗಿ ಪ್ರಚೋದಿಸುತ್ತಿದ್ದಾರೆ ಎಂದು ಬಿಜೆಪಿ ಅಧ್ಯಕ್ಷರು ಆರೋಪಿಸಿದರು. ನಂತರ ಅವರು ವಿದೇಶಕ್ಕೆ ಹೋಗಿ ಮೀಸಲಾತಿಯನ್ನು ಕೊನೆಗೊಳಿಸುವ ಮತ್ತು ದಲಿತ, ಹಿಂದುಳಿದ ವರ್ಗಗಳು ಮತ್ತು ಬುಡಕಟ್ಟು ಸಮುದಾಯಗಳ ಜನರ ಹಕ್ಕುಗಳನ್ನು ಕಸಿದುಕೊಳ್ಳುವ ಬಗ್ಗೆ ಮಾತನಾಡುತ್ತಾರೆ ಎಂದು ಅವರು ಬರೆದಿದ್ದಾರೆ.

## ಸಂಸದರು, ಶಾಸಕರಿದ್ದ ದೋಣಿ ಪಲ್ಟಿ

**ಕೋಲ್ಕತ್ತಾ:** ಪ್ರವಾಹ ಪೀಡಿತ ಪ್ರದೇಶಗಳ ಪರಿಶೀಲನೆಗೆಂದು ತೆರಳಿದ್ದಾಗ ಟಿಎಂಸಿ ಶಾಸಕರು, ಸಂಸದರಿದ್ದ ದೋಣಿ ಪಲ್ಟಿಯಾಗಿರುವ ಘಟನೆ ಪಶ್ಚಿಮ ಬಂಗಾಳದಲ್ಲಿ ನಡೆದಿದೆ. ಬಿರ್‌ಭೂಮ್ ಜಿಲ್ಲೆಯಲ್ಲಿ ಪ್ರವಾಹ ಪೀಡಿತ ಪ್ರದೇಶಗಳನ್ನು ಪರಿಶೀಲಿಸುವ ವೇಳೆ ಈ ಅವಘಡ ಸಂಭವಿಸಿದೆ. ದೋಣಿಯಲ್ಲಿ ಸಂಸದರು, ಶಾಸಕರು, ಉನ್ನತ ಅಧಿಕಾರಿಗಳು ಸೇರಿ ಒಟ್ಟು 13 ಮಂದಿ ಇದ್ದರು.

ಲಾಬ್‌ಪುರ್‌ನ ಟಿಎಂಸಿ ಶಾಸಕ ಅಭಿಜಿತ್ ಸಿಂಗ್, ಸಂಸದರಾದ ಅಸಿತ್ ಮಲ್ ಮತ್ತು ಶಮೀರುಲ್ ಇಸ್ಲಾಂ, ಬಿರ್‌ಭೂಮ್‌ನ ಜಿಲ್ಲಾ ಮ್ಯಾಜಿಸ್ಟ್ರೇಟ್ ಬಿಧನ್ ರಾಯ್ ಮತ್ತು ಇತರ ಅಧಿಕಾರಿಗಳು ಬೋಟ್‌ನಲ್ಲಿ ಬೀರ್‌ಭಮ್‌ನ ಬಲರಾಮ್‌ಪುರ ಮತ್ತು ಲ್ಯಾಬ್‌ಪುರದ ಪ್ರವಾಹ ಪೀಡಿತ ಪ್ರದೇಶಗಳನ್ನು ಪರಿಶೀಲಿಸುತ್ತಿದ್ದಾಗ ಈ ಘಟನೆ ಸಂಭವಿಸಿದೆ. ಘಟನೆಯ ನಂತರ ಸ್ಥಳೀಯರು ಸ್ಥಳಕ್ಕೆ ಧಾವಿಸಿ ಜನಪ್ರತಿನಿಧಿಗಳು ಮತ್ತು ಸ್ಥಳೀಯ ಅಧಿಕಾರಿಗಳನ್ನು ರಕ್ಷಿಸಿದರು. ಭಾರೀ ಮಳೆಯ ನಂತರ ಪಶ್ಚಿಮ ಬಂಗಾಳದ ಹಲವಾರು ಜಿಲ್ಲೆಗಳು ಪ್ರವಾಹದಂತಹ ಪರಿಸ್ಥಿತಿಗೆ ಸಾಕ್ಷಿಯಾಗಿದೆ, ಇದರ ಪರಿಣಾಮವಾಗಿ ಅಲ್ಪಾವಧಿಯಲ್ಲಿಯೇ ಬ್ಯಾರೇಜ್‌ಗಳಿಂದ ನೀರು ಹೊರಸೂಸುವಿಕೆ ಹೆಚ್ಚಾಗಿದೆ.

ಭಾರೀ ಮಳೆಯಿಂದಾಗಿ ಕಳೆದ 24 ಗಂಟೆಗಳಲ್ಲಿ ದುರ್ಗಾಪುರ ಬ್ಯಾರೇಜ್‌ನಿಂದ 1,33,750 ಕ್ಯೂಸೆಕ್, ಕಂಗಸಾಬತಿ ಅಣೆಕಟ್ಟಿನಿಂದ 40,000 ಕ್ಯೂಸೆಕ್, ಮೈಥಾನ್ ಅಣೆಕಟ್ಟಿನಿಂದ 2,00,000 ಕ್ಯೂಸೆಕ್ ಮತ್ತು ಪಂಚೇಟ್ ಅಣೆಕಟ್ಟಿನಿಂದ 50,000 ಕ್ಯೂಸೆಕ್ ನೀರನ್ನು ಹೊರ ಬಿಡಲಾಗಿದೆ.

---

## ತಿರುಪತಿ ಲಡ್ಡುವಿಗೆ ಪ್ರಾಣಿಗಳ ಕೊಬ್ಬು ಬಳಕೆ : ಸಿಎಂ ನಾಯ್ಡು ಸ್ಫೋಟಕ ಆರೋಪ



**ಅಮರಾವತಿ:** ಹಿಂದಿನ ವೈಎಸ್‌ಆರ್‌ಸಿಪಿ ಸರ್ಕಾರದ ಅವಧಿಯಲ್ಲಿ ಪ್ರಸಿದ್ಧ ತಿರುಪತಿ ಲಡ್ಡು ತಯಾರಿಕೆಯಲ್ಲಿ ಗುಣಮಟ್ಟವಿಲ್ಲದ ಪದಾರ್ಥಗಳು ಮತ್ತು ಪ್ರಾಣಿಗಳ ಕೊಬ್ಬನ್ನು ಬಳಸಲಾಗಿತ್ತು ಎಂದು ಆಂಧ್ರಪ್ರದೇಶ ಮುಖ್ಯಮಂತ್ರಿ ಎನ್ ಚಂದ್ರಬಾಬು ನಾಯ್ಡು ಆರೋಪಿಸಿದ್ದಾರೆ. ತಿರುಪತಿ ಲಡ್ಡು ಪ್ರಸಾದವನ್ನು ತಿರುಪತಿಯ ಪೂಜ್ಯ ಶ್ರೀ ವೆಂಕಟೇಶ್ವರ ದೇವಸ್ಥಾನದಲ್ಲಿ ನೀಡಲಾಗುತ್ತದೆ, ಇದನ್ನು ತಿರುಮಲ ತಿರುಪತಿ ದೇವಸ್ಥಾನ ಆಡಳಿತ ಅಡಿಯಲಲ್ಲಿ (ಟಿಟಿಡಿ) ನಡೆಸುತ್ತದೆ.ಅವರು ತುಪ್ಪದ ಬದಲಿಗೆ ಪ್ರಾಣಿಗಳ ಕೊಬ್ಬನ್ನು ಬಳಸಿದ್ದಾರೆ ಎಂದು ಸಿಎಂ ನಾಯು ಎನ್‌ಡಿಎ ಶಾಸಕಾಂಗ ಪಕ್ಷದ ಸಭೆಯಲ್ಲಿ ಹೇಳಿರುವುದು ಭಾರಿ ವಿವಾದಕ್ಕೆ ಕಾರಣವಾಗಿದೆ. ನಮ ಸರ್ಕಾರ ಬಂದ ಮೇಲೆ ಈಗ ಶುದ್ಧ ತುಪ್ಪವನ್ನು ಬಳಸಲಾಗುತ್ತಿದೆ ಮತ್ತು ದೇವಸ್ಥಾನದಲ್ಲಿ ಎಲ್ಲವನ್ನೂ ಶುದ್ಧೀಕರಿಸಲಾಗಿದೆ, ಇದು ಸುಧಾರಿತ ಗುಣಮಟ್ಟಕ್ಕೆ ಕಾರಣವಾಗುತ್ತದೆ ಎಂದು ಸಿಎಂ ಪ್ರತಿಪಾದಿಸಿದರು.

ಹಿರಿಯ ವೈಎಸ್‌ಆರ್‌ಸಿಪಿ ನಾಯಕ ಮತ್ತು ಮಾಜಿ ಟಿಟಿಡಿ ಅಧ್ಯಕ್ಷ ವೈವಿ ಸುಬ್ಬಾ ರೆಡ್ಡಿ ನಾಯ್ಡು ಅವರ ಆರೋಪವನ್ನು ದುರುದ್ದೇಶಪೂರಿತ ಎಂದು ಬಣ್ಣಿಸಿದ್ದಾರೆ ಮತ್ತು ಟಿಡಿಪಿ ನಾಯಕರು ರಾಜಕೀಯ ಲಾಭಕ್ಕಾಗಿ ಯಾವುದೇ ಹಂತಕ್ಕೆ ಇಳಿಯುತ್ತಾರೆ ಎಂದು ಹೇಳಿದರು.

ಆಂಧ್ರಪ್ರದೇಶದ ಐಟಿ ಇಲಾಖೆ ಸಚಿವ ನಾರಾ ಲೋಕೇಶ್ ಕೂಡ ಈ ವಿಷಯದ ಬಗ್ಗೆ ಮಾತನಾಡಿ ಜಗನ್ ಮೋಹನ್ ರೆಡ್ಡಿ ಆಡಳಿತಾವಧಿಯನ್ನು ಗುರಿಯಾಗಿಸಿ, ಟೀಕಾಪ್ರಹಾರ ನಡೆಸಿದ್ದಾರೆ. ತಿರುಮಲದಲ್ಲಿರುವ ವೆಂಕಟೇಶ್ವರ ಸ್ವಾಮಿ ದೇವಾಲಯವು ನಮ ಅತ್ಯಂತ ಪವಿತ್ರವಾದ ದೇವಾಲಯವಾಗಿದೆ. ವೈಎಸ್ ಜಗನ್ ಮೋಹನ್ ರೆಡ್ಡಿ ಆಡಳಿತವು ತಿರುಪತಿ ಪ್ರಸಾದದಲ್ಲಿ ತುಪ್ಪದ ಬದಲು ಪ್ರಾಣಿಗಳ ಕೊಬ್ಬನ್ನು ಬಳಸಿದೆ ಎಂದು ತಿಳಿದು ನನಗೆ ಆಘಾತವಾಗಿದೆ, ಇದನ್ನು ನಮ ಸರ್ಕಾರ ಗಂಬೀರವಾಗಿ ಪರಿಗಣಿಸಿದೆ ಎಂದು ಹೇಳಿದರು.

**ತಿರುಪತಿ ಲಡ್ಡು ಪ್ರಸಾದವನ್ನು ತಿರುಪತಿಯ ಪೂಜ್ಯ ಶ್ರೀ ವೆಂಕಟೇಶ್ವರ ದೇವಸ್ಥಾನದಲ್ಲಿ ನೀಡಲಾಗುತ್ತದೆ, ಇದನ್ನು ತಿರುಮಲ ತಿರುಪತಿ ದೇವಸ್ಥಾನ ಆಡಳಿತ ಅಡಿಯಲಲ್ಲಿ (ಟಿಟಿಡಿ) ನಡೆಸುತ್ತದೆ.ಅವರು ತುಪ್ಪದ ಬದಲಿಗೆ ಪ್ರಾಣಿಗಳ ಕೊಬ್ಬನ್ನು ಬಳಸಿದ್ದಾರೆ ಎಂದು ಸಿಎಂ ನಾಯು ಎನ್‌ಡಿಎ ಶಾಸಕಾಂಗ ಪಕ್ಷದ ಸಭೆಯಲ್ಲಿ ಹೇಳಿರುವುದು ಭಾರಿ ವಿವಾದಕ್ಕೆ ಕಾರಣವಾಗಿದೆ. ನಮ ಸರ್ಕಾರ ಬಂದ ಮೇಲೆ ಈಗ ಶುದ್ಧ ತುಪ್ಪವನ್ನು ಬಳಸಲಾಗುತ್ತಿದೆ ಮತ್ತು ದೇವಸ್ಥಾನದಲ್ಲಿ ಎಲ್ಲವನ್ನೂ ಶುದ್ಧೀಕರಿಸಲಾಗಿದೆ, ಇದು ಸುಧಾರಿತ ಗುಣಮಟ್ಟಕ್ಕೆ ಕಾರಣವಾಗುತ್ತದೆ** - **ಎನ್. ಚಂದ್ರಬಾಬು ನಾಯ್ಡು, ಆಂಧ್ರಪ್ರದೇಶ ಮುಖ್ಯಮಂತ್ರಿ**

ಸಿ,ಟೀಕಾಪ್ರಹಾರ ನಡೆಸಿದ್ದಾರೆ. ತಿರುಮಲದಲ್ಲಿರುವ ವೆಂಕಟೇಶ್ವರ ಸ್ವಾಮಿ ದೇವಾಲಯವು ನಮ ಅತ್ಯಂತ ಪವಿತ್ರವಾದ ದೇವಾಲಯವಾಗಿದೆ. ವೈಎಸ್ ಜಗನ್ ಮೋಹನ್ ರೆಡ್ಡಿ ಆಡಳಿತವು ತಿರುಪತಿ ಪ್ರಸಾದದಲ್ಲಿ ತುಪ್ಪದ ಬದಲು ಪ್ರಾಣಿಗಳ ಕೊಬ್ಬನ್ನು ಬಳಸಿದೆ ಎಂದು ತಿಳಿದು ನನಗೆ ಆಘಾತವಾಗಿದೆ, ಇದನ್ನು ನಮ ಸರ್ಕಾರ ಗಂಬೀರವಾಗಿ ಪರಿಗಣಿಸಿದೆ ಎಂದು ಹೇಳಿದರು.

ಅಮರಾವತಿ, ಸೆ.19 (ಪಿಟಿಐ) ಹಿಂದಿನ ವೈಎಸ್‌ಆರ್‌ಸಿಪಿ ಸರ್ಕಾರದ ಅವಧಿಯಲ್ಲಿ ಪ್ರಸಿದ್ಧ ತಿರುಪತಿ ಲಡ್ಡು ತಯಾರಿಕೆಯಲ್ಲಿ ಗುಣಮಟ್ಟವಿಲ್ಲದ ಪದಾರ್ಥಗಳು ಮತ್ತು ಪ್ರಾಣಿಗಳ ಕೊಬ್ಬನ್ನು ಬಳಸಲಾಗಿತ್ತು ಎಂದು ಆಂಧ್ರಪ್ರದೇಶ ಮುಖ್ಯಮಂತ್ರಿ ಎನ್ ಚಂದ್ರಬಾಬು ನಾಯ್ಡು ಆರೋಪಿಸಿದ್ದಾರೆ.

ಹಿರಿಯ ವೈಎಸ್‌ಆರ್‌ಸಿಪಿ ನಾಯಕ ಮತ್ತು ಮಾಜಿ ಟಿಟಿಡಿ ಅಧ್ಯಕ್ಷ ವೈವಿ ಸುಬ್ಬಾ ರೆಡ್ಡಿ ನಾಯ್ಡು ಅವರ ಆರೋಪವನ್ನು ದುರುದ್ದೇಶಪೂರಿತ ಎಂದು ಬಣ್ಣಿಸಿದ್ದಾರೆ ಮತ್ತು ಟಿಡಿಪಿ ನಾಯಕರು ರಾಜಕೀಯ ಲಾಭಕ್ಕಾಗಿ ಯಾವುದೇ ಹಂತಕ್ಕೆ ಇಳಿಯುತ್ತಾರೆ ಎಂದು ಹೇಳಿದರು. ಆಂಧ್ರಪ್ರದೇಶದ ಐಟಿ ಇಲಾಖೆ ಸಚಿವ ನಾರಾ ಲೋಕೇಶ್ ಕೂಡ ಈ ವಿಷಯದ ಬಗ್ಗೆ ಮಾತನಾಡಿ ಜಗನ್ ಮೋಹನ್ ರೆಡ್ಡಿ ಆಡಳಿತಾವಧಿಯನ್ನು ಗುರಿಯಾಗಿಸಿ, ಟೀಕಾಪ್ರಹಾರ ನಡೆಸಿದ್ದಾರೆ.

ತಿರುಮಲದಲ್ಲಿರುವ ವೆಂಕಟೇಶ್ವರ ಸ್ವಾಮಿ ದೇವಾಲಯವು ನಮ ಅತ್ಯಂತ ಪವಿತ್ರವಾದ ದೇವಾಲಯವಾಗಿದೆ. ವೈಎಸ್ ಜಗನ್ ಮೋಹನ್ ರೆಡ್ಡಿ ಆಡಳಿತವು ತಿರುಪತಿ ಪ್ರಸಾದದಲ್ಲಿ ತುಪ್ಪದ ಬದಲು ಪ್ರಾಣಿಗಳ ಕೊಬ್ಬನ್ನು ಬಳಸಿದೆ ಎಂದು ತಿಳಿದು ನನಗೆ ಆಘಾತವಾಗಿದೆ, ಇದನ್ನು ನಮ ಸರ್ಕಾರ ಗಂಬೀರವಾಗಿ ಪರಿಗಣಿಸಿದೆ ಎಂದು ಹೇಳಿದರು

---

## ನಟ ಸಲ್ಮಾನ್ ಖಾನ್ ತಂದೆಗೆ ಜೀವ ಬೆದರಿಕೆ, ದೂರು

**ಮುಂಬೈ:** ನಟ ಸಲ್ಮಾನ್ ಖಾನ್ ತಂದೆ ಹಾಗೂ ಖ್ಯಾತ ಬರಹಗಾರ ಸಲೀಂ ಖಾನ್ ಅವರಿಗೆ ಪ್ರಾಣ ಬೆದರಿಕೆ ಹಾಕಲಾಗಿದ್ದು ಪ್ರಕರಣದ ಸಂಬಂಧ ಅಪರಿಚಿತ ಮಹಿಳೆಯ ವಿರುದ್ಧ ಬಾಂದ್ರಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಲಾರೆನ್ಸ್ ಬಿಷ್ಣೋಯ್ ಹೆಸರಿನಲ್ಲಿ ಅವರಿಗೆ ಮತ್ತೊಂದು ಬೆದರಿಕೆ ಬಂದಿದೆ. ಸಲೀಂ ಖಾನ್ ಅವರು ಇಂದು ವಾಯು ವಿಹಾರಕ್ಕೆ ತೆರಳುತ್ತಿದ್ದಾಗ ಅಪರಿಚಿತ ಮಹಿಳೆಯೊಬ್ಬರು ಅವರಿಗೆ ಬೆದರಿಕೆ ಪತ್ರ ನೀಡಿದ್ದಾರೆ. 'ಲಾರೆನ್ಸ್ ಬಿಷ್ಣೋಯ್ ಅವರನ್ನು ಕಳುಹಿಸಬೇಕೇ ಎಂದು ಪತ್ರದಲ್ಲಿ ಬರೆದಿದೆ.

ಪೊಲೀಸರು ಸಂಪೂರ್ಣ ತನಿಖೆ ನಡೆಸುತ್ತಿದ್ದಾರೆ. ಅಪರಿಚಿತ ಮಹಿಳೆಯಿಂದ ಸಲೀಂ ಖಾನ್‌ಗೆ ಬೆದರಿಕೆ ಬಂದಿರುವುದು ಆತಂಕಕ್ಕೆ ಕಾರಣವಾಗಿದೆ. ಈ ಮಹಿಳೆ ಯಾರು? ಅವರು ಎಲ್ಲಿಂದ ಬಂದಿದ್ದರು ಅವರು ನಿಜಕ್ಕೂ ಬಿಷ್ಣೋಯ್ ಗ್ಯಾಂಗ್‌ನವರಾ ಎಂಬ ಸಂಶಯ ಮೂಡಿದೆ. ಸಿಸಿಟಿವಿ ವಶಕ್ಕೆ ಪಡೆದು ಪರಿಶೀಲನೆ ನಡೆಸುತ್ತಿದ್ದಾರೆ. ಕೆಲವು ತಿಂಗಳ ಹಿಂದೆ ನಟ ಸಲ್ಮಾನ್ ಖಾನ್ ಅವರ ಮನೆಯ ಮೇಲೆ ಗುಂಡಿನ ದಾಳಿ ಮಾಡಲಾಗಿತ್ತು.

ಬಾಂದ್ರಾದ ಗ್ಯಾಲಕ್ಸಿ ಅಪಾರ್ಟ್ಮೆಂಟ್‌ನಲ್ಲಿರುವ ಸಲ್ಮಾನ್ ಮನೆಯ ಗೋಡೆಗೆ ಇಬ್ಬರು ಯುವಕರು ಗುಂಡಿನ ದಾಳಿ ನಡೆಸಿದ್ದರು. ಲಾರೆನ್ಸ್ ಬಿಷ್ಣೋಯ್ ಗ್ಯಾಂಗ್ ಈ ಗುಂಡಿನ ದಾಳಿಯ ಹೊಣೆ ಹೊತ್ತುಕೊಂಡಿದ್ದರು. ಪ್ರಕರಣದ ವಿಚಾರಣೆ ನಡೆಯುತ್ತಿದೆ. ಜೂನ್‌ನಲ್ಲಿ ಸಲ್ಮಾನ್ ಖಾನ್ ಮತ್ತು ಸಲೀಂ ಖಾನ್‌ಗೆ ಕೊಲೆ ಬೆದರಿಕೆಗಳು ಬಂದಿದ್ದವು. ಈ ಸಂಬಂಧ ಮುಂಬೈ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

## ಖಲಿಸ್ತಾನ್ ಉಗ್ರ ಪನ್ನು ಹತ್ಯೆ ಯತ್ನ: ಭಾರತ ಸರ್ಕಾರ, ಅಜಿತ್ ದೋವಲ್‌ಗೆ ಅಮೆರಿಕ ಕೋರ್ಟ್ ಸಮನ್ಸ್

**ನ್ಯೂಯಾರ್ಕ್:** ತನ್ನ ಮೇಲೆ ಹತ್ಯೆ ಯತ್ನ ನಡೆದಿದೆ ಎಂದು ಖಲಿಸ್ತಾನ್ ಉಗ್ರ ಗುರುಪತ್ವಂತ್ ಸಿಂಗ್ ಪನ್ನು ಸಲ್ಲಿಕೆ ಮಾಡಿರುವ ಮನವಿಯನ್ನು ವಿಚಾರಣೆಗೆ ಸ್ವೀಕಾರ ಮಾಡಿರುವ ಅಮೆರಿಕ ನ್ಯಾಯಾಲಯ, ಭಾರತ ಸರ್ಕಾರಕ್ಕೆ ಸಮನ್ಸ್ ಜಾರಿ ಮಾಡಿದೆ. ಅಮೆರಿಕದ ನ್ಯೂಯಾರ್ಕ್ ರಾಜ್ಯದ ದಕ್ಷಿಣ ಜಿಲ್ಲಾ ನ್ಯಾಯಾಲಯವು ಭಾರತ ಸರ್ಕಾರ, ಭಾರತದ ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್, ರಾ ಸಂಸ್ಥೆಯ ಮಾಜಿ ಮುಖ್ಯಸ್ಥ ಸಮಂತ್ ಗೋಯೆಲ್, ರಾ ಏಜೆಂಟ್ ವಿಕ್ರಮ್ ಯಾದವ್, ಭಾರತೀಯ ಮೂಲದ ಉದ್ಯಮಿ ನಿಖಿಲ್ ಗುಪ್ತಾ ಅವರಿಗೆ ಸಮನ್ಸ್ ಜಾರಿ ಮಾಡಿದೆ. ಭಾರತ ಸರ್ಕಾರವು 21 ದಿನಗಳ ಒಳಗೆ ತನ್ನ ಉತ್ತರ ಸಲ್ಲಿಕೆ ಮಾಡಬೇಕು ಎಂದು ನ್ಯಾಯಾಲಯ ಸೂಚನೆ ನೀಡಿದೆ. ಆದರೆ ಈ ಕುರಿತಾಗಿ ಕೇಂದ್ರ ಸರ್ಕಾರ ಈವರೆಗೆ ಯಾವುದೇ ಪ್ರತಿಕ್ರಿಯೆ ನೀಡಿಲ್ಲ. ಈ ನಡುವೆ ಖಲಿಸ್ತಾನ್ ಉಗ್ರ ಗುರುಪತ್ವಂತ್ ಸಿಂಗ್ ಪನ್ನು ತನ್ನ ಸಾಮಾಜಿಕ ಜಾಲತಾಣ ಖಾತೆ ಎಕ್ಸ್‌ನಲ್ಲಿ ನ್ಯಾಯಾಲಯದ ಸಮನ್ಸ್ ಪ್ರತಿಯನ್ನು ಹಂಚಿಕೊಂಡಿದ್ದರು. ಆ ಬಳಿಕ ಅದನ್ನು ತೆರವು ಮಾಡಿದ್ದಾರೆ.

ಭಾರತದಲ್ಲಿ ನಿಷೇಧಗೊಂಡಿರುವ ಸಿಖ್ಸ್ ಫಾರ್ ಜಸ್ಟೀಸ್ ಉಗ್ರ ಸಂಘಟನೆಯ ನಾಯಕನಾಗಿರುವ ಖಲಿಸ್ತಾನ್ ಉಗ್ರ ಗುರುಪತ್ವಂತ್ ಸಿಂಗ್ ಪನ್ನುನನ್ನು ಅಮೆರಿಕದಲ್ಲಿ ಹತ್ಯೆ ಮಾಡಲು ಭಾರತ ಸಂಚು ರೂಪಿಸಿತ್ತು ಎಂದು ಬ್ರಿಟನ್‌ನ ಫೈನಾನ್ಶಿಯಲ್ ಟೈಮ್ಸ್ ಪತ್ರಿಕೆ ವರದಿ ಮಾಡಿತ್ತು. ಆದರೆ, ಅಮೆರಿಕದ ಭದ್ರತಾ ಅಧಿಕಾರಿಗಳು ಈ ಸಂಚನ್ನು ನಿಷ್ಕ್ರಿಯಗೊಳಿಸಿದ್ದರು ಎಂದೂ ಪತ್ರಿಕೆ ವರದಿ ಮಾಡಿತ್ತು. ಈ ವಿಚಾರವನ್ನು ಅಮೆರಿಕ ಅಧ್ಯಕ್ಷ ಜೋ ಬೈಡನ್ ಸರ್ಕಾರದ ಪ್ರತಿನಿಧಿಗಳೂ ಕೂಡಾ ಖಚಿತಪಡಿಸಿದ್ದರು. ಕೆನಡಾ ಹಾಗೂ ಅಮೆರಿಕ ಎರಡೂ ದೇಶಗಳ ದ್ವಿಪೌರತ್ವ ಹೊಂದಿರುವ ಪನ್ನು, ಈ ಪ್ರಕರಣ ಸಂಬಂಧ ನ್ಯಾಯಾಲಯದ ಮೊರೆ ಹೋಗಿದ್ದ.

ಇನ್ನು ಈ ಎಲ್ಲಾ ಬೆಳವಣಿಗೆಗಳ ಕುರಿತು ಪ್ರತಿಕ್ರಿಯೆ ನೀಡಿರುವ ಭಾರತದ ವಿದೇಶಾಂಗ ವ್ಯವಹಾರಗಳ ಸಚಿವಾಲಯ, ಈ ಬೆಳವಣಿಗೆ 'ಕಾಳಜಿಯ ವಿಚಾರ' ಎಂದು ಹೇಳಿದೆ. ಈ ವಿಚಾರ ಸಂಬಂಧ ಭಾರತ ಉನ್ನತ ಮಟ್ಟದ ತನಿಖೆ ನಡೆಸಲಿದೆ ಎಂದೂ ಹೇಳಿದೆ. ಈ ಕುರಿತು ಸುದ್ದಿಗೋಷ್ಠಿ ನಡೆಸಿ ಮಾಹಿತಿ ನೀಡಿದ್ದ ವಿದೇಶಾಂಗ ಇಲಾಖೆ ವಕ್ತಾರ ಅರಿಂದಮ್ ಬಾಗ್ಚಿ, ಈ ರೀತಿಯ ಕೃತ್ಯಗಳು ಸರ್ಕಾರದ ನೀತಿಗೆ ವಿರುದ್ಧವಾದದ್ದು ಎಂದು ಹೇಳಿದ್ದಾರೆ. ಇದೇ ವರ್ಷ ಮೇ ತಿಂಗಳಲ್ಲಿ ಈ ಕುರಿತು ಪ್ರತಿಕ್ರಿಯೆ ನೀಡಿದ್ದ ವಿದೇಶಾಂಗ ವ್ಯವಹಾರಗಳ ಖಾತೆ ಸಚಿವ ಡಾ. ಎಸ್. ಜೈಶಂಕರ್, ಈ ಪ್ರಕರಣದ ಕುರಿತಾಗಿ ನಾವು ಸಮಗ್ರ ತನಿಖೆ ನಡೆಸುತ್ತಿದ್ದೇವೆ ಎಂದು ಹೇಳಿದ್ದರು.



### ನಾಯಕರು, ಸಂಸ್ಥೆ ವಿರುದ್ಧ ದ್ವೇಷ

**ಭಾರತದ ವಿರುದ್ಧ ಪ್ರಚೋದನಕಾರಿಯಾಗಿ ಮಾತನಾಡುವ ಖಲಿಸ್ತಾನ್ ಭಯೋತ್ಪಾದಕ ಗುರುಪತ್ವಂತ್ ಸಿಂಗ್ ಪನ್ನು, ತನ್ನ ಸಾಮಾಜಿಕ ಜಾಲತಾಣ ಖಾತೆಗಳಲ್ಲಿ ಭಾರತ ವಿರೋಧಿ ಹೇಳಿಕೆಗಳನ್ನ ನೀಡುತ್ತಾನೆ. ಜೊತೆಯಲ್ಲೇ ಭಾರತದ ನಾಯಕರು ಹಾಗೂ ಸಂಸ್ಥೆಗಳ ವಿರುದ್ಧ ದ್ವೇಷ ಕಾರುತ್ತಾನೆ. ಈತನನ್ನು 2020ರಲ್ಲಿ ಭಯೋತ್ಪಾದಕ ಎಂದು ಕೇಂದ್ರ ಸರ್ಕಾರ ಘೋಷಿಸಿತ್ತು.**

## ಕೆಲಸದ ಒತ್ತಡಕ್ಕೆ ಬಸವಳಿದ ಮಹಿಳಾ ಉದ್ಯೋಗಿ ಸಾವು

**ಪುಣೆ:** ಕೆಲಸದ ಒತ್ತಡದಿಂದ ಬಸವಳಿದ ಮಹಿಳಾ ಉದ್ಯೋಗಿಯೊಬ್ಬರು ಕೆಲಸದ ಒತ್ತಡದಿಂದ ಮೃತಪಟ್ಟಿರುವ ಘಟನೆ ಪುಣೆಯಲ್ಲಿ ನಡೆದಿದೆ. ಪುಣೆಯ ಇವೈನಲ್ಲಿ ಉದ್ಯೋಗಿಯಾಗಿದ್ದ ಚಾರ್ಟರ್ಡ್ ಅಕೌಂಟೆಂಟ್ ಅನ್ನಾ ಸೆಬಾಸ್ಟಿಯನ್ (26) ಅವರು ''ಕೆಲಸದ ಒತ್ತಡ'' ದಿಂದ ನಿಧನರಾಗಿದ್ದಾರೆ ಎಂದು ಅವರ ತಾಯಿ ಅನಿತಾ ಆಗಸ್ಟಿನ್ ಅವರು ಇವೈ ಇಂಡಿಯಾ ಅಧ್ಯಕ್ಷರಿಗೆ ಬರೆದ ಇಮೇಲ್ ಸದ್ಯ ಎಲ್ಲೆಡೆ ವೈರಲ್ ಆಗುತ್ತಿದೆ. ಗುರಿ ತಲುಪೋ ಭರದಲ್ಲಿ ರಾತ್ರಿ ಹಗಲೆನ್ನದೇ ನನ್ನ ಮಗಳಿಂದ ಕೆಲಸ ಮಾಡಿಸಿದ್ದಾರೆ. ಇದರಿಂದಾಗಿ ನನ್ನ ಮಗಳು ಸಾವನ್ನಪ್ಪಿದ್ದಾಳೆ ಎಂದು ತಾಯಿ ಇಮೇಲ್‌ನಲ್ಲಿ ಬರೆದುಕೊಂಡಿದ್ದಾರೆ.

ಮೃತ ಯುವತಿ ಅನ್ನಾ 2023ರಲ್ಲಿ ತಮ್ಮ ಸಿಎ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿ, ಮಾರ್ಚ್ 2024ರಲ್ಲಿ ಇವೈ ಪುಣೆಯಲ್ಲಿ ಕೆಲಸಕ್ಕೆ ಸೇರಿಕೊಂಡಿದ್ದರು. ಇದೀಗ ಕೆಲಸಕ್ಕೆ ಸೇರಿಕೊಂಡ ಕೇವಲ 4 ತಿಂಗಳಲ್ಲಿ ನನ್ನ ಮಗಳು ಸಾವನ್ನಪ್ಪಿದ್ದಾಳೆ ಎಂದು ಇವೈ ಕಂಪೆನಿಯ ವಿರುದ್ಧ ತಾಯಿ ದೂರು ದಾಖಲಿಸಿದ್ದಾರೆ. ಕಂಪೆನಿಗೆ ಸೇರಿದ ಕೂಡಲೇ ಕೆಲಸದ ಹೊರೆ, ಹೊಸ ಪರಿಸರ ಮತ್ತು ಆತಂಕ, ನಿದ್ರಾಹೀನತೆ ಮತ್ತು ಒತ್ತಡವನ್ನು ಅನುಭವಿಸಲು ಪ್ರಾರಂಭಿಸಿದ್ದಳು, ಆದರೆ ಕಠಿಣ ಪರಿಶ್ರಮ ಯಶಸ್ಸಿಗೆ ಹಾದಿ ನಂಬುತ್ತಾ ಅವಳು ತನ್ನನ್ನು ತಾನೇ ಬಲಿ ತೆಗೆದುಕೊಂಡಿದ್ದಾಳೆ ಎಂದು ಇಮೇಲ್‌ನಲ್ಲಿ ಬರೆಯಲಾಗಿದೆ. ''ಈ ಸಂಸ್ಥೆಯ ಅತಿಯಾದ ಅತಿಯಾದ ಕೆಲಸದ ಹೊರೆಯಿಂದಾಗಿ ಅನೇಕ ಉದ್ಯೋಗಿಗಳು ಸಂಸ್ಥೆಯನ್ನು ತೊರೆದಿದ್ದರು. ಆಕೆ ಈಕೆ ಕೆಲಸಕ್ಕೆ ಸೇರಿರೋ ನಾಲ್ಕು ತಿಂಗಳಿನಲ್ಲಿಯೇ ಸಾವನ್ನಪ್ಪಿದ್ದಾಳೆ. ಇನ್ನೂ ದುರಂತದ ಸಂಗತಿ ಎಂದರೆ, ಆಕೆಯ ಅಂತ್ಯಕ್ರಿಯೆಗೆ ಕಂಪೆನಿಯ ಒಬ್ಬರೇ ಒಬ್ಬರು ಅಧಿಕಾರಿಗಳು ಬರಲಿಲ್ಲ ಎನ್ನುವುದು!'' ಎಂದು ಆಕೆಯ ತಾಯಿ ನೋವನ್ನು ಹೊರ ಹಾಕಿದ್ದಾರೆ.

---

# ರಷ್ಯಾ ವಿರೋಧದ ನಡುವೆಯೂ ಉಕ್ರೇನ್‌ಗೆ ಭಾರತದ ಶಸ್ತ್ರಾಸ್ತ್ರ

## ಮತ್ತೊಂದೆಡೆ ಉಕ್ರೇನ್ ದೇಶಕ್ಕೂ ಶಸ್ತ್ರಾಸ್ತ್ರ ಸರಬರಾಜು ಮಾಡುತ್ತಿದೆ ಎಂಬ ಆರೋಪ, ಗ್ರಾಹಕರಿಂದ ಉಕ್ರೇನ್‌ಗೆ ಗುಟ್ಟಾಗಿ ರವಾನೆ?



**ಐರೋಪ್ಯ ಗ್ರಾಹಕರ ಕರಾಮತ್ತು?**

**ಕೀವ್:** ಒಂದೆಡೆ ರಷ್ಯಾ ಜೊತೆ ದೋಸ್ತಿ ಗಟ್ಟಿಗೊಳಿಸಿ ಅಮೆರಿಕ ಮಿತ್ರ ರಾಷ್ಟ್ರಗಳ ವಿರೋಧದ ನಡುವೆಯೂ ಕಡಿಮೆ ಬೆಲೆಗೆ ಪೆಟ್ರೋಲಿಯಂ ತೈಲ ಖರೀದಿ ಮಾಡುತ್ತಿರುವ ಭಾರತ, ಮತ್ತೊಂದೆಡೆ ಉಕ್ರೇನ್ ದೇಶಕ್ಕೂ ಶಸ್ತ್ರಾಸ್ತ್ರ ಸರಬರಾಜು ಮಾಡುತ್ತಿದೆ ಎಂಬ ಆರೋಪ ಕೇಳಿ ಬಂದಿದೆ. ಭಾರತ ನೇರವಾಗಿ ಉಕ್ರೇನ್ ದೇಶಕ್ಕೆ ಶಸ್ತ್ರಾಸ್ತ್ರ ಸರಬರಾಜು ಮಾಡುತ್ತಿಲ್ಲ. ಆದರೆ, ಐರೋಪ್ಯ ದೇಶಗಳ ತನ್ನ ಗ್ರಾಹಕರಿಗೆ ಫಿರಂಗಿಯ ಮದ್ದು ಗುಂಡುಗಳನ್ನು ಸರ ಬರಾಜು ಮಾಡುತ್ತಿದೆ.

ಈ ಸಲಕರಣೆಗಳನ್ನು ಐರೋಪ್ಯ ರಾಷ್ಟ್ರ ಗಳ ಗ್ರಾಹಕರು ಉಕ್ರೇನ್‌ಗೆ ರ ವಾನಿಸುತ್ತಿದ್ದಾರೆ ಎನ್ನಲಾಗಿದೆ. ರಕ್ಷಣಾ ವಲಯದ ಶಸ್ತ್ರಾಸ್ತ್ರ ಉತ್ಪಾದನೆ, ಮಾರಾಟದಲ್ಲಿ ತೊಡಗಿರುವ ಭಾರತ, ಐರೋಪ್ಯ ರಾಷ್ಟ್ರಗಳು ಹಾಗೂ ರಕ್ಷಣಾ ವಲಯದ ತಜ್ಞರ ಮಾಹಿತಿ ಪ್ರಕಾರ ಗ್ರಾಹಕ ಮಾಹಿತಿ ಸಂಗ್ರಹ ಮಾಡಿ ರುವ ರಾಯಿಟರ್ಸ್ ಸುದ್ದಿ ಸಂಸ್ಥೆ ಈ ವಿಶ್ಲೇಷಣೆ ಮಾಡಿದೆ.

**ಒಂದು ವರ್ಷದಿಂದ ಶಸ್ತ್ರಾಸ್ತ್ರ ಮಾರಾಟ?:** ಕಳೆದ ಒಂದು ವರ್ಷಕ್ಕೂ ಹೆಚ್ಚು ಅವಧಿಯಿಂದ ಭಾರತದ ಶಸ್ತ್ರಾಸ್ತ್ರಗಳು ಉಕ್ರೇನ್ ಸೇನೆಯ ಕೈ ಸೇರುತ್ತಿವೆ ಎನ್ನಲಾಗಿದೆ. ಗ್ರಾ ಹಕ ಅಂಕಿ ಅಂಶಗಳಲ್ಲಿ ಈ ವಿಚಾರ ಸಾಬೀತಾಗಿದೆ.

ಭಾರತದಲ್ಲಿ ಶಸ್ತ್ರಾಸ್ತ್ರ ರಫ್ತಿಗೆ ತನ್ನದೇ ಆದ ಕಾನೂನು ಇದೆ. ಭಾರತ ತನ್ನ ಬಳಿ ಶಸ್ತ್ರಾಸ್ತ್ರ ಖರೀದಿ ಮಾಡುವವರ ಮಾ ಹಿತಿ ಬಹಿರಂಗ ಮಾಡುತ್ತದೆ. ಈ ಖರೀದಿದಾರರು ಅಕ್ರಮವಾಗಿ ಬೇರೆಯವರಿಗೆ ವರ್ಗಾವಣೆ ಮಾಡೋದನ್ನ ತಡೆಯಲು ಭಾರತ ಮಾಹಿತಿ ಬಹಿರಂಗ ಮಾಡುತ್ತದೆ. ಆದಾಗ್ಯೂ ಐರೋಪ್ಯ ರಾಷ್ಟ್ರಗಳ ಶಸ್ತ್ರಾಸ್ತ್ರ ಮಾರಾಟಗಾರರು ಭಾರತದಿಂದ ಶಸ್ತ್ರಾಸ್ತ್ರ ಖರೀದಿ ಮಾಡಿ ಅದನ್ನು ಉಕ್ರೇನ್‌ಗೆ ರವಾನೆ ಮಾಡುತ್ತಿದ್ದಾರೆ ಎನ್ನಲಾಗಿದೆ.

**ಎರಡೆರಡು ಬಾರಿ ಭಾರತದ ಗಮನ ಸೆಳೆದಿತ್ತು ರಷ್ಯಾ:** ಭಾರತದ ಶಸ್ತ್ರಾಸ್ತ್ರಗಳು ಉಕ್ರೇನ್ ಸೇನೆಯ ಕೈ ಸೇರುತ್ತಿದೆ ಅನ್ನೋ ವಿಚಾರ ಸಂಬಂಧ ಈ ಹಿಂದೆ ಎರಡು ಬಾರಿ ರಷ್ಯಾ ಸರ್ಕಾರ ಭಾರತದ ಗಮನಕ್ಕೆ ತಂದಿತ್ತು. ಕಳೆದ ಜುಲೈನಲ್ಲಿ ರಷ್ಯಾದ ವಿದೇಶಾಂಗ ಸಚಿವರು ಭಾರತದ ವಿದೇಶಾಂಗ ಸಚಿವರು ಹಾಗೂ ಮೂವರು ಅಧಿಕಾರಿಗಳನ್ನ ಭೇಟಿ ಮಾಡಿದ್ದ ಸಂದರ್ಭದಲ್ಲೂ ಈ ಕುರಿತಾಗಿ ಚರ್ಚೆ ನಡೆಸಿತ್ತು. ಆದರೂ ಶಸ್ತ್ರಾಸ್ತ್ರ ಮಾರಾಟ ಎಂದಿನಂತೆಯೇ ನಡೆದಿದೆ ಎಂದು ಅಂಕಿ ಅಂಶಗಳು ಹೇಳುತ್ತಿವೆ ಎಂದು ಸುದ್ದಿ ಸಂಸ್ಥೆಯ ವರದಿ ತಿಳಿಸಿದೆ. ಇದೇ ಮೊದಲ ಬಾರಿ ರಾಯಿಟರ್ಸ್ ಸುದ್ದಿ ಸಂಸ್ಥೆ ಈ ಕುರಿತಾಗಿ ಸಮಗ್ರ ವರದಿ ಪ್ರಕಟ ಮಾಡಿದ್ದು, ಯಾವೆಲ್ಲಾ ಶಸ್ತ್ರಾಸ್ತ್ರಗಳನ್ನ ಭಾರತದಿಂದ ಖರೀದಿ ಮಾಡಿ ಅದನ್ನು ಉಕ್ರೇನ್‌ಗೆ ರವಾನಿಸಲಾಗುತ್ತಿದೆ ಎಂದು ಅಂಕಿ ಅಂಶ ಸಮೇತ ಮಾಹಿತಿ ನೀಡಿದೆ. ಆದರೆ ಕಳೆದ ಜನವರಿಯಲ್ಲಿ ಈ ಕುರಿತು ಪ್ರತಿಕ್ರಿಯೆ ನೀಡಿದ್ದ ಭಾರತದ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಉಕ್ರೇನ್‌ಗೆ ನಾವು ಯಾವುದೇ ರೀತಿಯ ಶಸ್ತ್ರಾಸ್ತ್ರ ರವಾನೆ ಅಥವಾ ಮಾರಾಟ ಮಾಡಿಲ್ಲ ಎಂದು ಖಚಿತವಾಗಿ ಹೇಳಿದ್ದರು.

### ರಷ್ಯಾ ವಿರೋಧದ ನಡುವೆಯೂ ಉಕ್ರೇನ್‌ಗೆ ಶಸ್ತ್ರಾಸ್ತ್ರ?

**ಐರೋಪ್ಯ ರಾಷ್ಟ್ರಗಳ ಗ್ರಾಹಕರ ಸೋಗಿನಲ್ಲಿ ಭಾರತದಿಂದ ಫಿರಂಗಿ ಮದ್ದು ಗುಂಡುಗಳನ್ನ ಖರೀದಿಸಿ ಅದನ್ನು ಉಕ್ರೇನ್‌ಗೆ ರವಾನೆ ಮಾಡಲಾಗುತ್ತಿದೆ ಅನ್ನೋ ವಿಚಾರವನ್ನ ಗ್ರಹಿಸಿರುವ ರಷ್ಯಾ, ಈ ಸಂಬಂಧ ಭಾರತಕ್ಕೆ ಸೂಚನೆ ನೀಡಿದೆ ಎನ್ನಲಾಗಿದೆ. ಆದಾಗ್ಯೂ ಭಾರತ ಈ ಮಾರಾಟ ತಡೆಯಲು ಯಾವುದೇ ಕ್ರಮ ಕೈಗೊಂಡಿಲ್ಲ ಎನ್ನಲಾಗಿದೆ.**

**ರಾಯಿಟರ್ಸ್ ಸುದ್ದಿ ಸಂಸ್ಥೆ ವರದಿ ಪ್ರಕಾರ ಭಾರತದಲ್ಲಿ ತಯಾರಾಗುವ ಶಸ್ತ್ರಾಸ್ತ್ರಗಳು ಸಣ್ಣ ಪ್ರಮಾಣದಲ್ಲಿ ಉಕ್ರೇನ್‌ನಲ್ಲಿ ಬಳಕೆಯಾಗುತ್ತಿದೆ ಎನ್ನಲಾಗಿದೆ. ಉಕ್ರೇನ್ ಬಳಕೆ ಮಾಡುತ್ತಿರುವ ಒಟ್ಟು ಶಸ್ತ್ರಾಸ್ತ್ರಗಳ ಪೈಕಿ ಕೇವಲ ಶೇ. 1 ರಷ್ಟು ಮಾತ್ರ ಭಾರತದಲ್ಲಿ ತಯಾರಾದವು ಎಂದು ತಿಳಿದು ಬಂದಿದೆ. ಇವೆಲ್ಲವನ್ನೂ ಭಾರತದಿಂದ ಖರೀದಿ ಮಾಡುವ ಐರೋಪ್ಯ ರಾಷ್ಟ್ರಗಳ ಶಸ್ತ್ರಾಸ್ತ್ರ ಖರೀದಿದಾರರು ಬಳಿಕ ಅದನ್ನು ಗುಟ್ಟಾಗಿ ಉಕ್ರೇನ್ ದೇಶಕ್ಕೆ ಸಾಗಿಸುತ್ತಿದ್ದಾರೆ ಎಂದು ವರದಿ ಹೇಳಿದೆ.**

---


**ಉದಯ ವಾಹಿನಿ**

**ದೇಶ/ವಿದೇಶ**

ಶುಕ್ರವಾರ 20 ಸೆಪ್ಟೆಂಬರ್ 2024




## ಮಿನಿ ನ್ಯೂಸ್

### ಸೂಟ್‌ಕೇಸ್‌ನಲ್ಲಿತ್ತು ಮಹಿಳೆ ಶವ

**ಚೆನ್ನೈ:** ದುಷ್ಕರ್ಮಿಗಳು ಮಹಿಳೆಯನ್ನು ಕೊಲೆ ಮಾಡಿ ಆಕೆಯ ಶವವನ್ನು ಸೂಟ್‌ಕೇಸ್‌ನಲ್ಲಿಟ್ಟು ಅದನ್ನು ಜನವಸತಿ ಪ್ರದೇಶದಲ್ಲಿ ಇಟ್ಟು ಪರಾರಿಯಾಗಿರುವ ಘಟನೆ ತಮಿಳುನಾಡಿನಲ್ಲಿ ನಡೆದಿದೆ. ಗುರುವಾರ ಬೆಳಗ್ಗೆ ಚೆನ್ನೈನಲ್ಲಿ ಎಸೆದಿದ್ದ ಸೂಟ್‌ಕೇಸ್‌ನಲ್ಲಿ ಮಹಿಳೆಯ ಶವ ಪತ್ತೆಯಾಗಿದೆ ಆಕೆಯನ್ನು ಬೇರೆಡೆ ಕೊಲೆ ಮಾಡಿ ಶವವನ್ನು ಸೂಟ್‌ಕೇಸ್‌ನಲ್ಲಿ ಇಟ್ಟು ಅದನ್ನು ತೊರೈಪಾಕ್ಕಂನ ಐಟಿ ಕಾರಿಡಾರ್‌ಗೆ ಹೊಂದಿಕೊಂಡಿರುವ ವಸತಿ ಪ್ರದೇಶದಲ್ಲಿ ಇಟ್ಟು ಕೊಲೆಗುಡುಕರು ಪರಾರಿಯಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ನಾವು ಮುಂಜಾನೆಯಿಂದಲೂ ಪ್ರದೇಶದಲ್ಲಿ ಬೀಟ್ ಮಾಡುತ್ತಿದ್ದೇವೂ ಆದರೆ, ಕೊಲೆಗುಡುಕರು ಮಹಿಳೆಯನ್ನು ಬೇರೆ ಕಡೆ ಕೊಲೆ ಮಾಡಿ ಶವವನ್ನು ಇಲ್ಲಿ ಎಸೆಯಲಾಗಿದೆ ಎಂದು ನಾವು ಶಂಕಿಸಿ ದ್ದೇವೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಸಂತ್ರಸ್ತೆಯ ಗುರುತು ಇನ್ನೂ ತಿಳಿದುಬಂದಿಲ್ಲ ಮತ್ತು ಆರೋಪಿಗಳನ್ನು ಬಂಧಿಸಲು ಅಧಿಕಾರಿಗಳು ಕಾರ್ಯಪ್ರವತ್ತರಾಗಿದ್ದಾರೆ.ಹೆಚ್ಚುತ್ತಿರುವ ಅಪರಾಧಗಳ ಬಗ್ಗೆ ಪ್ರತಿಪಕ್ಷಗಳ ಟೀಕೆಗಳ ನಡುವೆ ಈ ಘಟನೆ ನಡೆದಿದೆ, ಆಡಳಿತಾರೂಢ ಡಿಎಂಕೆ ಆರೋಪವನ್ನು ನಿರಾಕರಿಸಿದೆ.

### ಜಮೀನು ವಿವಾದದ ಹಿನ್ನೆಲೆಯಲ್ಲಿ 21 ಮನೆಗಳಿಗೆ ಬೆಂಕಿಯಿಟ್ಟ ದುಷ್ಟರು

**ನವಾಡ:** ಜಮೀನು ವಿವಾದದ ತೀವ್ರ ಮಟ್ಟಕ್ಕೆ ಹೋಗಿ ಅಲ್ಲಿದ್ದ 21 ಮನೆಗಳಿಗೆ ಬೆಂಕಿ ಹಚ್ಚಿದ ಘಟನೆ ಬಿಹಾರದ ನವಾಡ ಜಿಲ್ಲೆಯಲ್ಲಿ ಮಾಂಝಿ ತೋಲಾದ ಬಳಿ ನಡೆದಿದೆ. ಘಟನೆಯಲ್ಲಿ ಯಾರಿಗೂ ಗಾಯಗಳಾಗಿಲ್ಲ ಜಮೀನು ವಿವಾದವೇ ಕಾರಣ ಎಂದು ಪ್ರಾಥಮಿಕ ತನಿಖೆಯಿಂದ ತಿಳಿದು ಬಂದಿದೆ ಎಂದು ಮುಫಾಸಿಲ್ ಠಾಣೆ ಪೊಲೀಸರು ತಿಳಿಸಿದ್ದಾರೆ . ಘಟನೆಗೆ ಸಂಬಂಧಿಸಿದಂತೆ ಹತ್ತು ಮಂದಿಯನ್ನು ಬಂಧಿಸಲಾಗಿದ್ದು, ಇತರ ಆರೋಪಿಗಳ ಪತ್ತೆಗೆ ಶೋಧ ನಡೆಸಲಾಗುತ್ತಿದೆ ಎಂದು ಹೇಳಿದರು. ಕಳೆದ ರಾತ್ರಿ ಮಾಂಝಿ ಟೋಲಾದಲ್ಲಿ ಕೆಲವು ಮನೆಗಳಿಗೆ ಬೆಂಕಿ ಹಚ್ಚಲಾಗಿದೆ ಎಂಬ ಮಾಹಿತಿ ತಿಳಿದ ತಕ್ಷಣ ಅಗ್ನಿಶಾಮಕ ಸಿಬ್ಬಂದಿ ಸ್ಥಳಕ್ಕೆ ಬಂದು ಪೊಲೀಸರೊಂದಿಗೆ ಸೇರಿ ಬೆಂಕಿಯನ್ನು ನಂದಿಸಿದ್ದಾರೆ. ಗ್ರಾಮಸ್ಥರ ಪ್ರಕಾರ, ಕೆಲ ಜನರ ಗುಂಪು ಮನೆಗಳ ಮೇಲೆ ಪೆಟ್ರೋಲ್ ಸುರಿದು ಬೆಂಕಿ ಹಚ್ಚಿದ್ದಾರೆ ಎಂದು ಎಸ್ಪಿ ಅಭಿನವ್ ಧಿಮಾನ್ ಹೇಳಿದ್ದಾರೆ. ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದ ನಂತರ ಘಟನೆಗೆ ಜಮೀನು ವಿವಾದವೇ ಕಾರಣ ಎಂದು ಪ್ರಾಥಮಿಕ ತನಿಖೆಯಿಂದ ತಿಳಿದು ಬಂದಿದ್ದು, ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆ ಸಲಾಗುತ್ತಿದೆ ಎಂದರು. ಮನೆಗಳಿಗೆ ಬೆಂಕಿ ಹಚ್ಚುವಾಗ ಗಾಳಿಯಲ್ಲಿ ಗುಂಡು ಹಾರಿಸಲಾಯಿತು ಎಂದು ಮತ್ತೊಬ್ಬ ಪೊಲೀಸ್ ಅಧಿಕಾರಿ ತಿಳಿಸಿದ್ದಾರೆ. ಪರಿಸ್ಥಿತಿ ಈಗ ನಿಯಂತ್ರಣದಲ್ಲಿದೆ ಮತ್ತು ಘರ್ಷಣೆ ಭುಗಿ ಲೆದ್ದಂತೆ ತಡೆಯಲು ಪೊಲೀಸ್ ಪಡೆಯನ್ನು ನಿಯೋಜಿಸಲಾಗಿದೆ ಎಂದು ಧೀಮಾನ್ ಹೇಳಿದರು.

### ಜೈಲು ಶಿಕ್ಷೆಗೆ ಇಮ್ರಾನ್ ಅಪರಾಧಗಳೆ ಸಾಕು: ಖವಾಜಾ ಆಸೀಫ್

**ಇಸ್ಲಾಮಾಬಾದ್:** ಇಮ್ರಾನ್ ಖಾನ್ ಅವರನ್ನು ಜೈಲಿನಲ್ಲಿಡಲು ಅ ವರು ಎಸಗಿರುವ ಅಪರಾಧ ಕೃತ್ಯಗಳೇ ಸಾಕು ಎಂದು ಪಾಕಿಸ್ತಾನದ ರಕ್ಷಣಾ ಸಚಿವ ಖವಾಜಾ ಆಸೀಫ್ ಅವರು ತಿಳಿಸಿದ್ದಾರೆ. ನನ್ನನ್ನು ಶಾ ಶ್ವತವಾಗಿ ಜೈಲಿನಲ್ಲಿರಿಸುವ ಸಲುವಾಗಿ ಸರ್ಕಾರ ಸಂವಿ ಧಾನದಲ್ಲಿ ತಿದ್ದು ಪಡಿ ಮಾಡಲು ಮುಂದಾಗಿದೆ' ಎಂಬ ಪಾಕಿಸ್ತಾನ ಮಾಜಿ ಪ್ರಧಾನಿ ಇಮ್ರಾನ್ ಅವರ ಆರೋಪವನ್ನು ಖವಾಜಾ ತಳ್ಳಿ ಹಾಕಿದ್ದಾರೆ. ಸಿನಿಮಾ ಪಾಕಿಸ್ತಾನ ತೆಹ್ರಿಕ್ ಇ-ಇನ್ಸಾಫ್ (ಪಿಟಿಐ) ಪಕ್ಷದ ಸಂಸ್ಥಾಪಕ ಇಮ್ರಾನ್ ಅಪರಾಧಗಳ ಪಟ್ಟಿಯನ್ನು ನೀಡಿದರೆ, ಅವರಿಗೆ ಶಿಕ್ಷೆ ನೀಡಲು ಸಂ ವಿಧಾನ ತಿದ್ದುಪಡಿಯ ಅವಶ್ಯಕತೆ ಇರುವುದಿಲ್ಲ' ಎಂದು ಖವಾಜ ತಿಳಿಸಿದ್ದಾರೆ. ಜೈಲಿನಲ್ಲಿರುವ ಇಮ್ರಾನ್ ಅವರು ಸಂವಿಧಾನ ತಿದ್ದುಪಡಿ ಮಾತ್ರವಲ್ಲದೇ ಪಾಕಿಸ್ತಾನದಲ್ಲಿ ನಡೆಯುವ ಎಲ್ಲಾ ಬೆಳವಣಿಗೆಗಳು ತನಗೆ ಸಂಬಂಧಿಸಿದ್ದು ಎಂದು ಭಾವಿಸಿದ್ದಾರೆ' ಎಂದು ಹೇಳಿದ್ದಾರೆ.


### ವೈದ್ಯರ ಮೇಲೆ ರೋಗಿ ಕುಟುಂಬಸ್ಥರ ಹಲ್ಲೆ

**ವಡೋದರ:** ಗುಜರಾತ್‌ನ ಆಸ್ಪತ್ರೆಯೊಂದರ ವಿಡಿಯೋವೊಂದು ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗುತ್ತಿದೆ. ಆಸ್ಪತ್ರೆ ವೈದ್ಯರೊಬ್ಬರಿಗೆ ರೋಗಿಯ ಕುಟುಂಬದ ಸದಸ್ಯರು ಥಳಿಸಿದ ಪ್ರಕರಣ ನಡೆದಿದೆ. ಈ ಘಟನೆ ಅಲ್ಲಿ ಅಳವಡಿಸಿದ್ದ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದೆ. ತುರ್ತು ಚಿಕಿತ್ಸಾ ವಿಭಾಗಕ್ಕೆ ಬರುವ ಮುನ್ನ ರೋಗಿಯ ಕುಟುಂಬದ ಸದಸ್ಯರಿಗೆ ಪಾದರಕ್ಷೆ ತೆಗೆದು ತುರ್ತು ಚಿಕಿತ್ಸಾ ವಿಭಾಗಕ್ಕೆ ಬರಲು ಹೇಳಿದ ವೈದ್ಯರಿಗೆ ಮನಬಂದಂತೆ ಥಳಿಸಿದ್ದಾರೆ. ಗುಜರಾತ್‌ನ ಭಾವನಗರದ ಸೆಹೋರ್‌ನಲ್ಲಿರುವ ಖಾಸಗಿ ಆಸ್ಪ ತ್ರೆಯಲ್ಲಿ ಈ ಘಟನೆ ನಡೆದಿದೆ. ಮಹಿಳೆಯ ಚಿಕಿತ್ಸೆಗಾಗಿ ಶನಿವಾರ ಆರೋಪಿಗಳು ಆಸ್ಪತ್ರೆಗೆ ಬಂದಿದ್ದಾಗ ಈ ಘಟನೆ ನಡೆದಿದೆ ಎಂದು ಹೇಳಲಾಗಿದೆ. ಮಹಿಳೆಯ ತಲೆಗೆ ಗಾಯವಾದ ಕಾರಣ ಚಿಕಿತ್ಸೆಗಾಗಿ ಆಕೆಯನ್ನು ಕುಟುಂಬ ಸದಸ್ಯರು ಆಸ್ಪತ್ರೆಗೆ ದಾಖಲಿಸಿದ್ದಾರೆ. ಆಗ ಕರ್ತವ್ಯ ನಿರತ ವೈದ್ಯ ಜೈದೀಪ್ ಸಿಂಗ್ ಗೋಹಿಲ್ ಅವರು ತುರ್ತು ಚಿಕಿತ್ಸಾ ವಿಭಾಗದಲ್ಲಿರುವ ರೋಗಿಯ ಕುಟುಂಬ ಸದಸ್ಯರನ್ನು ಅವರ ಚಪ್ಪಲಿಗಳನ್ನು ತೆಗೆಯುವಂತೆ ಹೇಳಿದ್ದಾರೆ. ಮೂವರು ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ. ಆರೋಪಿ ಹಿರೇನ್ ದಂಗರ್, ಭಾವದೀಪ್ ದಂಗರ್ ಮತ್ತು ಕೌಶಿಕ್ ಕುವಾಡಿಯಾ ವಿರುದ್ಧ ಸೆಕ್ಷನ್ 115 (2) , 352, 351 ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

### ಜಮ್ಮು ಕಾಶ್ಮೀರದಲ್ಲಿ ಶೇ.61ರಷ್ಟು ಮತದಾನ

**ಜಮ್ಮು-ಕಾಶ್ಮೀರ:** ಜಮ್ಮು, ಕಾಶ್ಮೀರದ ಏಳು ಜಿಲ್ಲೆಗಳ 24 ಕ್ಷೇತ್ರಗಳಲ್ಲಿ ನಡೆದ ಮೊದಲ ಹಂತದ ವಿಧಾನಸಭಾ ಚುನಾವಣೆಯಲ್ಲಿ 61% ಕ್ಕಿಂತ ಹೆಚ್ಚು ಮತದಾನವಾಗಿದೆ ಎಂದು ಚುನಾವಣಾ ಆಯೋಗ ತಿಳಿಸಿದೆ. 24 ವಿಧಾನಸಭಾ ಕ್ಷೇತ್ರಗಳಲ್ಲಿ ಶೇ 61ರಷ್ಟು ಮತದಾನವಾಗಿದೆ. ಜಮ್ಮು ಮತ್ತು ಕಾಶ್ಮೀರದಲ್ಲಿ ನಡೆದ ಮೊದಲ ಹಂತ ದ ವಿಧಾನಸಭಾ ಚುನಾವಣೆಯಲ್ಲಿ ಸುಮಾರು ಶೇ.61ರಷ್ಟು ಮತದಾನವಾಗಿದ್ದು, ಇದು ಕಳೆದ ಏಳು ಚುನಾವಣೆಗಳಲ್ಲಿಯೇ ಅತಿ ಹೆಚ್ಚು ಎಂದು ಮುಖ್ಯ ಚುನಾವಣಾಧಿಕಾರಿ ಪಿ.ಕೆ.ಪೋಲ್ ತಿಳಿಸಿದ್ದಾರೆ. ಶಾಂತಿಯುತವಾಗಿ ಮತದಾನ ನಡೆದಿದೆ ಎಂದರು.

ಉತ್ತಮ ಭದ್ರತಾ ಪರಿಸ್ಥಿತಿ, ರಾಜಕೀಯ ಪಕ್ಷಗಳು,ಅಭ್ಯರ್ಥಿಗಳ ಸಕ್ರಿಯ ಭಾಗವಹಿಸುವಿಕೆ ಮತ್ತು ಇಲಾಖೆ ನಡೆಸುತ್ತಿರುವ ಪ್ರಚಾರಗಳು ಸೇರಿದಂತೆ ವಿವಿಧ ಅಂಶಗಳಿಂದ ಮತದಾನದ ಶೇಕಡಾವಾರು ಹೆಚ್ಚಳಕ್ಕೆ ಕಾರಣರಾಗಿದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ. ಕಿಶ್ತ್ವಾರ್ ಜಿಲ್ಲೆಯಲ್ಲಿ ಅತಿ ಹೆಚ್ಚು ಶೇ.77ರಷ್ಟು ಮತದಾನವಾಗಿದ್ದರೆ, ಪುಲ್ವಾಮಾ ಜಿಲ್ಲೆಯಲ್ಲಿ ಅತಿ ಕಡಿಮೆ ಶೇ.46ರಷ್ಟು ಮತದಾನವಾಗಿದೆ ಎಂದು ಅವರು ಹೇಳಿದರು. ಸೆಪ್ಟೆಂಬರ್ 25 ಮತ್ತು ಅಕ್ಟೋಬರ್ 1 ರಂದು ನಡೆಯಲಿರುವ ಉಳಿದ ಎರಡು ಹಂತಗಳಲ್ಲಿ ಮತದಾನದ ಶೇಕಡಾವಾರು ಹೆಚ್ಚು ಇರುತ್ತದೆ ಎಂದು ಸಮೀಕ್ಷೆಯು ಭರವಸೆ ವ್ಯಕ್ತಪಡಿಸಿದೆ.



# ವಿಲನ್ ಆಗಿ ಅಬ್ಬರಿಸಲು ಸೈಫ್ ಅಲಿ ಖಾನ್‌ಗೆ ಆಫರ್

ಬಾಲಿವುಡ್ ನಟ ಸೈಫ್ ಅಲಿ ಖಾನ್ ಈಗಾಗಲೇ ಜ್ಯೂ.ಎನ್‌ಟಿಆರ್‌ಗೆ ವಿಲನ್ ಆಗಿ ನಟಿಸಿದ್ದಾರೆ. ಈ ಬೆನ್ನಲ್ಲೇ ಪ್ರಭಾಸ್ ಮುಂದೆ ವಿಲನ್ ಆಗಿ ಅಬ್ಬರಿಸಲು ಸೈಫ್ ಮತ್ತು ಕರೀನಾ ಕಪೂರ್ ದಂಪತಿಗೆ ಆಫರ್ ನೀಡಲಾಗಿದೆ ಎಂಬ ವಿಚಾರ ಸೋಶಿಯಲ್ ಮೀಡಿಯಾದಲ್ಲಿ ಚರ್ಚೆಗೆ ಗ್ರಾಸವಾಗಿದೆ. 'ದೇವರ' ಸಿನಿಮಾ ರಿಲೀಸ್‌ಗೂ ಮುನ್ನ ಸೌತ್‌ನ ಮತ್ತೊಬ್ಬ ಸೂಪರ್ ಸ್ಟಾರ್ ಪ್ರಭಾಸ್ ಚಿತ್ರದಲ್ಲಿ ನಟಿಸಲು ಬುಲಾವ್ ಬಂದಿದೆ. ಸೈಫ್ ಮಾತ್ರವಲ್ಲ ಕರೀನಾ ಕಪೂರ್ ಕೂಡ ಸಿನಿಮಾದಲ್ಲಿ ನಟಿಸಲು ಕೇಳಲಾಗಿದೆಯಂತೆ. ಸೈಫ್ ಮತ್ತು ಕರೀನಾ ಇಬ್ಬರೂ ಪ್ರಭಾಸ್ ನಟನೆಯ 'ಸ್ಪಿರಿಟ್' ಚಿತ್ರದಲ್ಲಿ ವಿಲನ್ ನಟಿಸ್ತಾರೆ ಎಂಬುದು ಸದ್ಯ ಹರಿದಾಡುತ್ತಿರುವ ಸುದ್ದಿ. ಚಿತ್ರತಂಡ ಸೈಫ್ ದಂಪತಿಯನ್ನು ಭೇಟಿ ಮಾಡಿ ಕಥೆ ಹೇಳಿದ್ದಾರೆ ಎನ್ನಲಾಗಿದೆ. ಅವರು ಕೂಡ ನಟಿಸಲು ಒಪ್ಪಿಕೊಂಡಿದ್ದಾರೆ ಎಂದು ಹೇಳಲಾಗ್ತಿದೆ. ಆದರೆ ಇದರ ಬಗ್ಗೆ ಅಧಿಕೃತ ಮಾಹಿತಿ ಹೊರಬಿದ್ದಿಲ್ಲ. ಚಿತ್ರತಂಡ ಈ ಕುರಿತು ಘೋಷಣೆ ಮಾಡುವವರೆಗೂ ಕಾದುನೋಡಬೇಕಿದೆ. ಇನ್ನೂ ಕರೀನಾ ಕಪೂರ್ ಚಿತ್ರರಂಗಕ್ಕೆ ಎಂಟ್ರಿ ಕೊಟ್ಟು 25 ವರ್ಷಗಳಾಗಿವೆ. ಹೊಸ ಬಗೆಯ ಪಾತ್ರ ಮಾಡೋಕೆ ನಟಿ ನಿರ್ಧರಿಸಿದ್ದಾರೆ.

ಕರೀನಾ ಕಪೂರ್ ಎಂಟ್ರಿ



ಸಿನಿ ವಾಹಿನಿ



# 'ಕೂಲಿ' ಚಿತ್ರದ ದೃಶ್ಯ ಲೀಕ್

ರಜನಿಕಾಂತ್ ಮತ್ತು ಉಪೇಂದ್ರ ಕಾಂಬಿನೇಷನ್‌ನ ಕೂಲಿ ಸಿನಿಮಾದ ಶೂಟಿಂಗ್ ನಡೀತಾ ಇದೆ. ಈ ನಡುವೆ ಶಾಕ್ ನೀಡುವಂತಹ ಸುದ್ದಿ ಹೊರ ಬಿದ್ದಿದೆ. ಚಿತ್ರದ ಪ್ರಮುಖ ದೃಶ್ಯವನ್ನೇ ಕಿಡಿಗೇಡಿಗಳು ಲೀಕ್ ಮಾಡಿದ್ದಾರೆ. ಈ ನಡೆಗೆ ನಿರ್ದೇಶಕ ಲೋಕೇಶ್ ಕನಗರಾಜು ಬೇಸರ ವ್ಯಕ್ತ ಪಡಿಸಿದ್ದಾರೆ. ಈ ಕುರಿತು ಸೋಷಿಯಲ್ ಮೀಡಿಯಾದಲ್ಲಿ ಪೋಸ್ಟ್ ಕೂಡ ಮಾಡಿದ್ದಾರೆ. ತಂಡದ ಶ್ರಮ ಮತ್ತು ಹಣವನ್ನು ಹೀಗೆ ಹಾಳು ಮಾಡಬೇಡಿ ಎಂದಿದ್ದಾರೆ.

ಬಹುನಿರೀಕ್ಷಿತ 'ಕೂಲಿ' ಸಿನಿಮಾ ಬಗ್ಗೆ ದಿನದಿಂದ ದಿನಕ್ಕೆ ಹೈಪ್ ಕ್ರಿಯೆಟ್ ಮಾಡ್ತಿದೆ. ರಜನಿಕಾಂತ್ ಜೊತೆ ಉಪೇಂದ್ರ ನಟಿಸುವ ಬಗ್ಗೆ ಅಫಿಷಿಯಲ್ ಅನೌನ್ಸ್‌ಮೆಂಟ್ ಸಿಕ್ಕ ಬೆನ್ನಲ್ಲೇ ಈಗ ಮತ್ತೊಂದು ಕ್ರೆಜಿ ಅಪ್‌ಡೇಟ್ ಹೊರಬಿದ್ದಿದೆ. 30 ವರ್ಷಗಳ ನಂತರ ತಲೈವಾ ಮತ್ತು ಆಮೀರ್ ಖಾನ್ ಕೂಲಿ ಚಿತ್ರಕ್ಕಾಗಿ ಒಂದಾಗ್ತಿದ್ದಾರೆ ಎಂಬ ಸುದ್ದಿ ಈಗ ಸೋಶಿಯಲ್ ಮೀಡಿಯಾದಲ್ಲಿ ಚರ್ಚೆಗೆ ಗ್ರಾಸವಾಗಿದೆ.

ಗರಂ ಆದ ಡೈರೆಕ್ಟರ್

1995ರಲ್ಲಿ 'ಆತಂಕ್ ಹಿ ಆತಂಕ್' ಎಂಬ ಸಿನಿಮಾದಲ್ಲಿ ರಜನಿಕಾಂತ್ ಮತ್ತು ಆಮೀರ್ ಜೊತೆಯಾಗಿ ನಟಿಸಿದ್ದರು. ಈಗ ಹೊಸ ಪ್ರಾಜೆಕ್ಟ್ ಕೂಲಿ ಚಿತ್ರಕ್ಕಾಗಿ ತಲೈವಾ ಜೊತೆ ಬಾಲಿವುಡ್ ನಟ ಆಮೀರ್ ಖಾನ್ ಸ್ಪೆಷಲ್ ರೋಲ್‌ನಲ್ಲಿ ನಟಿಸ್ತಾರೆ ಎನ್ನಲಾಗಿದೆ. ಇದು ಜಸ್ಟ್ ಗಾಳಿ ಸುದ್ದಿನಾ ಅಥವಾ ರಿಯಲ್ ಸುದ್ದಿನಾ ಎಂಬುದರ ಕುರಿತು ಚಿತ್ರತಂಡವೇ ತಿಳಿಸಬೇಕಿದೆ. ಆದರೆ ಆಮೀರ್ ಖಾನ್‌ರನ್ನು ಡೈರೆಕ್ಟರ್ ಲೋಕೇಶ್ ಕನಕರಾಜ್ ಟೀಮ್ ಸಂಪರ್ಕಿಸಿದೆ ಎನ್ನಲಾಗಿದೆ. ಪಾತ್ರದ ಬಗ್ಗೆ ಕೇಳಿ ನಟ ಕೂಡ ಒಪ್ಪಿಗೆ ಕೊಟ್ಟಿದ್ದಾರೆ ಎಂಬುದು ಸದ್ಯ ಹರಿದಾಡುತ್ತಿರುವ ಸುದ್ದಿ.

# ಪ್ರೇಮಕಥೆಯಲ್ಲಿ ಚೈತ್ರಾ ಆಚಾರ್

ಪಿಂಗಾರ ಚಿತ್ರಕ್ಕೆ ರಾಷ್ಟ್ರಪ್ರಶಸ್ತಿ ಪಡೆದಿರುವ ಪ್ರೀತಂ ಆರ್ ಶೆಟ್ಟಿ ಗರಡಿಯಲ್ಲಿ ನಿರ್ದೇಶನದ ಪಟ್ಟುಗಳನ್ನು ಕಲಿತಿರುವ ರಿಶಿತ್ ಶೆಟ್ಟಿ ಚೊಚ್ಚಲ ಪ್ರಯತ್ನವೇ ಈ ಮಾರ್ನಮಿ. ಈ ಚಿತ್ರದ ಟೈಟಲ್ ಟೀಸರ್ ಬಿಡುಗಡೆ ಕಾರ್ಯಕ್ರಮ ಬೆಂಗಳೂರಿನ ಎಸ್ ಆರ್ ವಿ ಥಿಯೇಟರ್ ನಲ್ಲಿ ಮಾಡಲಾಯಿತು. ಸಂಗೀತ ನಿರ್ದೇಶಕ ಚರಣ್ ರಾಜ್ ಮಾತನಾಡಿ, ತುಂಬಾ ಖುಷಿಯಾಗುತ್ತಿದೆ. ಹೊಸ ತಂಡ ಹೊಸ ನಿರ್ದೇಶಕರು. ಈ ತಂಡದಲ್ಲಿ ನನ್ನ ಅಚ್ಚುಮೆಚ್ಚಿನ ನಟರು ಎಲ್ಲಾ ಇದ್ದಾರೆ. ತುಂಬಾ ಒಳ್ಳೆ ಕಥೆ. ನನಗೂ ಒಳ್ಳೆ ಅವಕಾಶ ಇದೆ ಎನಿಸಿತು. ನನಗೂ ಅವಕಾಶ ಪಡೆದುಕೊಂಡಿದ್ದೇನೆ. ಸಂಗೀತದ ಕೆಲಸ ಶುರು ಮಾಡಿದ್ದೇವೆ. ಮಾರ್ನಮಿ ಟೈಟಲ್ ಟೀಸರ್ ಮಾಡಿದ್ದೇವೆ. ಹಾಡುಗಳ ಕಂಪೋಸ್ ಮಾಡಲು ಶುರು ಮಾಡಿದ್ದೇವೆ. ಇಷ್ಟೇ ಸಾಂಗ್ ಇದೆ ಅಂತಾ ಡಿಸೈಡ್ ಮಾಡಿಲ್ಲ. ಆದರೆ ಐದು ಹಾಡುಗಳು ಇರುತ್ತವೆ ಎಂದರು. ಇದನ್ನೂ ಓದಿ:ಗಂಡು ಮಗುವಿಗೆ ಜನ್ಮ ನೀಡಿದ ಕವಿತಾ ಗೌಡ– ತಂದೆಯಾದ ಖುಷಿಯಲ್ಲಿ ಚಂದನ್ ನಿರ್ದೇಶಕ ರಿಶಿತ್ ಶೆಟ್ಟಿ ಮಾತನಾಡಿ, ಒಂದಷ್ಟು ಸಿನಿಮಾಗಳಲ್ಲಿ ಅಸಿಸ್ಟೆಂಟ್, ಅಸೋಸಿಯೆಟ್ ಆಗಿ ರೈಟರ್ ಆಗಿ ಕೆಲಸ ಮಾಡಿದ್ದೇನೆ. ಪ್ರೀತಂ ಶೆಟ್ಟಿ ಅವರ ಜೊತೆ ಒಂದಷ್ಟು ಚಿತ್ರಗಳಿಗೆ ಕೆಲಸ ಮಾಡಿದ್ದೇನೆ. ಮಂಗಳೂರಲ್ಲಿ ಸ್ಕಿಪ್ಟ್ ಕೆಲಸಕ್ಕೆ ಹೋಗಿದ್ದಾಗ ಸುಧಿ ಪರಿಚಯವಾಗಿದ್ದು. ಅವರು ಒಂದು ಕಥೆ ಮಾಡಿಕೊಂಡಿದ್ದರು. ಅವರು ಡೈರೆಕ್ಷನ್ ಮಾಡಲು ಇಷ್ಟಇಲ್ಲ ಅಂದಾಗ ನಾನು ಕಥೆ ಕೇಳಿದೆ. ಅವರು ಪ್ರೀತಿಯಿಂದ ಕೊಟ್ಟರು. ರಿತ್ವಿಕ್ ಅವರಿಗೆ ಹೇಳಿದೆ. ಅವರು ಇದಕ್ಕೆ ಏನೋ ಬೇಕೋ ಅನಿಸುತ್ತಿದೆ ಎಂದರು. ಬಳಿಕ 6 ತಿಂಗಳ ವರ್ಕ್ ಮಾಡಿಕೊಂಡು ಅವರ ಬಳಿ ಹೋದೆ. ಅವರು ಕಥೆ ಕೇಳಿ ಖುಷಿಪಟ್ಟರು.



# ಕಂಗನಾಗೆ ನಿರಾಳ

ಕಂಗನಾ ರಣಾವತ್ ನಟನೆಯ ಬಹುನಿರೀಕ್ಷಿತ 'ಎಮರ್ಜೆನ್ಸಿ' ಸಿನಿಮಾಗೆ ಕೇಂದ್ರ ಸೆನ್ಸಾರ್ ಮಂಡಳಿಯು ಸರ್ಟಿಫಿಕೇಟ್ ಕೊಡದೇ ತಡೆ ನೀಡಿತ್ತು. ಇದನ್ನು ಪ್ರಶ್ನಿಸಿ ಕಂಗನಾ ಬಾಂಬೆ ಹೈಕೋರ್ಟ್ ಮೆಟ್ಟಿಲು ಏರಿದ್ದರು. ಈಗ ಹೈಕೋರ್ಟ್ ಸೆನ್ಸಾರ್ ಮಂಡಳಿಗೆ ಸೂಚನೆ ನೀಡಿದ್ದು, ಒಂದು ವಾರದ ಒಳಗೆ ಪ್ರಮಾಣ ಪತ್ರದ ತೀರ್ಮಾನ ತಗೆದುಕೊಳ್ಳಬೇಕು ಎಂದಿದೆ. ಮೊನ್ನೆಯಷ್ಟೇ ಸಿನಿಮಾದ ಟ್ರೈಲರ್ ಈಗ ರಿಲೀಸ್ ಆಗಿದೆ. ಇಂದಿರಾ ಗಾಂಧಿ ಪಾತ್ರದಲ್ಲಿ ಕಂಗನಾ ಪರಕಾಯ ಪ್ರವೇಶ ಮಾಡಿದ್ದಾರೆ. ಇಂಡಿಯಾ ಅಂದರೆ ಇಂದಿರಾ ಎಂದು ಖಡಕ್ ಆಗಿ ನಟಿ ಡೈಲಾಗ್ ಹೊಡೆದಿದ್ದಾರೆ. 1975ರಲ್ಲಿ ಮಾಜಿ ಪ್ರಧಾನಿ ದಿವಂಗತ ಇಂದಿರಾ ಗಾಂಧಿ ಅವರು ದೇಶದಲ್ಲಿ ತುರ್ತು ಪರಿಸ್ಥಿತಿ ಜಾರಿ ಮಾಡಿದ ಐತಿಹಾಸಿಕ ಸನ್ನಿವೇಶದ ಚಿತ್ರಣ ಹೊಂದಿರುವ ಸಿನಿಮಾ ಇದಾಗಿದೆ. ರಾಜಕೀಯ ಮತ್ತು ಭಾವನಾತ್ಮಕ ಸನ್ನಿವೇಶಗಳನ್ನು ಇಂದಿರಾ ಗಾಂಧಿ ಅವರು ಎದುರಿಸಿದ ರೀತಿಯನ್ನು ಟ್ರೈಲರ್ ಮೂಲಕ ಝಲಕ್ ತೋರಿಸಲಾಗಿದೆ. ತುರ್ತು ಪರಿಸ್ಥಿತಿ ಹೇರಿಕೆ ವಿರುದ್ಧ ರಾಷ್ಟ್ರವ್ಯಾಪಿ ನಡೆದ ಪ್ರತಿಭಟನೆಗಳು, ಕರ್ಫ್ಯೂ, ರಾಜಕೀಯ ವಿರೋಧ ಹೀಗೆ ಹಲವು ಸನ್ನಿವೇಶಗಳನ್ನು ಟ್ರೈಲರ್‌ನಲ್ಲಿ ಹೈಲೆಟ್ ಮಾಡಲಾಗಿದೆ. ಕಂಗನಾ 'ಇಂದಿರಾ ಗಾಂಧಿ' ಪಾತ್ರಕ್ಕೆ ಜೀವ ತುಂಬಿದ್ದಾರೆ. ಇಂಡಿಯಾ ಅಂದರೆ ಇಂದಿರಾ, ಇಂದಿರಾ ಅಂದರೆ ಇಂಡಿಯಾ ಎಂದಿದ್ದಾರೆ ಕಂಗನಾ. ದೇಶದ ಇತಿಹಾಸದಲ್ಲಿ ಅತ್ಯಂತ ಶಕ್ತಿಶಾಲಿ ಮಹಿಳೆ. ಆದರೆ, ಇತಿಹಾಸದಲ್ಲಿ ಅವರು ಬರೆದ ಕರಾಳ ಅಧ್ಯಾಯ! (ಎಮರ್ಜೆನ್ಸಿ).

ಬಾಂಬೆ ಹೈಕೋರ್ಟ್ ಹೇಳಿದ್ದೇನು

# 42ರ ಹರೆಯದಲ್ಲೂ ಶ್ರೀಯಾ ಬೋಲ್ಡ್

ಕನ್ನಡದ 'ಕಬ್ಜ' ಸಿನಿಮಾದ ನಟಿ ಶ್ರೀಯಾ ಶರಣ್ ಅವರು ಹೊಸದೊಂದು ಫೋಟೋ ಶೂಟ್‌ನಲ್ಲಿ ಮಿಂಚಿದ್ದಾರೆ. ಬಳುಕುವ ಬಳ್ಳಿಯಂತೆ ಕ್ಯಾಮೆರಾ ಕಣ್ಣಿಗೆ ನಟಿ ಪೋಸ್ ನೀಡಿದ್ದಾರೆ. ನಟಿಯ ಸುಂದರ ಫೋಟೋಗಳು ಸಾಮಾಜಿಕ ಜಾಲತಾಣದಲ್ಲಿ ಸದ್ದು ಮಾಡುತ್ತಿವೆ. ಸದಾ ಒಂದಲ್ಲಾ ಒಂದು ಫೋಟೋಶೂಟ್‌ನಲ್ಲಿ ಮಿಂಚುವ ಶ್ರೀಯಾ ಇದೀಗ ಪಡ್ಡೆಹುಡುಗರು ನಿದ್ದೆಗೆಡಿಸುವ ಕೆಲಸ ಮಾಡಿದ್ದಾರೆ. ಕಲರ್‌ಫುಲ್ ಡ್ರೆಸ್ ಧರಿಸಿ ನಟಿ ಮುದ್ದಾಗಿ ಕಾಣಿಸಿಕೊಂಡು ವಿವಿಧ ಭಂಗಿಯಲ್ಲಿ ಕ್ಯಾಮೆರಾಗೆ ನಟಿ ಪೋಸ್ ನೀಡಿದ್ದಾರೆ. 42ರ ಹರೆಯದಲ್ಲೂ ನಟಿಯ ಫಿಟ್‌ನೆಸ್ ಬ್ಯೂಟಿಗೆ ಫ್ಯಾನ್ಸ್ ಫಿದಾ ಆಗಿದ್ದಾರೆ. ಶೈನಿಂಗ್ ಡ್ರೆಸ್‌ನಲ್ಲಿ ಮಿಂಚಿರುವ ಶ್ರೀಯಾ ಫೋಟೋಗಳು ಈಗ ಸಾಮಾಜಿಕ ಜಾಲತಾಣದಲ್ಲಿ ಸದ್ದು ಮಾಡುತ್ತಿವೆ. ಇನ್ನೂ ಕನ್ನಡದ 'ಚಂದ್ರ' ಚಿತ್ರದ ಮೂಲಕ ಬಹುಭಾಷಾ ನಟಿ ಶ್ರೀಯಾ ಸ್ಯಾಂಡಲ್‌ವುಡ್‌ಗೆ ಕಾಲಿಟ್ಟರು. ನೆನಪಿರಲಿ ಪ್ರೇಮ್‌ಗೆ ನಾಯಕಿಯಾಗಿ ನಟಿಸಿದರು. ಈ ಚಿತ್ರಕ್ಕೆ ರೂಪ ಅಯ್ಯರ್ ನಿರ್ದೇಶನ ಮಾಡಿದ್ದರು. 'ಕಬ್ಜ' ಸಿನಿಮಾದಲ್ಲಿ ಉಪೇಂದ್ರ, ಸುದೀಪ್, ಶಿವರಾಜ್‌ಕುಮಾರ್ ಜೊತೆ ಶ್ರೀಯಾ ನಟಿಸಿದರು. ಉಪೇಂದ್ರಗೆ ಶ್ರೀಯಾ ನಾಯಕಿಯಾಗಿ ನಟಿಸಿದ್ದರು. ಈ ಚಿತ್ರವನ್ನು ಆರ್.ಚಂದ್ರು ನಿರ್ದೇಶನ ಮಾಡಿದ್ದರು. 'ಕಬ್ಜ 2' ಕೂಡ ಬರಲಿದೆ.



# 124 ಮೀಟರ್ ಸಿಕ್ಸ್ ಸಿಡಿಸಿದ ಶಕ್ಕೆರೆ ಪ್ಯಾರಿಸ್

ಕೆರಿಬಿಯನ್ ಪ್ರೀಮಿಯರ್ ಲೀಗ್‌ನ 19ನೇ ಪಂದ್ಯದಲ್ಲಿ ಭರ್ಜರಿ ಸಿಕ್ಸ್ ಸಿಡಿಸುವ ಮೂಲಕ ಟ್ರಿನ್‌ಬಾಗೊ ನೈಟ್ ರೈಡರ್ಸ್ ತಂಡದ ಆರಂಭಿಕ ಆಟಗಾರ ಶಕ್ಕೆರೆ ಪ್ಯಾರಿಸ್ ಎಲ್ಲಾರ ಗಮನ ಸೆಳೆದಿದ್ದಾರೆ. ಟ್ರಿನಿಡಾಡ್‌ನ ಕ್ವೀನ್ಸ್ ಪಾರ್ಕ್ ಮೈದಾನದಲ್ಲಿ ನಡೆದ ಈ ಪಂದ್ಯದಲ್ಲಿ ಟ್ರಿನ್‌ಬಾಗೊ ನೈಟ್ ರೈಡರ್ಸ್ ಮತ್ತು ಗಯಾನಾ ಅಮೆಝೂನ್ ವಾರಿಯರ್ಸ್ ತಂಡಗಳು ಮುಖಾಮುಖಿಯಾಗಿದ್ದವು.

ಈ ಪಂದ್ಯದಲ್ಲಿ ಟಾಸ್ ಗೆದ್ದ ಟಿಕೆಆರ್ ತಂಡವು ಬೌಲಿಂಗ್ ಆಯ್ದುಕೊಂಡಿತು. ಅದರಂತೆ ಇನಿಂಗ್ಸ್ ಆರಂಭಿಸಿದ ಗಯಾನಾ ಅಮೆಝೂನ್ ವಾರಿಯರ್ಸ್ ತಂಡವು ಉತ್ತಮ ಆರಂಭ ಪಡೆದಿರಲಿಲ್ಲ. ಇದಾಗ್ಯೂ ಅಂತಿಮ ಓವರ್‌ಗಳ ವೇಳೆ ಅಬ್ಬರಿಸಿದ ರೊಮಾರಿಯೊ ಶೆಫರ್ಡ್ 24 ಎಸೆತಗಳಲ್ಲಿ 4 ಸಿಕ್ಸ್‌ಗಳೊಂದಿಗೆ 51 ರನ್ ಚಚ್ಚಿದರು. ಈ ಅರ್ಧಶತಕದ ನೆರವಿನಿಂದ ಗಯಾನಾ ಅಮೆಝೂನ್ ವಾರಿಯರ್ಸ್ ತಂಡವು 20 ಓವರ್‌ಗಳಲ್ಲಿ 7 ವಿಕೆಟ್ ಕಳೆದುಕೊಂಡು 148 ರನ್ ಕಲೆಹಾಕಿತು.

ಈ ಗುರಿಯನ್ನು ಬೆನ್ನತ್ತಿದ ಟ್ರಿನ್‌ಬಾಗೊ ನೈಟ್ ರೈಡರ್ಸ್ ಶಕ್ಕೆರೆ ಪ್ಯಾರಿಸ್ ಉತ್ತಮ ಆರಂಭ ಒದಗಿಸಿದ್ದರು. ಅದರಲ್ಲೂ ಗುಡಾಕೇಶ್ ಮೋಟಿ ಎಸೆದ ಮೂರನೇ ಓವರ್‌ನ ಐದನೇ ಎಸೆತದಲ್ಲಿ ಡೀಪ್ ಮಿಡ್ ವಿಕೆಟ್‌ನತ್ತ ಭರ್ಜರಿ ಸಿಕ್ಸ್ ಸಿಡಿಸಿದ್ದರು. 124 ಮೀಟರ್‌ಗಳ ಈ ಸಿಕ್ಸ್‌ನೊಂದಿಗೆ ಕೆರಿಬಿಯನ್ ಪ್ರೀಮಿಯರ್ ಲೀಗ್‌ನ ಅತೀ ದೂರದ ಸಿಕ್ಸರ್ ಸಿಡಿಸಿದ ಬ್ಯಾಟರ್ ಎಂಬ ದಾಖಲೆಯನ್ನು ಶಕ್ಕೆರೆ ಪ್ಯಾರಿಸ್ ತಮ್ಮದಾಗಿಸಿಕೊಂಡಿದ್ದಾರೆ. ಇನ್ನು ಈ ಪಂದ್ಯದಲ್ಲಿ 149 ರನ್‌ಗಳನ್ನು ಬೆನ್ನತ್ತಿದ ಟ್ರಿನ್‌ಬಾಗೊ ನೈಟ್ ರೈಡರ್ಸ್ ತಂಡವು 19.2 ಓವರ್‌ಗಳಲ್ಲಿ ಗುರಿ ಮುಟ್ಟುವ ಮೂಲಕ 5 ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿದೆ.

## ಭಾರತಕ್ಕೆ ಅಶ್ವಿನ್- ಜಡೇಜಾ ಆಸರೆ

# ದಿನದಾಟದಂತ್ಯಕ್ಕೆ ಟೀಂ ಇಂಡಿಯಾ 339/6



ಚೆನ್ನೈನಲ್ಲಿ ನಡೆಯುತ್ತಿರುವ ಭಾರತ ಮತ್ತು ಬಾಂಗ್ಲಾದೇಶ ನಡುವಿನ ಮೊದಲ ಟೆಸ್ಟ್ ಪಂದ್ಯದ ಮೊದಲ ದಿನದಾಟ ಅಂತ್ಯಗೊಂಡಿದೆ. ದಿನದಾಟದಂತ್ಯಕ್ಕೆ ಟಾಸ್ ಸೋತು ಮೊದಲ ಇನ್ನಿಂಗ್ಸ್ ಆರಂಭಿಸಿರುವ ಟೀಂ ಇಂಡಿಯಾ 6 ವಿಕೆಟ್ ಕಳೆದುಕೊಂಡು 339 ರನ್ ಕಲೆಹಾಕಿದೆ. ಬರೋಬ್ಬರಿ 195 ರನ್‌ಗಳ ಜೊತೆಯಾಟ ಹಂಚಿಕೊಂಡ ಅಶ್ವಿನ್ ಹಾಗೂ ಜಡೇಜಾ ಮೊದಲ ದಿನದಾಟದ ಹೀರೋಗಳೆನಿಸಿಕೊಂಡರು. ಟಾಸ್ ಸೋತು ಮೊದಲ ಇನ್ನಿಂಗ್ಸ್ ಆರಂಭಿಸಿದ ಭಾರತಕ್ಕೆ ಆರಂಭದಲ್ಲೇ ಬ್ಯಾಕ್ ಟು ಬ್ಯಾಕ್ ಆಘಾತ ಎದುರಾಯಿತು. ತಂಡದ ಮೊತ್ತ 14 ರನ್‌ಗಳಿರುವಾಗ ನಾಯಕ ರೋಹಿತ್ ಶರ್ಮಾ ಕೇವಲ 6 ರನ್ ಬಾರಿಸಿ ಪೆವಿಲಿಯನ್ ಸೇರಿಕೊಂಡರು. ನಂತರ ಬಂದ ಶುಭ್‌ಮನ್ ಗಿಲ್‌ಗೆ ಖಾತೆ ತೆರೆಯಲು ಸಾಧ್ಯವಾಗಲಿಲ್ಲ. ಈ ವೇಳೆ ಬರೋಬ್ಬರಿ 9 ತಿಂಗಳ ನಂತರ ಟೆಸ್ಟ್ ಕ್ರಿಕೆಟ್ ಆಡುತ್ತಿರುವ ವಿರಾಟ್ ಕೊಹ್ಲಿ ಮೇಲೆ ಸಾಕಷ್ಟು ನಿರೀಕ್ಷೆಗಳಿದ್ದವು. ಆದರೆ ಅದೆಲ್ಲವನ್ನು ಹುಸಿ ಮಾಡಿದ ಕೊಹ್ಲಿ, ರೋಹಿತ್‌ರಂತೆ ಕೇವಲ 6 ರನ್ ಬಾರಿಸಿ ಔಟಾದರು. ಆದರೆ ಆ ಬಳಿಕ ಜೊತೆಯಾದ ಪಂತ್ ಹಾಗೂ ಜೈಸ್ವಾಲ್ ತಂಡದ ಇನ್ನಿಂಗ್ಸ್ ಕಟ್ಟಿದರು. ಈ ಇಬ್ಬರು ಆಟಗಾರರು ಅರ್ಧಶತಕದ ಜೊತೆಯಾಟವನ್ನು ಹಂಚಿಕೊಂಡರು. ಈ ವೇಳೆ ರಿಷಬ್ ಪಂತ್ 39 ರನ್‌ಗಳಿಗೆ ಇನ್ನಿಂಗ್ಸ್ ಮುಗಿಸಿದರೆ, 118 ಎಸೆತಗಳಲ್ಲಿ 9 ಬೌಂಡರಿಗಳ ಸಹಿತ 56 ರನ್‌ಗಳ ಅತ್ಯಮೂಲ್ಯ ಇನ್ನಿಂಗ್ಸ್ ಕಟ್ಟಿದ ಜೈಸ್ವಾಲ್ ಪೆವಿಲಿಯನ್ ಸೇರಿಕೊಂಡರು. ನಂತರ ಬಂದ ಕನ್ನಡಿಗ ರಾಹುಲ್ ಮೇಲೆ ಸಾಕಷ್ಟು ನಿರೀಕ್ಷೆಗಳಿದ್ದವು. ಆದರೆ ಕ್ರೀಸ್‌ನಲ್ಲಿ ಸಾಕಷ್ಟು ಸಮಯ ಕಳೆದ ರಾಹುಲ್ 52 ಎಸೆತಗಳಲ್ಲಿ 12 ರನ್ ಬಾರಿಸಿ ಬ್ಯಾಟ್ ಎತ್ತಿಟ್ಟರು. ಹೀಗಾಗಿ 144 ರನ್‌ಗಳಿಗೆ ಟೀಂ ಇಂಡಿಯಾ ಪ್ರಮುಖ 6 ವಿಕೆಟ್ ಕಳೆದುಕೊಂಡು ಸಂಕಷ್ಟಕ್ಕೆ ಸಿಲುಕಿತ್ತು. ಆದರೆ ಇಲ್ಲಿಂದ ಜೊತೆಯಾದ ಆರ್ ಅಶ್ವಿನ್ ಹಾಗೂ ರವೀಂದ್ರ ಜಡೇಜಾ ಅಜೇಯ 195 ರನ್‌ಗಳ ಜೊತೆಯಾಟವನ್ನಾಡಿ ತಂಡವನ್ನು ಸಂಕಷ್ಟದಿಂದ ಪಾರು ಮಾಡಿದರು. ಈ ವೇಳೆ ಅಶ್ವಿನ್ 112 ಎಸೆತಗಳಲ್ಲಿ 10 ಬೌಂಡರಿ ಹಾಗೂ 2 ಬೌಂಡರಿ ಸಹಿತ ಅಜೇಯ 102 ರನ್ ಕಲೆಹಾಕಿದರೆ, ಜಡೇಜಾ ಕೂಡ 117 ಎಸೆತಗಳಲ್ಲಿ 10 ಬೌಂಡರಿ ಹಾಗೂ 2 ಸಿಕ್ಸರ್ ಸಹಿತ ಅಜೇಯ 86 ರನ್ ಬಾರಿಸಿದ್ದಾರೆ. ಇನ್ನು ಬಾಂಗ್ಲಾದೇಶ ಪರ ಬೌಲಿಂಗ್‌ನಲ್ಲಿ ಮಿಂಚಿದ ಯುವ ವೇಗದ ಬೌಲರ್ ಹಸನ್ ಮಹಮೂದ್, ರೋಹಿತ್ ಶರ್ಮಾ, ವಿರಾಟ್ ಕೊಹ್ಲಿ, ಶುಭ್‌ಮನ್ ಗಿಲ್, ರಿಷಬ್ ಸೇರಿದಂತೆ ನಾಲ್ವರ ವಿಕೆಟ್ ಉರುಳಿಸಿದರು. ಉಳಿದಂತೆ ನಹಿದ್ ರಾಣಾ, ಮೆಹದಿ ಹಸನ್ ಮೀರಾಜ್ ತಲಾ ಒಂದೊಂದು ವಿಕೆಟ್ ಪಡೆದರು.

ಅಶ್ವಿನ್ ಭರ್ಜರಿ 6ನೇ ಶತಕ

# ನಂಗ್ಯಾಕೆ ಹೊಡೀತಿಯಾ

## ಪಂತ್-ದಾಸ್ ನಡುವೆ ವಾಕ್ಸಮರ

ಭಾರತದ ವಿರುದ್ಧದ ಮೊದಲ ಟೆಸ್ಟ್‌ನ ಫಸ್ಟ್ ಸೆಷನ್‌ನಲ್ಲಿ ಯುವ ವೇಗಿ ಹಸನ್ ಮಹಮೂದ್ ಭರ್ಜರಿ ಬೌಲಿಂಗ್ ಪ್ರದರ್ಶಿಸಿದ್ದಾರೆ. ರೋಹಿತ್ ಶರ್ಮಾ, ಶುಭ್‌ಮನ್ ಗಿಲ್ ಹಾಗೂ ವಿರಾಟ್ ಕೊಹ್ಲಿಯ ವಿಕೆಟ್ ಕಬಳಿಸಿರುವ ಹಸನ್ ಬಾಂಗ್ಲಾ ತಂಡಕ್ಕೆ ಆರಂಭಿಕ ಯಶಸ್ಸು ತಂದುಕೊಟ್ಟಿದ್ದಾರೆ. ಆದರೆ ಬಳಿಕ ಟೀಮ್ ಇಂಡಿಯಾ ಪರ ರಿಷಭ್ ಪಂತ್ ಭರ್ಜರಿ ಬ್ಯಾಟಿಂಗ್ ಪ್ರದರ್ಶಿಸಿದ್ದಾರೆ.

ಭಾರತ ಮತ್ತು ಬಾಂಗ್ಲಾದೇಶ್ ನಡುವಣ ಮೊದಲ ಟೆಸ್ಟ್ ಪಂದ್ಯದ ಮೊದಲ ಸೆಷನ್‌ನಲ್ಲೇ ವಾಕ್ಸಮರ ಶುರುವಾಗಿದೆ. ಅದು ಸಹ ಇಬ್ಬರು ವಿಕೆಟ್ ಕೀಪರ್‌ಗಳ ನಡುವೆ ಎಂಬುದೇ ವಿಶೇಷ. ಈ ಪಂದ್ಯದಲ್ಲಿ ಟಾಸ್ ಗೆದ್ದ ಬಾಂಗ್ಲಾದೇಶ್ ತಂಡದ ನಾಯಕ ನಜ್ಮುಲ್ ಹೊಸೈನ್ ಶಾಂತೊ ಬೌಲಿಂಗ್ ಆಯ್ದುಕೊಂಡಿದ್ದಾರೆ. ಅದರಂತೆ ಇನಿಂಗ್ಸ್ ಆರಂಭಿಸಿದ ಟೀಮ್ ಇಂಡಿಯಾ ಉತ್ತಮ ಆರಂಭ ಪಡೆಯಲಿಲ್ಲ.

ತಿರುಗೇಟು ನೀಡುತ್ತಾರಾ ರಿಷಬ್

ನಾಯಕ ರೋಹಿತ್ ಶರ್ಮಾ 6 ರನ್ ಗಳಿಸಿ ಔಟಾದರೆ, ಮೂರನೇ ಕ್ರಮಾಂಕದಲ್ಲಿ ಕಣಕ್ಕಿಳಿದ ಶುಭ್‌ಮನ್ ಗಿಲ್ ಸೊನ್ನೆ ಸುತ್ತಿದರು. ಇನ್ನು ವಿರಾಟ್ ಕೊಹ್ಲಿ (6) ಕೂಡ ಬಂದ ವೇಗದದಲ್ಲೇ ಪೆವಿಲಿಯನ್‌ಗೆ ಹಿಂತಿರುಗಿದರು. ಈ ಹಂತದಲ್ಲಿ ಕಣಕ್ಕಿಳಿದ ಟೀಮ್ ಇಂಡಿಯಾ ವಿಕೆಟ್ ಕೀಪರ್ ರಿಷಭ್ ಪಂತ್ ಬಿರುಸಿನ ಬ್ಯಾಟಿಂಗ್ ಪ್ರದರ್ಶಿಸಿದ್ದಾರೆ. ತಂಡದ ಆರಂಭಿಕ ಆಘಾತವನ್ನು ಲೆಕ್ಕಕ್ಕೆ ತೆಗೆದುಕೊಳ್ಳದೇ ಆತ್ಮ ವಿಶ್ವಾಸದಿಂದಲೇ ಬ್ಯಾಟ್ ಬೀಸಿದ ಪಂತ್ ಆಕರ್ಷಕ ಹೊಡೆತಗಳ ಮೂಲಕ ಬಾಂಗ್ಲಾ ಬೌಲರ್‌ಗಳ ಬೆಂಡೆತ್ತಿದ್ದರು. ಇತ್ತ ರಿಷಭ್ ಪಂತ್ ಅಬ್ಬರಿಸುತ್ತಿರುವುದನ್ನು ಗಮನಿಸಿದ ಬಾಂಗ್ಲಾದೇಶ್ ತಂಡದ ವಿಕೆಟ್ ಕೀಪರ್ ಲಿಟ್ಟನ್ ದಾಸ್ ಸುಖಾಸುಮ್ಮನೆ ಕೆಣಕಲು ಮುಂದಾಗಿದ್ದಾರೆ. ಇದಕ್ಕಾಗಿ ಪಂತ್ ಅನ್ನು ಗುರಿಯಾಗಿಸಿ ಚೆಂಡನ್ನು ಎಸೆದಿದ್ದಾರೆ. ಹೀಗೆ ಕ್ರೀಸ್‌ನಲ್ಲಿರುವ ತನ್ನನ್ನು ಗುರಿಯಾಗಿಸಿ ಚೆಂಡೆಸೆಯುತ್ತಿರುವುದನ್ನು ಗಮನಿಸಿದ ರಿಷಭ್, ಲಿಟ್ಟನ್ ದಾಸ್ ಅವರನ್ನು ಪ್ರಶ್ನಿಸಿದ್ದಾರೆ.



ಅವನನ್ನು ನೋಡಿ ಚೆಂಡೆಸಿ ನಂಗ್ಯಾಕೆ ಚೆಂಡನ್ನು ಎಸೆಯುತ್ತಿದ್ದೀಯಾ ಎಂದು ರಿಷಭ್ ಪಂತ್ ಕೇಳಿದ್ದಾರೆ. ಇದಕ್ಕೆ ತೀಕ್ಷ್ಣವಾಗಿ ಪ್ರತಿಕ್ರಿಯಿಸಿದ ಲಿಟ್ಟನ್ ದಾಸ್ ವಿಕೆಟ್ ಮುಂದಿದೆ ಅದಕ್ಕೆ ಎಸೀತಿದ್ದೀನಿ ಎಂಬ ಉತ್ತರ ನೀಡಿದ್ದಾರೆ.

ಇದೀಗ ಲಿಟ್ಟನ್ ದಾಸ್ ಹಾಗೂ ರಿಷಭ್ ಪಂತ್ ನಡುವಣ ಈ ವಿಡಿಯೋ ವೈರಲ್ ಆಗಿದೆ. ಇತ್ತ ಪಂತ್ ಕೂಡ ವಿಕೆಟ್ ಕೀಪರ್ ಆಗಿರುವುದರಿಂದ ಲಿಟ್ಟನ್ ದಾಸ್ ಬ್ಯಾಟಿಂಗ್‌ಗೆ ಬಂದಾಗ ಈ ವಾಕ್ಸಮರ ಮುಂದರೆಯುವ ಸಾಧ್ಯತೆಯಿದೆ.

# ಕಪ್ ಗೆಲ್ಲಲು ಮುಂದುವರೆದ ಪಂಜಾಬ್ ಕಿಂಗ್ಸ್ ಪ್ಲ್ಯಾನ್

ಐಪಿಎಲ್ ಇತಿಹಾಸದಲ್ಲಿ ಒಮ್ಮೆಯೂ ಟ್ರೋಫಿ ಎತ್ತಿಹಿಡಿಯದ ನಾಲ್ಕು ತಂಡಗಳಲ್ಲಿ ಪಂಜಾಬ್ ಕಿಂಗ್ಸ್ ಕೂಡ ಒಂದು. ಕಳೆದ 17 ಸೀಸನ್‌ಗಳಿಂದ ಕಣಕ್ಕಿಳಿಯುತ್ತಿದ್ದರೂ ಪಂಜಾಬ್ ಪಾಲಿಗೆ ಐಪಿಎಲ್ ಕಿರೀಟ ಮರೀಚಿಕೆಯಾಗಿಯೇ ಉಳಿದಿದೆ. ಹೀಗಾಗಿಯೇ ಕಳೆದ 17 ಸೀಸನ್‌ಗಳಲ್ಲಿ ಪಂಜಾಬ್ ಕಿಂಗ್ಸ್ 10 ಬಾರಿ ಕೋಚ್‌ಗಳನ್ನು ಬದಲಿಸಿದೆ.

ಇದೀಗ ಪಂಜಾಬ್ ಕಿಂಗ್ಸ್ ತಂಡದ 11ನೇ ಕೋಚ್ ಆಗಿ ರಿಕಿ ಪಾಂಟಿಂಗ್ ಆಯ್ಕೆಯಾಗಿದ್ದಾರೆ. ಈ ಹಿಂದೆ ಮುಂಬೈ ಇಂಡಿಯನ್ಸ್ ಹಾಗೂ ಡೆಲ್ಲಿ ಕ್ಯಾಪಿಟಲ್ಸ್ ತಂಡದ ಮುಖ್ಯ ಕೋಚ್ ಹುದ್ದೆಯಲ್ಲಿ ಕಾಣಿಸಿಕೊಂಡಿದ್ದ ಆಸ್ಟ್ರೇಲಿಯಾ ತಂಡ ಮಾಜಿ ನಾಯಕನನ್ನು ಈ ಬಾರಿ ಪಂಜಾಬ್ ಕಿಂಗ್ಸ್ ತನ್ನ ತೆಕ್ಕೆಗೆ ತೆಗೆದುಕೊಂಡಿದೆ. ಈ ಮೂಲಕ ಚೊಚ್ಚಲ ಬಾರಿ ಐಪಿಎಲ್ ಟ್ರೋಫಿ ಗೆಲ್ಲಲು ಪ್ಲ್ಯಾನ್ ರೂಪಿಸಿದೆ.

ಇದಕ್ಕೂ ಮುನ್ನ ಪಂಜಾಬ್ ಕಿಂಗ್ಸ್ ತಂಡವು 10 ಕೋಚ್‌ಗಳ ಮುಂದಾಳತ್ವದಲ್ಲಿ ಕಣಕ್ಕಿಳಿದಿತ್ತು. 2008 ರಲ್ಲಿ ನಡೆದ ಚೊಚ್ಚಲ ಟೂರ್ನಿಯಲ್ಲಿ ಪಂಜಾಬ್ ಕಿಂಗ್ಸ್ ತಂಡದ ಕೋಚ್ ಆಗಿ ಟಾಮ್ ಮೂಡಿ ಕಾಣಿಸಿಕೊಂಡಿದ್ದರು. ಇದಾದ ಬಳಿಕ ಮೈಕೆಲ್ ಬೆವೆನ್ (2011), ಆಡಂ ಗಿಲ್‌ಕ್ರಿಸ್ಟ್ (2012), ಡಾರೆನ್ ಲೆಹ್ಮನ್ (2013) ಹಾಗೂ ಸಂಜಯ್ ಬಂಗಾರ್ (2014–2016) ಪಂಜಾಬ್ ಪಡೆಯ ಕೋಚ್ ಹುದ್ದೆಯಲ್ಲಿ ಕಾಣಿಸಿಕೊಂಡಿದ್ದರು.

18 ಸೀಸನ್‌ಗಳಿಗೆ 11 ಕೋಚ್‌ಗಳು

ಇನ್ನು 2017 ರಲ್ಲಿ ಟೀಮ್ ಇಂಡಿಯಾದ ಮಾಜಿ ಆಟಗಾರ ವಿರೇಂದ್ರ ಸೆಹ್ವಾಗ್ ಪಂಜಾಬ್ ಕಿಂಗ್ಸ್ ತಂಡದ ಮುಖ್ಯ ಕೋಚ್ ಹುದ್ದೆಯನ್ನು ಅಲಂಕರಿಸಿದ್ದರು. ಆದರೆ ಅದು ಕೇವಲ ಒಂದು ಸೀಸನ್‌ಗೆ ಸೀಮಿತವಾಯಿತು. 2018 ರಲ್ಲಿ ಈ ಸ್ಥಾನಕ್ಕೆ ಬ್ರಾಡ್ ಹಾಡ್ಜ್ ನೇಮಕವಾಗಿದ್ದರು. ಆ ನಂತರ ಮೈಕ್ ಹೆಸ್ಸನ್ (2019) ಮತ್ತು ಅನಿಲ್ ಕುಂಬ್ಳೆ (2020–22) ಪಂಜಾಬ್ ಕಿಂಗ್ಸ್ ತಂಡ ಹೆಡ್ ಕೋಚ್ ಆಗಿ ಕಾರ್ಯ ನಿರ್ವಹಿಸಿದ್ದರು. ಇನ್ನು ಕಳೆದ ಎರಡು ಸೀಸನ್‌ಗಳಲ್ಲಿ ಟ್ರೆವರ್ ಬೇಲಿಸ್ (2023–24) ಮುಖ್ಯ ಕೋಚ್ ಹುದ್ದೆಯನ್ನು ಅಲಂಕರಿಸಿದರೂ ಪಂಜಾಬ್ ಕಿಂಗ್ಸ್ ತಂಡದ ಕಪ್ ಗೆಲ್ಲುವ ಕನಸು ಈಡೇರಿರಲಿಲ್ಲ. ಹೀಗಾಗಿ ಈ ಬಾರಿ ಹೊಸ ಕೋಚ್‌ನ ನೇಮಕ ಮಾಡಲಾಗಿದೆ.

ಅದರಂತೆ ಇದೀಗ 2015 ರಲ್ಲಿ ಮುಂಬೈ ಇಂಡಿಯನ್ಸ್ ತಂಡಕ್ಕೆ ಚಾಂಪಿಯನ್ ಪಟ್ಟ ತಂದುಕೊಟ್ಟ ಹಾಗೂ 2020 ರಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ತಂಡವನ್ನು ಫೈನಲ್‌ಗೇರಿಸಿದ್ದ ತರಬೇತುದಾರ ರಿಕಿ ಪಾಂಟಿಂಗ್ ಅವರನ್ನು ಪಂಜಾಬ್ ಕಿಂಗ್ಸ್ ಫ್ರಾಂಚೈಸಿ ಹೆಡ್ ಕೋಚ್ ಆಗಿ ಆಯ್ಕೆ ಮಾಡಿದೆ. ಈ ಮೂಲಕ ಮುಂಬರುವ ಐಪಿಎಲ್‌ನಲ್ಲಿ ಚಾಂಪಿಯನ್ ಪಟ್ಟ ಅಲಂಕರಿಸಲು ಪಂಜಾಬ್ ಕಿಂಗ್ಸ್ ಈಗಲೇ ಭರ್ಜರಿ ಪ್ಲ್ಯಾನ್ ರೂಪಿಸುತ್ತಿದೆ.




Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966